ಸಂಪುಟ: 04 ಸಂಚಿಕೆ: 161 ಪುಟಗಳು: 08 ಶುಕ್ರವಾರ 23 ಆಗಸ್ಟ್ 2024
www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**
ಜೀವನಾವಧಿ ಅಲ್ಲ, ಪ್ರಾಪಂಚಿಕ ವಿಷಯಗಳೆಲ್ಲ ಕ್ಷಣಿಕ. ಆದರೆ ಯಾರು ಇತರರಿಗಾಗಿ ಬಾಳುತ್ತಾರೋ, ಅವರೇ ನಿಜವಾಗಿ ಬಾಳುತ್ತಾರೆ. ಉಳಿದವರು ಜೀವನ ಮೃತರು.

## ಕುಮಾರಸ್ವಾಮಿಯವರೇ ನಿಮ್ಮ ಊಟದೆಲೆಯಲ್ಲಿ ಆನೆ ಸತ್ತು ಬಿದ್ದಿದೆ

• ಉದಯವಾಹಿನಿ, ಬೆಂಗಳೂರು

ನೋಂದಣಿಯೇ ಆಗದ ಕಂಪನಿಗೆ550 ಎಕರೆ ಅರಣ್ಯ ಭೂಮಿಯನ್ನು ಅಕ್ರಮವಾಗಿ ಮಂಜೂರು ಮಾಡಿ, ಈಗ 'ಸಹಿ ನನ್ನದಲ್ಲ, ಯಾರೋ ಫೋರ್ಜರಿ ಮಾಡಿದ್ದಾರೆ' ಎಂದು ಕಣ್ಣೀರು ಸುರಿಸುತ್ತಿರುವ ಕೇಂದ್ರ ಸಚಿವ ಹೆಚ್ .ಡಿ.ಕುಮಾರಸ್ವಾಮಿಯವರೇ, ನಿಮ್ಮ ಬ್ರಹ್ಮಾಂಡ ಭ್ರಷ್ಟಾಚಾರದ ಪುರಾಣದ ಮೊದಲ ಅಧ್ಯಾಯ ಪತ್ರಿಕೆಯಲ್ಲಿ ಪ್ರಕಟವಾಗಿದೆ ಎಂದು ಸಿಎಂ ಸಿದ್ದರಾಮಯ್ಯ ಟಾಂಗ್ ನೀಡಿದ್ದಾರೆ.

ಟ್ವೀಟ್ ಮಾಡಿರುವ ಮುಂದೆ ಇನ್ನೇನೆಲ್ಲಾ ಬಹಿರಂಗವಾಗಲಿವೆಯೋ!? ಮುಡಾ ಬದಲಿ ನಿವೇಶನ ಹಂಚಿಕೆ ಪ್ರಕರಣದಲ್ಲಿ ನನ್ನ ಸಹಿ, ಟಿಪ್ಪಣಿ ಯಾವುದೂ ಇಲ್ಲ, ನನ್ನ ಅಧಿಕಾರವಧಿಯಲ್ಲಿ ನಡೆದದ್ದೇ ಅಲ್ಲ. ಹೀಗಿದ್ದರೂ ನನ್ನ ರಾಜೀನಾಮೆ ಕೇಳುತ್ತಿರುವ ಕುಮಾರಸ್ವಾಮಿಯವರೇ? ನಿಮ್ಮ ಊಟದೆಲೆಯಲ್ಲಿ ಆನೆ ಸತ್ತು ಬಿದ್ದಿದೆ ನೋಡಿ ಎಂದು ಎಚ್.ಡಿ.ಕುಮಾರಸ್ವಾಮಿಯವರಿಗೆ ಸಿಎಂ ಸಿದ್ದರಾಮಯ್ಯ ಟಾಂಗ್ ನೀಡಿದ್ದಾರಡೆ.

## ಸರ್ಕಾರವನ್ನು ಅಮಾನತಿನಲ್ಲಿಡಿ: ಎಚ್. ವಿಶ್ವನಾಥ್ ಒತ್ತಾಯ

• ಉದಯವಾಹಿನಿ, ಮೈಸೂರು

ಹಗರಣಗಳ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಮತ್ತು ಶಾಸಕಾಂಗವನ್ನು ರಾಜ್ಯಪಾಲರು ಅಮಾನತಿನಲ್ಲಿ ಇರಿಸಬೇಕು ಎಂದು ವಿಧಾನ ಪರಿಷತ್ ಸದಸ್ಯ ಎಚ್. ವಿಶ್ವನಾಥ್ ಒತ್ತಾಯಿಸಿದರು. ವೀರೇಂದ್ರ ಪಾಟೀಲರು ಮುಖ್ಯಮಂತ್ರಿ ಆಗಿದ್ದ ಕಾಲದಲ್ಲಿಯೂ ಇದೇ ಕ್ರಮ ಕೈಗೊಳ್ಳಲಾಗಿತ್ತು. ನಂತರದಲ್ಲಿ ಚುನಾವಣೆ ನಡೆದು ಬಂಗಾರಪ್ಪ ಮುಖ್ಯಮಂತ್ರಿ ಆದರು' ಎಂದು ಅವರು ಗುರುವಾರ ಸುದ್ದಿಗೋಷ್ಠಿಯಲ್ಲಿ ವಿವರಿಸಿದರು. ಸಿದ್ದರಾಮಯ್ಯ ಮೂಗಿನಡಿ ಮುಡಾ ವಾಸನೆ ಜಾಸ್ತಿ ಆಗುತ್ತಿದೆ. ಮೈಸೂರಿನಲ್ಲಿ ಕಾನೂನಿಗೆ ಬೆಲೆ ಇಲ್ಲದಂತಾಗಿದೆ. ಮುಡಾ ಕಡತವನ್ನು ವೈಟ್ನರ್ ಹಾಕಿ ತಿದ್ದಿರುವುದು ನಾಚಿಕೆಗೇಡಿನ ಸಂಗತಿ. ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಹೆಲಿಕಾಪ್ಟರಿನಲ್ಲಿ ಬಂದು ಕಡತ ಹೊತ್ತೊಯ್ದಿದ್ದಾರೆ. ಕಡತ ಕಳವು ಮಾಡಿದ್ದಕ್ಕೆ ಸಚಿವರ ಮೇಲೆ ಪ್ರಕರಣ ದಾಖಲಿಸಬೇಕು. ಈ ಹಿಂದಿನ ಇಬ್ಬರು ಆಯುಕ್ತರನ್ನೂ ಬಂಧಿಸಿ ವಿಚಾರಣೆಗೆ ಒಳಪಡಿಸಬೇಕು. ಆಗ ಎಲ್ಲಾ ಪಕ್ಷದವರೂ ಸಿಕ್ಕಿಹಾಕಿಕೊಳ್ಳುತ್ತಾರೆ' ಎಂದು ಆಗ್ರಹಿಸಿದರು. ಲೋಕಾಯುಕ್ತ ಸುಮೊಟೊ ಪ್ರಕರಣ ದಾಖಲಿಸಿಕೊಂಡು ವಿಚಾರಣೆ ನಡೆಸುವಂತೆ ಒತ್ತಾಯಿಸಿದರು.

## ಬಿಎಸ್ ಯಡಿಯೂರಪ್ಪಗೆ ಮತ್ತೆ ರಿಲೀಫ್: ತಡೆಯಾಜ್ಞೆ ವಿಸ್ತರಣೆ

• ಉದಯವಾಹಿನಿ, ಬೆಂಗಳೂರು

ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ವಿರುದ್ಧ ಅಪ್ರಾಪ್ತ ಬಾಲಕಿಗೆ ಲೈಗಿಂಕ ಕಿರುಕುಳ ನೀಡಿದ ಸಂಬಂಧ ಪೋಕ್ಸೋ ಕೇಸ್ ದಾಖಲಾಗಿತ್ತು. ಈ ಕೇಸಲ್ಲಿ ಅವರನ್ನು ಬಂಧಿಸದಂತೆ ಹೈಕೋರ್ಟ್ ಈ ಹಿಂದೆ ತಡೆಯಾಜ್ಞೆ ನೀಡಿತ್ತು. ಇಂದು ಮತ್ತೆ ಮಧ್ಯಂತರ ತಡೆಯಾಜ್ಞೆಯನ್ನು ವಿಸ್ತರಿಸಿದೆ. ಈ ಮೂಲಕ ಮಾಜಿ ಸಿಎಂ ಬಿಎಸ್ ಯಡಿಯೂರಪ್ಪಗೆ ಮತ್ತೆ ರಿಲೀಫ್ ನೀಡಲಾಗಿದೆ. ಇಂದು ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ವಿರುದ್ಧದ ಪೋಕ್ಸೋ ಕೇಸ್ ಪ್ರಕರಣದ ಬಂಧಿಸದಂತೆ ನೀಡಲಾಗಿದ್ದಂತ ತಡೆಯಾಜ್ಞೆಯನ್ನು ರದ್ದುಗೊಳಿಸುವ ಕೋರಿ ಸಲ್ಲಿಸಲಾಗಿದ್ದಂತ ಅರ್ಜಿಯ ವಿಚಾರಣೆಯನ್ನು ಹೈಕೋರ್ಟ್ ನಡೆಸಿತು. ಹೈಕೋರ್ಟ್ ನ್ಯಾಯಮೂರ್ತಿ ಎಂ ನಾಗಪ್ರಸನ್ನ ಅವರನ್ನು ಒಳಗೊಂಡಂತ ನ್ಯಾಯಪೀಠವು ವಿಚಾರಣೆ ಕೈಗೆತ್ತಿಕೊಂಡಿತು. ಇಂತಹ ಅರ್ಜಿಯ ವಿಚಾರಣೆಯನ್ನು ಸೆಪ್ಟೆಂಬರ್.30ಕ್ಕೆ ವಿಸ್ತರಿಸಿ, ಮಧ್ಯಂತರ ತಡೆಯಾಜ್ಞೆಯನ್ನು ಬಂಧಿಸದಂತೆ ವಿಸ್ತರಿಸಿ ಆದೇಶಿಸಿದರು. ಅಂದಹಾಗೇ ಬಿಎಸ್ ವೈ ವಿರುದ್ಧದ ಪೋಕ್ಸೋ ಕೇಸ್ ಸಂಬಂಧ ಸಿಐಡಿ ತನಿಖೆ ನಡೆಸಿ, ಕೋರ್ಟ್ ಚಾರ್ಜ್ ಶೀಟ್ ಸಲ್ಲಿಸಿತ್ತು.

## ಗಾಳಿಯ ದರ ಏರಿಸೋದೊಂದೇ ಬಾಕಿ: ಡಿಕೆಶಿ ವಿರುದ್ಧ ಗರಂ

• ಉದಯವಾಹಿನಿ, ಚಿಕ್ಕಮಗಳೂರು

ನೀರಿನ ದರ ಏರಿಕೆ ವಿಚಾರವಾಗಿ ಡಿಸಿಎಂ ಡಿಕೆ ಶಿವಕುಮಾರ್ ವಿರುದ್ಧ ಪರಿಷತ್ ಸದಸ್ಯ ಸಿಟಿ ರವಿ ಆಕ್ರೋಶಗೊಂಡಿದ್ದಾರೆ. ಎಲ್ಲಾದರ ಬೆಲೆಯನ್ನು ಹೆಚ್ಚಳ ಮಾಡುತ್ತಾ ಕಾಂಗ್ರೆಸ್ ಸರ್ಕಾರ ಸಾರ್ವಜನಿಕರ ಜೇಬಿಗೆ ಕತ್ತರಿ ಹಾಕುತ್ತಿದೆ ಎಂದು ಅವರು ಆರೋಪ ಮಾಡಿದ್ದಾರೆ. 'ಕಾಂಗ್ರೆಸ್ ಸರ್ಕಾರ ಈಗ ಎಲ್ಲಾ ದರ ಏರಿಸಿ ಆಯಿತು. ಈಗ ಗಾಳಿಯ ದರ ಏರಿಸೋದು ಬಾಕಿ ಇದೆ. ಸರ್ಕಾರ ಬಂದ ಕೂಡಲೇ ವಿದ್ಯುತ್ ದರ, ಸ್ಟ್ಯಾಂಪ್ ದರ ಎಲ್ಲಾವೂ ಜಾಸ್ತಿ ಮಾಡಿತು. ಇದೀಗ ನೀರಿನ ದರ ಏರಿಕೆ ಮಾಡಲು ಹೊರಟಿದ್ದಾರೆ. ಈಗ ಉಳಿದಿರೋದೇ ಗಾಳಿಯ ದರ ಮಾತ್ರ. ಗಾಳಿಗೊಂದು ದರ ಏರಿಸಿದ್ರೆ ಔರಂಗಜೇಬನ ಅಪ್ಪ ಅಂತ ತೋರಿಸಿದಂತಾಗುತ್ತೆ' ಎಂದು ಗುಡುಗಿದ್ದಾರೆ. ಡಿಕೆ ಶಿವಕುಮಾರ್ ಅವರೇ... ಯಾರೇ ಜನ ವಿರೋಧಿ ಆಡಳಿತ ನಡೆಸಿದ್ರೆ ಆ ಸರ್ಕಾರದ ಆಡಳಿತಕ್ಕೆ ಆಯಸ್ಸು ಕಡಿಮೆ. ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಕೊಟ್ಟು ಮತ್ತೊಂದು ಕಡೆ ಜನರ ಜೇಬಿಯಿಂದ ಪಿಕ್ ಪಾಕೆಟ್ ಮಾಡುತ್ತಿದೆ. 5 ರೂಪಾಯಿ ಜೇಬಿನಿಂದ ಬೀಳಿಸಿ ಅಟೆನ್ಶನ್ ಡ್ರಾಮ ಮಾಡ್ತಿದ್ದಾರೆ. ಐದು ರೂಪಾಯಿ ಬೀಳ್ಸಿ 500 ರೂಪಾಯಿ ಹೊಡೆಯುವ ಡ್ರಾಮಾ ಮಾಡ್ತಿದೆ ಕಾಂಗ್ರೆಸ್' ಎಂದು ಗುಡುಗಿದ್ದಾರೆ.



## ರಿಟ್ ಅರ್ಜಿಯಲ್ಲಿ ಸಿಎಂ ಸಿದ್ದರಾಮಯ್ಯ ಕೋರ್ಟ್ ಕಣ್ತಪ್ಪಿಸಿದ್ದಾರೆ

**ನ್ಯಾಯಾಂಗ ನಿಂದನೆ ಕೇಸ್ ಗೆ ಮನವಿ**


• ಉದಯವಾಹಿನಿ, ಬೆಂಗಳೂರು

ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ರಿಟ್ ಅರ್ಜಿ ಸಲ್ಲಿಸಿರುವ ಸಿಎಂ ಸಿದ್ದರಾಮಯ್ಯ ನ್ಯಾಯಾಲಯದ ಕಣ್ತಪ್ಪಿಸಿದ್ದಾರೆ ಎಂದು ಸಾಮಾಜಿಕ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ಗಂಭೀರ ಆರೋಪ ಮಾಡಿದ್ದಾರೆ.

ರಿಟ್ ಅರ್ಜಿಯಲ್ಲಿ ಸಿದ್ದರಾಮಯ್ಯ ಕೋರ್ಟ್ ಕಣ್ತಪ್ಪಿಸಿದ್ದಾರೆ.

ಪತ್ನಿ ಪಾರ್ವತಿ ಮುಡಾಗೆ ಪತ್ರ ಬರೆದಿರುವುದು ಸಿದ್ದರಾಮಯ್ಯ ಅವರಿಗೆ ಮೊದಲೇ ಗೊತ್ತಿತ್ತು. ಸಿದ್ದರಾಮಯ್ಯ ಒಟ್ಟು 713 ಪುಟಗಳ ರಿಟ್ ಅರ್ಜಿ ಹಾಕಿದ್ದಾರೆ. 531ನೇ ಪುಟವಾಗಿ ಪಾರ್ವತಿ ಬರೆದಿರುವ ಅರ್ಜಿಯ ಮೊದಲ ಪುಟವಿದೆ. ಆದರೆ 532ನೇ ಪುಟದಲ್ಲಿ ಪಾರ್ವತಿ ಅವರು ಬರೆದಿರುವ ಪತ್ರದ ಎರಡನೇ ಪುಟ ಇಲ್ಲ ಎಂದು ದೂರಿದ್ದಾರೆ.

ಅದರಲ್ಲಿಯೂ ಎರಡನೇ ಪುಟದಲ್ಲಿ ವೈಟ್ನರ್ ಹಾಕಿ ಸಾಲೊಂದನ್ನು ಅಳಿಸಲಾಗಿದೆ. 532ನೇ ಪುಟದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ನಡಾವಳಿ ಪತ್ರ ಇದೆ. ವೈಟ್ನರ್ ಹಚ್ಚಿ ಅಳಿಸಲಾಗಿರುವ ಕಾರಣಕ್ಕೆ ಎರಡನೇ ಪುಟ ಬಿಟ್ಟು ಕೇವಲ ಒಂದು ಪುಟ ಮಾತ್ರ ಕೋರ್ಟ್ ಗೆ ಕೊಟ್ಟಿದ್ದಾರೆ. ಈ ಮೂಲಕ ರಾಜ್ಯದ ಜನತೆಗೆ ಹಾಗೂ ಕೋರ್ಟ್ ಗೆ ಸಿದ್ದರಾಮಯ್ಯ ಸತ್ಯ ಮುಚ್ಚಿಟ್ಟಿದ್ದಾರೆ ಎಂದು ಸ್ನೇಹಮಯಿ ಕೃಷ್ಣ ಆರೋಪಿಸಿದ್ದಾರೆ.




ನ್ಯಾಯಾಲಯಕ್ಕೆ ಸತ್ಯ ಮುಚ್ಚಿಟ್ಟಿರುವುದು ನ್ಯಾಯಾಂಗ ನಿಂದನೆಯಾಗುತ್ತದೆ. ಆ.29ರಂದು ನಡೆಯಲಿರುವ ವಿಚಾರಣೆ ವೇಳೆ ಎಲ್ಲಾ ವಿಚಾರಗಳನ್ನು ಕೋರ್ಟ್ ಗಮನಕ್ಕೆ ತರುತ್ತೇನೆ. ಸಿಎಂ ಸಿದ್ದರಾಮಯ್ಯ ವಿರುದ್ಧ ನ್ಯಾಯಾಂಗ ನಿಂದನೆ ಪ್ರಕರಣ ದಾಖಲು ಮಾಡಲು ಮನವಿ ಮಾಡುತ್ತೇನೆ ಎಂದಿದ್ದಾರೆ.


# ಮುಡಾ ನಕಲಿ ದಾಖಲೆ ಸೃಷ್ಟಿ! ಸಿಎಂಗೆ ಶಾಸಕರ ಪುಷ್ಟಿ...

• ಸುರಂಗ ಮಾರ್ಗ ನಿರ್ಮಾಣಕ್ಕೆ ಸಂಪುಟ ಒಪ್ಪಿಗೆ • ನಿಮ್ಮೊಂದಿಗೆ ನಾವಿದ್ದೇವೆ.. ಸಿಎಂಗೆ ಶಾಸಕರ ಬಲ;
• ರಾಷ್ಟ್ರಪತಿಗಳ ಮುಂದೆ 135 ಶಾಸಕರಿಂದ ಪೆರೇಡ್‌ಗೆ ಸಂಪುಟ ನಿರ್ಧಾರ • ಹೆಬ್ಬಾಳ -ಸಿಲ್ಕ್ ಬೋರ್ಡ್ ಸುರಂಗ ರಸ್ತೆಗೆ ಸಂಪುಟ ಒಪ್ಪಿಗೆ

1 ಹೆಬ್ಬಾಳದ ಎಸ್ಟೀಮ್ ಮಾಲ್ ನಿಂದ ಸಿಲ್ಕ್ ಬೋರ್ಡ್ ವರೆಗೆ 18 ಕಿಮೀ ಉದ್ದದ ಸುರಂಗ ಮಾರ್ಗಕ್ಕೆ ಸಂಪುಟ ತಾತ್ವಿಕ ಒಪ್ಪಿಗೆ

2 ಸುಮಾರು 12, 690 ಕೋಟಿ ಮೊತ್ತದಲ್ಲಿ ಸುರಂಗ ಮಾರ್ಗ ನಿರ್ಮಾಣ ಯೋಜನೆಗೆ ಇನ್ನಷ್ಟೇ ಡಿಪಿಆರ್ ಸಿದ್ಧಗೊಳ್ಳಬೇಕಿದೆ

3 ಬೆಂಗಳೂರಿನಲ್ಲಿ ಪ್ರವಾಸೋದ್ಯಮ ಸೆಳೆಯುವ ಸಲುವಾಗಿ 500 ಕೋಟಿ ರೂ ವೆಚ್ಚದಲ್ಲಿ ಸ್ಕೈ ಡೆಕ್ ನಿರ್ಮಾಣಕ್ಕೂ ಸಂಪುಟ ಒಪ್ಪಿಗೆ



• ಉದಯವಾಹಿನಿ, ಬೆಂಗಳೂರು

ಮುಡಾ ಹಗರಣವೀಗ ಸರ್ಕಾರ ವರ್ಸಸ್ ಗೌರ್ನರ್ ಎನ್ನುವಂತಾಗಿದೆ. ನಾವಾ ನೀವಾ.. ನೋಡೇ ಬಿಡೋಣ ಎನ್ನುತ್ತಾ ರಾಜ್ಯಪಾಲರು ಮತ್ತು ವಿಪಕ್ಷಗಳ ವಿರುದ್ಧ ರಾಜ್ಯ ಸರ್ಕಾರ ರಾಜಕಾರಣ ಶುರು ಮಾಡಿಕೊಂಡಂತೆ ಕಾಣುತ್ತಿದೆ. ಆರ್ಟಿಕಲ್ 163ರ ಅಡಿ ಮಂತ್ರಿ ಪರಿಷತ್‌ಗೆ ಇರುವ ಅಧಿಕಾರ ಬಳಸಿಕೊಂಡಿರುವ ಸಿದ್ದರಾಮಯ್ಯ ಸಂಪುಟ, ವಿಪಕ್ಷಗಳ ನಾಯಕರ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ಕೇಳಿ, ಬಾಕಿ ಉಳಿದಿರುವ ಪ್ರಕರಣದ ವಿಚಾರದಲ್ಲಿ ಸೂಕ್ತ ನಿರ್ಧಾರ ಕೈಗೊಳ್ಳುವಂತೆ ಮನವಿಗೆ ಸಂಪುಟ ಸಭೆಯಲ್ಲಿ ನಿರ್ಣಯ ಕೈಗೊಂಡಿದೆ. ಗುರುವಾರ ಸಿಎಂ ನೇತೃತ್ವದಲ್ಲಿ ನಡೆದ ಶಾಸಕಾಂಗ ಸಭೆಯಲ್ಲಿ ಕಾಂಗ್ರೆಸ್ ಶಾಸಕರು, ಸಚಿವರು ಸಿಎಂಗೆ ನೈತಿಕ ಸ್ಥೈರ್ಯ ತುಂಬಿದ್ದಾರೆ. ನೀವು ಯಾವುದೇ ಕಾರಣಕ್ಕೂ ಎದೆಗುಂದಬೇಡಿ. ಕಾನೂನು ಹೋರಾಟ ನಡೆಸಿ ಅಂತ ಶಾಸಕರು ಸಲಹೆ ಕೊಟ್ಟಿದ್ದಾರೆ. ಅದಕ್ಕೆ ಸಿಎಂ ಸಹ ಧನ್ಯವಾದ ಹೇಳಿದರು. ನನ್ನ ಪರವಾಗಿ ಹೋರಾಡುತ್ತಿದ್ದೀರಿ, ನಿಮಗೆ ಧನ್ಯವಾದ ಅಂತ ಹೇಳಿದ್ದಾರೆ. ಇಂದು (ಆ.23) ಹೈಕಮಾಂಡ್ ಭೇಟಿಗಾಗಿ ಸಿಎಂ ಸಿದ್ದರಾಮಯ್ಯ ತೆರಳುತ್ತಿದ್ದು, ಇತ್ತೀಚಿನ ಬೆಳವಣಿಗೆಗಳ ಬಗ್ಗೆ ಮಾಹಿತಿ ನೀಡಲಿದ್ದಾರೆ.

ಪ್ರಮುಖ ನಿರ್ಣಯಗಳೇನು: ಅಲ್ಲದೇ ಸಿಎಂ ನೇತೃತ್ವದಲ್ಲಿ ನಡೆದ ಶಾಸಕಾಂಗ ಸಭೆಯಲ್ಲಿ ಪ್ರಮುಖ ನಿರ್ಣಯಗಳನ್ನೂ ಕೈಗೊಳ್ಳಲಾಯಿತು. ರಾಷ್ಟ್ರಪತಿಗಳ ಮುಂದೆ ಶಾಸಕರ ಪೆರೇಡ್‌ಗೆ ನಿರ್ಧರಿಸಲಾಯಿತು. ಆ.23ರಂದು ಹೈಕಮಾಂಡ್ ಬಳಿ ಈ ವಿಚಾರ ಮಾತನಾಡಲು ನಿರ್ಧಾರ ಕೈಗೊಳ್ಳಲಾಯಿತು. ಹೈಕಮಾಂಡ್ ಅನುಮತಿ ಕೊಟ್ಟರೇ, ಅಲ್ಲೇ ದಿನಾಂಕ ನಿಗದಿಪಡಿಸಲಿರುವ ಸಿಎಂ, ಡಿಸಿಎಂ ಎಲ್ಲಾ 135 ಶಾಸಕರನ್ನ ದೆಹಲಿಗೆ ಕರೆದೊಯ್ದು, ರಾಷ್ಟ್ರಪತಿಗಳ ಮುಂದೆ ಪೆರೆಡ್ ಮಾಡಿಸಿ, ರಾಜ್ಯಪಾಲರ ವಿರುದ್ಧ ದೂರು ಕೊಡಲು ಶಾಸಕಾಂಗ ಪಕ್ಷದ ಸಭೆಯಲ್ಲಿ ತೀರ್ಮಾನಿಸಲಾಯಿತು. ಶಾಸಕಾಂಗ ಪಕ್ಷದ ಸಭೆಯಲ್ಲಿ ಕಾಂಗ್ರೆಸ್ ನಾಯಕರಾದ ಪ್ರದೀಪ್ ಈಶ್ವರ್, ವಿನಯ್ ಕುಲಕರ್ಣಿ, ರಾಜು ಕಾಗೆ, ಮಂಜುನಾಥ್ ಭಂಡಾರಿ, ಸುಧಾಮ್ ದಾಸ್, ಹ್ಯಾರಿಸ್, ಬೋಸರಾಜು, ನಾರಾಯಣಸ್ವಾಮಿ, ಕೆ.ಜೆ ಜಾರ್ಜ್, ಶರಣು ಪ್ರಕಾಶ್ ಪಾಟೀಲ್, ನರೇಂದ್ರ ಸ್ವಾಮಿ, ಶ್ರೀನಿವಾಸ ಮಾನೆ, ಉಮಾಶ್ರೀ, ರಾಜೇಗೌಡ, ರಾಮೋಜಿಗೌಡ, ಜಮೀರ್ ಅಹಮದ್ ಪಾಲ್ಗೊಂಡಿದ್ದರು.

### ಏನಿದು ಸುರಂಗ ಯೋಜನೆ

ಬೆಂಗಳೂರಿನಲ್ಲಿ ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಸಂಚಾರ ದಟ್ಟಣೆ ನಿಯಂತ್ರಿಸುವ ಸಲುವಾಗಿ ಟನಲ್ ರಸ್ತೆಗಳನ್ನು ನಿರ್ಮಿಸಲಾಗುವುದು ಎಂದು ಜನವರಿಯಲ್ಲಿ ಬೆಂಗಳೂರು ನಗರಾಭಿವೃದ್ಧಿ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ತಿಳಿಸಿದ್ದರು. ಅದರಂತೆ ಮೊದಲ ಹಂತದಲ್ಲಿ ಪ್ರಾಯೋಗಿಕವಾಗಿ ಹೆಬ್ಬಾಳದಿಂದ ಮೇಖ್ರಿ ಸರ್ಕಲ್ ವರೆಗೆ 3 ಕಿಲೋ ಮೀಟರ್ ಉದ್ದದ ಚತುಷ್ಪಥ ಸುರಂಗ ನಿರ್ಮಿಸಲು ಬಿಬಿಎಂಪಿ ತೀರ್ಮಾನ ಮಾಡಿದೆ.



### 12,600 ಕೋಟಿ ರೂ. ಯೋಜನೆಗೆ ಅಸ್ತು

ಬೆಂಗಳೂರು ನಗರದ ಹೆಬ್ಬಾಳ ಮೇಲ್ಸುತೇವೆಯಿಂದ ಸಿಲ್ಕ್ ಬೋರ್ಡ್‌ವರೆಗೆ ಸುರಂಗ ಮಾರ್ಗಕ್ಕೆ 12,600 ಕೋಟಿ ರೂ. ಯೋಜನೆಗೆ ಸಚಿವ ಸಂಪುಟ ಸಭೆಯಲ್ಲಿ ಅನುಮೋದಿಸಲಾಗಿದೆ. ಬಾಲ ಗರ್ಭಿಣಿಯರ ಸಂಖ್ಯೆ ತಡೆಯಲು ವಿವಿಧ ಇಲಾಖೆಗಳ ಜವಾಬ್ದಾರಿ ಬಗ್ಗೆ ಸಚಿವ ಸಂಪುಟ ಸಭೆಯಲ್ಲಿ ಚರ್ಚೆ ಮಾಡಲಾಗಿದೆ. ಜೆಎಸ್ ಡಬ್ಲ್ಯು ಸಂಸ್ಥೆಗೆ ಗಣಿಗಾರಿಕೆಯ ಒಟ್ಟು 3666 ಎಕರೆ ಭೂಮಿ ಶುದ್ಧ ಕ್ರಯಪತ್ರ ನೀಡಲು ಅನುಮೋದಿಸಲಾಗಿದೆ. ತೋರಣಗಲ್ಲು ಮತ್ತು ಕೊರೆಕೊಪ್ಪ ಗ್ರಾಮಗಳಲ್ಲಿ 2,000 ಎಕರೆ, ಬಳ್ಳಾರಿ ಜಿಲ್ಲೆಯ ಸಂಡೂರು ತಾಲ್ಲೂಕಿನ ತೋರಣಗಲ್ಲು ಮತ್ತು ಕೊರೆಕೊಪ್ಪ, ಮೊಸೇನಾಯಕನಹಳ್ಳಿ ಮತ್ತು ಎರಬನಹಳ್ಳಿ ಗ್ರಾಮಗಳಲ್ಲಿ 1666 ಎಕರೆ ಭೂಮಿ ಶುದ್ಧ ಕ್ರಯಪತ್ರ ನೀಡಲು ಒಪ್ಪಿಗೆ ನೀಡಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ರಾಜ್ಯಪಾಲರ ಅನುಮತಿ ವಿಚಾರವಾಗಿ ಮಾತನಾಡಿದ ಅವರು, ಆಗಸ್ಟ್ 1ರಂದು ಡಿಸಿಎಂ ಡಿಕೆ ಶಿವಕುಮಾರ್ ನೇತೃತ್ವದಲ್ಲಿ ಸಂಪುಟ ಸಭೆ ನಡೆದಿತ್ತು. ಆರ್ಟಿಕಲ್ 163ರ ಅನ್ವಯ ರಾಜ್ಯಪಾಲರಿಗೆ ಸಲಹಾ ನಿರ್ಣಯವನ್ನು ದೃಢೀಕರಿಸಲು ಗುರುವಾರ ಸಭೆ ನಡೆಯಿತು ಎಂದರು. ಬೆಂಗಳೂರಿನ ಸುರಂಗ ಮಾರ್ಗ, ಟಿಡಿಆರ್ ಸೇರಿದಂತೆ ಪ್ರಮುಖ ಕಾಮಗಾರಿಗಳ ಸೇರಿದಂತೆ 40ಕ್ಕೂ ಹೆಚ್ಚು ಅಭಿವೃದ್ಧಿ ವಿಷಯಗಳ ಮೇಲೆ ಚರ್ಚೆ ಮಾಡಲಾಗಿದೆ. ಸಭೆ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕಾನೂನು ಸಚಿವ ಹೆಚ್.ಕೆ.ಪಾಟೀಲ್, ಬೆಂಗಳೂರಲ್ಲಿ ಸ್ಕೈಡೆಕ್ ನಿರ್ಮಾಣಕ್ಕೆ ಸಚಿವ ಸಂಪುಟ ಅನುಮೋದನೆ ನೀಡಲಾಗಿದೆ.

### ರಾಜ್ಯಪಾಲರ ಒಪ್ಪಿಗೆಗೆ ಕಾದಿರುವ ಪ್ರಕರಣಗಳು

1 ಹೆಚ್.ಡಿ ಕುಮಾರಸ್ವಾಮಿ ವಿರುದ್ಧ ಗಣಿ ಗುತ್ತಿಗೆ ಲೈಸೆನ್ಸ್ ಪ್ರಕರಣ



2 ಜನಾರ್ದನ ರೆಡ್ಡಿ ವಿರುದ್ಧ ಅಕ್ರಮ ಗಣಿಗಾರಿಕೆ ಪ್ರಕರಣ



3 ಮುರುಗೇಶ ನಿರಾಣಿ ವಿರುದ್ಧ `ಇನ್ವೆಸ್ಟ್ ವೀಡಿಯೋ' ಪ್ರಕರಣ



4. ಮಾಜಿ ಮಂತ್ರಿ ಶಶಿಕಲಾ ಜೊಲ್ಲೆ ವಿರುದ್ಧ ಮೊಟ್ಟೆ ಪ್ರಕರಣ



### 500 ಕೋಟಿ ರೂ ವೆಚ್ಚದ ಸ್ಕೈ ಡೆಕ್ ನಿರ್ಮಾಣಕ್ಕೆ ಒಪ್ಪಿಗೆ

ಬೆಂಗಳೂರಿನಲ್ಲಿ ಪ್ರವಾಸೋದ್ಯಮ ಸೆಳೆಯುವ ನಿಟ್ಟನಲ್ಲಿ ಸ್ಕೈ ಡೆಕ್ ನಿರ್ಮಾಣಕ್ಕೂ ಸಂಪುಟ ಒಪ್ಪಿಗೆ ನೀಡಿದೆ. ಪ್ರವಾಸೋದ್ಯಮ ಬೆಳವಣಿಗೆ ನಿಟ್ಟನಲ್ಲಿ ಮಹತ್ವದ ನಿರ್ಧಾರ ಕೈಗೊಳ್ಳಲಾಗಿದೆ. 500 ಕೋಟಿ ಅಂದಾಜಿನಲ್ಲಿ ನಿರ್ಮಾಣ ಮಾಡಲು ಸಂಪುಟ ಅನುಮತಿ ನೀಡಿದೆ. ಸ್ಕೈ ಡೆಕ್ ನಿರ್ಮಾಣದ ಸ್ಥಳ ನಿಗದಿ ಬಗ್ಗೆ ಇನ್ನೂ ನಿರ್ಧಾರ ಕೈಗೊಳ್ಳಲಾಗಿಲ್ಲ.

## ಮೊದಲು ಕೆಲಸಕ್ಕೆ ಮರಳಲು ವೈದ್ಯರಿಗೆ ಸೂಚಿಸಿ

**ಆಸ್ಪತ್ರೆಗಳಿಗೆ ಸುಪ್ರೀಂ ಸೂಚನೆ**



• ಉದಯವಾಹಿನಿ, ನವದೆಹಲಿ

ಕರ್ತವ್ಯದಲ್ಲಿದ್ದ ಮಹಿಳಾ ವೈದ್ಯೆಯ ಅತ್ಯಾಚಾರ ಮತ್ತು ಕೊಲೆ ಪ್ರಕರಣದ ವಿಚಾರಣೆಯನ್ನು ಸುಪ್ರೀಂ ಕೋರ್ಟ್ ಗುರುವಾರ ಪುನರಾರಂಭಿಸಿದೆ.

ವಿಚಾರಣೆಯ ಆರಂಭದಲ್ಲಿ, ಏಮ್ಸ್ ನಾಗ್ಪುರ ಮತ್ತು ಪಿಜಿಐ ಚಂಡೀಗಢದ ವೈದ್ಯರ ಪರವಾಗಿ ಹಾಜರಾದ ವಕೀಲರು, ಆಸ್ಪತ್ರೆಯ ಅಧಿಕಾರಿಗಳು ಪ್ರತಿಭಟನಾ ನಿರತ ವೈದ್ಯರ ವಿರುದ್ಧ ಬಲವಂತದ ಕ್ರಮಗಳನ್ನು ತೆಗೆದುಕೊಳ್ಳುತ್ತಿದ್ದಾರೆ ಎಂದು ಉನ್ನತ ನ್ಯಾಯಾಲಯಕ್ಕೆ ತಿಳಿಸಿದರು.

ಸಿಜೆಐ ಡಿ.ವೈ.ಚಂದ್ರಚೂಡ್ ನೇತೃತ್ವದ ನ್ಯಾಯಪೀಠವು ವೈದ್ಯರು ಮೊದಲು ಕೆಲಸವನ್ನು ಪುನರಾರಂಭಿಸಲಿ ಮತ್ತು ನಂತರ ಮುಷ್ಕರ ನಡೆಸುತ್ತಿರುವ ವೈದ್ಯರ ವಿರುದ್ಧ ಯಾವುದೇ ಬಲವಂತದ ಕ್ರಮಗಳನ್ನು ತೆಗೆದುಕೊಳ್ಳದಂತೆ ಸುಪ್ರೀಂ ಕೋರ್ಟ್ ನಿರ್ದೇಶನ ನೀಡಲಿದೆ ಎಂದು ಹೇಳಿದರು.

ನಾಗ್ಪುರದ ಏಮ್ಸ್ ವೈದ್ಯರ ಪರ ಹಾಜರಾದ ವಕೀಲರು, ಪ್ರತಿಭಟನಾ ನಿರತ ವೈದ್ಯರನ್ನು ಗೈರುಹಾಜರಿ ಎಂದು ಗುರುತಿಸಲಾಗುತ್ತಿದೆ, ಪರೀಕ್ಷೆಗಳಲ್ಲಿ ಕುಳಿತುಕೊಳ್ಳಲು ಅವಕಾಶ ನೀಡುತ್ತಿಲ್ಲ ಎಂದು ನ್ಯಾಯಾಲಯಕ್ಕೆ ತಿಳಿಸಿದರು. ಕೆಲವು ಮೃದು ದೃಷ್ಟಿಕೋನವನ್ನು ತೆಗೆದುಕೊಳ್ಳಬೇಕು ಎಂದು ವಕೀಲರು ನ್ಯಾಯಾಲಯವನ್ನು ಒತ್ತಾಯಿಸಿದರು.

ಅವರು ಗೈರುಹಾಜರಾಗಿದ್ದಾರೆ, ಆದ್ದರಿಂದ ಅವರನ್ನು ಗೈರುಹಾಜರಿ ಎಂದು ಗುರುತಿಸಲಾಗುತ್ತದೆ. ಸರಿಯಾಗಿಲ್ಲದದ್ದನ್ನು ಗುರುತಿಸುವಂತೆ ನಾವು ಆಡಳಿತಕ್ಕೆ ಹೇಗೆ ಹೇಳಬಹುದು? ಮೊದಲು ಕೆಲಸಕ್ಕೆ ಮರಳಲು ಅವರಿಗೆ ತಿಳಿಸಿ, ನಂತರ ನಾವು ಅಧಿಕಾರಿಗಳ ಮೇಲೆ ಮೇಲುಗೈ ಸಾಧಿಸುತ್ತೇವೆ. ಆಗ ಯಾರೂ ಕ್ರಮ ಕೈಗೊಳ್ಳುವುದಿಲ್ಲ' ಎಂದು ಹೇಳಿದರು. ಎಂದು ಸಿಜೆಐ ಚಂದ್ರಚೂಡ್ ಹೇಳಿದ್ದಾರೆ.

# ಬಿಜೆಪಿ ನಾಯಕರು ದಲಿತ ಸಮುದಾಯಕ್ಕೆ ಅವಮಾನ

## ಈಗ ನೀವು ದಲಿತರ ಹೆಸರಲ್ಲಿ ಸುರಿಸುತ್ತಿರುವ ಮೊಸಳೆ ಕಣ್ಣೀರಿನ ಹಿಂದಿನ ಪ್ರಾಮಾಣಿಕತೆ ತಿಳಿಯದಷ್ಟು ದಡ್ಡರಲ್ಲ

• ಉದಯವಾಹಿನಿ, ಬೆಂಗಳೂರು

ಬಿಜೆಪಿ ನಾಯಕರು 'ದಲಿತ ಗುರಾಣಿ' ಬಳಸುತ್ತಿರುವುದು ದಲಿತ ಸಮುದಾಯಕ್ಕೆ ಮಾಡಿರುವ ಅವಮಾನ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

ದಲಿತರನ್ನು ಬಳಸಿ ಬಿಸಾಡುವ ಬಿಜೆಪಿ ಮತ್ತು ಸಂಘ ಪರಿವಾರದ ಪಿತೂರಿ ರಾಜಕಾರಣವನ್ನು ಅರ್ಥಮಾಡಿಕೊಳ್ಳುವಷ್ಟು ದಲಿತ ಸಮುದಾಯ ಜಾಗೃತವಾಗಿದೆ. ಈಗ ನೀವು ದಲಿತರ ಹೆಸರಲ್ಲಿ ಸುರಿಸುತ್ತಿರುವ ಮೊಸಳೆ ಕಣ್ಣೀರಿನ ಹಿಂದಿನ ಪ್ರಾಮಾಣಿಕತೆ ತಿಳಿಯದಷ್ಟು ದಡ್ಡರಲ್ಲ. ಕನಿಷ್ಠ ಅಟಲ್ ಬಿಹಾರಿ ವಾಜಪೇಯಿ ಅವರು ದಲಿತ ಸಮುದಾಯಕ್ಕೆ ಸೇರಿರುವ ಬಂಗಾರು ಲಕ್ಷ್ಮಣ್ ಅವರನ್ನು ಪಕ್ಷದ ರಾಷ್ಟ್ರೀಯ ಅಧ್ಯಕ್ಷರನ್ನಾಗಿ ನೇಮಕ ಮಾಡಿದರು. ಆದರೆ ಬಿಜೆಪಿಯೊಳಗಿನ ''ಸಂಘಿ ಮನಸ್ಸು'' ಅದನ್ನು ಸಹಿಸಿಕೊಳ್ಳದೆ ಅವರ ಮೇಲೆ ಭ್ರಷ್ಟಾಚಾರದ ಆರೋಪ ಹೊರಿಸಿತು, ಕೊನೆಗೆ ಅದೇ ಕೊರಗಿನಲ್ಲಿ ಅವರು ಸಾವಿಗೀಡಾದರು. ದಲಿತ ಸಮುದಾಯದಕ್ಕೆ ಸೇರಿರುವ ನಮ್ಮ ಪಕ್ಷದ ಈಗಿನ ರಾಷ್ಟ್ರೀಯ ಅಧ್ಯಕ್ಷರಾಗಿರುವ ಮಲ್ಲಿಕಾರ್ಜುನ ಖರ್ಗೆ ಅವರನ್ನು ಪಕ್ಷದ ಹಿರಿಯ ನಾಯಕರು ಎಷ್ಟು ಗೌರವ ಮತ್ತು ಘನತೆಯಿಂದ ನಡೆಸಿಕೊಳ್ಳುತ್ತಿದ್ದಾರೆ ಎನ್ನುವುದನ್ನು ನೋಡಿ ಕಲಿಯಿರಿ.

ಸಂವಿಧಾನವನ್ನೇ ಬದಲಾಯಿಸಲು ಹೊರಟಿರುವ, ಮೀಸಲಾತಿಯನ್ನು ವಿರೋಧಿಸುತ್ತಿರುವ ಮತ್ತು ಜಾತಿ ತಾರತಮ್ಯವನ್ನು ಅಂತರಂಗದಲ್ಲಿ ಒಪ್ಪಿಕೊಂಡು ಬಹಿರಂಗದಲ್ಲಿ ಜಾತ್ಯತೀತತೆಯ ಸೋಗುಹಾಕಿರುವ ಬಿಜೆಪಿನಾಯಕರಿಗೆ ದಲಿತರ ಬಗ್ಗೆ ಮಾತನಾಡುವ ಯಾವ ನೈತಿಕತೆಯೂ ಇಲ್ಲ. ನಿಮಗೆ ದಲಿತ ಸಮುದಾಯದ ಬಗ್ಗೆ ನಿಜವಾಗಿಯೂ ಗೌರವ ಇದ್ದರೆ ಥಾವರಚಂದ್ ಗೆಹ್ಲೋತ್ ಅವರ ಮೇಲೆ ಕೆಟ್ಟ ಕೆಲಸ ಮಾಡಲು ರಾಜಕೀಯ ಒತ್ತಡ ಹೇರಲು ಹೋಗದೆ, ಅವರು ಸಂವಿಧಾನದತ್ತವಾಗಿ ಕರ್ತವ್ಯ ನಿರ್ವಹಣೆ ಮಾಡಲು ಅವಕಾಶ ಮಾಡಿಕೊಡಿ, ಈ ಪ್ರತಿಭಟನೆ, ಪ್ರತಿರೋಧದ ನಾಟಕಗಳನ್ನು ನಿಲ್ಲಿಸಿ ಎಂದಿದ್ದಾರೆ. ರಾಜ್ಯದ ಘನತೆವೆತ್ತ ರಾಜ್ಯಪಾಲರಾಗಿರುವ ಥಾವರ್ ಚಂದ್ ಗೆಹ್ಲೋತ್ ಅವರ ತಪ್ಪು ನಡೆಯ ಬಗೆಗಿನ ನಮ್ಮ ಪ್ರಶ್ನೆಗಳಿಗೆ ಉತ್ತರ ನೀಡಲಾಗದ ರಾಜ್ಯದ @BJP4Karnataka ನಾಯಕರು ''ದಲಿತ ಗುರಾಣಿ'' ಬಳಸುತ್ತಿರುವುದು ಸಮಸ್ತ ಸ್ವಾಭಿಮಾನಿ ದಲಿತ ಸಮುದಾಯಕ್ಕೆ ಮಾಡಿರುವ ಅವಮಾನವಾಗಿದೆ. 'ಹಿಂದುಗಳಲ್ಲಿ ಜಾತಿಯೇ ಇಲ್ಲ, ಧರ್ಮವೇ ಎಲ್ಲಾ' ಎಂದು ಉಪದೇಶ ಮಾಡುತ್ತಿರುವ ಬಿಜೆಪಿ ನಾಯಕರ ಬುಡಕ್ಕೆ ನೀರು ಬಂದಾಗ ಜಾತಿ ನೆನಪಾಗುತ್ತದೆ. ರಾಜ್ಯಪಾಲರಿಗೆ ಅವಮಾನವಾಗಿದೆ ಎಂದು ಪ್ರತಿಭಟಿಸುತ್ತಿರುವ ರಾಜ್ಯದ ಬಿಜೆಪಿ ನಾಯಕರಿಗೆ ನನ್ನ ಕೆಲವು ಸರಳ ಪ್ರಶ್ನೆಗಳಿವೆ.



### ದಲಿತ ನಾಯಕನನ್ನು ದುರ್ಬಳಕೆ ಮಾಡಿಕೊಳ್ಳುವುದು ಅವಮಾನ ಅಲ್ಲವೇ

ದಲಿತ ಸಮುದಾಯಕ್ಕೆ ಸೇರಿರುವ ಥಾವರಚಂದ್ ಗೆಹ್ಲೋತ್ ಅವರ ಬಗ್ಗೆ ನಿಮ್ಮಲ್ಲಿ ಅಷ್ಟೊಂದು ಗೌರವ ಮತ್ತು ಅಭಿಮಾನವಿದ್ದರೆ ಕೇಂದ್ರ ಸಚಿವ ಸಂಪುಟದಲ್ಲಿರಬೇಕಾಗಿದ್ದ ಅವರನ್ನು ಇಲ್ಲಿ ತಂದು ''ಪಂಜರದ ಗಿಣಿ'' ಯನ್ನಾಗಿ ಯಾಕೆ ಮಾಡಿದ್ದೀರಿ ''ಮಾರ್ಗದರ್ಶಕ ಮಂಡಳಿ ಎಂಬ ವನವಾಸಾಶ್ರಮ'' ಸೇರುವಷ್ಟು ವಯಸ್ಸಾಗದೆ ಇದ್ದರೂ ಅವರ ಸಕ್ರಿಯ ರಾಜಕೀಯ ಜೀವನವನ್ನು ಯಾಕೆ ಮೊಟಕುಗೊಳಿಸಿದಿರಿ ಕೇಂದ್ರ ಸಚಿವ ಸ್ಥಾನದಿಂದ ವಂಚಿತರನ್ನಾಗಿ ಮಾಡಿ, ತಮ್ಮ ರಾಜಕೀಯ ವಿರೋಧಿಗಳ ವಿರುದ್ದದ ದ್ವೇಷದ ರಾಜಕಾರಣಕ್ಕೆ ದಲಿತ ಸಮುದಾಯದ ನಾಯಕನನ್ನು ದುರ್ಬಳಕೆ ಮಾಡಿಕೊಳ್ಳುವುದು ಆ ಸಮುದಾಯಕ್ಕೆ ಮಾಡುವ ಅನ್ಯಾಯ-ಅವಮಾನ ಅಲ್ಲವೇ ಬಿಜೆಪಿ ನಾಯಕರೇ, ದಲಿತ ನಾಯಕರೊಬ್ಬರನ್ನು ತಮ್ಮ ರಾಜಕೀಯ ಸ್ವಾರ್ಥಕ್ಕಾಗಿ ಬಳಸುವಾಗ ಕನಿಷ್ಠ ನಿಮ್ಮ ಆತ್ಮಸಾಕ್ಷಿಯೂ ಚುಚ್ಚಲಿಲ್ಲವೇ ಎಂದು ಸಿಎಂ ಕಿಡಿಕಾರಿದ್ದಾರೆ.

**ಈ ದಿನದ ದರ** ಪೆಟ್ರೋಲ್: 103.44 ₹/L | ಡೀಸೆಲ್ : 89.97 ₹/L | ಬಂಗಾರ: ₹7,287/Gram24ct ₹6,680/Gram22ct | ಬೆಳ್ಳಿ: ₹87.00/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

### ನಿಜತತ್ತ್ವವೆನೆ ರಾಜಿಪನು ಕಲ್ಪಿತಾತ್ಮನು

ನಿಜಗುಣರ ಪರಮಾನುಭವ ಬೋಧೆಯ ಮಾತು. ಪರಬ್ರಹ್ಮದಲ್ಲಿ ತೋರಿದ ಕಲ್ಪಿತ ಪುರುಷನು ನಾಮರೂಪಾತ್ಮಕ ಜಗತ್ತಾಗಿ ತೋರಿ ಸತ್ಯದಂತೆ ತೋರುವನು. ಗುರುಶಾಸ್ತ್ರಾದಿಗಳ ಮೂಲಕ ತನ್ನ ನಿಜ ಸ್ವರೂಪದ ಜ್ಞಾನ ಆಗುವವರೆಗೂ ಈ ನಾಮರೂಪಕ್ರಿಯಾತ್ಮಕ ಜಗತ್ತು ಎಂಬ ಕಲ್ಪಿತ ಪುರುಷ ಸತ್ಯದಂತೆ ಕಂಗೊಳಿಸುವನು. ಸ್ವರೂಪ ಜ್ಞಾನ ಆದ ಕೂಡಲೇ ಇದೆಲ್ಲ ಮಿಥ್ಯೆಯಾಗಿ ಪರಬ್ರಹ್ಮಮಾತ್ರ ಸತ್ಯವಾಗಿ ಉಳಿಯುವುದು. ಬೆಜವಾಡ ನ್ಯಾಯ ಇದಕ್ಕೊಂದು ಉದಾಹರಣೆ. ಬೆಜವಾಡ ಪ್ರಾಂತದವನೊಬ್ಬ ಸತಿಯೊಂದಿಗೆ ನಡೆದು ಹೋಗುತ್ತಿರಲು ಬಾಯಾರಿಕೆಯಾಗಿ ಕಂಡ ಬಾವಿಯೊಳಗೆ ಇಳಿದು ನೀರು ಕುಡಿದು ಮೇಲೇರುತ್ತಿರುವಾಗ, ಅಲ್ಲಿ ವಾಸವಿದ್ದ ಬ್ರಹ್ಮರಾಕ್ಷಸವೊಂದು ಆ ದಾರಿಹೋಕನ ಸತಿಗೆ ವ್ಯಾಮೋಹಿತವಾಗಿ ಆ ದಾರಿಹೋಕನ ರೂಪ ತಾಳಿತು. ಇವರೀರ್ವರಲ್ಲಿ ನಿಜ ಪತಿ ಯಾರೆಂದು ಆಕೆ ಗುರುತಿಸದಾದಳು. ನ್ಯಾಯಕ್ಕಾಗಿ ರಾಜನ ಮೊರೆ ಹೋದಳು. ನಿಜ ಪತಿಗಿಂತ ರೂಪಾಂತರ ಪತಿಯೇ ಜೋರಿದ್ದ. ಸೀಸೆಯೊಳಗೆ ಯಾರು ಹೋಗಬಲ್ಲಿರಿ ಎಂದಾಗ ರೂಪಾಂತರ ಪತಿ ಒಳಗೆ ಹೋದ. ಆಗ ಬ್ರಹ್ಮ ರಾಕ್ಷಸನ ಬಣ್ಣ ಬಯಲಾಗಿ ನಕಲಿ ಪತಿ ಎಂಬುದು ಸಾಬೀತಾಯಿತಂತೆ. ಅದರಂತೆ ಕಲ್ಪಿತ ಪುರುಷ.

## ಜೋಡಿ ಸ್ಯಾಕ್ಸೋಫೋನ್ ವಾದನ

• ಉದಯವಾಹಿನಿ, ಬೆಂಗಳೂರು



ಜಯನಗರ 5ನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀ ಪಾದಂಗಳವರ ಆದೇಶಾನುಸಾರ ಶ್ರೀ ಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್ ಕೆ ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಶ್ರೀ ರಾಘವೇಂದ್ರ ಗುರುಸಾರ್ವಭೌಮರ ಆರಾಧನಾ ಸಪ್ತರಾತ್ರೋತ್ಸವದ 6ನೇ ದಿನವಾದ ಆಗಸ್ಟ್ 23, ಶುಕ್ರವಾರ ಸಂಜೆ 7-00ಕ್ಕೆ ವಿ|| ಎಂ. ಜನಾರ್ಧನ್ ಮತ್ತು ಮಾ|| ಎಲ್.ಎನ್. ದತ್ತಾ (ತಂದೆ-ಮಗ) ಇವರಿಂದ ಜೋಡಿ ಸ್ಯಾಕ್ಸೋಫೋನ್ ವಾದನ. ಸಹ-ವಾದ್ಯ : ವಿ|| ಪುಣ್ಯೇಶ್ (ಕೀ-ಬೋರ್ಡ್), ವಿ|| ಮಾರುತಿ ಪ್ರಸಾದ್ (ತಬಲಾ), ವಿ|| ಉಮಾಪ್ರಸಾದ್ (ರಿದಂ ಪ್ಯಾಡ್). ಏರ್ಪಡಿಸಿದೆ ಎಂದು ಶ್ರೀ ನಂದಕಿಶೋರ್ ಆಚಾರ್ ತಿಳಿಸಿದ್ದಾರೆ. ಸ್ಥಳ : ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 11ನೇ ಮುಖ್ಯರಸ್ತೆ, 45ನೇ ಅಡ್ಡರಸ್ತೆ, ಜಯನಗರ ಐದನೇ ಬಡಾವಣೆ, ಬೆಂಗಳೂರು-560041

## ರೇಣುಕಾಸ್ವಾಮಿ ಕೊಲೆ ಕೇಸ್ : ಪವಿತ್ರಾಗೌಡ ಜಾಮೀನು ಅರ್ಜಿ ಆ.27ಕ್ಕೆ ಮುಂದೂಡಿಕೆ

• ಉದಯವಾಹಿನಿ, ಬೆಂಗಳೂರು

ರೇಣುಕಾಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪರಪ್ಪನ ಅಗ್ರಹಾರ ಜೈಲಿನಲ್ಲಿರುವ ಪ್ರಕರಣದ 01 ಆರೋಪಿ ಪವಿತ್ರ ಗೌಡ ಅವರ ಜಾಮೀನು ಅರ್ಜಿಯನ್ನು ಸಲ್ಲಿಸಿದ್ದರು. ಅರ್ಜಿ ವಿಚಾರಣೆ ನಡೆಸಿದ ಸಿಹೆಚ್ 55 ಕೋರ್ಟ್ ಆಗಸ್ಟ್ 27ಕ್ಕೆ ಮುಂದೂಡಿಕೆ ಮಾಡಿ ಆದೇಶ ಹೊರಡಿಸಿದೆ. ಹೌದು ರೇಣುಕಾಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಈಗಾಗಲೇ ಕಳೆದ 2 ತಿಂಗಳಿನಿಂದ ದರ್ಶನ್ ಪವಿತ್ರ ಗೌಡ ಸೇರಿದಂತೆ ಎಲ್ಲಾ 17 ಆರೋಪಿಗಳು ಜೈಲಿನಲ್ಲಿದ್ದಾರೆ. ಇದೀಗ ಒಂದು ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪವಿತ್ರ ಗೌಡ ಅವರು ಇತ್ತೀಚೆಗೆ ಜಾಮೀನು ಅರ್ಜಿ ಸಲ್ಲಿಸಿದ್ದರು. ಜಾಮೀನು ಅರ್ಜಿಯನ್ನು ವಿಚಾರಣೆ ನಡೆಸಿದ ನ್ಯಾಯಾಲಯವು ಆಗಸ್ಟ್ 27ಕ್ಕೆ ಅರ್ಜಿ ವಿಚಾರಣೆ ಮಂದೂಡಿ ನ್ಯಾಯಾಧೀಶ ಜೈ ಶಂಕರ್ ಆದೇಶ ಹೊರಡಿಸಿದ್ದಾರೆ. ವೇಳೆ ಎಸ್ ಪಿ ಪಿ ಪವಿತ್ರ ಗೌಡ ಜಾಮೀನು ಅರ್ಜಿಗೆ ಆಕ್ಷೇಪಣೆ ಸಲ್ಲಿಸಿದ್ದು, ಜಾಮೀನು ನೀಡಿದಂತೆ ಎಸ್ ಟಿ ಪಿ ಆಕ್ಷೇಪಣೆ ಸಲ್ಲಿಸಿದೆ.

## ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಶುಲ್ಕ ಮರುಪಾವತಿಗಾಗಿ ಅರ್ಜಿ ಆಹ್ವಾನ

• ಉದಯವಾಹಿನಿ, ಬೆಂಗಳೂರು

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಭಾರತ ಸರ್ಕಾರದಿಂದ ಮಾನ್ಯತೆ ಪಡೆದ ಅಧಿಕೃತ ರಾಷ್ಟ್ರೀಯ ಕ್ರೀಡಾ ಸಂಸ್ಥೆಗಳು ಆಯೋಜಿಸುವ ರಾಷ್ಟ್ರಮಟ್ಟದ ಕ್ರೀಡಾಕೂಟಗಳಲ್ಲಿ ಪದಕ ಪಡೆದ, ಅಂತಾರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಿಗೆ ಭಾರತ ಸರ್ಕಾರದಿಂದ ನಿಯೋಜಿಸಲ್ಪಟ್ಟ ತಂಡದಲ್ಲಿ ಭಾಗವಹಿಸಿ ಉತ್ತಮ ಸಾಧನೆ ಮಾಡಿದ ರಾಜ್ಯದ ಕ್ರೀಡಾಪಟುಗಳು 2024-25 ನೇ ಸಾಲಿನ ಶೈಕ್ಷಣಿಕ ಶುಲ್ಕವನ್ನು ಮರುಪಾವತಿಸುವ ಯೋಜನೆಯನ್ನು ಅನುಷ್ಠಾನಗೊಳಿಸಲು ಅರ್ಹ ಕ್ರೀಡಾಪುಟಗಳಿಂದ ಅರ್ಜಿ ಆಹ್ವಾನಿಸಿದೆ. ಆಸಕ್ತ ಕ್ರೀಡಾಪಟುಗಳು ನಿಗದಿತ ನಮೂನೆ ಅರ್ಜಿಯನ್ನು ಯುವ ಸಬಲೀಕರಣ, ಕ್ರೀಡಾ ಇಲಾಖೆ ಕಚೇರಿಯಿಂದ ಪಡೆದು ಭರ್ತಿ ಮಾಡಿದ ಅರ್ಜಿಯೊಂದಿಗೆ ಸೂಕ್ತ ದಾಖಲೆಗಳನ್ನು ಲಗತ್ತಿಸಿ ಸೆ. 25 ರೊಳಗಾಗಿ ಸಲ್ಲಿಸುವಂತೆ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಕಚೇರಿಯನ್ನು ಖುದ್ದಾಗಿ ಅಥವಾ ದೂ.ಸಂ.: 08182-223328 ನ್ನು ಸಂಪರ್ಕಿಸುವುದು.

## ನೀರಿನ ಬೆಲೆ ಏರಿಕೆ ಮಾಡಿ ಜನರ ಜೇಬಿಗೆ ಕತ್ತರಿ ಪ್ರಯೋಗಕ್ಕೆ ಮುಂದಾಗಿದೆ : ಬಿಜೆಪಿ ಕಿಡಿ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನಲ್ಲಿ ನೀರಿನ ದರ ಏರಿಕೆ ಮಾಡಲು ನಿರ್ಧರಿಸಲಾಗಿದೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಹೇಳಿದ್ದು, ಈ ಬಗ್ಗೆ ರಾಜ್ಯ ಬಿಜೆಪಿ ರಾಜ್ಯ ಸರ್ಕಾರದ ವಿರುದ್ಧ ಕಿಡಿಕಾರಿದೆ. ಕುರಿತು ಟ್ವೀಟ್ ಮಾಡಿರುವ ಬಿಜೆಪಿ, ಜನರ ಪೀಡಕರಂತೆ ವರ್ತಿಸುವ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅಂತವರನ್ನು ನೋಡಿಯೇ 'ಮೂರು ಬಿಟ್ಟವರು ಊರಿಗೆ ದೊಡ್ಡವರು' ಎನ್ನುವ ನಾಣ್ನುಡಿ ಬರೆದಂತೆ ತೋರುತ್ತಿದೆ ಎಂದು ವಾಗ್ದಾಳಿ ನಡೆಸಿದೆ. ದಿನಕ್ಕೊಂದು ಬೆಲೆ ಏರಿಕೆಯ ಬರೆ ಎಳೆಯುತ್ತಿರುವ ಕಾಂಗ್ರೆಸ್ ಸರ್ಕಾರ ಡಿ ಕೆ ಶಿವಕುಮಾರ್ ಅವರು ತಮ್ಮ ದರ್ಪದ ಮಾತುಗಳನ್ನು ಆಡುತ್ತಲೇ ಇದೀಗ ಕುಡಿಯುವ ನೀರಿನ ಬೆಲೆ ಏರಿಕೆ ಮಾಡಿ ಬೆಂಗಳೂರಿಗರ ಜೇಬಿಗೆ ಕತ್ತರಿ ಪ್ರಯೋಗಕ್ಕೆ ಮುಂದಾಗಿದ್ದಾರೆ. ಬೆಂಗಳೂರಿಗೆ ಬದುಕು ಕಟ್ಟಿಕೊಳ್ಳಲು ಬಂದಿರುವ ಜನಸಾಮಾನ್ಯರು ಬೆಲೆ ಏರಿಕೆಯ ಭೂತವಾಗಿರುವ ಈ ಕಾಂಗ್ರೆಸ್ ಸರ್ಕಾರದ ವಿರುದ್ಧ ಬೀದಿಗಿಳಿಯುವ ಕಾಲ ದೂರವಿಲ್ಲ ಎಂದು ಹೇಳಿದೆ.

## ಹದಗೆಟ್ಟ ಕಾನೂನು ವ್ಯವಸ್ಥೆ: ಪುಂಡರಿಗಿಲ್ಲ ಪೊಲೀಸರ ಭಯ!

• ಉದಯವಾಹಿನಿ, ಬೆಂಗಳೂರು

ಬೆಂಗಳೂರಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ಹದಗೆಟ್ಟು ಹೋಗಿದೆ. ಪುಂಡರಿಗೆ ಪೊಲೀಸರ ಭಯವೇ ಇಲ್ಲದಂತಾಗಿದೆ. ರಸ್ತೆ ರಸ್ತೆಯಲ್ಲಿಯೂ ಟೂಲ್ಸ್ ಹಿಡಿದು ರಾಬರಿ ಮಾಡಲಾಗುತ್ತಿದೆ. ಅದರಂತೆ ಇದೀಗ ಡಿಲವರಿ ಬಾಯ್ ಅಡ್ಡಹಗಟ್ಟಿ ರಾಬರಿ ಮಾಡಲಾಗಿದೆ. ತಲ್ವಾರ್ ನಿಂದ ಹೊಡೆದು ಅಟ್ಟಹಾಸ ಮೆರೆಯಲಾಗಿದೆ. ಒಂದೇ ಕಡೆ ಎರಡೆರಡು ಘಟನೆ ನಡೆದರು ಪೊಲೀಸರು ಕ್ಯಾರೆ ಅಂದಿಲ್ಲ. ಹೊಟ್ಟೆಪಾಡಿಗಾಗಿ ಮಧ್ಯರಾತ್ರಿವರೆಗು ಡಿಲವರಿ ಬಾಯ್ಸ್ ಕೆಲಸ ಮಾಡ್ತಾರೆ. ಆದರೆ ಈ ಪುಂಡರು ಅವರನ್ನೇ ಹೆದರಿಸಿ ಕಿತ್ತು ತಿನ್ನುತ್ತಾರೆ. ಆಗಸ್ಟ್ 4 ಮತ್ತು 20 ರ ಮಧ್ಯರಾತ್ರಿ ಒಂದೇ ಕಡೆ ಎರಡು ಬಾರಿ ರಾಬರಿ ನಡೆದಿದೆ.

# ಯಾರು ಏನೇ ಬಯ್ಯಲಿ ನೀರಿನ ದರ ಏರಿಕೆ ಖಚಿತ: ಡಿಕೆಶಿ

## ಡಿಕೆ.ಶಿವಕುಮಾರ್ ಅವರು ವಿಧಾನಸೌಧದ ಮುಂಭಾಗದಲ್ಲಿ 110 ಹಳ್ಳಿಗೆ ಕಾವೇರಿ ಸಂಪರ್ಕ ಅಭಿಯಾನಕ್ಕೆ ಚಾಲನೆ

• ಉದಯವಾಹಿನಿ, ಬೆಂಗಳೂರು

ಸಾರ್ವಜನಿಕರು, ಮಾಧ್ಯಮಗಳು ಏನೇ ಬಯ್ಯಲಿ, ವಿರೋಧ ಪಕ್ಷಗಳು ವಿರೋಧಿಸಿದರು ನೀರಿನ ದರ ಏರಿಕೆ ಮಾಡುವುದು ಖಚಿತ ಎಂದು ಉಪ ಮುಖ್ಯಮಂತ್ರಿ ಡಿಕೆ.ಶಿವಕುಮಾರ್ ಅವರು ಗುರುವಾರ ಹೇಳಿದ್ದಾರೆ.

ಡಿಕೆ.ಶಿವಕುಮಾರ್ ಅವರು ವಿಧಾನಸೌಧದ ಮುಂಭಾಗದಲ್ಲಿ 110 ಹಳ್ಳಿಗೆ ಕಾವೇರಿ ಸಂಪರ್ಕ ಅಭಿಯಾನಕ್ಕೆ ಚಾಲನೆ ನೀಡಿದರು.



ಉದಯವಾಹಿನಿ ಚಿತ್ರ

ಜೊತೆಗೆ ಮಳೆ ನೀರು ಕೊಯ್ಲು ಜಾಗೃತಿ ಅಭಿಯಾನ ಹಾಗೂ ವರುಣಮಿತ್ರ ತರಬೇತಿ ಹಾಗೂ ಯುನೈಟೆಡ್ ನೇಷನ್ ಇನೋವೇಷನ್ ಪ್ರಾಜೆಕ್ಟ್ ಫಾರ್ ವಾಟರ್ ಸೆಕ್ಯುರಿಟಿ ಇನ್ ಬೆಂಗಳೂರು ಸಿಟಿ ಯೋಜನೆ ಯೋಜನೆಗಳಿಗೂ ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು, ವಾಟರ್-ಪವರ್ ಈ ಎರಡು ಪ್ರಮುಖವಾಗಿದ್ದು, ಎರಡು ಇಲಾಖೆ ನಾನು ನೋಡ್ತಾ ಇದ್ದೇನೆ. ಮಾಜಿ ಸಿಎಂ ಎಸ್.ಎಂ.ಕೃಷ್ಣ ಅವರ ಅವಧಿಯಲ್ಲಿ ನಾನು ನಗರಾಭಿವೃದ್ಧಿ ಸಚಿವನಾಗಿದ್ದಾಗ ನೀರು ಸರಬರಾಜು ಖಾಸಗಿಕರಣ ಚರ್ಚೆ ನಡೆದಿತ್ತು. ನಮ್ಮ ರಾಜ್ಯದಲ್ಲಿ ಇದು ಕಷ್ಟವಾಗಲಿದೆ ಎಂದು ಮಾಹಿತಿ ನೀಡಿದ್ದೆ. ಇದಕ್ಕೆ ಸಾಕಷ್ಟು ವಿರೋಧ ವ್ಯಕ್ತವಾಗಿತ್ತು. ನಂತರ ಯೋಜನೆ ಕೈ ಬಿಟ್ಟಿದ್ದೆವು. ಈಗ ನಾನು ಸಚಿವನಾದ ಮೇಲೆ ಮತ್ತೆ ಕೆಲವರು ಖಾಸಗೀಕರಣದ ಬಗ್ಗೆ ಬಂದು ಮಾತಾಡಿದ್ದರು. ನಾನು ಇದು ಆಗಲ್ಲ ಎಂದು ಹೇಳಿದ್ದೇನೆಂದು ಹೇಳಿದರು. ನೀರಿನ ದರ ಸಾಕಷ್ಟು ವರ್ಷದಿಂದ ಏರಿಸಿಲ್ಲ. 1.40 ಕೋಟಿ ಜನಸಂಖ್ಯೆ ಬೆಂಗಳೂರಿನಲ್ಲಿ ಇದೆ.

**ಅಂತರ್ಜಲ ಹೆಚ್ಚಳ ಆಗ್ಬೇಕು**

### ಸೆಕ್ಷನ್‌ಗೆ ನೋಡಿ ದರ ನಿಗದಿ

ಜಲಮಂಡಳಿ ಉಳಿಸಬೇಕು ಅಂದ್ರೆ ನೀರಿನ ಬಿಲ್ ಏರಿಕೆ ಅನಿವಾರ್ಯ. ಇದರ ಬಗ್ಗೆ ಬಿಡಬ್ಲ್ಯೂಎಸ್ಎಸ್‌ಬಿ ಜನರಿಗೆ ಜಾಗೃತಿ ಮೂಡಿಸಬೇಕು. ನೀರಿದ ದರ 8-9 ವರ್ಷದಿಂದ ಏರಿಕೆ ಮಾಡಿಲ್ಲ. ನೀರಿನ ದರ ಹೆಚ್ಚಿಸಬೇಕು, ಅಂತರ್ಜಲ ಹೆಚ್ಚಳ ಆಗ್ಬೇಕು. ಮಂಡಳಿ ನಷ್ಟದಲ್ಲಿ ನಡೆಯುತ್ತಿದೆ. ಸಂಬಳ ಕೊಡೋಕೆ ಆಗುತ್ತಿಲ್ಲ. ಮಂಡಳಿಯು ವಿದ್ಯುತ್ ದರವೂ ಪಾವತಿ ಮಾಡಲು ಆಗುತ್ತಿಲ್ಲ. ಕೆಲವು ಸೆಕ್ಷನ್‌ಗೆ ನೋಡಿ ದರ ನಿಗದಿ ಮಾಡಬೇಕು. ಎಷ್ಟು ದರ ಏರಿಕೆ ಮಾಡ್ಬೇಕು ಅಂತ ನಿರ್ಧಾರ ಮಾಡಿಲ್ಲ. ಕಮಿಟಿ ಸಭೆ ಮತ್ತು ಕ್ಯಾಬಿನೆಟ್ ನಲ್ಲಿ ತೀರ್ಮಾನ ಮಾಡುತ್ತೇವೆ ಎಂದರು.

ಮೇಕೆದಾಟುವಿನ ಮೇಲೆ ಭರವಸೆ ಇದೆ. ಆದಷ್ಟು ಬೇಗ ಅದು ಆಗಲಿದೆ. ಶರಾವತಿ ಕುಡಿಯುವ ನೀರಿನ ಯೋಜನೆಯು ಇದೆ.

### ಬಿಡಬ್ಲ್ಯೂಎಸ್‌ಎಸ್‌ಬಿ ಡಿಸಿಎಂ ಸೂಚನೆ

ಇದೇ ವೇಳೆ ನೀರಿನ ದರದ ಬಗ್ಗೆ ಮಾಹಿತಿಯನ್ನು ನೀಡುವಂತೆ ಬಿಡಬ್ಲ್ಯೂಎಸ್‌ಎಸ್‌ಬಿ ಡಿಸಿಎಂ ಸೂಚನೆ ನೀಡಿದರು. ನೀರಿಗೆ ಎಷ್ಟು ಖರ್ಚಾಗುತ್ತಿದೆ. ಎಷ್ಟು ಜನ ನೀರಿನ ಬಿಲ್ ಕಟ್ಟಿಲ್ಲ, ಎಷ್ಟು ವರ್ಷಗಳಿಂದ ನೀರಿನ ದರ ಹೆಚ್ಚಳ ಮಾಡಿಲ್ಲ ಎಲ್ಲಾ ಮಾಹಿತಿ ಕೊಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಅದಕ್ಕೆ ಆ ಭಾಗದಲ್ಲಿ ವಿರೋಧವಿದೆ. ನೀರಾವರಿ ಯೋಜನೆಯಲ್ಲಿ ಹೊಸ ಬಿಲ್ ತಂದಿದ್ದೇವೆ. ನೀರಿನ ಕಾಲುವೆಗಳ ಅಕ್ಕಪಕ್ಕ ಅರ್ಧ ಕಿಮೀ ಯಾರು ಬೋರ್ ವೆಲ್ ಹಾಕುವಂತಿಲ್ಲ. ಯಾರು ಕಾಲುವೆಗಳಿಂದ ನೇರವಾಗಿ ನೀರು ಟ್ಯಾಪ್ ಮಾಡುವಂತಿಲ್ಲ. ಹೊಸ ಕಾನೂನು ಬಂದಿದೆ. ರಾಜ್ಯಪಾಲರು ಇದಕ್ಕೆ ಸಹಿ ಹಾಕಿದ್ದಾರೆ ಎಂದು ತಿಳಿಸಿದರು. ಈ ಮೂಲಕ ಸದ್ಯದಲ್ಲೇ ನೀರಿನ ಬೆಲೆ ಹೆಚ್ಚಳದ ಬಗ್ಗೆ ಡಿಸಿಎಂ ಸೂಚನೆ ಕೊಟ್ಟರು. ಕಳೆದ ಜೂನ್ ತಿಂಗಳಿನಲ್ಲಿಯೂ ಡಿಕೆ.ಶಿವಕುಮಾರ್ ಅವರು ನೀರಿನ ದರ ಏರಿಕೆ ಕುರಿತು ಮಾತನಾಡಿದ್ದರು.

## ಕಂಪನಿಗೆ 500 ಎಕರೆ ಅರಣ್ಯ ಭೂಮಿ ಅಕ್ರಮವಾಗಿ ಮಂಜೂರು

• ಉದಯವಾಹಿನಿ, ಬೆಂಗಳೂರು



ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ನೋಂದಣಿಯೇ ಆಗದ ಕಂಪನಿಗೆ 550 ಎಕರೆ ಅರಣ್ಯ ಭೂಮಿಯನ್ನು ಅಕ್ರಮವಾಗಿ ಮಂಜೂರು ಮಾಡಿದ್ದಾರೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ. ಈ ಕುರಿತು ಟ್ವೀಟ್ ಮಾಡಿರುವ ಸಿಎಂ ಸಿದ್ದರಾಮಯ್ಯ, ನೋಂದಣಿಯೇ ಆಗದ ಕಂಪನಿಗೆ 550 ಎಕರೆ ಅರಣ್ಯ ಭೂಮಿಯನ್ನು ಅಕ್ರಮವಾಗಿ ಮಂಜೂರು ಮಾಡಿ, ಈಗ ಸಹಿ ನನ್ನದಲ್ಲ, ಯಾರೋ ಫೋರ್ಜರಿ ಮಾಡಿದ್ದಾರೆ ಕಣ್ಣೀರು ಸುರಿಸುತ್ತಿರುವ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿಯವರೇ, ನಿಮ್ಮ ಬ್ರಹ್ಮಾಂಡ ಭ್ರಷ್ಟಾಚಾರದ ಪುರಾಣದ ಮೊದಲ ಅಧ್ಯಾಯ ಪತ್ರಿಕೆಯಲ್ಲಿ ಪ್ರಕಟವಾಗಿದೆ.

ಮುಡಾ ಬದಲಿ ನಿವೇಶನ ಹಂಚಿಕೆ ಪ್ರಕರಣದಲ್ಲಿ ನನ್ನ ಸಹಿ, ಟಿಪ್ಪಣಿ ಯಾವುದೂ ಇಲ್ಲ, ನನ್ನ ಅಧಿಕಾರವಧಿಯಲ್ಲಿ ನಡೆದದ್ದೇ ಅಲ್ಲ

ಹೀಗಿದ್ದರೂ ನನ್ನ ರಾಜೀನಾಮೆ ಕೇಳುತ್ತಿರುವ ಕುಮಾರಸ್ವಾಮಿಯವರೇ ನಿಮ್ಮ ಊಟದೆಲೆಯಲ್ಲಿ ಆನೆ ಸತ್ತು ಬಿದ್ದಿದೆ ನೋಡಿ. ನ್ಯಾ.ಎನ್.ಸಂತೋಷ್ ಹೆಗ್ಡೆ ನೇತೃತ್ವದ ಲೋಕಾಯುಕ್ತವೇ ತನಿಖೆ ನಡೆಸಿ ಆರೋಪಪಟ್ಟಿ ಸಲ್ಲಿಸಿದೆ. ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ಕೊಡುವುದೊಂದೇ ಬಾಕಿ. ಯಾರನ್ನು ಕಾಯುತ್ತಾ ಕೂತಿದ್ದೀರಿ ನರೇಂದ್ರ ಮೋದಿಯವರು ಬಂದು ರಕ್ಷಿಸುತ್ತಾರೆಂದೇ? ಸ್ವಂತ ಪಕ್ಷದ ಮುಖ್ಯಮಂತ್ರಿಯನ್ನೇ ಜೈಲಿಗೆ ಕಳಿಸಿದ್ದ ಪಕ್ಷ ನಿಮ್ಮ ರಕ್ಷಣೆಗೆ ಬರುತ್ತಾರೆ ಎಂದು ಅಂದುಕೊಡಿದ್ದೀರಾ?

> **ಯಾರೋ ಹೇಳಿದ ಕಾಗಕ್ಕ ಗುಬ್ಬಕ್ಕನ ಕಥೆ ಕೇಳಿ ನನ್ನ ವಿರುದ್ಧ ಪ್ರಾಸಿಕ್ಯೂಷನ್ ಗೆ ಅನುಮತಿ ನೀಡಿರುವ ರಾಜ್ಯಪಾಲರೇ, ನಿಮ್ಮ ಕೈಯಲ್ಲಿರುವ ಹೆಚ್.ಡಿ.ಕುಮಾರಸ್ವಾಮಿಯವರ ಗಣಿ ಹಗರಣದ ದಾಖಲೆ ಪತ್ರಗಳು ಈಗ ಸಾರ್ವಜನಿಕರ ಮುಂದೆ ಇದೆ. ಇವುಗಳ ಒಂದು ಪ್ರತಿಯನ್ನು ನಿಮ್ಮ ಒಡೆಯರಿಗೆ ಕಳಿಸಿಕೊಡಿ, ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡದಂತೆ ಕೈಕಟ್ಟಿಹಾಕಿರುವ ಹಗ್ಗ ಬಿಚ್ಚಿಕೊಳ್ಳಬಹುದು ಎಂದು ಹೇಳಿದ್ದಾರೆ.**
> **-ಸಿಎಂ ಸಿದ್ದರಾಮಯ್ಯ**

## ಲೈಂಗಿಕ ದೌರ್ಜನ್ಯ ತಡೆಗೆ ಮಹತ್ವದ ಕ್ರಮ

• ಉದಯವಾಹಿನಿ, ಬೆಂಗಳೂರು

ಕೋಲ್ಕತ್ತಾದ ವೈದ್ಯಕೀಯ ಕಾಲೇಜಿನಲ್ಲಿ ಮಹಿಳಾ ಡಾಕ್ಟರ್ ಮೇಲಿನ ಅತ್ಯಾಚಾರ, ಕೊಲೆಯಿಂದಾಗಿ ರಾಜ್ಯ ಸರ್ಕಾರ ಎಚ್ಚೆತ್ತುಕೊಂಡಿದೆ. ಬೆಂಗಳೂರಲ್ಲಿ ಮಹಿಳೆಯರ ಸುರಕ್ಷತೆಗಾಗಿ ಮಹತ್ವದ ಕ್ರಮವನ್ನು ವಹಿಸಲಾಗಿದೆ. ಬೆಂಗಳೂರಿನ ಎಲ್ಲಾ ಪೊಲೀಸ್ ಠಾಣೆಗಳಲ್ಲಿ ರಾತ್ರಿ ವೇಳೆಯಲ್ಲಿ ಇಬ್ಬರು ಪೊಲೀಸ್ ಪೇದೆಗಳನ್ನು ಡ್ಯೂಟಿಗೆ ನಿಯೋಜಿಸುವಂತೆ ನಗರ ಪೊಲೀಸ್ ಆಯುಕ್ತ ಬಿ.ದಯಾನಂದ್ ಆದೇಶಿಸಿದ್ದಾರೆ.





ಈ ಕುರಿತಂತೆ ಬೆಂಗಳೂರು ನಗರ ಸಂಚಾರ ಜಂಟಿ ಪೊಲೀಸ್ ಆಯುಕ್ತರಾದಂತ ಎಂಎನ್ ಅನುಚೇತ್ ಅವರು ಜ್ಞಾಪನ ಆದೇಶವನ್ನು ಎಲ್ಲಾ ಸಂಚಾರ ವಿಭಾಗದ ಪಿಐಗಳಿಗೆ ಹೊರಡಿಸಿದ್ದಾರೆ. ಅದರಲ್ಲಿ ಬೆಂಗಳೂರು ನಗರದಲ್ಲಿ ರಾತ್ರಿ ವೇಳೆಯಲ್ಲಿ ಮಹಿಳೆಯರ ಮೇಲಿನ ಲೈಂಗಿಕ ದೌರ್ಜನ್ಯಗಳಿಗೆ ಸಂಬಂಧಿಸಿದಂತೆ ದೂರುಗಳು ಹೆಚ್ಚಾಗುತ್ತಿವೆ ಎಂದಿದ್ದಾರೆ.

ಈ ಹಿನ್ನಲೆಯಲ್ಲಿ ಈ ದೂರುಗಳಿಗೆ ತ್ವರಿತವಾಗಿ ಸ್ಪಂದಿಸುವ ಸಲುವಾಗಿ, ಸಂಚಾರ ವಿಭಾಗದ ಎಲ್ಲಾ ಸಂಚಾರ ಪೊಲೀಸ್ ಠಾಣೆಗಳಲ್ಲಿ ಪ್ರತಿ ದಿನ ರಾತ್ರಿ ಕರ್ತವ್ಯಕ್ಕೆ ಇಬ್ಬರು ಮಹಿಳಾ ಹೆಚ್ ಸಿ, ಪಿಸಿ ಸಿಬ್ಬಂದಿಗಳನ್ನು ಕಡ್ಡಾಯವಾಗಿ ನಿಯೋಜಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿದ್ದಾರೆ.

## ಆ.31 ರೊಳಗೆ ತಪ್ಪದೇ ಇ-ಕೆವೈಸಿ ಮಾಡಿಕೊಳ್ಳಿ

• ಉದಯವಾಹಿನಿ, ಬೆಂಗಳೂರು

ಬಿಪಿಎಲ್ ಪಡಿತರ ಚೀಟಿ ಹೊಂದಿರುವ ಪಡಿತರ ಚೀಟಿದಾರರು ಒಂದು ಬಾರಿ ತಮ್ಮ ಪಡಿತರ ಚೀಟಿಯಲ್ಲಿರುವ ಎಲ್ಲಾ ಸದಸ್ಯರ 'ಇಕೆವೈಸಿ' (ಆಧಾರ್ ಆಧಾರಿತ ಬೆರಳಚ್ಚಿನ ದೃಢೀಕರಣ) ಮಾಡಿಸುವುದು ಕೇಂದ್ರ ಸರ್ಕಾರದ ಮಾರ್ಗಸೂಚಿಯನ್ವಯ ಕಡ್ಡಾಯವಾಗಿದೆ.

ಆದ್ದರಿಂದ ಯಾರು ಕಳೆದ ಹಲವು ವರ್ಷಗಳಿಂದ ತಮ್ಮ ಬಿಪಿಎಲ್ ಪಡಿತರ ಚೀಟಿಗೆ ಈವರೆಗೆ ಇಕೆವೈಸಿ ನೋಂದಣಿಯಾಗಿಲ್ಲ ಅಂತಹ ಕುಟುಂಬದವರು ಆಗಸ್ಟ್ 31 ರೊಳಗೆ ತಪ್ಪದೇ ತಮ್ಮ ಹತ್ತಿರದ ನ್ಯಾಯಬೆಲೆ ಅಂಗಡಿಗೆ ತೆರಳಿ ಇಕೆವೈಸಿ (ಆಧಾರ್ ಆಧಾರಿತ ಬೆರಳಚ್ಚಿನ ದೃಢೀಕರಣ) ಮಾಡಿಸಲು ತಿಳಿಸಿದೆ. ಇಕೆವೈಸಿ ಆಗದೇ ಇರುವವರ ಪಟ್ಟಿಯನ್ನು ಆಯಾಯ ನ್ಯಾಯಬೆಲೆ ಅಂಗಡಿಗಳಲ್ಲಿ ಈಗಾಗಲೆ ಪಟ್ಟಿಯನ್ನು ಪ್ರದರ್ಶಿಸಲಾಗಿದೆ. ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ಇಕೆವೈಸಿ ಮಾಡಿಸದಿದ್ದಲ್ಲಿ ಮಾಡಿಸದ ಸದಸ್ಯರನ್ನು ಅನರ್ಹರೆಂದು ಪರಿಗಣಿಸಿ ಅಂತಹವರ ಹೆಸರನ್ನು ಬಿಪಿಎಲ್ ಪಡಿತರ ಚೀಟಿಯಿಂದ ತೆಗೆದು ಹಾಕಲಾಗುವುದು ಎಂದು ತಿಳಿಸಿದೆ. ಇಕೆವೈಸಿ ಮಾಡಿಸುವುದು ಸಂಪೂರ್ಣವಾಗಿ ಉಚಿತವಾಗಿದೆ ಎಂದು ಪಡಿತರ ಚೀಟಿದಾರರ ಗಮನಕ್ಕೆ ತರಲಾಗಿದೆ.



> **ಸರ್ಕಾರದ ಮಾನದಂಡಗಳನ್ವಯ ಒಂದೇ ಕುಟುಂಬದಲ್ಲಿ ಒಂದಂಕ್ಕಿಂತ ಹೆಚ್ಚು ಪಡಿತರ ಚೀಟಿ ಇರುವುದು ಅನರ್ಹ ಪಡಿತರ ಚೀಟಿ ಪಡೆದುಕೊಂಡಿರುವವರು ಮತ್ತು ಆರ್ಥಿಕವಾಗಿ ಸಬಲರಾಗಿದ್ದು, ಸುಳ್ಳು ಮಾಹಿತಿ ನೀಡಿ ಬಿಪಿಎಲ್ ಪಡಿತರ ಚಿಟಿ ಪಡೆದುಕೊಂಡಿರುವವರು ಕೂಡಲೇ ತಾಲ್ಲೂಕು ಕಚೇರಿ/ಆಹಾರ ನಿರೀಕ್ಷಕರನ್ನು ಸಂಪರ್ಕಿಸಿ ತಮ್ಮ ಪಡಿತರ ಚೀಟಿಯನ್ನು ಹಿಂದಿರುಗಿಸುವಂತೆ ಆಹಾರ ಇಲಾಖೆ ತಿಳಿಸಿದೆ.**

## ಮಾರ್ಗಸೂಚಿ ಬೆನ್ನಲ್ಲೇ ನಗರದಲ್ಲಿ 2000 ಪಿಜಿಗಳು ನೋಂದಣಿ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ನಗರದಲ್ಲಿ ನೋಂದಣಿಯಾಗದ ಪೇಯಿಂಗ್ ಗೆಸ್ಟ್ (ಪಿಜಿ)ಗಳ ವಿರುದ್ಧ ಕ್ರಮ ಕೈಗೊಳ್ಳಲು ಬಿಬಿಎಂಪಿ ಮುಂದಾಗಿದೆ.

ಕೋರಮಂಗಲದ ವಸತಿ ಗೃಹದಲ್ಲಿ ಯುವತಿ ಬರ್ಬರ ಹತ್ಯೆ ಘಟನೆ ಬೆನ್ನಲ್ಲೇ ಇತ್ತೀಚೆಗಷ್ಟೇ ಪಾಲಿಕೆ ನಗರ ವ್ಯಾಪ್ತಿಯ 'ಪೇಯಿಂಗ್ ಗೆಸ್ಟ್' (ಪಿಜಿ)ಗಳಿಗೆ ಹೊಸ ಮಾರ್ಗಸೂಚಿ ಬಿಡುಗಡೆ ಮಾಡಿತ್ತು.

ಮಾರ್ಗಸೂಚಿ ಬೆನ್ನಲ್ಲೇ ಇದೀಗ ಪಾಲಿಕೆ ಅಧಿಕಾರಿಗಳು ಪಿಜಿಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲು ಮುಂದಾಗಿದ್ದು, ಮಾರ್ಗಸೂಚಿ ಅನುಸರಿಲದ ಪಿಜಿಗಳ ವಿರುದ್ಧ ಕ್ರಮ ಕೈಗೊಳ್ಳಲು ಮುಂದಾಗಿದ್ದಾರೆ.

ವಿಶೇಷ ಆಯುಕ್ತ ಸೂರಳ್ಕರ್ ರ್ ವಿಕಾಸ್ ಕಿಶೋರ್ ಮಾತನಾಡಿ, ಮಾರ್ಗಸೂಚಿಯಲ್ಲಿ ಹಲವು ಅಂಶಗಳನ್ನು ತಿಳಿಸಲಾಗಿದೆ. ಈ ಪೈಕಿ ನಿಗದಿತ ಸಂಖ್ಯೆಯಲ್ಲಿ ಉಳಿದುಕೊಳ್ಳಲು ಅವಕಾಶ ನೀಡಬೇಕು. ಹೆಚ್ಚುವರಿಯಾಗಿರುವವರಿಗೆ ಹೊಸ ಸೌಲಭ್ಯಗಳ ಕಲ್ಪಿಸಬೇಕೆಂದು ತಿಳಿಸಲಾಗಿದೆ.

ಮಾರ್ಗಸೂಚಿ ಅನುಸರಣೆಗೆ ಸೆಪ್ಟೆಂಬರ್ 15ರವರೆಗೆ ಗಡುವು ನೀಡಲಾಗಿದ್ದು, ನಂತರ ಕ್ರಮಕ್ಕೆ ಮುಂದಾಗಲಾಗುವುದು ಎಂದು ಹೇಳಿದ್ದಾರೆ. ಕಳೆದ ಜುಲೈ ತಿಂಗಳಿನಲ್ಲಿ ಕೋರಮಂಗಲದ ವಸತಿ ಗೃಹಕ್ಕೆ ನುಗ್ಗಿದ್ದ ಆರೋಪಿಯೊಬ್ಬ ಮಹಿಳೆಯೊಬ್ಬರಿಗೆ ಮನಬಂದಂತೆ ಚೂರಿ ಇರಿದು ಹತ್ಯೆಗೈದಿದ್ದ. ಈ ಘಟನೆ ಇಡೀ ರಾಜಧಾನಿಯನ್ನೇ ಬೆಚ್ಚಿ ಬೀಳಿಸಿತ್ತು. ಘಟನೆ ಬೆನ್ನಲ್ಲೇ ಎಚ್ಚೆತ್ತ ಬಿಬಿಎಂಪಿ ಪಿಜಿಗಳಿಗೆ ಮಾರ್ಗಸೂಚಿ ಹೊರಡಿಸುವಂತೆ ಸೂಚಿಸಿತ್ತು. ಮಾರ್ಗಸೂಚಿ ಬೆನ್ನಲ್ಲೇ ಇದೀಗ 2,000 ಪಿಜಿಗಳು ನೋಂದಾವಣಿ ಮಾಡಿಕೊಂಡಿದ್ದು, ಮುಂದಿನ ದಿನಗಳಲ್ಲಿ ಈ ಸಂಖ್ಯೆ 10,000ಕ್ಕೆ ಏರಿಕೆಯಾಗುವ ಸಾಧ್ಯತೆಗಳಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಮಹದೇವಪುರ ಮತ್ತು ಬೊಮಮನಹಳ್ಳಿ, ಐಟಿ ವಲಯಗಳಲ್ಲಿ ಹೆಚ್ಚು ಪಿಜಿಗಳಿದ್ದು, ಮಹದೇವಪುರದಲ್ಲಿರುವ ನೋಂದಾವಣಿಯಾಗದ ಪಿಜಿಗಳಲ್ಲಿ ಪ್ರತಿ ಕೊಠಡಿಯಲ್ಲಿ 75 ಮಂದಿ ಇದ್ದಾರೆಂದು ಮೂಲಗಳು ತಿಳಿಸಿವೆ.

**ಹೊಸ ಮಾರ್ಗಸೂಚಿ ಬಿಡುಗಡೆ**

## ಅರಣ್ಯ ಅಪರಾಧ ಕೇಸ್‌ಗಳಲ್ಲಿ ವಲಯ ಅರಣ್ಯಾಧಿಕಾರಿಗಳೇ

### ಎಫ್‌ಐಆರ್ ದಾಖಲಿಸಬೇಕು : ರಾಜ್ಯ ಸರ್ಕಾರ ಮಹತ್ವದ ಸುತ್ತೋಲೆ

• ಉದಯವಾಹಿನಿ, ಬೆಂಗಳೂರು

ಅರಣ್ಯ ಅಪರಾಧ ಪ್ರಕರಣಗಳಲ್ಲಿ ವಲಯ ಅರಣ್ಯಾಧಿಕಾರಿಗಳೇ ಎಫ್.ಐ.ಆರ್' ದಾಖಲಿಸಬೇಕು ಎಂದು ರಾಜ್ಯ ಸರ್ಕಾರ ಮಹತ್ವದ ಸುತ್ತೋಲೆ ಹೊರಡಿಸಿದೆ.

ಸದರಿ ಸೆಕ್ಷನ್ ಪ್ರಕಾರ ವಲಯ ಅರಣ್ಯಾಧಿಕಾರಿಗಿಂತ ಕೆಳಹಂತದ ಉಪ ವಲಯ ಅರಣ್ಯಾಧಿಕಾರಿಗಳು ಕಂ ಮೊಜಣಿದಾರರು ಹಾಗೂ ಬೀಟ್ ಫಾರೆಸ್ಟರ್ಗಳು ಎಫ್.ಐ.ಆರ್.ಗೆ ಸಹಿ ಹಾಕಿ ಮೊಕದ್ದಮೆ ದಾಖಲಿಸಲು ಕಾಯ್ದೆಯಡಿ ಅವಕಾಶವಿರುವುದಿಲ್ಲ.

ಕೆಲವು ಪ್ರಕರಣಗಳಲ್ಲಿ ಕೆಳಹಂತದ ಸಿಬ್ಬಂದಿಗಳು ದಾಖಲಿಸಿದ ಅರಣ್ಯ ಮೊಕದ್ದಮೆಗಳು ಮೇಲ್ಕಂಡ ಕಾಯ್ದೆಯ ಅವಕಾಶಗಳನ್ವಯ ನ್ಯಾಯಾಲಯಗಳಲ್ಲಿ ವಜಾಗೊಳ್ಳುತ್ತವೆ. ಈ ವಿಷಯದ ಬಗ್ಗೆ, ಸರ್ಕಾರದ ಮಟ್ಟದಲ್ಲಿ ಕಾನೂನು ಇಲಾಖೆಯ ಅಭಿಪ್ರಾಯ ಪಡೆಯಲಾಗುತ್ತಿದೆ.




ಉದಯವಾಹಿನಿ ಚಿತ್ರ

ರಾಜ್ಯದ ಅರಣ್ಯ ಇಲಾಖೆಯ ವತಿಯಿಂದ ಹೂಡಲಾಗಿರುವ ಅರಣ್ಯ ಅಪರಾಧ ಪ್ರಕರಣಗಳು ಮಾನ್ಯ ನ್ಯಾಯಾಲಯದಲ್ಲಿ ಈಗಾಗಲೇ ತಿಳಿಸಿರುವ ತಾಂತ್ರಿಕ ಕಾರಣದಿಂದ ವಜಾ ಆಗುತ್ತಿರುವುದನ್ನು ಸರ್ಕಾರವು ಅತ್ಯಂತ ಗಂಭೀರವಾಗಿ ಪರಿಗಣಿಸಿದೆ ಎಂದು ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಉಲ್ಲೇಖಿತ ಪತ್ರಗಳಲ್ಲಿ ತಿಳಿಸುತ್ತಾ, ಮಾನ್ಯ ನ್ಯಾಯಲಯಗಳಲ್ಲಿ ಅರಣ್ಯ ಇಲಾಖೆಯು ದಾಖಲಿಸಿರುವ ಅಪರಾಧ ಪ್ರಕರಣಗಳು ಈ ಕಾರಣಕ್ಕಾಗಿ ವಜಾವಾಗುತ್ತಿರುವುದು ತಪ್ಪಿಸಲು ಸಂಬಂಧಪಟ್ಟ ನ್ಯಾಯವ್ಯಾಪ್ತಿಯ ವಲಯ ಅರಣ್ಯ ಅಧಿಕಾರಿಗಳಿಂದಲೇ ಎಫ್.ಐ.ಆರ್. ದಾಖಲಿಸಲು ಸೂಚಿಸಿ ಸುತ್ತೋಲೆ ಹೊರಡಿಸಲು ಸೂಚಿಸಿರುತ್ತಾರೆ.

## ಮದ್ಯಪಾನ ಚಾಲನೆಯ ವಿರುದ್ಧ ಕಾರ್ಯಾಚರಣೆ

• ಉದಯವಾಹಿನಿ, ಬೆಂಗಳೂರು

ಮದ್ಯಪಾನ ಚಾಲನೆಯ ವಿರುದ್ಧ ವಿಶೇಷ ಕಾರ್ಯಾಚರಣೆಯನ್ನು ಕೈಗೊಳ್ಳುವ ಬಗ್ಗೆ. ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಬೆಂಗಳೂರು ನಗರದಲ್ಲಿ ಸಂಭವಿಸುತ್ತಿರುವ ರಸ್ತೆ ಅಪಘಾತಗಳಿಗೆ ಕಡಿವಾಣ ಹಾಕುವ ದೃಷ್ಟಿಯಿಂದ ಸಂಚಾರ ವಿಭಾಗದ ಎಲ್ಲಾ ಪೊಲೀಸ್ ಠಾಣೆಗಳಲ್ಲಿ ವಾರಾಂತ್ಯದ ಗುರುವಾರದಿಂದ ಭಾನುವಾರದವರೆಗೆ ಮದ್ಯಪಾನ ಮಾಡಿ ವಾಹನ ಚಾಲನೆ ಮಾಡುವ ವಾಹನ ಸವಾರರು/ಚಾಲಕರುಗಳ ವಿರುದ್ಧ ಪ್ರತಿವಾರ ಠಾಣೆಯ ಎಲ್ಲಾ ಪಿ.ಎಸ್.ಐ ರವರುಗಳು ಕಡ್ಡಾಯವಾಗಿ ವಿಶೇಷ ಕಾರ್ಯಾಚರಣೆಯನ್ನು ಕೈಗೊಳ್ಳಲು ಕ್ರಮ ವಹಿಸುವುದು.





> **ಪಕರಣಗಳನ್ನು ದಾಖಲಿಸಲು ಠಾಣಾ ವ್ಯಾಪ್ತಿಯಲ್ಲಿ ಸಿ.ಸಿ.ಟಿ.ವಿ. ಕ್ಯಾಮರಾಗಳನ್ನು ಅಳವಡಿಸಿರುವ ಜಂಕ್ಷನ್‌ಗಳಲ್ಲಿ ಮಾತ್ರ ಪ್ರಕರಣಗಳನ್ನು ದಾಖಲಿಸುವುದು ಹಾಗೂ ದಾಖಲಿಸುವ ಸಮಯದಲ್ಲಿ ಕಡ್ಡಾಯವಾಗಿ ಮಹಿಳಾ ಸಿಬ್ಬಂದಿಗಳನ್ನೂ ಸಹ ಕಾರ್ಯಾಚರಣೆಗೆ ನೇಮಿಸಲು ಈ ಮೂಲಕ ಸೂಚಿಸಲಾಗಿದೆ. ಎಂ.ಎನ್. ಅನುಚೇತ್.ಐ.ಪಿ.ಎಸ್ ಜಂಟಿ ಪೊಲೀಸ್ ಆಯುಕ್ತರು ತಮ್ಮ ಆದೇಶದಲ್ಲಿ ತಿಳಿಸಿದ್ದಾರೆ.**

# ಜೈವಿಕ ಉದ್ಯಾನವನದಲ್ಲಿ ಕುಡಿಯುವ ನೀರಿಗೆ ಹೆಚ್ಚಿದ ಸಮಸ್ಯೆ

## ರಸ್ತೆಯಲ್ಲಿ ಲೋಕೋಪಯೋಗಿ ಇಲಾಖೆ (ಪಿಡಬ್ಲ್ಯುಡಿ) ಪೈಪ್‌ಲೈನ್ ಹಾಕುವ ಕಾಮಗಾರಿ ನಡೆಸುತ್ತಿದೆ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ನೀರು ಸರಬರಾಜು, ಒಳಚರಂಡಿ ಮಂಡಳಿ (ಬಿಡಬ್ಲ್ಯುಎಸ್‌ಎಸ್‌ಬಿ) ಪೈಪ್‌ಲೈನ್ ಹಾಕುವ ಕೆಲಸವನ್ನು ಪೂರ್ಣಗೊಳಿಸದ ಪರಿಣಾಮ ಬನ್ನೇರುಘಟ್ಟ ಜೈವಿಕ ಉದ್ಯಾನವನದಲ್ಲಿ ಕುಡಿಯುವ ನೀರಿಗೆ ಸಮಸ್ಯೆ ಎದುರಾಗಿದೆ.

ಉದ್ಯಾನವನದ ರಸ್ತೆಯಲ್ಲಿ ಲೋಕೋಪಯೋಗಿ ಇಲಾಖೆ (ಪಿಡಬ್ಲ್ಯುಡಿ) ಪೈಪ್‌ಲೈನ್ ಹಾಕುವ ಕಾಮಗಾರಿ ನಡೆಸುತ್ತಿದೆ. ಆದರೆ, ಬನ್ನೇರುಘಟ್ಟ ಗ್ರಾಮ ಪಂಚಾಯಿತಿ ಸದಸ್ಯರು ಈ ಕಾಮಗಾರಿಗೆ ಅಡ್ಡಿಪಡಿಸುತ್ತಿದ್ದು, ಇದರಿಂದಾಗಿ ಯೋಜನೆ ವಿಳಂಬವಾಗಿದೆ ಎನ್ನಲಾಗಿದೆ. ಶೇ.80ರರಷ್ಟು ಕಾಮಗಾರಿ ಕೆಲಸ ಪೂರ್ಣಗೊಂಡಿದೆ. ಆದರೆ, ಇನ್ನುಳಿದ ಕೆಲಸಕ್ಕೆ ಸ್ಥಳೀಯ ಪಂಚಾಯಿತಿ ಸದಸ್ಯರು ಗ್ರಾಮಸ್ಥರು ಆಕ್ಷೇಪ ವ್ಯಕ್ತಪಡಿಸುತ್ತಿದ್ದಾರೆ. ಇದರಿಂದ 150 ಮೀಟರ್ ಪೈಪ್ ಹಾಕಲು ಸಾಧ್ಯವಾಗುತ್ತಿಲ್ಲ. ಸಮಸ್ಯೆ ಬಗೆಹರಿಸುವಂತೆ ಪಿಡಬ್ಲ್ಯುಡಿ ಬಳಿ ಮನವಿ ಮಾಡಿಕೊಳ್ಳಲಾಗಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ. ದಕ್ಷಿಣ ವಲಯದ ಬಿಡಬ್ಲ್ಯುಎಸ್‌ಎಸ್‌ಬಿ ಮುಖ್ಯ ಎಂಜಿನಿಯರ್ ವೆಂಕಟೇಶ್ ಎಸ್‌ವಿ ಮಾತನಾಡಿ, ಸಮಸ್ಯೆ ಬಗೆಹರಿದಿದ್ದು, 15 ದಿನಗಳಲ್ಲಿ ಕಾಮಗಾರಿ ಪೂರ್ಣಗೊಳ್ಳಲಿದೆ ಎಂದು ತಿಳಿಸಿದ್ದಾರೆ. ಕಾವೇರಿ ನೀರನ್ನು ಪ್ರಾಣಿಗಳಿಗಲ್ಲದೆ ಸಾರ್ವಜನಿಕರಿಗೆ ಮಾತ್ರ ಬಳಕೆ ಮಾಡುವಂತೆ ಅಧಿಕಾರಿಗಳು ಮನವಿ ಮಾಡಿಕೊಂಡಿದ್ದಾರೆ. ಉದ್ಯಾನವನದ ಪ್ರಾಣಿಗಳಿಗೆ ಹಾಗೂ ನಿರ್ವಹಣೆಗೆ ಬೋರ್‌ವೆಲ್ ನೀರನ್ನು ಬಳಸಲಾಗುತ್ತಿದೆ ಎಂದು ಉದ್ಯಾನವನದ ಆಡಳಿತ ಮಂಡಳಿ ಮಾಹಿತಿ ನೀಡಿದೆ.





ಉದಯವಾಹಿನಿ ಚಿತ್ರ

**ವಾರ್ಷಿಕ 50 ಲಕ್ಷ ರೂ. ಪಾವತಿ**

ಬನ್ನೇರುಘಟ್ಟ ಜೈವಿಕ ಉದ್ಯಾನವನದ ಕಾರ್ಯನಿರ್ವಾಹಕ ನಿರ್ದೇಶಕ ಸೂರ್ಯ ಸೇನ್ ಮಾತನಾಡಿ. ಕಾವೇರಿ ನೀರಿನ ಪೈಪ್‌ಲೈನ್ ಗಾಗಿ ಬಿಬಿಪಿ ಆಡಳಿತ ಮಂಡಳಿಯು 2,38,32,433 ರೂ.ಗಳನ್ನು ಠೇವಣಿ ಮಾಡಿದೆ.

ಆದರೆ, ಪಂಚಾಯಿತಿ ಸದಸ್ಯರಿಗೆ ಇದು ಸಮಾಧಾನ ತರಿಸಿಲ್ಲ. ಗ್ರಾಮದಲ್ಲಿರುವ ಪಂಚಾಯಿತಿ ಕಚೇರಿ ಹಾಗೂ ಮನೆಗಳಿಗೂ ಕಾವೇರಿ ನೀರು ಸಂಪರ್ಕ ನೀಡಬೇಕು ಎಂದು ಒತ್ತಾಯಿಸುತ್ತಿದ್ದಾರೆ. ಪಂಚಾಯಿತಿ ರಸ್ತೆ ಬಳಕೆ, ಕಸದ ಹಾವಳಿ, ಜಮೀನು ಬಳಕೆ ಮಾಡುತ್ತಿರುವುದಕ್ಕೆ ಬಿಬಿಪಿ ಆದಾಯದಿಂದ ವಾರ್ಷಿಕ 50 ಲಕ್ಷ ರೂಪಾಯಿ ಪಾವತಿಸಬೇಕು ಎಂದು ಒತ್ತಾಯಿಸುತ್ತಿದ್ದಾರೆಂದು ತಿಳಿಸಿದ್ದಾರೆ.

ರಸ್ತೆಗಳನ್ನು ಪಿಡಬ್ಲ್ಯೂಡಿ ನಿರ್ಮಿಸಿದ್ದು, ಅರಣ್ಯ ಭೂಮಿಯಲ್ಲಿ ಮೃಗಾಲಯ ನಿರ್ಮಿಸಲಾಗಿದೆ. ಮೃಗಾಲಯದ ಯಾವುದೇ ಕಾಮಗಾರಿಗಾಗಿ ಯಾವುದೇ ಪಂಚಾಯತ್ ಭೂಮಿಯನ್ನು ನಾವು ಸ್ವಾಧೀನಪಡಿಸಿಕೊಂಡಿಲ್ಲ ಎಂದು ಸೂರ್ಯ ಸೇನ್ ಅವರು ಹೇಳಿದ್ದಾರೆ. ಆದರೆ, ಪಂಚಾಯಿತಿ ಅಧ್ಯಕ್ಷ ಮಂಜುನಾಥ್ ಅವರು ಸುತ್ತಮುತ್ತಲಿನ ಗ್ರಾಮಗಳಿಗೂ ಕಾವೇರಿ ನೀರು ಕೊಡಬೇಕೆಂದು ಒತ್ತಾಯಿಸಿದ್ದಾರೆ.

> **ಈ ನಡುವೆ ಸರಕಾರದ ಆದೇಶದ ಮೇರೆಗೆ ಬನ್ನೇರುಘಟ್ಟ ಮೃಗಾಲಯಕ್ಕೆ ಮಾತ್ರ ಕುಡಿಯುವ ನೀರು ಪೂರೈಸಲು ವಿಶೇಷ ಅನುಮತಿ ನೀಡಲಾಗಿತ್ತು. ಆದರೆ, ಬನ್ನೇರುಘಟ್ಟ ಪಂಚಾಯಿತಿಯನ್ನು 110 ಗ್ರಾಮಗಳ ಪಟ್ಟಿಯಲ್ಲಿ ಅಥವಾ ಕಾವೇರಿ ಪೈಪ್‌ಲೈನ್ ಗಳನ್ನು ಹಾಕುತ್ತಿರುವ ಸಿಎಂಸಿ ಅಥವಾ ಟಿಎಂಸಿ ಪ್ರದೇಶಗಳ ಪಟ್ಟಿಯಲ್ಲಿ ಸೇರ್ಪಡೆಗೊಳಿಸಿಲ್ಲ ಬಿಡಬ್ಲ್ಯೂಎಸ್‌ಎಸ್‌ಬಿ ಅಧಿಕಾರಿಗಳು ಹೇಳಿದ್ದಾರೆ.**

> **ನಾವು ಬಿಡಬ್ಲ್ಯೂಎಸ್‌ಎಸ್‌ಬಿಗೆ ಯಾವುದೇ ಪತ್ರವನ್ನು ಬರೆದಿಲ್ಲ, ಆದರೆ ಮೌಖಿಕವಾಗಿ ಮನವಿ ಮಾಡಿಕೊಂಡಿದ್ದೇವೆ. ಹಳ್ಳಿಗಳು ಅಭಿವೃದ್ಧಿಯಾಗುತ್ತಿಲ್ಲ, ಆದರೆ, ಮೃಗಾಲಯ ಅಭಿವೃದ್ಧಿಯಾಗುತ್ತಿದೆ. ಗ್ರಾಮದ ಅಭಿವೃದ್ಧಿಗೂ ಹಣ ನೀಡಬೇಕು. ನಾವೂ ನಗರದ ಹೊರವಲಯದ ಭಾಗವಾಗಿರುವುದರಿಂದ ನಮಗೆ ಕಾವೇರಿ ನೀರು ಸಿಗಬೇಕು. ಪಿಡಬ್ಲ್ಯೂಡಿ ರಸ್ತೆ ನಿರ್ಮಿಸುತ್ತಿದ್ದರೂ, ಪೈಪ್‌ಲೈನ್‌ಗೆ ಅನುಮತಿ ನೀಡಲು ಸಾಧ್ಯವಿಲ್ಲ ಎಂದಿದ್ದಾರೆ.**

# ಗಜಪಯಣ ವೇದಿಕೆ ಕಾರ್ಯಕ್ರಮ: ಹೆಜ್ಜೆ ಹಾಕಿದ ಹಾಡಿ ಮಕ್ಕಳು

## • ಅರಣ್ಯದಂಚಿನ ಗ್ರಾಮಸ್ಥರು ಕಾಡಿನ ಸಂರಕ್ಷಣೆಗೆ ಆದ್ಯತೆ ನೀಡಬೇಕು: ಅರಣ್ಯ ಸಚಿವ ಈಶ್ವರ ಖಂಡ್ರೆ

• **ಉದಯವಾಹಿನಿ ಹುಣಸೂರು**

ಗಜಪಯಣ ನಂತರ ವೀರನಹೊಸಹಳ್ಳಿಯ ಆಶ್ರಮ ಶಾಲೆ ಬಳಿ ನಿರ್ಮಿಸಿದ್ದ ಬೃಹತ್ ವೇದಿಕೆಯಲ್ಲಿ ಮಾವುತರು- ಕಾವಾಡಿಗರಿಗೆ ಸನ್ಮಾನ, ನಾಗಾಪುರ ಆದಿವಾಸಿ ಗಿರಿಜನರ ಪುನರ್ವಸತಿ ಕೇಂದ್ರದ ಶಾಲಾ ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮ ಸೂಜಿಗಲ್ಲಿನಂತೆ ಸೆಳೆದವು. ಹಾಡಿ ನಿವಾಸಿಗಳು, ಸುತ್ತಮುತ್ತಲ ಗ್ರಾಮಸ್ಥರಿಗೆ 'ಪುಟ್ಟ ದಸರೆ'ಯಂತೆ ಕಂಗೊಳಿಸಿತು.

ಎಚ್.ಡಿ.ಕೋಟೆ, ಪಿರಿಯಾಪಟ್ಟಣ, ಚಾಮರಾಜನಗರವಲ್ಲದೇ ದೂರದೂರುಗಳಿಂದ ಆನೆಪ್ರಿಯರು ಜಮಾಯಿಸಿದ್ದರು. ಆದಿವಾಸಿ ಸಮುದಾಯದ ಜನರು ಹಬ್ಬದ ಹೊಸ ಬಟ್ಟೆ ಧರಿಸಿ, ಮಕ್ಕಳೊಂದಿಗೆ ಬಂದು ಆನೆಗಳಿಗೆ ಕೈಮುಗಿದರು.

ಕೊಳವಿಗೆ ಆಶ್ರಮ ಶಾಲೆ ವಿದ್ಯಾರ್ಥಿಗಳು ಗಿರಿಜನರ ಸಾಂಪ್ರದಾಯಿಕ 'ದೂರಿ... ದೂರಿ..' ಹಾಡಿಗೆ ಹೆಜ್ಜೆ ಹಾಕಿದರು. ನಾಗಾಪುರ ವಾಲ್ಮೀಕಿ ವಸತಿ ವಿದ್ಯಾರ್ಥಿ ನಿಲಯದ ವಿದ್ಯಾರ್ಥಿಗಳು 'ಅಡವಿ ದೇವಿಗೆ..' ಚಲನ ಚಿತ್ರಗೀತೆಗೆ ಹೆಜ್ಜೆ ಹಾಕಿದರು.

ನಾಗಾಪುರ ಬ್ಲಾಕ್ ಎರಡರ ಮಕ್ಕಳು ಬಿರ್ಸಾ ಮುಂಡಾ ಅವರ ಸ್ವಾತಂತ್ರ್ಯ ಪೂರ್ವ ಚಳುವಳಿಯ ನೃತ್ಯರೂಪಕ ಪ್ರದರ್ಶಿಸಿ ಗಮನ ಸೆಳೆದರು. ಗುರುಪುರ ಟಿಬೆಟನ್ ಕಾಲೊನಿಯ ಕೇಂದ್ರೀಯ ವಿದ್ಯಾಲಯದ ವಿದ್ಯಾರ್ಥಿಗಳು ಟಿಬೆಟನ್ ನೃತ್ಯ ಪ್ರದರ್ಶಿಸಿ ಚಪ್ಪಾಳೆ ಗಿಟ್ಟಿಸಿದರು.

ಇದಕ್ಕೂ ಮೊದಲು ನಡೆದ ಸಭಾ ಕಾರ್ಯಕ್ರಮವನ್ನು ಅರಣ್ಯ ಸಚಿವ ಈಶ್ವರ ಖಂಡ್ರೆ ಉದ್ಘಾಟಿಸಿದರು. ನಂತರ ಮಾತನಾಡಿ, 'ಅರಣ್ಯದಂಚಿನ ಗ್ರಾಮಸ್ಥರು ಕಾಡಿನ ಸಂರಕ್ಷಣೆಗೆ ಆದ್ಯತೆ ನೀಡಬೇಕು. ಅರಣ್ಯ ನಾಶದಿಂದ ಎದುರಾಗುತ್ತಿರುವ ನೈಸರ್ಗಿಕ ವಿಕೋಪ ತಡೆಯಬೇಕು' ಎಂದರು. 70ರ ದಶಕದಲ್ಲಿ ಅಂದಿನ ಪ್ರಧಾನಿ ಇಂದಿರಾಗಾಂಧಿ ವನ್ಯಜೀವಿ ಸಂರಕ್ಷಣಾ ಕಾಯ್ದೆ ಜಾರಿಗೊಳಿಸಿದ್ದರಿಂದ ದೇಶದ ಅರಣ್ಯ ಸಂಪತ್ತು ಉಳಿದಿದೆ. ಇಲ್ಲವಾದಲ್ಲಿ ಇಂದು ಅರಣ್ಯ ಸಂಪತ್ತು ವಿನಾಶದಂಚಿಗೆ ಹೋಗುತ್ತಿತ್ತು' ಎಂದು ಅಭಿಪ್ರಾಯಪಟ್ಟರು.

ಅರಣ್ಯದಂಚಿನ ಗ್ರಾಮಗಳಲ್ಲಿ ವನ್ಯಜೀವಿ ಮತ್ತು ಮಾನವ ಸಂಘರ್ಷ ತಡೆಯಲು ಸರ್ಕಾರ ಕ್ರಮವಹಿಸಿದೆ. ರೈಲ್ವೆ ಹಳಿ ತಡೆಗೋಡೆ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದೆ. 120 ಕಿ.ಮೀ ರೈಲ್ವೆ ಹಳಿ ತಡೆಗೋಡೆ ನಿರ್ಮಿಸಿದ್ದು, ಇದಾಖಯಿಂದ 250 ರಿಂದ 300 ಕಿ.ಮೀ. ತಡೆಗೋಡೆ ನಿರ್ಮಾಣಕ್ಕೆ ಪ್ರಸ್ತಾವನೆ ಬಂದಿದೆ' ಎಂದು ಮಾಹಿತಿ ನೀಡಿದರು.

ನಾಗಾಪುರ ಹಾಡಿ ಮಕ್ಕಳು 'ಬಿರ್ಸಾ ಮುಂಡಾ' ಸ್ವಾತಂತ್ರ್ಯ ಚಳವಳಿಯ ನೃತ್ಯರೂಪಕ ಪ್ರದರ್ಶಿಸಿದರು

ಪುನರ್ವಸತಿ ಪಡೆದ ಆದಿವಾಸಿ ಗಿರಿಜನ ಸಮುದಾಯದವರಿಗೆ ಮೂಲಸೌಕರ್ಯ ಕಲ್ಪಿಸಲು ವಾರದೊಳಗೆ ಮೈಸೂರು ಮತ್ತು ಚಾಮರಾಜನಗರ ವ್ಯಾಪ್ತಿಯಲ್ಲಿ ಸಭೆ ನಡೆಸಲಾಗುವುದು' ಎಂದರು.

ಗಜಪಯಣದಲ್ಲಿ ಪಾಲ್ಗೊಂಡಿದ್ದ ಅತಿಥಿಗಳು, ಮಾವುತರು, ಕಾವಾಡಿಗರ ಕುಟುಂಬದವರಿಗೆ ಹೋಳಿಗೆ ಊಟ ಉಣಬಡಿಸಲಾಯಿತು. ಪಾಯಸ, ಹೋಳಿಗೆ, ಪೂರಿ, ಮದ್ದೂರು ವಡೆ, ಮೆಣಸಿನ ಕಾಯಿ ವಡೆ, ಒಣ ಹಣ್ಣುಗಳ ಪಲ್ಯ, ಹೆಸರುಕಾಳು ಪಲ್ಯ, ಹಪ್ಪಳ, ಪಲಾವ್, ಅನ್ನ ಸಾಂಬಾರು, ತಿಳಿಸಾರು ಮೊಸರು ಇದ್ದವು. ಸಾರ್ವಜನಿಕರಿಗೆ ಪಲಾವ್ ಮತ್ತು ಮೊಸರನ್ನ ನೀಡಲಾಯಿತು.

**ಜಿಲ್ಲಾಧಿಕಾರಿ ಮತ್ತು ಅರಣ್ಯ ಇಲಾಖೆಯು ಅರಣ್ಯದಂಚಿನ ಗ್ರಾಮಗಳ ಜಂಟಿ ಸರ್ವೆ ನಡೆಸಬೇಕು. ಅರಣ್ಯದಿಂದ ಹೊರಬಂದ ಗಿರಿಜನರಿಗೆ 10 ಲಕ್ಷ ವೆಚ್ಚದಲ್ಲಿ ನಿರ್ಮಿಸುವ ಮನೆ ಗುಣಮಟ್ಟದಿಂದಿಲ್ಲ' ಎಂದು ಹೇಳಿದರು. 'ಕಲ್ಲಹಳ್ಳಿ ಗ್ರಾಮದ ದೇವರಾಜ ಅರಸು ಸ್ಮಾರಕಕ್ಕೆ ಸಮಾಜ ಕಲ್ಯಾಣ ಇಲಾಖೆಯು ವಿಶೇಷ ಯೋಜನೆ ರೂಪಿಸಿ ಅನುದಾನ ನೀಡಬೇಕು. ವಸ್ತುಸಂಗ್ರಹಾಲಯ ಮತ್ತು ಅಧ್ಯಯನ ಕೇಂದ್ರವನ್ನಾಗಿಸಲು ಸಹಕರಿಸಬೇಕು' ಎಂದು ಕೋರಿದರು.**
**-ಜಿ.ಡಿ.ಹರೀಶ್ ಗೌಡ, ಶಾಸಕ**


ಉದಯವಾಹಿನಿ ಚಿತ್ರ

**ಮಾವುತರು-ಕಾವಾಡಿಗರಿಗೆ ಸನ್ಮಾನ**

### ರೈತರು ಭೂಮಿ ಕಳೆದುಕೊಳ್ಳುವ ಆತಂಕ


ಹುಣಸೂರು ತಾಲ್ಲೂಕಿನ ವೀರನಹೊಸಹಳ್ಳಿ ಗ್ರಾಮದಲ್ಲಿ ಮೈಸೂರು ದಸರಾ ಗಜಪಯಣ ಕಾರ್ಯಕ್ರಮವನ್ನು ಅರಣ್ಯ ಸಚಿವ ಈಶ್ವರ್ ಖಂಡ್ರೆ ಉದ್ಘಾಟಿಸಿದರು. ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ. ಮಹದೇವಪ್ಪ ಸಚಿವ ವೆಂಕಟೇಶ್ ಶಾಸಕ ಜಿ.ಡಿ.ಹರೀಶ್ ಗೌಡ ಗ್ಯಾರಂಟಿ ಯೋಜನೆ ಉಪಾಧ್ಯಕ್ಷ ಪುಷ್ಪ ಅಮರನಾಥ್ ಶಾಸಕ ಅನಿಲ್ ಚಿಕ್ಕಮಾದು. ಇದ್ದರು. ಶಾಸಕ ಜಿ.ಡಿ. ಹರೀಶ್ ಗೌಡ ಮಾತನಾಡಿ 'ಕಾಡಂಚಿನ ಗ್ರಾಮಗಳ ಸಣ್ಣ ಹಿಡುವಳಿ ರೈತರಿಗೆ ಅರಣ್ಯ ಇಲಾಖೆಯು ಆಸ್ತಿ ಸೇರಿದ ದಾಖಲೆ ಕೇಳಿ ಅರಣ್ಯ ಇಲಾಖೆ ನೋಟಿಸ್ ನೀಡುತ್ತಿದೆ. ಮೂರು ತಲೆಮಾರಿನಿಂದ ಕೃಷಿ ಮಾಡುತ್ತಿರುವ ರೈತರು ಭೂಮಿ ಕಳೆದುಕೊಳ್ಳುವ ಆತಂಕದಲ್ಲಿದ್ದು ಬಗೆಹರಿಸಬೇಕು' ಎಂದು ಒತ್ತಾಯಿಸಿದರು.

---

## ಮಿನಿ ನ್ಯೂಸ್

### ಮೈತ್ರಿ ನಾಯಕರಿಂದ ಟಿಕೆಟ್ ಭರವಸೆ

• **ಉದಯವಾಹಿನಿ ಚನ್ನಪಟ್ಟಣ**



ಚನ್ನಪಟ್ಟಣ ಉಪ ಚುನಾವಣೆಯಲ್ಲಿ ನಾನು ಸ್ಪರ್ಧಿಸುವುದು ಖಚಿತ. ಮಾತ್ರ ಪಕ್ಷ ಬಿಜೆಪಿಯಿಂದ ಸ್ಪರ್ಧಿಸುವುದು ನನ್ನ ಮೊದಲ ಆದ್ಯತೆಯಾಗಿದೆ. ಮುಂದಿನ ವಾರ ಟಿಕೆಟ್ ಗೊಂದಲಕ್ಕೆ ತೆರೆ ಬೀಳಲಿದೆ' ಎಂದು ಬಿಜೆಪಿ ಟಿಕೆಟ್ ಪ್ರಬಲ ಆಕಾಂಕ್ಷಿ, ವಿಧಾನ ಪರಿಷತ್ ಸದಸ್ಯ ಸಿ.ಪಿ. ಯೋಗೇಶ್ವರ್ ಹೇಳಿದ್ದಾರೆ. ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈಗಾಗಲೇ ಎಚ್.ಡಿ. ಕುಮಾರಸ್ವಾಮಿ ಅವರನ್ನು ಭೇಟಿಯಾಗಿದ್ದು ಟಿಕೆಟ್ ಭರವಸೆ ನೀಡಿದ್ದಾರೆ ಎಂದರು.

ಬಿಜೆಪಿ ಮತ್ತು ಜೆಡಿಎಸ್ ನಾಯಕರು ಜವಾಬ್ದಾರಿ ವಹಿಸಿಕೊಂಡು ಉಪ ಚುನಾವಣೆ ಮಾಡಬೇಕು. ಈ ಕುರಿತು ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ, ಅವರೊಂದಿಗೆ ಮಾತುಕತೆ ನಡೆಸಿದ್ದೇನೆ. ಎರಡೂ ಪಕ್ಷದ ನಾಯಕರ ಸಮನ್ವಯ ಸಭೆ ಆಗಬೇಕು. ಪಕ್ಷದ ವರಿಷ್ಠರ ಭೇಟಿಗಾಗಿ ಬುಧವಾರ ದೆಹಲಿಗೆ ಹೋಗಬೇಕಿತ್ತು. ಆದರೆ, ಕೆಲ ರಾಜಕೀಯ ವಿದ್ಯಮಾನಗಳಿಂದ ಪ್ರವಾಸ ಮುಂದೂಡಿರುವೆ' ಎಂದು ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದರು

### ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆಗೆ ಒತ್ತಾಯ: ಬಿಜೆಪಿ ಪ್ರತಿಭಟನೆ

• **ಉದಯವಾಹಿನಿ ಮಡಿಕೇರಿ**

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ರಾಜೀನಾಮೆಗೆ ಒತ್ತಾಯಿಸಿ ಬಿಜೆಪಿ ಕಾರ್ಯಕರ್ತರು ನಗರದಲ್ಲಿ ಗುರುವಾರ ಪ್ರತಿಭಟನೆ ನಡೆಸಿದರು. ನೂರಾರು ಸಂಖ್ಯೆಯಲ್ಲಿ ಸೇರಿದ ಪ್ರತಿಭಟನಕಾರರು ಜನರಲ್ ತಿಮ್ಮಯ್ಯ ವೃತ್ತದಲ್ಲಿ ಮಾನವ ಸರಪಳಿ ರಚಿಸಿದರು. ಇದರಿಂದ ಕೆಲಕಾಲ ಮೈಸೂರು– ಮಂಗಳೂರು ರಸ್ತೆಯಲ್ಲಿ ಸಂಚಾರ ಸ್ಥಗಿತಗೊಂಡಿತ್ತು. ಬಳಿಕ ಪ್ರತಿಭಟನಕಾರರು ಜಿಲ್ಲಾಧಿಕಾರಿ ಕಚೇರಿಗೆ ತಲುಪಿ ಅಲ್ಲಿ ಪ್ರತಿಭಟನೆ ಮುಂದುವರಿಸಿದರು. ವಿಧಾನ ಪರಿಷತ್ ಸದಸ್ಯ ಸುಜಾ ಕುಶಾಲಪ್ಪ, ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ರವಿ ಕಾಳಪ್ಪ, ಮುಖಂಡರಾದ ಎಂ.ಪಿ.ಅಪ್ಪಚ್ಚುರಂಜನ್ ಭಾಗವಹಿಸಿದ್ದರು.

### ಡಿಸೋಜಾ ಫೋಟೋ ತುಳಿದು ಬಿಜೆಪಿ ಮುಖಂಡರು, ಕಾರ್ಯಕರ್ತರ ಆಕ್ರೋಶ


ಉದಯವಾಹಿನಿ ಚಿತ್ರ

• **ಉದಯವಾಹಿನಿ ಚಾಮರಾಜನಗರ**

ಇದೀಗ ಮುಡಾ ಹಗರಣ ಪ್ರಕರಣ ರಾಜ್ಯಾದ್ಯಂತ ಸದ್ದು ಮಾಡುತ್ತಿದೆ. ಅಲ್ಲದೆ, ಮುಡಾ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ಕೊಡಬೇಕು ಎಂದು ಒತ್ತಾಯಿಸಿ ಬಿಜೆಪಿ ಕಾರ್ಯಕರ್ತರು ಪ್ರತಿಭಟನೆ ಮಾಡಿ ಆಕ್ರೋಶ ಹೊರಹಾಕಿದ ಘಟನೆ ಇಂದು (ಆಗಸ್ಟ್ 22) ಚಾಮರಾಜನಗರದಲ್ಲಿ ನಡೆದಿದೆ.

ಚಾಮರಾಜನಗರದ ಚಾಮರಾಜೇಶ್ವರ ದೇಗುಲ ಮುಂಭಾಗ ಬಿಜೆಪಿ ಮುಖಂಡರು, ಕಾರ್ಯಕರ್ತರು ಧರಣಿ ನಡೆಸಿ ಕಾಂಗ್ರೆಸ್ ಹಾಗೂ ಸಿಎಂ ಸಿದ್ದರಾಮಯ್ಯ ವಿರುದ್ಧ ಧಿಕ್ಕಾರದ ಘೋಷಣೆ ಕೂಗಿ ಆಕ್ರೋಶ ಹೊರಹಾಕಿದರು. ಧರಣಿ ಬಳಿಕ ಭುವನೇಶ್ವರಿ ವೃತ್ತದವರೆಗೂ ಪ್ರತಿಭಟನಾ ಮೆರವಣಿಗೆ ನಡೆಸಿ ಐವಾನ್ ಡಿಸೋಜಾ ಫೋಟೋ ತುಳಿದು ಆಕ್ರೋಶ ಹೊರಹಾಕಿದರು. ರಾಜ್ಯಪಾಲರ ಭವನಕ್ಕೆ ಬಾಂಗ್ಲಾದೇಶ ಮಾದರಿ ದಾಳಿ ಆಗಲಿದೆ ಎಂದು ಹೇಳಿಕೆ ಕೊಟ್ಟಿದ್ದಕ್ಕೆ ಡಿಸೋಜಾ ಭಾವಚಿತ್ರವನ್ನು ತುಳಿದು ಬಿಜೆಪಿ ಕಾರ್ಯಕರ್ತರು ಧಿಕ್ಕಾರದ ಘೋಷಣೆ ಕೂಗಿದರು.

---

# ಅಕ್ರಮ ಮದ್ಯ ಮಾರಾಟವನ್ನು ತಡೆಗಟ್ಟುವಂತೆ ಆಗ್ರಹಿಸಿ ಪ್ರತಿಭಟನೆ

• **ಉದಯವಾಹಿನಿ, ಬಂಗಾರಪೇಟೆ**

ಅಕ್ರಮವಾಗಿ ಮದ್ಯ ಮಾರಾಟ ಮಾರಾಟ ಮಾಡುತ್ತಿದ್ದಾರೆ ಎಂದು, ಅಂಬೇಡ್ಕರ್ ಸೇವಾ ಸಮಿತಿ ರಾಜ್ಯಾಧ್ಯಕ್ಷ ಹಾಗೂ ಗ್ರಾಮ ಪಂಚಾಯಿತಿ ಸದಸ್ಯ ಕುಪೇಂದ್ರ ಆರೋಪಿಸಿದರು.

ಪಟ್ಟಣದ ವಿವೇಕಾನಂದರ ನಗರದಲ್ಲಿರುವ ಅಬಕಾರಿ ಇಲಾಖೆ ಎದುರು ಅಂಬೇಡ್ಕರ್ ಸೇವಾ ಸಮಿತಿ ವತಿಯಿಂದ ಅಕ್ರಮ ಮದ್ಯ ಮಾರಾಟವನ್ನು ತಡೆಗಟ್ಟುವಂತೆ ಆಗ್ರಹಿಸಿ ಪ್ರತಿಭಟನೆಯನ್ನು ನಡೆಸಲಾಯಿತು, ಈ ಸಂದರ್ಭದಲ್ಲಿ ಮಾತನಾಡಿದ ಅವರು ತಾಲ್ಲೂಕಿನಾದ್ಯಂತ ಗ್ರಾಮೀಣ ಭಾಗದಲ್ಲಿ ದಿನಸಿ ಅಂಗಡಿ, ಡಾಬು, ಹೋಟೆಲ್‌ಗಳಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡುವವರ ಸಂಖ್ಯೆ ದಿನೇ ದಿನೇ ಹೆಚ್ಚಾಗುತ್ತಿದೆ, ಇದರಿಂದ ಪಡ್ಡೆ ಹುಡುಗರು ಕಂಠಪೂರ್ತಿ ಮದ್ಯಪಾನ ಮಾಡಿ ಮಹಿಳೆಯರು ಮತ್ತು ಮಕ್ಕಳ ಮೇಲೆ ಲೈಂಗಿಕ ಕಿರುಕುಳ ಕೊಡುತ್ತಿದ್ದಾರೆ. ಈ ಬಗ್ಗೆ ಯಾವುದೇ ಕ್ರಮ ಕೈಗೊಂಡಿರುವುದಿಲ್ಲ. ಆಗಾಗಿ ಅನಧಿಕೃತವಾಗಿ ಮದ್ಯ ಮಾರಾಟ ಮಾಡುತ್ತಿರುವವರ ವಿರುದ್ಧ ಸೂಕ್ತ ಕ್ರಮ ಕೈಗೊಂಡು ಅನಧಿಕೃತ ಮದ್ಯ ಮಾರಾಟ ಕೇಂದ್ರಗಳನ್ನು ಕೂಡಲೇ ತೆರವುಗೊಳಿಸಿ ಕಾನೂನು ಕ್ರಮಕ್ಕೈಗೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ಸಂಸ್ಥಾಪಕ ಅಧ್ಯಕ್ಷ ಸಂದೇಶ, ಕೆಸರಿನಹಳ್ಳಿ ಶ್ರೀನಿವಾಸ್, ಬೂದಿಕೋಟೆ ಶಂಕರ್, ಷಫಿಕ್, ಅಲೀಂ, ಅಶೋಕ್, ಸಕ್ಕನಹಳ್ಳಿ ರವಿ, ಮಣಿ, ಕನಕ, ರಾಮಚಂದ್ರ, ಇತರರು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

### ಅಧಿಕಾರಿಗಳಿಗೆ ಮಾಸಿಕ ವಂತಿಕೆ

ಈ ಘಟನೆಗೆ ಸಂಬಂಧಪಟ್ಟಂತೆ ಅಂಗಡಿ ಮಾಲೀಕರನ್ನು ವಿಚಾರಿಸಲಾಗಿ ಮಾಲೀಕರು ನಾವು ಅಬಕಾರಿ ಅಧಿಕಾರಿಗಳಿಗೆ ಮಾಹೆವಾರು ವಂತಿಕೆ ಪಾವತಿಸುತ್ತಿದ್ದೇವೆ ಎಂದು ಹೇಳುತ್ತಿದ್ದಾರೆ.

### ಬ.ಪೇಟೆ ಬಂದ್ ಎಚ್ಚರಿಕೆ

ಸಂಸ್ಥಾಪಕ ರಾಜ್ಯಾಧ್ಯಕ್ಷ ಸಂದೇಶ್ ಮಾತನಾಡಿ ಕೂಲಿ ಕಾರ್ಮಿಕರು ಮದ್ಯದ ಚಟದ ದಾಸ್ಯರಾಗಿ ಬೆಳಗಿನ ಜಾವ ಕುಡಿಯಲು ಹೋಗುತ್ತಿದ್ದಾರೆ ಇದರಿಂದ ಬಡ ಹೆಣ್ಣು ಮಕ್ಕಳ ಜೀವನ ಅತಂತ್ರವಾಗಿದ್ದು ಬೀದಿಗೆ ಬಂದಂತಾಗಿದೆ,ಆದ್ದರಿಂದ ಅಬಕಾರಿ ಇಲಾಖೆಯ ಅಧಿಕಾರಿಗಳು ಈ ಕೂಡಲೇ ತನಿಖೆ ಕೈಗೊಂಡು, ಅನಧಿಕೃತ ಮದ್ಯ ಮಾರಾಟ ಕೇಂದ್ರಗಳನ್ನು ತೆರವುಗೊಳಿಸಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು, ಇಲ್ಲದೆ ಹೋದಲ್ಲಿ ಮುಂದಿನ ದಿನಗಳಲ್ಲಿ ಬಂಗಾರಪೇಟೆ ಬಂದ್ ಮಡಲಾಗುವುದು ಎಂದು ಎಚ್ಚರಿಕೆಯನ್ನು ಕೊಟ್ಟರು.

---

# ಪೌರಕಾರ್ಮಿಕರ ವಸತಿಗೃಹ: ವಿದ್ಯುತ್ ಸಂಪರ್ಕ ಕಡಿತ

• **ಉದಯವಾಹಿನಿ, ಚಿಂತಾಮಣಿ**

ನಗರದ ಆಶ್ರಯ ಬಡಾವಣೆಯಲ್ಲಿ ಪೌರಕಾರ್ಮಿಕರಿಗೆ ಗೃಹಭಾಗ್ಯ ಯೋಜನೆಯಡಿ ನಿರ್ಮಿಸಿರುವ ವಸತಿಗೃಹಗಳಿಗೆ ಬೆಸ್ಕಾಂ ವಿದ್ಯುತ್ ಸಂಪರ್ಕ ಕಡಿತಗೊಳಿಸಿದೆ. ನಗರವನ್ನೆಲ್ಲ ಸ್ವಚ್ಛಗೊಳಿಸುವ ಪೌರಕಾರ್ಮಿಕರು ಬೆಳಕಿಲ್ಲದೆ ಕಗ್ಗತ್ತಲಲ್ಲಿ ಕಾಲಕಳೆಯುವಂತಾಗಿದೆ.

ಗೃಹಭಾಗ್ಯ ಯೋಜನೆಯಡಿ ಪೌರಕಾರ್ಮಿಕರಿಗಾಗಿ 32 ಮನೆ ನಿರ್ಮಾಣ ಮಾಡಲಾಗಿದೆ.

ತಲಾ 7.5 ಲಕ್ಷ ವೆಚ್ಚದಲ್ಲಿ ಸುಮಾರು 2.4 ಕೋಟಿ ಖರ್ಚು ಮಾಡಿ ಮನೆ ನಿರ್ಮಾಣ ಮಾಡಲಾಗಿದೆ. ಕಟ್ಟಡದ ಕಾಮಗಾರಿ ಪೂರ್ಣವಾಗದಿದ್ದರೂ 2022ನೇ ಮೇ ತಿಂಗಳಲ್ಲಿ ಅಂದಿನ ನಗರಾಭಿವೃದ್ಧಿ ಸಚಿವ ಎಂಟಿಬಿ ನಾಗರಾಜ್ ಉದ್ಘಾಟನೆ ನೆರವೇರಿಸಿದ್ದರು.

ವಸತಿಗೃಹಗಳಿಗೆ ಕುಡಿಯುವ ನೀರು, ವಿದ್ಯುತ್ ಸಂಪರ್ಕ, ಬೀದಿ ದೀಪ ಮುಂತಾದ ಸೌಲಭ್ಯ ಒದಗಿಸದೆ ಉದ್ಘಾಟನೆ ನೆರವೇರಿಸಿ ಪೌರಕಾರ್ಮಿಕರಿಗೆ ವಿತರಿಸಲಾಗಿತ್ತು. ಪೌರಕಾರ್ಮಿಕರು ಅಂದಿನಿಂದಲೂ ತಾತ್ಕಾಲಿಕವಾಗಿ ವಿದ್ಯುತ್ ಸಂಪರ್ಕ ಪಡೆದುಕೊಂಡು ಉಪಯೋಗಿಸುತ್ತಿದ್ದರು. ಬೆಸ್ಕಾಂ ಅಧಿಕಾರಿಗಳು ಹಲವಾರು ಬಾರಿ ನಗರಸಭೆಯ ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದರೂ ಯಾವುದೇ ಕ್ರಮಕೈಗೊಳ್ಳದ ಹಿನ್ನೆಲೆಯಲ್ಲಿ ಮೂರು ದಿನಗಳ ಹಿಂದೆ ಬೆಸ್ಕಾಂ ಸಿಬ್ಬಂದಿ ಎಲ್ಲಾ ಮನೆಗಳ ಅಕ್ರಮ ವಿದ್ಯುತ್ ಸಂಪರ್ಕ ಕಡಿತ ಮಾಡಿದ್ದಾರೆ.

ಪ್ರತಿದಿನ ಬೆಳಗಾದ ಕೂಡಲೇ ನಗರದ ಸ್ವಚ್ಛತೆಯಲ್ಲಿ ತೊಡಗಿಸಿಕೊಂಡು ಜನರ ಆರೋಗ್ಯವನ್ನು ಕಾಪಾಡುವಲ್ಲಿ ಶ್ರಮಿಸುತ್ತಿರುವ ಪೌರಕಾರ್ಮಿಕರಿಗೆ ಕನಿಷ್ಠ ಸೌಲಭ್ಯ ಒದಗಿಸದಿರುವುದು ಸರಿಯಲ್ಲ. ಅಗತ್ಯ ಸೌಲಭ್ಯ ಒದಗಿಸದಿರುವುದು ಪೌರಕಾರ್ಮಿಕರಿಗೆ ನೀಡಿರುವ ಕತ್ತಲಿನ ಭಾಗ್ಯವಾಗಿದೆ ಎಂದು ಪೌರಕಾರ್ಮಿಕರೊಬ್ಬರ ಪತ್ನಿ ವೀಣಾ ಅಸಮಧಾನ ವ್ಯಕ್ತಪಡಿಸಿದರು.


ಉದಯವಾಹಿನಿ ಚಿತ್ರ

---

# ಗುರು ರಾಘವೇಂದ್ರ ಸ್ವಾಮಿಗಳ ಮಧ್ಯಾರಾಧನೆ

• **ಉದಯವಾಹಿನಿ, ಮಾಗಡಿ**

ಪಟ್ಟಣದ ತಿರುಮಲೆ ಮುಖ್ಯರಸ್ತೆಯಲ್ಲಿರುವ ಗುರು ರಾಘವೇಂದ್ರ ಸ್ವಾಮಿಗಳ 353ನೇ ಮಧ್ಯಾರಾಧನೆ ಮಹೋತ್ಸವ ಅದ್ದೂರಿಯಾಗಿ ನಡೆಯಿತು. ಗುರು ರಾಘವೇಂದ್ರ ಸೇವಾ ಟ್ರಸ್ಟ್ ವತಿಯಿಂದ ಗುರು ರಾಘವೇಂದ್ರ ಸ್ವಾಮಿಗಳ 353ನೇ ಆರಾಧನಾ ಮಹೋತ್ಸವ ನಡೆಯಲಿದೆ.

ಆರಾಧನಾ ಮಹೋತ್ಸವದ ಅಂಗವಾಗಿ ದೇವಾಲಯದಲ್ಲಿ ಬೆಳಗ್ಗೆ 6ಕ್ಕೆ ಧ್ವಜಾರೋಹಣ, ಅಂಕುರಾರ್ಪಣೆ, ಗೋಪೂಜೆ, ಅಶ್ವಪೂಜೆ, ಗಜ ಪೂಜೆ ಮಹಾ ಮಂಗಳಾರತಿ ನೆರವೇರಿಸಲಾಯಿತು. ರಾಯರ ಬೃಂದಾವನಕ್ಕೆ ಪಂಚಾಮೃತ ಅಭಿಷೇಕ, ವಿಶೇಷ ಹೂವಿನ ಅಲಂಕಾರ ಹಾಗೂ ಬೆಳ್ಳಿ ಕವಚವನ್ನು ಹಾಕಿ ವಿಶೇಷ ಪೂಜೆ ಸಲ್ಲಿಸಲಾಯಿತು.

ಮಧ್ಯಾಹ್ನ ಮಹಾಮಂಗಳಾರತಿ ಮಾತಾ ಮಹಿಳಾ ಮಂಡಳಿ ವತಿಯಿಂದ ದೇವರ ಭಜನೆ ಮಾಡಲಾಯಿತು. ರಾಘವೇಂದ್ರ ಸ್ವಾಮಿಗಳ ಮೂರ್ತಿಯನ್ನು ಚಿಕ್ಕ ರಥದಲ್ಲಿ ಇಟ್ಟು ಮಠದಲ್ಲೇ ಮೂರು ಸುತ್ತು ಪ್ರದಕ್ಷಿಣೆ ಹಾಕಿಸಿ ರಥೋತ್ಸವ ನೆರವೇರಿಸಲಾಯಿತು. ಸಂಜೆ ವಿಶೇಷ ಪೂಜೆ ನಡೆಯಿತು. ಭಕ್ತರಿಗೆ ಅನ್ನ ಸಂತರ್ಪಣೆ ಏರ್ಪಡಿಸಲಾಗಿತ್ತು. ಉತ್ತರಾದನೆ ನಡೆಯಲಿದ್ದು ಗುರು ರಾಘವೇಂದ್ರ ಸ್ವಾಮಿಗಳ ಆರಾಧನಾ ಮಹೋತ್ಸವಕ್ಕೆ ತೆರೆ ಬೀಳಲಿದೆ ಎಂದು ರಾಯರ ಮಠದ ಪ್ರಧಾನ ಅರ್ಚಕರಾದ ಶ್ರೀನಿವಾಸ್ ಆಚಾರ್ ತಿಳಿಸಿದ್ದಾರೆ.


ಉದಯವಾಹಿನಿ ಚಿತ್ರ

**ಭಕ್ತರಿಗೆ ಅನ್ನ ಸಂತರ್ಪಣೆ**

---

# ಶುದ್ಧ ಕುಡಿಯುವ ನೀರಿನ ಘಟಕ ಉದ್ಘಾಟನೆ : ಲಕ್ಷ್ಮೀನಾರಾಯಣ ರೆಡ್ಡಿ

• **ಉದಯವಾಹಿನಿ, ಶಿಡ್ಲಘಟ್ಟ**

ಇತ್ತೀಚಿಗೆ ಬೇವರಿಲ್ಲದೇ ಬದುಕು, ಶ್ರಮವಿಲ್ಲದೇ ಊಟ ಮಾಡುವಂತ ಪರಿಸ್ಥಿತಿ ಎದುರಿಸುತ್ತಿದ್ದು, ಯಂತ್ರೋಪಕರಣಗಳ ಯುಗದಲ್ಲಿ ಸಿಲುಕಿ ಮನುಷ್ಯರಿಗೆ ಸಣ್ಣ ಪುಟ್ಟ ರೋಗ ಬಂದರೆ ತಡೆದುಕೊಳ್ಳುವಂತಹ ಶಕ್ತಿ ಇಲ್ಲದಂತಾಗಿದೆ. ಆದ್ದರಿಂದ ಸರ್ಕಾರದ ಆಸ್ತಿಗಳನ್ನು ರಕ್ಷಿಸಿ ಸದುಪಯೋಗಪಡಿಸಿಕೊಳ್ಳುವುದು ನಮ್ಮೆಲ್ಲರ ಜವಾಬ್ದಾರಿ ಎಂದು ತಾಪಂ ಮಾಜಿ ಅಧ್ಯಕ್ಷ ಅಪ್ಪೇಗೌಡನಹಳ್ಳಿ ಲಕ್ಷ್ಮೀನಾರಾಯಣರೆಡ್ಡಿ ತಿಳಿಸಿದರು.

ತಾಲ್ಲೂಕಿನ ಹಂಡಿಗನಾಳ ಗ್ರಾಪಂ ವ್ಯಾಪ್ತಿಯ ಪ್ಯಾಯಲಹಳ್ಳಿ ಗ್ರಾಮದಲ್ಲಿ ತಾಪಂ ಮಾಜಿ ಅಧ್ಯಕ್ಷ ಅಪ್ಪೇಗೌಡನಹಳ್ಳಿ ಲಕ್ಷ್ಮಿನಾರಾಯಣರೆಡ್ಡಿ ಅವರು ತಮ್ಮ ಸ್ವಂತ ಖರ್ಚಿನಲ್ಲಿ ನಿರ್ಮಿಸಿದ್ದ ಶುದ್ಧ ಕುಡಿಯುವ ನೀರಿನ ಘಟಕವನ್ನು ಉದ್ಘಾಟಿಸಿ ಮಾತನಾಡಿದರು.

ಶುದ್ಧ ಕುಡಿಯುವ ನೀರಿನ ಘಟಕ ನಿಮ್ಮ ಸಲುವಾಗಿ ಮಾಡಿರುವುದು ಹಾಗಾಗಿ ಅದನ್ನು ಸದ್ಬಳಕೆ ಮಾಡಿಕೊಳ್ಳಬೇಕು. ಸರ್ಕಾರದ ಆಸ್ತಿ ಪಾಸ್ತಿಗಳನ್ನು ರಕ್ಷಿಸಿ ಸದುಪಯೋಗಪಡಿಸಿಕೊಳ್ಳುವುದು ನಮ್ಮೆಲ್ಲರ ಜವಾಬ್ದಾರಿ. ಕುಡಿಯುವ ನೀರಿನಿಂದ ಸಾಕಷ್ಟು ಸಾಂಕ್ರಾಮಿಕ ರೋಗಗಳು ಬರುತ್ತವೆ. ಆರೋಗ್ಯ ಕಾಪಾಡಿಕೊಳ್ಳಬೇಕಾದರೆ ಶುದ್ಧ ಕುಡಿಯುವ ನೀರಿನ ಸರಿಯಾಗಿ ಬಳಸಿಕೊಳ್ಳಬೇಕು.

ಸ್ವಂತ ಖರ್ಚಿನಲ್ಲಿ ಶುದ್ಧ ಕುಡಿಯುವ ನೀರಿನ ಘಟಕವನ್ನು ನಿರ್ಮಿಸಿಕೊಟ್ಟ ಅಪ್ಪೇಗೌಡನಹಳ್ಳಿ ಲಕ್ಷ್ಮಿನಾರಾಯಣರೆಡ್ಡಿ ಅವರನ್ನು ಗ್ರಾಮಸ್ಥರು ಸನ್ಮಾನಿಸಿ, ಗೌರವಿಸಿದರು. ಹಂಡಿಗನಾಳ ಗ್ರಾಪಂ ಅಧ್ಯಕ್ಷೆ ಲಕ್ಷ್ಮಮ್ಮ, ಸದಸ್ಯರಾದ ಮಂಜುಳ ರಾಜಣ್ಣ, ನಾರಾಯಣಪ್ಪ, ಜಯರಾಮ್, ಅಭಿವೃದ್ಧಿ ಅಧಿಕಾರಿ ಮಧು, ಮುನಿರೆಡ್ಡಿ, ಸಂದೀಪ್, ಡೈರಿ ಅಧ್ಯಕ್ಷ ದ್ಯಾವಪ್ಪ, ಧರ್ಮಸ್ಥಳ ಸಂಘದ ಮಮತಾ, ಮುಖಂಡ ವೆಂಕಟೇಶ್ ಹಾಗೂ ಲಕ್ಕಹಳ್ಳಿ, ಪ್ಯಾಯಲಹಳ್ಳಿ ಗ್ರಾಮಸ್ಥರು ಹಾಜರಿದ್ದರು.


ಉದಯವಾಹಿನಿ ಚಿತ್ರ

**ಪ್ಯಾಯಲಹಳ್ಳಿ ಗ್ರಾಮಸ್ಥರು ಕೂಡ ಶಾಸಕ ರವಿಕುಮಾರ್ ಅವರಿಗೆ ಗ್ರಾಮದಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ನಿರ್ಮಿಸಿಕೊಡುವಂತೆ ಮನವಿ ಮಾಡಿದ್ದರು. ಅದರಂತೆ ಶಾಸಕರು ಸರ್ಕಾರದಿಂದ ಸಿಗುವ ಅನುದಾನದ ಜತೆಗೆ ಅನೇಕ ಉದ್ದಿಮೆದಾರರನ್ನು, ಕಂಪನಿಗಳನ್ನು ಸಂಪರ್ಕಿಸಿ ಚರ್ಚಿಸಿದ್ದು, ಅವರ ಮನವಿ ಮೇರೆಗೆ ಸಿಎಸ್‌ಆರ್ ಅನುದಾನದಲ್ಲಿ ಸಾಕಷ್ಟು ಗ್ರಾಮಗಳಲ್ಲಿ ಕುಡಿಯುವ ನೀರಿನ ಘಟಕಗಳನ್ನು ನಿರ್ಮಿಸಿ ಶುದ್ಧ ಕುಡಿಯುವ ನೀರನ್ನು ಗ್ರಾಮಸ್ಥರಿಗೆ ಒದಗಿಸಲಾಗುತ್ತಿದೆ**
**-ಲಕ್ಷ್ಮೀನಾರಾಯಣರೆಡ್ಡಿ**

---

# ರಾಜ್ಯ ಸರ್ಕಾರಕ್ಕೆ ನೈತಿಕತೆ ಇದ್ದರೆ ಕೂಡಲೇ ಸಿದ್ದರಾಮಯ್ಯ ರಾಜೀನಾಮೆ ನೀಡಬೇಕು: ವಾಸುದೇವ ರೆಡ್ಡಿ ಅಗ್ರಹ

• **ಉದಯವಾಹಿನಿ, ಬೇತಮಂಗಲ**

ಕರ್ನಾಟಕ ರಾಜ್ಯದಲ್ಲಿ ವಾಲ್ಮೀಕಿ ನಿಗಮದಲ್ಲಿ ಹಾಗೂ ಮುಡಾದಲ್ಲಿ ನಡೆದಿರುವ ಹಗರಣವನ್ನು ಒಪ್ಪಿಕೊಂಡಿರುವ ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ ನೈತಿಕತೆ ಇದ್ದರೆ ತಕ್ಷಣ ಮುಖ್ಯ ಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ರಾಜಿನಾಮೆ ನೀಡಬೇಕೆಂದು ಮಾವು ಅಭಿವೃದ್ಧಿ ನಿಗಮ ಮಂಡಳಿ ಮಾಜಿ ಅಧ್ಯಕ್ಷ ವಾಸುದೇವ ಆಗ್ರಹಿಸಿದರು.

ಮಾಧ್ಯಮದವರೊಂದಿಗೆ ಮಾತನಾಡಿದ ಅವರು. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ನಿರಂತರವಾಗಿ ಭ್ರಷ್ಟಾಚಾರದಲ್ಲಿ ತೊಡಗಿದ್ದಾರೆ, ಈಗಾಗಲೇ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದಿರುವ ಆಕ್ರಮವನ್ನು ಒಪ್ಪಿಕೊಂಡಿರುವ ರಾಜ್ಯ ಸರ್ಕಾರಕ್ಕೆ ಉಳಿಗಾಲವಿಲ್ಲ ಎಂದರು. ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಬೇನಾಮಿ ಖಾತೆಗಳಿಗೆ, ಚಿನ್ನದ ಅಂಗಡಿಗಳಿಗೆ ಹಣವನ್ನು ವರ್ಗಾವಣೆ ಮಾಡುವ ಮೂಲಕ ಎಸ್ಸಿ ಎಸ್ಟಿ ಸಮುದಾಯಗಳ ಅಭಿವೃದ್ಧಿಗೆ ಮೀಸಲಿಟ್ಟ ಹಣವನ್ನು ನುಂಗಿ ನೀರು ಕುಡಿದ್ದೀರಿ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮುಡಾದಲ್ಲಿ ಹಾಗಿರುವ ಹಗರಣವನ್ನು ಹಾಗೂ ವಾಲ್ಮೀಕಿ ಅಭಿವೃದ್ಧಿ ನಿಗಮದ ಅವ್ಯವಹಾರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ನೇರ ಹೊಣೆ ಆಗಿದ್ದು, ಕಾನೂನು ಹೋರಾಟಕ್ಕೆ ಹಾಗೂ ಸಂವಿಧಾನದ ಮೇಲೆ ಏನಾದರೂ ಗೌರವ ಇದ್ದಲಿ ತಕ್ಷಣ ರಾಜಿನಾಮೆ ನೀಡಬೇಕು ಎಂದು ಒತ್ತಾಯಿಸಿದ್ದರು. ಮುಖಂಡರಾದ ಕೋಳಿ ನಾಗರಾಜ್, ಮುನಿಯಪ್ಪ ಇದ್ದರು.


ಉದಯವಾಹಿನಿ ಚಿತ್ರ

**ರಾಜ್ಯ ಸರ್ಕಾರದ ಮುಖ್ಯ ಮಂತ್ರಿ ಸಮೇತವಾಗಿ ಸಚಿವರು ಸಹ ತಪ್ಪು ಮಾಡಿರುವುದು ನ್ಯಾಯಾಲಯದಲ್ಲಿ ಸಾಬೀತು ಆಗುವುದು ಬಹುತೇಕ ಖಚಿತವಾಗಿದೆ, ತಕ್ಷಣ ನೀವು ರಾಜಿನಾಮೆ ಕೊಟ್ಟು ಕಾನೂನು ಹೋರಾಟಕ್ಕೆ ಬರಬೇಕು ಇಲ್ಲದಿದ್ದರೆ, ಸರ್ಕಾರವನ್ನು ವಜಾಗೊಳಿಸಿ ಚುನಾವಣೆ ಮೂಲಕ ಜನರ ಮುಂದೆ ಹೋಗೋಣ ಎಂದು ಸವಾಲ್ ಹಾಕಿದ್ದರು.**
**-ವಾಸುದೇವ ರೆಡ್ಡಿ**

---

# ಕೆಪಿಎಸ್‌ಸಿ ಪರೀಕ್ಷೆ : ಲೋಪದೋಷವಾಗದಂತೆ ನಡೆಸಲು ಕಟ್ಟುನಿಟ್ಟಿನ ಸೂಚನೆ

• **ಉದಯವಾಹಿನಿ, ತುಮಕೂರು**

ನಗರದ 16 ಕೇಂದ್ರಗಳಲ್ಲಿ ಆಗಸ್ಟ್ 27ರಂದು ಕೆಪಿಎಸ್‌ಸಿ ಪರೀಕ್ಷೆ ನಡೆಯಲಿದ್ದು, ಪರೀಕ್ಷೆಯನ್ನು ಯಾವುದೇ ಲೋಪದೋಷವಾಗದಂತೆ ನಡೆಸಬೇಕು ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ನ್ಯಾಯಾಲಯ ಸಭಾಂಗಣದಲ್ಲಿ ಜರುಗಿದ ಕೆಪಿಎಸ್ಸಿ ಪರೀಕ್ಷೆ ಪೂರ್ವ ಭಾವಿ ಸಭೆ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, ಪರೀಕ್ಷೆ ನಡೆಯುವ ಕೊಠಡಿಗಳಲ್ಲಿ ಬೆಳಕು, ಕುಡಿಯುವ ನೀರು, ಸುಸ್ಥಿತಿಯಲ್ಲಿರುವ ಗಡಿಯಾರ ಸೇರಿದಂತೆ ಮೂಲಭೂತ ಸೌಕರ್ಯಗಳ ವ್ಯವಸ್ಥೆ ಮಾಡಬೇಕೆಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

**ಇಂದೇ ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲಿಸಲು ಸೂಚನೆ:** ಕೆಪಿಎಸ್ಸಿ ಪರೀಕ್ಷೆ ನಡೆಯಲಿರುವ ಕೇಂದ್ರಗಳಿಗೆ ನಿಯೋಜಿತ ಅಧಿಕಾರಿಗಳು ಇಂದೇ ಭೇಟಿ ನೀಡಿ ಸಿಸಿ ಕ್ಯಾಮರಾ, ವಿದ್ಯುತ್ ಸಂಪರ್ಕ, ಡೆಸ್ಕ್‌ಗಳು ಸುಸ್ಥಿತಿಯಲ್ಲಿರುವಂತೆ ಪೂರ್ವ ಸಿದ್ಧತೆಗಳನ್ನು ಕೈಗೊಳ್ಳಬೇಕು ಹಾಗೂ ಪ್ರಶ್ನೆ ಪತ್ರಿಕೆಯನ್ನು ನಿಗಧಿತ ಸಮಯಕ್ಕೆ ಸರಿಯಾಗಿ ಪರಿಕ್ಷಾರ್ಥಿಗಳಿಗೆ ವಿತರಿಸಬೇಕೆಂದು ಅಧಿಕಾರಿಗಳಿಗೆ ಮಾರ್ಗದರ್ಶನ ನೀಡಿದರು. ಪರೀಕ್ಷಾ ಕೇಂದ್ರಗಳ ಸುತ್ತ ಮುತ್ತ ಆಗಸ್ಟ್ 27ರಂದು ಯಾವುದೇ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕೆಂದು ಸಂಭಂದಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ, ಉಪವಿಭಾಗಾಧಿಕಾರಿಗಳಾದ ಗೌರವ್ ಕುಮಾರ್ ಶೆಟ್ಟಿ, ಸಪ್ತಶ್ರೀ, ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಅಬ್ದುಲ್ ಖಾದರ್, ಉಪ ಅರಣ್ಯ ಸಂರಕ್ಷಣಾಧಿಕಾರಿ ಅನುಮಪ, ಜಿಲ್ಲಾ ಪಂಚಾಯತ್ ಯೋಜನಾಧಿಕಾರಿ ನಾರಾಯಣಸ್ವಾಮಿ, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಬಾಲಗುರುಮೂರ್ತಿ, ಡಿಡಿಪಿಐ ಕೆ. ಮಂಜುನಾಥ್, ಮತ್ತಿತರ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

**ಕೆಪಿಎಸ್‌ಸಿ ಪರೀಕ್ಷೆ ಪೂರ್ವ ಭಾವಿ ಸಭೆ**

---

# ಶಿರಾಗೇಟ್ ರಸ್ತೆ ಮತ್ತೆ ಬಂದ್: ಜನರಿಗೆ ತೊಂದರೆ ತಪ್ಪಿದ್ದಲ್ಲ

## • ಅಮಾನಿಕೆರೆ ಕೋಡಿ ನೀರು ಹರಿಯುತ್ತಿರುವುದರಿಂದ ಸದ್ಯಕ್ಕೆ ತಾತ್ಕಾಲಿಕ ರಸ್ತೆ ನಿರ್ಮಾಣ ಸಾಧ್ಯವಾಗುತ್ತಿಲ್ಲ

• **ಉದಯವಾಹಿನಿ ತುಮಕೂರು**

ಸತತವಾಗಿ ಸುರಿಯುತ್ತಿರುವ ಮಳೆಗೆ ನಗರದ ಅಮಾನಿಕೆರೆ ಭರ್ತಿಯಾಗಿ ಕೋಡಿ ಹರಿದಿದ್ದು, ಶಿರಾಗೇಟ್ ಕಡೆಗೆ ಸಂಚರಿಸಲು ನಿರ್ಮಿಸಿದ್ದ ತಾತ್ಕಾಲಿಕ ರಸ್ತೆ ಕೊಚ್ಚಿಕೊಂಡು ಹೋಗಿದೆ.

ತಾತ್ಕಾಲಿಕ ರಸ್ತೆ ಹಾಳಾಗಿರುವುದರಿಂದ ಶಿರಾಗೇಟ್ ಮಾರ್ಗವಾಗಿ ಸಂಚರಿಸುತ್ತಿದ್ದ ದ್ವಿಚಕ್ರ ವಾಹನಗಳು, ಆಟೊ ಹಾಗೂ ಇತರೆ ಲಘು ವಾಹನಗಳು ಹನುಮಂತಪುರ ಮೂಲಕ, ರಾಷ್ಟ್ರೀಯ ಹೆದ್ದಾರಿ ಮಾರ್ಗವಾಗಿ ಸಂಚರಿಸಬೇಕಾಗಿದೆ.

ಅಮಾನಿಕೆರೆ ಕೋಡಿ ನೀರು ಹರಿಯುತ್ತಿರುವುದರಿಂದ ಸದ್ಯಕ್ಕೆ ತಾತ್ಕಾಲಿಕ ರಸ್ತೆ ನಿರ್ಮಾಣ ಸಾಧ್ಯವಾಗುತ್ತಿಲ್ಲ. ರಸ್ತೆ ನಿರ್ಮಿಸಿದರೆ ಕೋಡಿಯಿಂದ ನೀರು ಜೋರಾಗಿ ಬಂದರೆ ಮತ್ತೆ ಕಿತ್ತುಕೊಂಡು ಹೋಗುತ್ತದೆ. ಸದ್ಯಕ್ಕೆ ರಸ್ತೆ ಸರಿಪಡಿಸುವುದು ಅನುಮಾನ. ಸೇತುವೆ ಕಾಮಗಾರಿ ಪೂರ್ಣಗೊಳ್ಳುವವರೆಗೂ ಜನರಿಗೆ ತೊಂದರೆ ತಪ್ಪಿದ್ದಲ್ಲ. ಅಮಾನಿಕೆರೆ ಕೋಡಿ ನೀರು ಹರಿದು ಹೋಗುವ ಸ್ಥಳದಲ್ಲಿ ಈ ಹಿಂದಿನ ಸೇತುವೆ ಕಿರಿದಾಗಿದ್ದು, ಪದೇಪದೇ ಅಪಘಾತಗಳು ಸಂಭವಿಸುತ್ತಿದ್ದವು. ರಸ್ತೆ ವಿಸ್ತರಿಸುವ ಸಲುವಾಗಿ ಸೇತುವೆ ನಿರ್ಮಾಣ ಮಾಡಲಾಗುತ್ತಿದೆ. ಸಣ್ಣಪುಟ್ಟ ವಾಹನಗಳ ಸಂಚಾರಕ್ಕೆ ತಾತ್ಕಾಲಿಕ ರಸ್ತೆ ನಿರ್ಮಿಸಲಾಗಿತ್ತು. ಈಗ ಈ ರಸ್ತೆಯೂ ಕಿತ್ತುಕೊಂಡು ಹೋಗಿದ್ದು, ವಾಹನ ಸಂಚಾರ ಸಂಪೂರ್ಣ ಬಂದ್ ಮಾಡಲಾಗಿದೆ. ಆ ರಸ್ತೆಯಲ್ಲಿ ಜನರು ನಡೆದುಕೊಂಡು ಶಿರಾಗೇಟ್ ಕಡೆಗೆ ಹೋಗಲು ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣವಾಗಿದೆ.

ಸೇತುವೆ ಕಾಮಗಾರಿ ಆರಂಭಿಸಿದ ಸಮಯದಲ್ಲಿ ರಸ್ತೆ ಸಂಚಾರವನ್ನು ಸಂಪೂರ್ಣ ಬಂದ್ ಮಾಡಲಾಗಿತ್ತು. ಜಿಲ್ಲಾ ಆಡಳಿತದ ನಡೆಗೆ ಸಾರ್ವಜನಿಕರಿಂದ ತೀವ್ರ ಆಕ್ರೋಶ ವ್ಯಕ್ತವಾಗಿತ್ತು. ಮಳೆಗಾಲದಲ್ಲಿ ಕೆಲಸ ಆರಂಭಿಸದಂತೆ ಒತ್ತಾಯಿಸಿದ್ದರು. ಜನರ ಒತ್ತಾಯಕ್ಕೆ ಮಣಿದು ತಾತ್ಕಾಲಿಕ ರಸ್ತೆ ನಿರ್ಮಿಸಲಾಗಿತ್ತು. ನಂತರ ಒಂದೇ ಮಳೆಗೆ ರಸ್ತೆ ಹಾಳಾಗಿತ್ತು. ತಾತ್ಕಾಲಿಕವಾಗಿ ಸರಿಪಡಿಸಿ ಕಾರುಗಳ ಸಂಚಾರ ನಿಷೇಧಿಸಿ ದ್ವಿಚಕ್ರ ವಾಹನ, ಆಟೊ ಸಂಚಾರಕ್ಕೆ ಅವಕಾಶ ಮಾಡಿಕೊಡಲಾಗಿತ್ತು. ಈಗ ರಸ್ತೆ ಕೊಚ್ಚಿಕೊಂಡು ಹೋಗಿದ್ದು, ಹನುಮಂತಪುರದ ಮೂಲಕ ಸುತ್ತಿ ಬಳಸಿಕೊಂಡು ಶಿರಾಗೇಟ್ ತಲುಪಬೇಕಿದೆ.

ಮೇ 2ರಂದು ಶಿರಾಗೇಟ್ ರಸ್ತೆ ಬಂದ್ ಮಾಡಿದ್ದ ಸಮಯದಲ್ಲಿ 120 ದಿನಗಳಲ್ಲಿ ಸೇತುವೆ ಕಾಮಗಾರಿ ಪೂರ್ಣಗೊಳಿಸಲಾಗುವುದು ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಭರವಸೆ ನೀಡಿದ್ದರು. ಅದರಂತೆ ಆಗಸ್ಟ್ ಅಂತ್ಯಕ್ಕೆ ಕೆಲಸ ಪೂರ್ಣಗೊಳ್ಳಬೇಕಿತ್ತು. ಆದರೆ ಇನ್ನೂ ಸಾಕಷ್ಟು ಕಾಮಗಾರಿ ಬಾಕಿ ಉಳಿದಿದ್ದು, ಪೂರ್ಣಗೊಳಿಸಲು ಒಂದೆರಡು ತಿಂಗಳು ಬೇಕಾಗುತ್ತದೆ.

ವಾಹನ ಸಂಚಾರ ನಿಲ್ಲಿಸಿದ್ದರೂ ಕಾಮಗಾರಿ ಬಿರುಸಾಗಿ ನಡೆಯುತ್ತಿಲ್ಲ. ಆಮೆ ವೇಗದಲ್ಲಿ ನಡೆಯುತ್ತಿರುವ ಕಾಮಗಾರಿ ಚುರುಕುಗೊಳಿಸಲು ಜಿಲ್ಲಾಧಿಕಾರಿ ಕ್ರಮ ಕೈಗೊಳ್ಳಬೇಕು. ಕೊಟ್ಟ ಮಾತು ಉಳಿಸಿಕೊಳ್ಳಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

**ಶಿರಾಗೇಟ್ ರಸ್ತೆಯಲ್ಲಿ ನಿರ್ಮಿಸುತ್ತಿರುವ ಸೇತುವೆ ಕಾಮಗಾರಿ ಸೆ. 15ರ ಒಳಗೆ ಪೂರ್ಣಗೊಳ್ಳಲಿದ್ದು ನಂತರ ಜನರ ಸಂಚಾರಕ್ಕೆ ಮುಕ್ತವಾಗಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಜಿ.ಪರಮೇಶ್ವರ ಹೇಳಿದರು. ಭರ್ತಿಯಾಗಿರುವ ಅಮಾನಿಕೆರೆಗೆ ಬುಧವಾರ ಬಾಗಿನ ಅರ್ಪಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿ ಸೇತುವೆ ಕಾಮಗಾರಿ ಪ್ರಗತಿ ಪರಿಶೀಲಿಸಿದ್ದೇನೆ. ನಿಗದಿತ ಸಮಯಕ್ಕೆ ಕೆಲಸ ಪೂರ್ಣಗೊಳಿಸುವುದಾಗಿ ಗುತ್ತಿಗೆದಾರ ಹೇಳಿದ್ದಾರೆ. ಮತ್ತೆ ವಿಳಂಬವಾಗುವುದಿಲ್ಲ**
**-ಜಿ.ಪರಮೇಶ್ವರ, ಜಿಲ್ಲಾ ಉಸ್ತುವಾರಿ ಸಚಿವ**


ಉದಯವಾಹಿನಿ ಚಿತ್ರ

### ನೀರಿನ ಹರಿವು ಹೆಚ್ಚಳ

ಎರಡು ದಶಕಗಳ ನಂತರ 2021 ನವೆಂಬರ್ ನಲ್ಲಿ ಅಮಾನಿಕೆರೆ ಭರ್ತಿಯಾಗಿ ಕೋಡಿ ಹರಿದಿತ್ತು. ಈಗ ಎರಡು ವರ್ಷಗಳ ನಂತರ ಮಳೆ ನೀರಿನಿಂದ ಮತ್ತೊಮ್ಮೆ ಭರ್ತಿಯಾಗಿದೆ. ಕಳೆದ ಕೆಲ ದಿನಗಳಿಂದ ನಗರ ಹಾಗೂ ಸುತ್ತಮುತ್ತಲಿನ ಪ್ರದೇಶದಲ್ಲಿ ಉತ್ತಮ ಮಳೆಯಾಗುತ್ತಿದ್ದು ಕೆರೆಗೆ ನೀರು ಹರಿದು ಬರುವ ಪ್ರಮಾಣವೂ ಹೆಚ್ಚಾಗಿದೆ. ಇದೇ ರೀತಿ ಮಳೆಯಾದರೆ ಕೆರೆ ಕೋಡಿಯಲ್ಲಿ ನೀರಿನ ಹರಿವು ಮತ್ತಷ್ಟು ಹೆಚ್ಚಳವಾಗಲಿದೆ.

**ಸದ್ಯಕ್ಕೆ ತಾತ್ಕಾಲಿಕ ರಸ್ತೆ ನಿರ್ಮಾಣ ಸಾಧ್ಯವಾಗುತ್ತಿಲ್ಲ**

---

# ಸಿಸಿ ರಸ್ತೆ ಕಾಮಗಾರಿಗೆ ಚಾಲನೆ

• **ಉದಯವಾಹಿನಿ, ಮುಳಬಾಗಿಲು**

ತಾಲ್ಲೂಕಿನ ಸಾತನೂರು ಗ್ರಾಮದಲ್ಲಿ ಸಿಸಿ ರಸ್ತೆ ಕಾಮಗಾರಿಗೆ ಶಾಸಕ ಸಮೃದ್ಧಿ ಮಂಜುನಾಥ್ ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಅವರು, 'ತಾಲ್ಲೂಕಿನಾದ್ಯಂತ ಕೇಂದ್ರ ಸರ್ಕಾರದಿಂದ 50 ಕಿ.ಮೀ ಹಾಗೂ ರಾಜ್ಯ ಸರ್ಕಾರದಿಂದ 25 ಕಿ.ಮೀ ರಸ್ತೆ ಕಾಮಗಾರಿಗೆ ಅವಕಾಶ ಸಿಕ್ಕಿದೆ' ಎಂದು ಹೇಳಿದರು.

ಸಾತನೂರು ಗ್ರಾಮದಲ್ಲಿ ಈಗಾಗಲೇ ವಾಲ್ಮೀಕಿ ಭವನ ಹಾಗೂ ಹೈಮಾಸ್ಟ್ ದೀಪ ಅಳವಡಿಸಲಾಗಿದೆ. ಸಾರ್ವಜನಿಕರ ಸುಗುಮ ಸಂಚಾರಕ್ಕಾಗಿ ರಸ್ತೆ ಕಾಮಗಾರಿ ಕೈಗೊಳ್ಳಲಾಗಿದೆ.

ಗ್ರಾಮಕ್ಕೆ ಅಗತ್ಯವಿರುವ ಎಲ್ಲಾ ಸೌಲಭ್ಯಗಳನ್ನು ಒದಗಿಸಲಾಗುವುದು ಎಂದರು. ಸಾತನೂರು–ಬಿಸನಹಳ್ಳಿ ಮಧ್ಯೆ ಸುಸಜ್ಜಿತವಾದ ರಸ್ತೆ ಇಲ್ಲದೆ ಜನ ಹಲವು ದಿನ ಪರದಾಡುತ್ತಿದ್ದರು. ಇದನ್ನು ಗಮನಿಸಿ ಒಂದು ಕಿ.ಮೀ ವ್ಯಾಪ್ತಿಯಲ್ಲಿ ರಸ್ತೆ ದುರಸ್ತಿಗೊಳಿಸಲಾಗುತ್ತಿದೆ ಎಂದರು. ಇತ್ತೀಚೆಗೆ ಮುಳಬಾಗಿಲು ನಗರದಲ್ಲಿ ಶಿಕ್ಷಕಿ ದಿವ್ಯಶ್ರೀ ಅವರ ಕೊಲೆ ನಡೆದಿದೆ.

ಈ ಹಿನ್ನೆಲೆಯಲ್ಲಿ 23ರಂದು ಎಲ್ಲಾ ಪ್ರಾಥಮಿಕ ಶಾಲಾ ಶಿಕ್ಷಕರು ಸೇರಿ ಬೃಹತ್ ಮಟ್ಟದ ಶ್ರದ್ಧಾಂಜಲಿ ಕಾರ್ಯಕ್ರಮ ಏರ್ಪಡಿಸಲಾಗುವುದು. ಈ ಮೂಲಕ ಮೃತರ ಆತ್ಮಕ್ಕೆ ಶಾಂತಿ ಕೋರಲಾಗುವುದು ಎಂದು ಹೇಳಿದರು.

ಸಾಮೇಗೌಡ, ಚಾಮರೆಡ್ಡಿಹಳ್ಳಿ ಪ್ರಕಾಶ್, ಮುನಿಸ್ವಾಮಿ ಗೌಡ, ಗೊಲ್ಲಹಳ್ಳಿ ಜಗದೀಶ್, ತಹಶೀಲ್ದಾರ್ ಬಿ.ಸಿ. ವೆಂಕಟಾಚಲಪತಿ, ತಾಲ್ಲೂಕು ಕಾರ್ಯನಿರ್ವಾಹಕ ಅಧಿಕಾರಿ ಸರ್ವೇಶ್ ಇದ್ದರು.

ಅಂತರಾಳದಿಂದ... EDITORIAL

# ಆಸ್ಪತ್ರೆಗಳಲ್ಲಿ ರೋಗಿಗಳ ಸುರಕ್ಷತೆಗೂ ಆದ್ಯತೆ ಸಿಗಲಿ

ದೇಶವನ್ನು ತಲ್ಲಣಗೊಳಿಸಿರುವ ಕೋಲ್ಕತಾ ಕಿರಿಯ ವೈದ್ಯೆಯ ಅತ್ಯಾಚಾರ, ಕೊಲೆ ಪ್ರಕರಣ ಹಲವು ತಿರುವುಗಳನ್ನು ಪಡೆದುಕೊಂಡಿದೆ. ಈಗಾಗಲೇ ವೈದ್ಯರು ಸಂಘಟಿತರಾಗಿ ದೇಶಾದ್ಯಂತ ಪ್ರತಿಭಟನೆಯನ್ನು ನಡೆಸಿದ್ದಾರೆ. ವೈದ್ಯರು ಮತ್ತು ಆರೋಗ್ಯ ಪಾಲನಾ ಸಿಬ್ಬಂದಿಯ ಸುರಕ್ಷತೆಯ ಬಗ್ಗೆ ದೇಶಾದ್ಯಂತ ಭಾರೀ ಆತಂಕಗಳು ವ್ಯಕ್ತವಾಗಿವೆ. ಪಶ್ಚಿಮಬಂಗಾಳದಲ್ಲಿ ವಿರೋಧ ಪಕ್ಷಗಳು ಈ ಪ್ರಕರಣವನ್ನು ಮಮತಾ ಬ್ಯಾನರ್ಜಿಯ ವಿರುದ್ಧ ಅಸ್ತ್ರವಾಗಿ ಬಳಸುತ್ತಿದ್ದಾರೆ. ಬಹುಶಃ ನಿರ್ಭಯಾ ಪ್ರಕರಣದ ಬಳಿಕ ಅತಿ ಹೆಚ್ಚು ಸದ್ದು ಮಾಡಿದ ಪ್ರಕರಣ ಇದು. ಈ ಪ್ರಕರಣವನ್ನು ಇದೀಗ ಸುಪ್ರೀಂಕೋರ್ಟ್ ಸ್ವಯಂಪ್ರೇರಿತವಾಗಿ ವಿಚಾರಣೆಗೆ ಎತ್ತಿಕೊಂಡಿದೆ. ಅಷ್ಟೇ ಅಲ್ಲ ವೈದ್ಯರು, ಆರೋಗ್ಯ ಪಾಲನಾ ಸಿಬ್ಬಂದಿಯ ಸುರಕ್ಷತೆಗೆ ರಾಷ್ಟ್ರೀಯ ಕಾರ್ಯಪಡೆ ರಚನೆಯನ್ನು ಮಾಡಿದೆ. ಕಾರ್ಯಪಡೆಯು ದೇಶಾದ್ಯಂತ ಆಸ್ಪತ್ರೆಗಳಲ್ಲಿ ಸಿಬ್ಬಂದಿಯ ಸುರಕ್ಷತೆ, ಭದ್ರತೆ ಹಾಗೂ ಸೌಲಭ್ಯಗಳನ್ನು ಖಾತರಿ ಪಡಿಸಲು ಮಾರ್ಗದರ್ಶಿ ಸೂತ್ರಗಳನ್ನು ರೂಪಿಸಲಿದೆ. ವೈದ್ಯಕೀಯ ಸಿಬ್ಬಂದಿಯ ಕರ್ತವ್ಯ ನಿರ್ವಹಣೆಗೆ ಸುರಕ್ಷಿತ ಪರಿಸ್ಥಿತಿಯನ್ನು ರೂಪಿಸುವುದಕ್ಕೆ ರಾಷ್ಟ್ರೀಯ ನಿಯಮಾವಳಿಯೊಂದನ್ನು ರೂಪಿಸಬೇಕಾಗಿದೆ ಎಂದೂ ನಾಯಪೀಠ ಅಭಿಪ್ರಾಯ ಪಟಿದೆ.

> **ಚಂಡಿಗದರ ರೋಹಕ್ಕ ವೈದ್ಯಕೀಯ ಕಾಲೇಜೊಂದರ ವಿದ್ಯಾರ್ಥಿನಿಯ ಮೇಲೆ ವೈದ್ಯನೊಬ್ಬ ಹಲ್ಲೆ ದೌರ್ಜನ್ಯಗಳನ್ನು ಎಸಗಿರುವ ಬಗ್ಗೆ ಕಳೆದ ವಾರ ದೂರು ದಾಖಲಾಗಿದ್ದು ವೈದ್ಯನನ್ನು ಬಂಧಿಸಲಾಗಿದೆ ಸುಮಾರು ಎಳು ತಿಂಗಳಿನಿಂದ ಆಕೆಗೆ ವೈದ್ಯ ದೌರ್ಜನ್ಯ ಎಸಗುತ್ತಿರುವುದು ಬೆಳಕಿಗೆ ಬಂದಿದೆ. ಇಂದಿನ ದಿನಗಳಲ್ಲಿ ಆಸ್ಪತ್ರೆ ಬರೇ ಸೇವಾ ಸಂಸ್ಥೆಯಾಗಿ ಉಳಿದಿಲ್ಲ ಅದು ಬೃಹತ್ ಕಾರ್ಪೋರೇಟ್ ಉದ್ಯಮ ಸಂಸ್ಥೆಯಾಗಿ ಪರಿವರ್ತನೆಯಾಗಿದೆ. ಖಾಗಿ ಆಸ್ಪತ್ರೆಗಳು ರೋಗಿಗಳನ್ನು ಹಲವು ಬಗೆಯಲ್ಲಿ ಶೋಷಣೆಗೀಡು ಮಾಡುತ್ತಿವೆ.**

ಆದರೆ ಈ ಪ್ರಕರಣ, ವೈದ್ಯರ ಮೇಲೆ ಹೊರಗಿನ ಶಕ್ತಿಗಳಿಂದ ನಡೆದ ದಾಳಿ ಎಂಬ ನಿರ್ಧಾರಕ್ಕೆ ಮೊದಲೇ ಬರುವಂತಿಲ್ಲ ಸಂತ್ರಸ್ತ ವೈದ್ಯ ಕರ್ತವ್ಯ ನಿರ್ವಹಿಸುತ್ತಿದ್ದ ಆಸ್ಪತ್ರೆಯ ಮೇಲೆಯೇ ಆರೋಪಗಳು ಕೇಳಿ ಬರುತ್ತಿವೆ. ಆರ್.ಜಿ. ಕರ್ ಆಸ್ಪತ್ರೆಯ ಹಣಕಾಸು ಕಾಲೇಜು ಮತ್ತು ಆಸತ್ರೆಯ ಮಾಜಿ ಪ್ರಾಂಶುಪಾಲ ಸಂದೀಪ್ ಘೋಷ್ ಮೃತ ದೇಹಗಳ ಮಾರಾಟ ಸೇರಿದಂತೆ ಹಲವಾರು ಅಕ್ರಮ ಚಟುವಟಿಕೆಗಳಲ್ಲಿ ಶಾಮೀಲಾಗಿದ್ದಾರೆ ಎಂದು ಆಸ್ಪತ್ರೆಯ ಮಾಜಿ ಉದ್ಯೋಗಿಯೊಬ್ಬರು ಆರೋಪಿಸಿದ್ದಾರೆ. ಅತ್ಯಾಚಾರ-ಕೊಲೆ ಘಟನೆಯ ಬಳಿಕ ಸಂದೀಪ್ ಘೋತ್ರ ಸಂಶಯಾಸ್ಪದ ವರ್ತನೆಗಳ ಹಿನ್ನೆಲೆಯಲ್ಲಿ ಅವರನ್ನು ಸಿಬಿಐ ವಿಚಾರಣೆಗೆ ಒಳಪಡಿಸಿದೆ ವೈದ್ಯೆಯ ಮೇಲೆ ನಡೆದ ಅತ್ಯಾಚಾರ, ಆನಂತರದ ಕೊಲೆಯಲ್ಲಿ ಆಸ್ಪತ್ರೆಯ ಪಾಲಿದೆಯೇ ಎನ್ನುವುದೂ ತನಿಖೆಗೊಳಪಡುತ್ತಿದೆ ಇಷ್ಟಕ್ಕೂ ಆಸ್ಪತ್ರೆಗಳಲ್ಲಿ ವೈದ್ಯರಿಗೆ ಅಪಾಯವಿರುವುದು ಸಾರ್ವಜನಿಕರಿಂದ ಮಾತ್ರವೇ ಅಲ್ಲ ಸ್ವತಃ ಆಸ್ಪತ್ರೆಯೊಳಗಿರುವ ಶಕ್ತಿಗಳಿಂದಲೂ ಅಪಾಯಗಳಿವೆ ಇದು ಹಲವು ಪ್ರಕರಣಗಳಲ್ಲಿ ಈಗಾಗಲೇ ಸಾಬೀತಾಗಿದೆ ಉತ್ತರ ಪ್ರದೇಶದ ಖಾಸಗಿ ಆಸ್ಪತ್ರೆಯೊಂದರಲ್ಲಿ ದಲಿತ ಸಮುದಾಯಕ್ಕೆ ಸೇರಿದ ದಾದಿಯೊಬ್ಬಳ ಮೇಲೆ ವೈದ್ಯನೇ ಅತ್ಯಾಚಾರ ನಡೆಸಿರುವ ಘಟನೆ ಎರಡು ದಿನಗಳ ಹಿಂದೆ ನಡೆದಿದೆ. ಸಂಬಂಧ ಮೂವರನ್ನು ಈಗಾಗಲೇ ಬಂಧಿಸಲಾಗಿದೆ. ಆದರೆ ಇದು ಸಾಧಾರಣವಾಗಿ ಬೆಳಕಿಗೆ ಬರುವುದೇ ಇಲ್ಲ. ನಡೆಯುವ ಅಕ್ರಮಗಳ ವಿರುದ್ಧ ಧ್ವನಿಯತ್ತುವ ವೈದ್ಯರನ್ನು ಅತ್ಯಂತ ಭೀಕರವಾಗಿ ದಮನ ಮಾಡಲಾಗುತ್ತದೆ. ಇದೇ ಸಂದರ್ಭದಲ್ಲಿ ಖಾಸಗಿ ಆಸ್ಪತ್ರೆಗಳಲ್ಲಿ ವರ್ಷಗಳನ್ನು ಅತ್ಯಂತ ಕೇವಲವಾಗಿ ನಡೆಸಿಕೊಳ್ಳಲಾಗುತ್ತದೆಯಾದರೂ ಇದರ ವಿರುದ್ಧ ಧ್ವನಿಯೆತ್ತುವ ಧೈರ್ಯ ಅವರಿಗಿರುವುದಿಲ್ಲ. ಅತ್ಯಂತ ಕಡಿಮೆ ವೇತನ, ಅತಿ ಹೆಚ್ಚು ದುಡಿಮೆ ರಾತ್ರಿ ಪಾಳಿಯಲ್ಲಿ ಅನುಭವಿದಿದ ಹಿಂಸೆ ಇವೆಲ್ಲವುಗಳನ್ನು ಅವರು ಅನಿವಾರ್ಯವಾಗಿ ಸಹಿಸಬೇಕಾಗುತ್ತದೆ. ಅನೇಕ ಸಂದರ್ಭದಲ್ಲಿ ಹಿರಿಯ ವೈದ್ಯರು ಮಾಡುವ ತಪ್ಪುಗಳ ಹೊಣೆಯನ್ನು ಕಿರಿಯ ವೈದ್ಯರು ಹೊರಬೇಕಾಗುತ್ತದೆ. ಕಿರಿಯ ವಿದ್ಯಾರ್ಥಿನಿಯರ ಭವಿಷ್ಯ ಹಿರಿಯ ವೈದ್ಯರ ಕೈಯಲ್ಲಿರುವುದರಿಂದ ಅವರು ಹೇಳಿದ್ದನ್ನೆಲ್ಲ ಶಿರಸಾವಹಿಸಿ ಪಾಲಿಸುವುದು ಅನಿವಾರ್ಯವಾಗುತ್ತದೆ ವೈದ್ಯರು. ಆರೋಗ್ಯ ಪಾಲನಾ ಸಿಬ್ಬಂದಿಯ ರಕ್ಷಣೆಯ ಸುಪ್ರೀಂಕೋರ್ಟ್ ಈ ಬಗ್ಗೆಯೂ ಕ್ರಮ ತೆಗೆದುಕೊಳ್ಳಬೇಕು ಮುಖ್ಯವಾಗಿ ಆಸ್ಪತ್ರೆಯೊಳಗೆ ಸಂಸ್ಥೆಯ ಮುಖ್ಯಸ್ಥರು, ಹಿರಿಯ ವೈದ್ಯರು, ಸಹ ವೈದ್ಯರಿಂದ ಮಹಿಳಾ ವೈದ್ಯರಿಗೆ, ದಾದಿಯರಿಗೆ ರಕ್ಷಣೆ ಸಿಗಬೇಕಾಗಿದೆ. ಇದಕ್ಕೆ ಮೊದಲ ಆದ್ಯತೆಯನ್ನು ನೀಡಬೇಕು. ಮೊದಲು ತಮ್ಮವರಿಂದ ರಕ್ಷಣೆ ಪಡೆಯುವಲ್ಲಿ ಈ ಮಹಿಳಾ ವೈದ್ಯರು ಯಶಸ್ವಿಯಾಗಬೇಕಾಗಿದೆ.

## ರಾಯರ 353ನೇ ಆರಾಧನಾ ಮಹೋತ್ಸವ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಬೆಂಗಳೂರಿನ ಬುಲ್ ಟೆಂಪಲ್ ರಸ್ತೆಯಲ್ಲಿ ಇರುವ ಅಖಿಲ ಭಾರತ ಶ್ರೀ ರಾಘವೇಂದ್ರ ಸೇವಾ ಸಮಿತಿ ಟ್ರಸ್ಟ್ ನ ನವಮಂತ್ರಾಲಯ ಮಂದಿರದಲ್ಲಿ ರಾಯರ 353 ನೇ ಆರಾಧನಾ ಮಹೋತ್ಸವವನ್ನು ವಿಜೃಂಭಣೆಯಿಂದ ಆಚರಿಸಲಾಯಿತು, ಮೂರು ದಿನಗಳ ಆರಾಧನಾ ಮಹೋತ್ಸವದಲ್ಲಿ ಸುಮಾರು 20 ಸಾವಿರಕ್ಕೂ ಹೆಚ್ಚಿನ ಭಕ್ತಾದಿಗಳು ಭಾಗವಹಿಸಿದ್ದು ಸರ್ವರಿಗೂ ಮಹಾ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು,




• ಹಿಂದಿನ ಸಂಚಿಕೆಯಿಂದ

ಹದಿನೈದು ವರ್ಷಗಳು ಕಳೆದವು. ಆದರ್ಶಪುರುಷನೆನ್ನಿಸಿಕೊಂಡ ಯುಧಿಷ್ಠಿರನ ರಾಜ್ಯಾಡಳಿತವೂ ಅದರ್ಶಪ್ರಾಯವಾಗಿತ್ತು. ಯುಧಿಷ್ಠಿರನು ವ್ಯಾಸನ ಸಲಹೆಯಂತೆ ಪಾಚಾರ್ಯನನ್ನು ಪರೀಕ್ಷಿತ್ತಿಗೆ ಗುರುವಾಗಿ ನಿಯಮಿಸಿದನು. ರಾಜನು ಬಹು ಸಮರ್ಥನಾಗಿದ್ದುದರಿಂದ ಹಸ್ತಿನಾವತಿಯ ಜನರೆಲ್ಲರೂ ಸುಖವಾಗಿದ್ದರು.

ತರಾಷ್ಟ್ರನಿಗೆ ಮಾತ್ರ ಸುಖವಿರಲಿಲ್ಲ. ಯುಧಿಷ್ಠಿರನೇನೋ ಅವನನ್ನು ಮಹಾರಾಜನೆಂದು ಗೌರವಿಸುತ್ತ ತಂದೆಯೆಂಬಂತೆ ಪ್ರೀತಿಸುತ್ತಿದ್ದರೂ, ಮುದುಕನು ಯಾವಾಗಲೂ ಗತಿಸಿದ ತನ್ನ ಮಗ ದುರ್ಯೋಧನನನ್ನೇ ಚಿಂತಿಸುತ್ತಿದ್ದನು. ಮಗನು ಗತಿಸಿದ ಕೊರಗನ್ನು ಮರೆಯಲಾರದ ಅವನು ವಾನಪ್ರಸ್ಥಕ್ಕಾಗಿ ಹಂಬಲಿಸತೊಡಗಿದ್ದನು. ಗಾಂಧಾರಿಯೂ ಇದೇ ತೀರ್ಮಾನಕ್ಕೆ ಬಂದಿದ್ದಳು. ಒಂದು ಕಾಲದಲ್ಲಿ ತನ್ನ ಮಗನ ಆಳ್ವಿಕೆಯಿದ್ದ ಈ ನಗರವನ್ನು ಬಿಟ್ಟುಹೋಗಬೇಕೆಂದು ಇಬ್ಬರೂ ಬಯಸಿದರು. ಯುಧಿಷ್ಠಿರನನ್ನು ಕರೆಸಿ ತನ್ನ ಅಭಿಪ್ರಾಯವನ್ನು ತಿಳಿಸಲು, ದೊಡ್ಡಪ್ಪನ ಧೋರಣೆಯನ್ನು ಕಂಡು ಅವನಿಗೆ ಬಹಳ ಬೇಜಾರಾಯಿತು. ಎಷ್ಟು ಸಮಾಧಾನ ಹೇಳಿದರೂ ಒಪ್ಪದ ತರಾಷ್ಟ

ನದು ಒಂದೇ ಹಟ. ಕೊನೆಗೆ ವ್ಯಾಸನು ಬಂದು ಯುಧಿಷ್ಠಿರನಿಗೆ ದೊಡ್ಡಪ್ಪನನ್ನು ಅರಣ್ಯವಾಸಕ್ಕೆ ತೆರಳಲು ಬಿಡುವುದೇ ಉಚಿತ ಎಂದು ಸಲಹೆಮಾಡಿದನು. ಪ್ರಾಪಂಚಿಕ ಆಸೆಗಳನ್ನೆಲ್ಲ ತೊರೆದು ದ್ಧಾಪ್ಯದಲ್ಲಿ ವಾನಪ್ರಸ್ಥರಾಗುವುದು ಸಂಪ್ರದಾಯವೇ

ಆಗಿದ್ದಿತು. ಇದರಿಂದಾಗಿ, ಇಷ್ಟವಿಲ್ಲದಿದ್ದರೂ ಕೊನೆಗೆ ಯುಧಿಷ್ಠಿರನು ತರಾಷ್ಟ್ರನ ಮಾತಿಗೆ ಒಪ್ಪಬೇಕಾಯಿತು. ಅದರೆ ಕುಂತಿಯೂ ಅವರಿಬ್ಬರೊಟ್ಟಿಗೆ ತಾನೂ ಹೋಗುವೆನೆಂದಾಗ, ಯುಧಿಷ್ಠಿರನಿಗೆ ಆಘಾತವಾಯಿತು. ಪಾಂಡವರು ದ್ರೌಪದಿ ಸುಭದ್ರೆ ಉತ್ತರೆ ಎಲ್ಲರೂ ವಿಧವಿಧವಾಗಿ ಮನವೊಲಿಸಲೆತ್ನಿಸಿದರೂ ಕುಂತಿ ಕೇಳಲಿಲ್ಲ. ತಾನು ರಾಧೇಯನಿಗೆ ಮಾಡಿದ ಅನ್ಯಾಯದ ಪಾಪವನ್ನು ತಪಸ್ಸಿನಿಂದ ಪರಿಹರಿಸಿಕೊಳ್ಳಬೇಕು ಎಂಬುದು ಅವಳ ಒಂದೇ ಮಾತು. ಕೊನೆಗೂ ಅವಳನ್ನೂ ಪಾಂಡವರು ಕಳುಹಿಸಬೇಕಾಯಿತು. ಜೊತೆಯಲ್ಲಿ ವಿದುರ ಸಂಜಯರೂ ಹೊರಟರು. ಮಾರನೆಯ ಬೆಳಗ್ಗೆ, ಪುರಜನರೆಲ್ಲ ದುಃಖಿಸುತ್ತಿರುವಾಗ ಈ ಐದು ಜನರೂ ಹಸ್ತಿನಾಪುರದಿಂದ ಗಂಗಾತೀರದ ವ್ಯಾಸಾಶ್ರಮದ ಕಡೆಗೆ ನಡೆದುಕೊಂಡೇ ಹೊರಟರು, ಅಲ್ಲಿ ಕೆಲವು ದಿನಗಳಿದ್ದು ಋಷಿಗಳ ಮಾತಿನಿಂದ ತಮ್ಮ ದಯದ ದುಃಖವನ್ನು ಕಡಿಮೆಮಾಡಿಕೊಳ್ಳುವ ಉದ್ದೇಶವು ಅವರಿಗಿದ್ದಿತು.

ಯುಧಿಷ್ಠಿರನಿಗೆ ತನ್ನ ತಾಯಿಯ ವಿಯೋಗವನ್ನು ಸಹಿಸುವುದು ಕಷ್ಟವಾಯಿತು. ಸಹದೇವನಿಗೂ ಹಾಗೆಯೇ ಅನಿಸತೊಡಗಿತು. ಒಂದು ದಿನ ಇದ್ದಕ್ಕಿದ್ದಂತೆ ಅವರು ಕಾಡಿಗೆ ಹೋಗಿ ತಮ್ಮ ತಾಯಿಯನ್ನೂ

**ಮುಂದುವರಿಯುವುದು...**

# ಶ್ರೀಕೃಷ್ಣಜಯಂತಿಯನ್ನು ಬಹಳ ವಿಜೃಂಭಣೆಯಿಂದ ಆಚರಣೆ

• ಉದಯವಾಹಿನಿ, ವಿಶೇಷ


ಉದಯವಾಹಿನಿ ಚಿತ್ರ

ಭಾರತದಲ್ಲಷ್ಟೇ ಅಲ್ಲ, ಸಂಪೂರ್ಣ ವಿಶ್ವದಲ್ಲಿ ಶ್ರೀಕೃಷ್ಣ ಜನ್ಮಾಷ್ಟಮಿ ಅರ್ಥಾತ್ ಶ್ರೀಕೃಷ್ಣ ಜಯಂತಿಯನ್ನು ಬಹಳ ವಿಜೃಂಭಣೆಯಿಂದ ಆಚರಿಸಲಾಗುತ್ತದೆ. ಶ್ರೀಕೃಷ್ಣಜನ್ಮಾಷ್ಟಮಿಯು ಒಂದು ಹಬ್ಬ, ವ್ರತ ಮತ್ತು ಉತ್ಸವವಾಗಿದೆ.

ಶ್ರೀಕೃಷ್ಣಜನ್ಮಾಷ್ಟಮಿಯ ಉತ್ಸವ : ಗೋಕುಲ, ಮಥುರಾ, ಬೃಂದಾವನ, ದ್ವಾರಕಾ, ಪುರಿ ಇವು ಶ್ರೀಕೃಷ್ಣನ ಉಪಾಸನೆಗೆ ಸಂಬಂಧಿಸಿದ ಪವಿತ್ರಸ್ಥಾನಗಳಾಗಿವೆ. ಇಲ್ಲಿ ಈ ಉತ್ಸವವನ್ನು ವಿಶೇಷ ರೂಪದಲ್ಲಿ ಆಚರಿಸಲಾಗುತ್ತದೆ. ಈ ದಿನ ಬೃಂದಾವನದಲ್ಲಿ ಡೋಲೋತ್ಸವವಾಗುತ್ತದೆ. ಅದು ನೋಡಲು ಆನಂದದಾಯಕವಾಗಿರುತ್ತದೆ. ಇತರ ಕ್ಷೇತ್ರಗಳ ಅನೇಕ ಸ್ಥಳಗಳಲ್ಲಿ ಶ್ರೀಕೃಷ್ಣನ ದೇವಾಲಯದಲ್ಲಿ ಈ ಉತ್ಸವವನ್ನು ಆಚರಿಸಲಾಗುತ್ತದೆ. ಈ ದಿನ ಕೆಲವರು ತಮ್ಮ ಮನೆಯಲ್ಲಿಯೇ ಗೋಕುಲ-ಬೃಂದಾವನದಂತೆ ಪ್ರತಿರೂಪ ಮಾಡಿ ಶ್ರೀಕೃಷ್ಣನ ಜನ್ಮೋತ್ಸವವನ್ನು ಆಚರಿಸುತ್ತಾರೆ. ವೈಷ್ಣವ ಪಂಥೀಯರು ಈ ದಿನವನ್ನು ಅತೀವ ಭಕ್ತಿಭಾವದಿಂದ ಆಚರಿಸುತ್ತಾರೆ. ಅನೇಕ ವೈಷ್ಣವ ದೇವಾಲಯಗಳಲ್ಲಿ ದೀಪಾರಾಧನೆ, ಶೋಭಾಯಾತ್ರೆ, ಕೃಷ್ಣಲೀಲೆ, ಭಾಗವತ ಪಠಣ, ಕೀರ್ತನೆ, ಭಜನೆ, ನೃತ್ಯ-ಗಾಯನ ಇತ್ಯಾದಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತದೆ. ಈ ಕಾರ್ಯಕ್ರಮವು ಶ್ರಾವಣ ಕೃಷ್ಣ ಪಾಡ್ಯದಿಂದ ಶ್ರಾವಣ ಕೃಷ್ಣಾಷ್ಟಮಿಯವರೆಗೂ ನಡೆಯುತ್ತದೆ.

**ಕೀರ್ತನೆ, ಭಜನೆ, ನೃತ್ಯ-ಗಾಯನ ಕಾರ್ಯಕ್ರಮ**

**ಶ್ರೀಕೃಷ್ಣಜನ್ಮಾಷ್ಟಮಿ ವ್ರತ:** ಈ ವ್ರತವನ್ನು ಅಷ್ಟಮಿಯಂದು ಮಾಡಲಾಗುತ್ತದೆ ಮತ್ತು ಎರಡನೆಯ ದಿನ ಅರ್ಥಾತ್ ಶ್ರಾವಣ ಕೃಷ್ಣ ನವಮಿಯಂದು ಪಾರಾಯಣ ಮಾಡಿ ವ್ರತವನ್ನು ಸಂಪನ್ನಗೊಳಿಸುತ್ತಾರೆ. ಈ ವ್ರತವು ಎಲ್ಲರೂ ಮಾಡುವಂತಹದ್ದಾಗಿದೆ.

ಈ ವ್ರತವನ್ನು ಮಕ್ಕಳು, ಯುವಕರು, ವೃದ್ಧರು, ಸ್ತ್ರೀ- ಪುರುಷರು ಎಲ್ಲರೂ ಮಾಡಬಹುದು. ಪಾಪನಾಶ, ಸೌಖ್ಯವೃದ್ಧಿ, ಸಂತತಿ-ಸಂಪತ್ತಿ ಮತ್ತು ವೈಕುಂಠ ಪ್ರಾಪ್ತಿಯು ಈ ವ್ರತದ ಫಲವಾಗಿದೆ.

ಶ್ರೀಕೃಷ್ಣಜನ್ಮಾಷ್ಟಮಿಯ ವ್ರತಕ್ಕೆ ಸಂಬಂಧಿಸಿದ ಉಪವಾಸ: ಈ ದಿನ ದಿನವಿಡೀ ಉಪವಾಸವನ್ನು ಮಾಡಲಾಗುತ್ತದೆ. ನಿರಾಹಾರ ಉಪವಾಸವು ಸಾಧ್ಯವಿಲ್ಲದಿದ್ದರೆ ಫಲಾಹಾರ ಮಾಡಬಹುದು. ಇದಕ್ಕೆ ಒಂದು ದಿನ ಮುಂಚೆ ಅರ್ಥಾತ್ ಶ್ರಾವಣ ಕೃಷ್ಣ ಸಪ್ತಮಿಯಂದು ಅಂಶಾತ್ಮಕ ಭೋಜನವನ್ನು ಮಾಡುತ್ತಾರೆ.

### ಶ್ರೀಕೃಷ್ಣಜನ್ಮಾಷ್ಟಮಿಯಂದು ಇವುಗಳನ್ನು ಮಾಡಿ

- 1. ತಮ್ಮ ಬಂಧು ಮಿತ್ರರಿಗೆ ಕಿರುಸಂದೇಶಗಳನ್ನು ಕಳುಹಿಸಿ ಅವರಿಗೆ ಶ್ರೀಕೃಷ್ಣನ ನಾಮಜಪವನ್ನು ಮಾಡಲು ಹೇಳಿರಿ
- 2. ಶ್ರೀಕೃಷ್ಣನ ದೇವಸ್ಥಾನದಲ್ಲಿ ಸ್ವಚ್ಛತೆಯ ಸೇವೆಯನ್ನು ಮಾಡಿ
- 3. ಶ್ರೀಕೃಷ್ಣನ ಅವಮಾನವಾಗುತ್ತಿರುವುದು ಕಂಡು ಬಂದಲ್ಲಿ ಅದನ್ನು ತಡೆಗಟ್ಟಿರಿ
- 4. ಈ ದಿನ ಕೃಷ್ಣತತ್ತ್ವವು ಹೆಚ್ಚು ಪ್ರಮಾಣದಲ್ಲಿರುವುದರಿಂದ ಅದನ್ನು ಗ್ರಹಿಸಲು 'ಓಂ ನಮೋ ಭಗವತೇ ವಾಸುದೇವಾಯ' ನಾಮಜಪವನ್ನು ಮಾಡಿ : ಶ್ರೀಕೃಷ್ಣ ಜಯಂತಿಯಂದು ಶ್ರೀಕೃಷ್ಣತತ್ತ್ವವು ಇತರ ದಿನಗಳ ತುಲನೆಯಲ್ಲಿ ಹೆಚ್ಚು ಪ್ರಮಾಣದಲ್ಲಿ ಅಂದರೆ 1ಸಾವಿರ ಪಟ್ಟು ಹೆಚ್ಚು ಕಾರ್ಯನಿರತವಾಗಿರುತ್ತದೆ. ಆದುದರಿಂದ ಶ್ರೀಕೃಷ್ಣನ ಚೈತನ್ಯದಾಯಕ ತತ್ತ್ವಲಹರಿಗಳು ಪೃಥ್ವಿಯ ಮೇಲೆ ಹೆಚ್ಚು ಪ್ರಮಾಣದಲ್ಲಿ ಆಕರ್ಷಿತವಾಗುತ್ತವೆ. ಈ ಲಹರಿಗಳಿಂದ ಜೀವಕ್ಕೆ ವ್ಯಾವಹಾರಿಕ ಮತ್ತು ಆಧ್ಯಾತ್ಮಿಕ ಈ ಎರಡೂ ಸ್ತರಗಳಲ್ಲಿ ಲಾಭವಾಗುತ್ತದೆ. ಈ ಕಾರ್ಯನಿರತ ತತ್ತ್ವಲಹರಿಗಳ ಸಂಪೂರ್ಣ ಲಾಭವನ್ನು ಪಡೆದುಕೊಳ್ಳಲು ಈ ದಿನ 'ಓಂ ನಮೋ ಭಗವತೇ ವಾಸುದೇವಾಯ' ಈ ನಾಮಜಪವನ್ನು ಹೆಚ್ಚೆಚ್ಚು ಮಾಡಿರಿ.

ಶ್ರೀಕೃಷ್ಣಜನ್ಮಾಷ್ಟಮಿಯ ಪೂಜಾವಿಧಿ : ಶ್ರೀಕೃಷ್ಣ ಜಯಂತಿಯಂದು ಶ್ರೀಕೃಷ್ಣನ ವಿಶೇಷ ಪೂಜೆಯನ್ನು ಮಾಡಲಾಗುತ್ತದೆ. ಭಗವಾನ ಶ್ರೀಕೃಷ್ಣನು ಮಧ್ಯರಾತ್ರಿಯಲ್ಲಿ ಜನಿಸಿದ್ದನು. ಆದುದರಿಂದ ಶ್ರೀಕೃಷ್ಣನ ವಿಶೇಷ ಪೂಜೆಯನ್ನು ಮಧ್ಯರಾತ್ರಿಯಲ್ಲಿ ಮಾಡಲಾಗುತ್ತದೆ. ಮಧ್ಯರಾತ್ರಿ ಸ್ನಾನವನ್ನು ಮಾಡಿ ಪೂಜೆಯನ್ನು ಆರಂಭಿಸಲಾಗುತ್ತದೆ. 'ಭಗವಾನ ಶ್ರೀಕೃಷ್ಣನ ಜನ್ಮವಾಗಿದೆ' ಎಂಬ ಧಾರಣೆಯಿಂದ ಪೂಜೆಯನ್ನು ಮಾಡಬೇಕು.

ಕೃಷ್ಣಗಾಯತ್ರಿ, ದೇವಕೀನಂದನಾಯ ವಿದ್ಮಹೇ। ವಾಸುದೇವಾಯ ಧೀಮಹಿ। ತನ್ನೋ ಕೃಷ್ಣಃ ಪ್ರಚೋದಯಾತ್

**ಅರ್ಥ** : ನಾವು ದೇವಕೀಪುತ್ರ ಕೃಷ್ಣನನ್ನು ಅರಿತಿದ್ದೇವೆ. ವಾಸುದೇವನ ಧ್ಯಾನ ಮಾಡುತ್ತೇವೆ. ಆ ಕೃಷ್ಣನು ನಮ್ಮ ಬುದ್ಧಿಗೆ ಸತ್ ಪ್ರೇರಣೆ ಕೊಡಲಿ.

## ಚಿತ್ರಗಳ ಬಗ್ಗೆ ಹೇಳಿಕೆ: ರಿಷಬ್ ಶೆಟ್ಟಿಗೆ ಚೇತನ್ ಅಹಿಂಸಾ ತಿರುಗೇಟು

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ನಮ್ಮ ಭಾರತೀಯ ಚಿತ್ರಗಳಲ್ಲಿ ಅದರಲ್ಲೂ ಬಾಲಿವುಡ್ ಚಿತ್ರಗಳಲ್ಲಿ ಭಾರತವನ್ನು ಕೆಟ್ಟದಾಗಿ, ಕೇವಲವಾಗಿ ತೋರಿಸಿ, ಹೊರ ದೇಶಗಳಲ್ಲಿ ತೋರಿಸಿ ಅವಾರ್ಡ್ ಗೆದ್ದುಕೊಂಡು ಬಂದಿರುವುದನ್ನು ನಾನು ಗಮನಿಸಿದ್ದೇನೆ ಎಂದು ಹೇಳಿಕೆ ನೀಡಿರುವ ರಾಷ್ಟ್ರ ಪ್ರಶಸ್ತಿ ವಿಜೇತ ನಟ ರಿಷಬ್ ಶೆಟ್ಟಿ ವಿರುದ್ಧ ನಟ ಚೇತನ್ ಅಹಿಂಸಾ ಅಸಮಾಧಾನ ಹೊರಹಾಕಿದ್ದಾರೆ.

ಇಡೀ ಚಲನಚಿತ್ರೋದ್ಯಮವನ್ನು ಖಂಡಿಸುವುದು ಅಜ್ಞಾನವಾಗಿದೆ ಎಂದು ರಿಷಬ್ ಶೆಟ್ಟಿ ಹೇಳಿಕೆಯನ್ನು ವಿರೋಧಿಸಿದ್ದಾರೆ.

ಈ ಬಗ್ಗೆ ತಮ್ಮ ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿರುವ ನಟ ಚೇತನ್ ಅಹಿಂಸಾ, ಬಾಲಿವುಡ್ ಭಾರತವನ್ನು ಕೆಟ್ಟದಾಗಿ ತೋರಿಸುತ್ತದೆ ಎಂದು ರಿಷಬ್ ಶೆಟ್ಟಿ ಹೇಳಿದ್ದಾರೆ. ಕೆಲವು ಚಲನಚಿತ್ರಗಳಲ್ಲಿ ಪ್ರಸ್ತುತಪಡಿಸಲಾದ ಸಿದ್ಧಾಂತವನ್ನು ನೀವು ಒಪ್ಪುವುದಿಲ್ಲ ಎಂದು ಇಡೀ ಚಲನಚಿತ್ರೋದ್ಯಮವನ್ನು ಖಂಡಿಸುವುದು ಅಜ್ಞಾನವಾಗಿದೆ.

ವಾಣಿಜ್ಯಕವಾಗಿ ಯಶಸ್ವಿಯಾದ ಚಲನಚಿತ್ರಗಳನ್ನು ನಿರ್ದೇಶಿಸುವುದು ಸಮಾಜದ ಬಗ್ಗೆ ಒಳನೋಟವುಳ್ಳ ಆಲೋಚನೆಗಳನ್ನು ಹೊಂದಿರುವುದು ಎರಡು ಸಂಪೂರ್ಣವಾಗಿ ವಿಭಿನ್ನ ವಿಷಯಗಳು ಎಂಬುದನ್ನು ಈ ಹೇಳಿಕೆಯು ಮತ್ತೊಮ್ಮೆ ಸಾಬೀತುಪಡಿಸುತ್ತದೆ ಎಂದು ರಿಷಬ್ ಶೆಟ್ಟಿ ವಿರುದ್ಧ ಅಸಮಾಧಾನ ಹೊರಹಾಕಿದ್ದಾರೆ. ನಮ್ಮ ದೇಶ ನಮ್ಮ ಹೆಮ್ಮೆ, ನಮ್ಮ ರಾಜ್ಯ ನಮ್ಮ ಹೆಮ್ಮೆ, ನಮ್ಮ ಭಾಷೆ ನನಗೆ ಹೆಮ್ಮೆ, ಹೀಗಾಗಿ ನಾನ್ಯಾಕೆ ಇದನ್ನು ಪಾಸಿಟಿವ್‌ವಾಗಿ ಇದನ್ನು ತೆಗೆದುಕೊಂಡು ಹೋಗಬಾರದು. ನಮ್ಮಲ್ಲಿರುವ ವಿಚಾರಗಳನ್ನು, ಪಾಸಿಟಿವ್

> **ಮೆಟ್ರೋ ಸಾಗ ಯೂಟ್ಯೂಬ್ ಚಾನೆಲ್‌ಗೆ ನೀಡಿದ ಸಂದರ್ಶನದಲ್ಲಿ ಮಾತನಾಡಿದ್ದ ರಿಷಬ್ ಶೆಟ್ಟಿ, ಸಮಾಜದಲ್ಲಿರುವ ಆಗುಹೋಗುಗಳ ಬಗ್ಗೆ ಗಮನಿಸಬೇಕು. ಸಿನಿಮಾ ನನ್ನ ವೃತ್ತಿ ಆಗಿರುವುದರಿಂದ ಇದರ ಮೂಲಕ ಸಮಾಜಕ್ಕೆ ಉಪಯೋಗವಾಗುವ ಕೆಲಸ ಮಾಡುವ ಅವಕಾಶ ನನಗೆ ಇದೆ. ಏನೇ ಮಾಡಲು ಒಂದು ರೀತಿ- ನೀತಿ ಅಂತಾ ಇರುತ್ತದೆ. ನಮ್ಮ ಭಾರತೀಯ ಚಿತ್ರಗಳಲ್ಲಿ ಅದರಲ್ಲೂ ಬಾಲಿವುಡ್ ಚಿತ್ರಗಳಲ್ಲಿ ಭಾರತವನ್ನು ಕೆಟ್ಟದಾಗಿ, ಕೇವಲವಾಗಿ ತೋರಿಸಿ, ಹೊರ ದೇಶಗಳಲ್ಲಿ ತೋರಿಸಿ ಅವಾರ್ಡ್ ಗೆದ್ದುಕೊಂಡು ಬಂದಿರುವುದನ್ನು ನಾನು ಗಮನಿಸಿದ್ದೇನೆ ಎಂದರು.**

ಇರುವ ವಿಚಾರಗಳನ್ನು, ಪಾಸಿಟಿವ್ ಆಗಿಯೇ ಜನರಿಗೆ ತೋರಿಸಬಹುದಲ್ಲ, ನೆಗೆಟಿವಿಟಿಯನ್ನು ಬಿಟ್ಟು ಏನು ಮಾಡಲು ಸಾಧ್ಯವಿದೆ. ಈ ರೀತಿಯಾಗಿ ನಾನು ಯೋಚನೆ ಮಾಡುತ್ತೇನೆ ಎಂದು ಹೇಳಿಕೆ ನೀಡಿದ್ದರು. ಈ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿತ್ತು.

## ಬೆಂಗಳೂರು-ಟೋಕಿಯೋ ವಿಮಾನ ಪ್ರಯಾಣಿಕರ ಸಂಖ್ಯೆ ಏರಿಕೆ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಜಪಾನ್ ಏರ್‌ಲೈನ್ಸ್ (ಜೆಎಎಲ್) ಬೆಂಗಳೂರು ನಗರಕ್ಕೆ ಕೊಡುಗೆಯೊಂದನ್ನು ನೀಡಿದೆ. ಬೆಂಗಳೂರು-ಟೋಕಿಯೋ ಮಾರ್ಗದ ವಿಮಾನಗಳ ಸಂಖ್ಯೆಯನ್ನು ಹೆಚ್ಚಳ ಮಾಡಿದೆ. ಪ್ರಯಾಣಿಕರ ಸಂಖ್ಯೆ ಏರಿಕೆಯಾಗುತ್ತಿರುವ ಹಿನ್ನಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ. 2020ರಲ್ಲಿ ಬೆಂಗಳೂರು-ಟೋಕಿಯೋ ನಡುವೆ ನೇರ ವಿಮಾನ ಸೇವೆಯನ್ನು ಜೆಎಎಲ್ ಆರಂಭಿಸಿತ್ತು. ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣ, ಬೆಂಗಳೂರು ನಿರ್ವಹಣೆ ಮಾಡುವ ಬಿಎಲ್‌ಆರ್ ಈ ಕುರಿತು ಮಾಹಿತಿಯನ್ನು ಹಂಚಿಕೊಂಡಿದೆ. ಜಪಾನ್ ಏರ್‌ಲೈನ್ಸ್ (ಜೆಎಎಲ್) ಗ್ರೂಪ್‌ನ ಸೇವೆಯ ವಿಸ್ತರಣೆ ಕುರಿತು ಮಾಹಿತಿ ಹಂಚಿಕೊಳ್ಳಲು ಸಂತಸವಾಗುತ್ತಿದೆ ಎಂದು ಹೇಳಿದೆ.

ಬೇಡಿಕೆ ಹೆಚ್ಚಾಗುತ್ತಿರುವ ಹಿನ್ನಲೆ ಯಲ್ಲಿ ಜಪಾನ್ ಏರ್‌ಲೈನ್ಸ್ ಬೆಂಗಳೂರು-ಟೋಕಿಯೋ ಮಾರ್ಗದಲ್ಲಿ ವಾರದಲ್ಲಿ 5 ವಿಮಾನಗಳನ್ನು ಹಾರಾಟ ನಡೆಸಲಿದೆ. ಪ್ರಸ್ತುತ ಈ ಮಾರ್ಗದಲ್ಲಿ 3 ವಿಮಾನಗಳು ಸಂಚಾರ ನಡೆಸುತ್ತಿವೆ ಎಂದು ಪ್ರಕಟಣೆಯಲ್ಲಿ ಮಾಹಿತಿ ನೀಡಲಾಗಿದೆ.

**ಸೇವೆಯ ವಿಸ್ತರಣೆ ಕುರಿತು ಮಾಹಿತಿ**

**ಅತ್ಯಧಿಕ ಪ್ರಯಾಣಿಕರು:** ಬೆಂಗಳೂರು-ಟೋಕಿಯೋ ನಡುವೆ ವಾರದಲ್ಲಿ 5 ವಿಮಾನಗಳ ಹಾರಾಟ ಅಕ್ಟೋಬರ್ 2024ರಿಂದ ಆರಂಭವಾಗಲಿದೆ. ಈ ಘೋಷಣೆಯಿಂದ ದಕ್ಷಿಣ ಮತ್ತು ಮಧ್ಯ ಭಾರತದ ಹೆಬ್ಬಾಗಿಲು ಆಗಿರುವ ಬೆಂಗಳೂರು ನಗರಕ್ಕೆ ಹೆಚ್ಚು ಅನುಕೂಲವಾಗಲಿದೆ. ಬೆಂಗಳೂರು ಮತ್ತು ಸುತ್ತಮುತ್ತಲಿನ ಪ್ರದೇಶಗಳ ಜನರಿಗೆ ಸಹಾಯಕವಾಗಲಿದೆ ಎಂದು ನಿರೀಕ್ಷಿಸಲಾಗಿದೆ.

> **ಬೆಂಗಳೂರು-ಟೋಕಿಯೋ ನಡುವೆ ಹೆಚ್ಚಿನ ವಿಮಾನಗಳು ಹಾರಾಟ ನಡೆಸುವುದರಿಂದ ಕೇವಲ ಪ್ರಯಾಣಿಕರಿಗೆ ಅನುಕೂಲವಾಗುವುದಿಲ್ಲ. ಇದು ಆರ್ಥಿಕ ಬೆಳವಣಿಗೆಗೆ ಸಹಕಾರಿಯಾಗಲಿದೆ. ಅಲ್ಲದೆ ಬೆಂಗಳೂರು ನಗರವನ್ನು ವಿವಿಧ ನಗರದೊಂದಿಗೆ ಸಂಪರ್ಕಿಸುವ ನಮ್ಮ ಉದ್ದೇಶಕ್ಕೂ ಅನುಕೂಲವಾಗಲಿದೆ ಎಂದು ಹೇಳಿದ್ದಾರೆ.**

ದಕ್ಷಿಣ ಭಾರತದಲ್ಲಿಯೇ ಜಪಾನ್‌ಗೆ ನೇರ ವಿಮಾನ ಸೇವೆ ಹೊಂದಿರುವ ಏಕೈಕ ವಿಮಾನ ನಿಲ್ದಾಣ ಎಂಬ ಹೆಗ್ಗಳಿಕೆ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣ, ಬೆಂಗಳೂರು ಹೊಂದಿದೆ. ಜಪಾನ್ ಏರ್‌ಲೈನ್ಸ್ ಎರಡು ನಗರದ ನಡುವೆ ವಿಮಾನ ಸೇವೆಯನ್ನು ನೀಡುತ್ತಿದೆ. ಜೆಎಎಲ್ ಈ ಮಾರ್ಗದಲ್ಲಿ ಬೋಯಿಂಗ್ ಬಿ787-8 ವಿಮಾನದ ಸಂಚಾರ ನಡೆಸುತ್ತಿದೆ. ಈ ವಿಮಾನದಲ್ಲಿ 186 ಪ್ರಯಾಣಿಕರು ಸಂಚಾರವನ್ನು ನಡೆಸಬಹುದು. ಬೆಂಗಳೂರು ವಿಮಾನ ನಿಲ್ದಾಣದ ಸಿಒಒ ಸತ್ಯಕಿ ರಘುನಾಥ್ ಮಾತನಾಡಿ, ಜೆಎಎಲ್ ಬೆಂಗಳೂರು ವಿಮಾನ ನಿಲ್ದಾಣದ ಸೇವೆ ವಿಸ್ತರಣೆ ಮಾಡುತ್ತಿರುವುದಕ್ಕೆ ಸಂತಸವಾಗುತ್ತಿದೆ.

> **ದಕ್ಷಿಣ ಭಾರತದಲ್ಲಿ ಇತರ ನಗರಗಳ ವಿಮಾನ ನಿಲ್ದಾಣಗಳಿಗಿಂತ ಬೆಂಗಳೂರು ವಾತಾವರಣ ಜನಪ್ರಿಯವಾಗಿದೆ. ಐಟಿ-ಬಿಟಿ, ಆಟೋಮೊಬೈಲ್, ಸ್ಟಾರ್ಟ್ ಅಪ್ ಹಬ್ ಆಗಿರುವ ಬೆಂಗಳೂರು ನಗರಕ್ಕೆ ಪ್ರತಿನಿತ್ಯ ವಿದೇಶಗಳಿಂದ ಸಾವಿರಾರು ಜನರು ಆಗಮಿಸುತ್ತಾರೆ. ವಿಶ್ವದ ವಿವಿಧ ದೇಶಗಳಿಂದ ಬೆಂಗಳೂರು ನಗರಕ್ಕೆ ನೇರ ವಿಮಾನ ಸೌಕರ್ಯವಿದೆ. ಪ್ರಯಾಣಿಕರಿಗೆ ಉತ್ತಮ ಗುಣಮಟ್ಟದ ಸೇವೆ ನೀಡುವಲ್ಲಿಯೂ ಸಹ ಬೆಂಗಳೂರು ವಿಮಾನ ನಿಲ್ದಾಣ ಮೊದಲ ಸ್ಥಾನದಲ್ಲಿದೆ.**

ದಕ್ಷಿಣ/ ಮಧ್ಯ ಭಾರತದ ಅಂತರಾಷ್ಟ್ರೀಯ ವಿಮಾನ ನಿಲ್ದಾಣವಾದ ಬೆಂಗಳೂರಿನ ಹೆಗ್ಗಳಿಗೆ ಇನ್ನೂ ಹೆಚ್ಚಾಗಿದೆ ಎಂದರು. ಜಪಾನ್ ಏರ್ ಲೈನ್ಸ್ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಿಂದ 12, ಏಪ್ರಿಲ್ 2020ರಲ್ಲಿ ಸಂಚಾರವನ್ನು ಆರಂಭಿಸಿತು.

ಬೆಂಗಳೂರು-ಜಪಾನ್ ನಡುವೆ ಪ್ರಯಾಣಿಕರ ಸಂಖ್ಯೆ ಏರಿಕೆಯಾಗುತ್ತಲೇ ಇದೆ. 2022ರಲ್ಲಿ 23,532 ಪ್ರಯಾಣಿಕರು ಸಂಚಾರವನ್ನು ನಡೆಸಿದ್ದರು. 2023ರಲ್ಲಿ ಇದು 62,959 ಜನರು ಸಂಚಾರ ನಡೆಸಿದರು. ದಕ್ಷಿಣ ಭಾರತದ ಪ್ರವಾಸೋದ್ಯಮ, ಆರ್ಥಿಕ ಬೆಳವಣಿಗೆ ನೋಡಿಕೊಂಡು ಈಗ ವಿಮಾನ ಸೇವೆಯನ್ನು ವಿಸ್ತರಣೆ ಮಾಡಲಾಗುತ್ತಿದೆ.

## ಹೊಸ ಮಾರ್ಗದಲ್ಲಿ ಬಿಎಂಟಿಸಿ ಬಸ್ ಸಂಚಾರ ಆರಂಭ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ನಗರದ ಜನತೆಗೆ ಗುಡ್ ನ್ಯೂಸ್ ಎನ್ನುವಂತೆ ಬಿಎಂಟಿಸಿಯಿಂದ ಹೊಸ ಮಾರ್ಗದಲ್ಲಿ ಬಸ್ ಸಂಚಾರ ಆರಂಭಿಸಲಾಗಿದೆ. ಹೊಸ ಮಾರ್ಗದಲ್ಲಿ ದಿನಾಂಕ 26-08-2024ರಿಂದ ಬಿಎಂಟಿಸಿ ಬಸ್ ಸಂಚಾರ ಆರಂಭಗೊಳ್ಳಲಿದೆ.

ಈ ಬಗ್ಗೆ ಬಿಎಂಟಿಸಿ ಪತ್ರಿಕಾ ಪ್ರಕಟಣೆಯಲ್ಲಿ ಮಾಹಿತಿ ನೀಡಿದ್ದು, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ಸಾರ್ವಜನಿಕ ಪ್ರಯಾಣಿಕರಿಗೆ ದಕ್ಷ, ವಿಶ್ವಾಸನೀಯ, ಆರಾಮದಾಯಕ ಹಾಗೂ ಮಿತವ್ಯಯಕರ ದರದಲ್ಲಿ ಉತ್ತಮ ಸಾರಿಗೆ ಸೌಲಭ್ಯವನ್ನು ಒದಗಿಸುತ್ತಿದೆ ಎಂದಿದೆ. ಬೆಂ.ಮ.ಸಾ.ಸಂಸ್ಥೆಯು ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ನಗರದ ಪ್ರಮುಖ ರೈಲ್ವೆ ನಿಲ್ದಾಣಕ್ಕೆ ಸಂಪರ್ಕ ಕಲ್ಪಿಸುವ ನಿಟ್ಟಿನಲ್ಲಿ, ಯಶವಂತಪುರ ರೈಲ್ವೆ ನಿಲ್ದಾಣದಿಂದ ಯಶವಂತಪುರ ಬಸ್ ನಿಲ್ದಾಣ, ದಂಡು ರೈಲ್ವೆ ನಿಲ್ದಾಣ, ಈಸ್ಟ್ ರೈಲ್ವೆ ನಿಲ್ದಾಣ ಹಾಗೂ ಮಾರುತಿ ಸೇವಾ ನಗರ ಮಾರ್ಗವಾಗಿ ಸರ್ ಎಂ.ವಿಶ್ವೇಶ್ವರಯ್ಯ ರೈಲ್ವೆ ನಿಲ್ದಾಣಕ್ಕೆ ನೂತನ ಮಾರ್ಗ ಸಂಖ್ಯೆ 300-ಆರ್ ಅನ್ನು ದಿನಾಂಕ: 26.08.2024 ರಿಂದ ಪರಿಚಯಿಸುತ್ತಿದ್ದು ವಿವರ ಕೆಳಕಂಡಂತಿದೆ

**ಮಾರ್ಗ ಸಂಖ್ಯೆ** : 300-ಆರ್ ಬಿಡುವ ವೇಳೆ ಯಶವಂತಪುರ ರೈಲ್ವೆ ನಿಲ್ದಾಣ ಸರ್ ಎಂ.ವಿಶ್ವೇಶ್ವರಯ್ಯ ರೈಲ್ವೆ ನಿಲ್ದಾಣ 0500, 0605, 0720, 0825, 0945, 1110, 1425, 1610, 1710, 1845, 1945, 2130 0500, 0605, 0710, 0830, 0930, 1115, 1455, 1555, 1730, 1830, 1950, 2050

# ಬಿಜೆಪಿ ನಾಯಕರ ಬುಡಕ್ಕೆ ನೀರು ಬಂದಾಗ ಜಾತಿ ನೆನಪಾಗುತ್ತದೆ

## ದಲಿತ ಗುರಾಣಿ ಬಳಸುತ್ತಿರುವುದು ಸಮಸ್ತ ಸ್ವಾಭಿಮಾನಿ ದಲಿತ ಸಮುದಾಯಕ್ಕೆ ಮಾಡಿರುವ ಅವಮಾನ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಘನತೆವೆತ್ತ ರಾಜ್ಯಪಾಲರಾಗಿರುವ ಥಾವರ್ ಚಂದ್ ಗೆಹ್ಲೋತ್ ಅವರ ತಪ್ಪು ನಡೆಯ ಬಗೆಗಿನ ನಮ್ಮ ಪ್ರಶ್ನೆಗಳಿಗೆ ಉತ್ತರ ನೀಡಲಾಗದ ರಾಜ್ಯದ ಬಿಜೆಪಿ ನಾಯಕರು ದಲಿತ ಗುರಾಣಿ ಬಳಸುತ್ತಿರುವುದು ಸಮಸ್ತ ಸ್ವಾಭಿಮಾನಿ ದಲಿತ ಸಮುದಾಯಕ್ಕೆ ಮಾಡಿರುವ ಅವಮಾನವಾಗಿದೆ.

ಹಿಂದುಗಳಲ್ಲಿ ಜಾತಿಯೇ ಇಲ್ಲ, ಧರ್ಮವೇ ಎಲ್ಲಾ ಎಂದು ಉಪದೇಶ ಮಾಡುತ್ತಿರುವ ಬಿಜೆಪಿ ನಾಯಕರ ಬುಡಕ್ಕೆ ನೀರು ಬಂದಾಗ ಜಾತಿ ನೆನಪಾಗುತ್ತದೆ ಎಂದು ಸಿದ್ದರಾಮಯ್ಯ ಕಿಡಿಕಾರಿದೆ.

ಫೇಸ್ ಬುಕ್ ಪೋಸ್ಟ್ ಹಂಚಿಕೊಂಡಿರುವ ಮುಖ್ಯ ಮಂತ್ರಿ ಸಿದ್ದರಾಮಯ್ಯ ಅವರು, ರಾಜ್ಯಪಾಲರಿಗೆ ಅವಮಾನವಾಗಿದೆ ಎಂದು ಪ್ರತಿಭಟಿಸುತ್ತಿರುವ ರಾಜ್ಯದ ಬಿಜೆಪಿ ನಾಯಕರಿಗೆ ನನ್ನ ಕೆಲವು ಸರಳ ಪ್ರಶ್ನೆಗಳಿವೆ. ಮೊದಲನೆಯದಾಗಿ, ದಲಿತ ಸಮುದಾಯಕ್ಕೆ ಸೇರಿರುವ ಥಾವರಚಂದ್ ಗೆಹ್ಲೋತ್ ಅವರ ಬಗ್ಗೆ ನಿಮ್ಮಲ್ಲಿ ಅಷ್ಟೊಂದು ಗೌರವ ಮತ್ತು ಅಭಿಮಾನವಿದ್ದರೆ ಕೇಂದ್ರ ಸಚಿವ ಸಂಪುಟದಲ್ಲಿರಬೇಕಾಗಿದ್ದ ಅವರನ್ನು ಇಲ್ಲಿ ತಂದು ಪಂಜರದ ಗಿಣಿ ಯನ್ನಾಗಿ ಯಾಕೆ ಮಾಡಿದ್ದೀರಿ ಮಾರ್ಗದರ್ಶಕ ಮಂಡಳಿ ಎಂಬ ವನವಾಸಾಶ್ರಮ ಸೇರುವಷ್ಟು ವಯಸ್ಸಾಗದೆ ಇದ್ದರೂ ಅವರ ಸಕ್ರಿಯ ರಾಜಕೀಯ ಜೀವನವನ್ನು ಯಾಕೆ ಮೊಟಕುಗೊಳಿಸಿದಿರಿ ಎಂದು ಪ್ರಶ್ನಿಸಿದ್ದಾರೆ. ಕೇಂದ್ರ ಸಚಿವ ಸ್ಥಾನದಿಂದ ವಂಚಿತರನ್ನಾಗಿ ಮಾಡಿ, ತಮ್ಮ ರಾಜಕೀಯ ವಿರೋಧಿಗಳ ವಿರುದ್ದದ ದ್ವೇಷದ ರಾಜಕಾರಣಕ್ಕೆ ದಲಿತ ಸಮುದಾಯದ ನಾಯಕನನ್ನು ದುರ್ಬಳಕೆ ಮಾಡಿಕೊಳ್ಳುವುದು ಆ ಸಮುದಾಯಕ್ಕೆ ಮಾಡುವ ಅನ್ಯಾಯ-ಅವಮಾನ ಅಲ್ಲವೇ? ಬಿಜೆಪಿ ನಾಯಕರೇ, ದಲಿತ ನಾಯಕರೊಬ್ಬರನ್ನು ತಮ್ಮ ರಾಜಕೀಯ ಸ್ವಾರ್ಥಕ್ಕಾಗಿ ಬಳಸುವಾಗ ಕನಿಷ್ಠ ನಿಮ್ಮ ಆತ್ಮಸಾಕ್ಷಿಯೂ ಚುಚ್ಚಲಿಲ್ಲವೇ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಶ್ನಿಸಿದ್ದಾರೆ.



**ಸಂವಿಧಾನ ದತ್ತವಾಗಿ ಕರ್ತವ್ಯ ನಿರ್ವಹಣೆ**

ದಲಿತ ಸಮುದಾಯದಕ್ಕೆ ಸೇರಿರುವ ನಮ್ಮ ಪಕ್ಷದ ಈಗಿನ ರಾಷ್ಟ್ರೀಯ ಅಧ್ಯಕ್ಷರಾಗಿರುವ ಮಲ್ಲಿಕಾರ್ಜುನ ಖರ್ಗೆ ಅವರನ್ನು ಪಕ್ಷದ ಹಿರಿಯ ನಾಯಕರು ಎಷ್ಟು ಗೌರವ ಮತ್ತು ಘನತೆಯಿಂದ ನಡೆಸಿಕೊಳ್ಳುತ್ತಿದ್ದಾರೆ ಎನ್ನುವುದನ್ನು ನೋಡಿ ಕಲಿಯಿರಿ.

### ರಾಷ್ಟ್ರೀಯ ಅಧ್ಯಕ್ಷರನ್ನಾಗಿ ನೇಮಕ

> **ದಲಿತರನ್ನು ಬಳಸಿ ಬಿಸಾಡುವ ಬಿಜೆಪಿ ಮತ್ತು ಸಂಘ ಪರಿವಾರದ ಪಿತೂರಿ ರಾಜಕಾರಣವನ್ನು ಅರ್ಥಮಾಡಿಕೊಳ್ಳುವಷ್ಟು ದಲಿತ ಸಮುದಾಯ ಜಾಗೃತವಾಗಿದೆ. ಈಗ ನೀವು ದಲಿತರ ಹೆಸರಲ್ಲಿ ಸುರಿಸುತ್ತಿರುವ ಮೊಸಳೆ ಕಣ್ಣೀರಿನ ಹಿಂದಿನ ಪ್ರಾಮಾಣಿಕತೆ ತಿಳಿಯದಷ್ಟು ದಡ್ಡರಲ್ಲ. ಕನಿಷ್ಠ ಅಟಲ್ ಬಿಹಾರಿ ವಾಜಪೇಯಿ ಅವರು ದಲಿತ ಸಮುದಾಯಕ್ಕೆ ಸೇರಿರುವ ಬಂಗಾರು ಲಕ್ಷ್ಮಣ್ ಅವರನ್ನು ಪಕ್ಷದ ರಾಷ್ಟ್ರೀಯ ಅಧ್ಯಕ್ಷರನ್ನಾಗಿ ನೇಮಕ ಮಾಡಿದರು. ಆದರೆ ಬಿಜೆಪಿಯೊಳಗಿನ ಸಂಘಿ ಮನಸ್ಸು ಅದನ್ನು ಸಹಿಸಿಕೊಳ್ಳದೆ ಅವರ ಮೇಲೆ ಭ್ರಷ್ಟಾಚಾರದ ಆರೋಪ ಹೊರಿಸಿತು, ಕೊನೆಗೆ ಅದೇ ಕೊರಗಿನಲ್ಲಿ ಅವರು ಸಾವಿಗೀಡಾದರು.**

> **ಸಂವಿಧಾನವನ್ನೇ ಬದಲಾಯಿಸಲು ಹೊರಟಿರುವ, ಮೀಸಲಾತಿಯನ್ನು ವಿರೋಧಿಸುತ್ತಿರುವ ಮತ್ತು ಜಾತಿ ತಾರತಮ್ಯವನ್ನು ಅಂತರಂಗದಲ್ಲಿ ಒಪ್ಪಿಕೊಂಡು ಬಹಿರಂಗದಲ್ಲಿ ಜಾತ್ಯತೀತತೆಯ ಸೋಗುಹಾಕಿರುವ ನಿಮಗೆ ದಲಿತರ ಬಗ್ಗೆ ಮಾತನಾಡುವ ಯಾವ ನೈತಿಕತೆಯೂ ಇಲ್ಲ. ನಿಮಗೆ ದಲಿತ ಸಮುದಾಯದ ಬಗ್ಗೆ ನಿಜವಾಗಿಯೂ ಗೌರವ ಇದ್ದರೆ ಥಾವರಚಂದ್ ಗೆಹ್ಲೋತ್ ಅವರ ಮೇಲೆ ಕೆಟ್ಟ ಕೆಲಸ ಮಾಡಲು ರಾಜಕೀಯ ಒತ್ತಡ ಹೇರಲು ಹೋಗದೆ, ಅವರು ಸಂವಿಧಾನದತ್ತವಾಗಿ ಕರ್ತವ್ಯ ನಿರ್ವಹಣೆ ಮಾಡಲು ಅವಕಾಶ ಮಾಡಿಕೊಡಿ, ಈ ಪ್ರತಿಭಟನೆ, ಪ್ರತಿರೋಧದ ನಾಟಕಗಳನ್ನು ನಿಲ್ಲಿಸಿ ಎಂದು ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.**

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 10:30 ರಿಂದ 12:00 |
| ಗುಳಿಕ ಕಾಲ | ಬೆಳಿಗ್ಗೆ | 07:30 ರಿಂದ 09:00 |
| ಯಮಗಂಡ ಕಾಲ | ಮಧ್ಯಾಹ್ನ | 03:00 ರಿಂದ 04:30 |

**ಮೇಷ** ಜನರಲ್ಲಿ ಬೆರೆಯುವ ಭಯ ನಿಮ್ಮನ್ನು ಧೈರ್ಯಗೆಡಿಸಬಹುದು. ಇದನ್ನು ತೆಗೆದುಹಾಕಲು ನಿಮ್ಮ ಸ್ವಾಭಿಮಾನವನ್ನು ಪ್ರೋತ್ಸಾಹಿಸಿ. ನಿಮ್ಮ ಖರ್ಚುಗಳಲ್ಲಿ ಅನಿರೀಕ್ಷಿತ ಏರಿಕೆ ನಿಮ್ಮ ಮನಸ್ಸಿನ ಶಾಂತಿಗೆ ಭಂಗ ತರುತ್ತದೆ.

**ವೃಷಭ** ಕಿರಿಯ ಸಹೋದರ ಅಥವಾ ಸಹೋದರಿ ನಿಮ್ಮ ಸಲಹೆ ಪಡೆಯಬಹುದು. ಇಡೀ ಬ್ರಹ್ಮಾಂಡದ ಭಾವಪರವಶತೆ ಪ್ರೀತಿಯಲ್ಲಿರುವವರ ನಡುವೆ ನಡೆಯುತ್ತದೆ. ಹೌದು, ನೀವು ಅದೃಷ್ಟವಂತರು.

**ಮಿಥುನ** ನಿಮ್ಮಲ್ಲಿ ಕೆಲವರು ಇಂದು ಬಲವಂತವಾಗಿ ಪ್ರಮುಖ ನಿರ್ಧಾರಗಳನ್ನು ಕೈಗೊಳ್ಳಬೇಕಾಗಬಹುದು ಹಾಗೂ ಇದು ನಿಮ್ಮನ್ನು ಉದ್ವೇಗಭರಿತರನ್ನಾಗಿಯೂ ಹಾಗೂ ಗಾಬರಿಯುಳ್ಳವರನ್ನಾಗಿಯೂ ಮಾಡಬಹುದು.

**ಕರ್ಕಾಟಕ** ಜನರು ಇಂದು ಕಚೇರಿಯಲ್ಲಿ ಅಲ್ಲಿ ಮಾತುಗಳಿಂದ ತಪ್ಪಿಸಬೇಕು. ಇಂದು ನಿಮ್ಮ ಬಿಡುವಿನ ವೇಳೆಯಲ್ಲಿ ನೀವು ಆಗಾಗ್ಗೆ ಯೋಜಿಸುವ ಕೆಲಸಗಳನ್ನು ಮಾಡುತ್ತೀರಿ. ಆದರೆ ಈ ಕೆಲಸಗಳನ್ನು ಮಾಡಲು ಸಾಧ್ಯವಾಗುವುದಿಲ್ಲ.

**ಸಿಂಹ** ಭಯವೆಂಬ ದೈತ್ಯನ ಜೊತೆ ಹೋರಾಡಲು ಸಿದ್ಧವಾಗುತ್ತಿದ್ದ ಹಾಗೆ ನಿಮ್ಮ ಆಲೋಚನೆಗಳನ್ನು ಸಕಾರಾತ್ಮಕವಾಗಿ ರೂಪಿಸಿಕೊಳ್ಳಿ. ಇಲ್ಲದಿದ್ದಲ್ಲಿ ನೀವು ಈ ರಾಕ್ಷಸನಿಗೆ ಒಬ್ಬ ಜಡ ಮತ್ತು ನಿಷ್ಕ್ರಿಯ ಬಲಿಯಾಗುತ್ತೀರಿ.

**ಕನ್ಯಾ** ನಿಮ್ಮ ದೈಹಿಕ ರಚನೆಯನ್ನು ಕಾಯ್ದುಕೊಳ್ಳಲು ನೆರವಾಗುವ ಕೆಲವು ಕ್ರೀಡಾ ಚಟುವಟಿಕೆಗಳನ್ನು ನೀವು ಇಂದು ಆನಂದಿಸಬಹುದು. ನಿಮ್ಮ ಹಳೆಯ ಯಾವುದೇ ರೋಗ ಇಂದು ನಿಮ್ಮನ್ನು ಕಾಡಬಹುದು.

**ತುಲಾ** ತೊಂದರೆಯಲ್ಲಿರುವ ಯಾರಿಗಾದರೂ ಸಹಾಯ ಮಾಡಲು ನಿಮ್ಮ ಚೈತನ್ಯವನ್ನು ಬಳಸಿ. ಲೋಕೋಪಕಾರಕ್ಕಾಗಲ್ಲದಿದ್ದಲ್ಲಿ ಈ ನಶ್ವರ ದೇಹದ ಉಪಯೋಗವಾದರೂ ಏನು.

**ವೃಶ್ಚಿಕ** ನೀವು ಇದರಲ್ಲಿ ಭಾಗವಹಿಸುತ್ತೀರಿ ಮತ್ತು ಕೇವಲ ಮೂಕ ಪ್ರೇಕ್ಷಕರಾಗಿ ಮಾತ್ರ ಉಳಿಯುವುದಿಲ್ಲವೆಂದು ಖಚಿತಪಡಿಸಿಕೊಳ್ಳಿ. ಪ್ರೀತಿಯ ಸಂಕಟವನ್ನು ಎದುರಿಸುವ ಸಾಧ್ಯತೆಗಳು ಇಂದು ಹೆಚ್ಚಿವೆ.

**ಧನಸ್ಸು** ಲಕ್ಷವಿಲ್ಲದಷ್ಟು ಗಾಬರಿಗಳು ನಿಮ್ಮ ಪ್ರತಿರೋಧಕತೆ ಮತ್ತು ಆಲೋಚನಾ ಶಕ್ತಿಯನ್ನು ದುರ್ಬಲಗೊಳಿಸಬಹುದು. ಸಕಾರಾತ್ಮಕ ಚಿಂತನೆಯ ಜೊತೆ ಈ ರೋಗದ ವಿರುದ್ಧ ಹೋರಾಡಲು ಪ್ರಯತ್ನಿಸಿ.

**ಮಕರ** ಆರ್ಥಿಕ ಜೀವನದಲ್ಲಿ ಇಂದು ಸಂತೋಷ ಉಳಿದಿರುತ್ತದೆ. ಇದರೊಂದಿಗೆ ನೀವು ಇಂದು ಸಾಲಗಳಿಂದ ಮುಕ್ತರಾಗಬಹುದು. ಕುಟುಂಬದ ಸದಸ್ಯರು ನಿಮ್ಮ ಜೀವನದಲ್ಲಿ ಒಂದು ವಿಶೇಷ ಸ್ಥಾನವನ್ನು ಹೊಂದಿರುತ್ತಾರೆ.

**ಕುಂಭ** ನೀವು ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಇಂದು ಶಮನ ಪಡೆಯುತ್ತೀರಿ. ಅವುಗಳನ್ನು ಶಾಶ್ವತವಾಗಿ ದೂರವಿರಿಸಲು ನಿಮ್ಮ ಜೀವನಶೈಲಿಯನ್ನು ಬದಲಿಸಲು ಇದು ಸರಿಯಾದ ಸಮಯ.

**ಮೀನ** ನಿಮ್ಮ ಉಪಸ್ಥಿತಿ ನಿಮ್ಮ ಪ್ರೀತಿಪಾತ್ರರಿಗೆ ಈ ವಿಶ್ವವನ್ನು ಒಂದು ಯೋಗ್ಯ ಸ್ಥಾನವನ್ನಾಗಿ ಮಾಡುತ್ತದೆ. ನೀವು ಯಾವಾಗಲೂ ಮಾಡಬಯಸಿದ ರೀತಿಯ ಕೆಲಸವನ್ನು ಕಚೇರಿಯಲ್ಲಿ ಇಂದು ನೀವು ಮಾಡಬಹುದು.

# ಲೋಕಾಯುಕ್ತರಿಂದ ಸಾರ್ವಜನಿಕರ ಅಹವಾಲು ಸ್ವೀಕಾರ

## ಅಧಿಕಾರಿಗಳು ಜನರ ಸಮಸ್ಯೆಗಳು ಪರಿಹಾರ ಮಾಡುವ ನಿಟ್ಟಿನಲ್ಲಿ ಕೆಲಸ ಮಾಡಬೇಕು: ಡಿವೈಎಸ್ಪಿ ಗೀತಾ ಬೇನಹಾಳ

• **ಉದಯವಾಹಿನಿ, ಚಿಂಚೋಳಿ**

ತಾಲ್ಲೂಕಿನ ಸಾರ್ವಜನಿಕರು ಬಹಳಷ್ಟು ಮುಗ್ಧ ಜನರಿಂದ್ದು ಒಳ್ಳೆಯವರಿದ್ದಾರೆ,ಅಧಿಕಾರಿಗಳು ಜನರ ಮುಗ್ಧತೆಯ ಸದುಪಯೋಗ ಪಡೆದು ಜನರಿಗೆ ಕಛೇರಿಗೆಳಿಗೆ ಅಲೆದಾಡಿಸಿಕೊಳ್ಳುತ್ತಿರುವುದು ಮೇಲ್ನೋಟಕ್ಕೆ ಕಂಡುಬರುತ್ತಿದೆ ಅಧಿಕಾರಿಗಳು ಜನರ ಸಮಸ್ಯೆಗಳು ಪರಿಹಾರ ಮಾಡುವ ನಿಟ್ಟಿನಲ್ಲಿ ಕೆಲಸ ಮಾಡಬೇಕು ಎಂದು ಲೋಕಾಯುಕ್ತ ಡಿವೈಎಸ್ಪಿ ಗೀತಾ ಬೇನಹಾಳ ಅಧಿಕಾರಿಗಳಿಗೆ ಸಲಹೆ ನೀಡಿದರು.

**16 ದೂರು ಪರಿಶೀಲನೆ: ಡಿವೈಎಸ್ಪಿ**

ಪಟ್ಟಣದ ತಹಶೀಲ್ ಸಭಾಂಗಣದಲ್ಲಿ ಲೋಕಾಯುಕ್ತ ತಂಡ ಆಗಮಿಸಿ ತಾಲ್ಲೂಕಾ ಮಟ್ಟದ ಅಧಿಕಾರಿಗಳ ಸಮ್ಮುಖದಲ್ಲಿ ಸಾರ್ವಜನಿಕರ ಅಹವಾಲು ಸ್ವೀಕರಿಸಿ ಮಾತನಾಡಿದ ಅವರು,ಅಧಿಕಾರಿಗಳಿಗೆ ಸರ್ಕಾರಿ ಸಂಬಳ ಸಿಗುತ್ತದೆ ಸಾರ್ವಜನಿಕರ ಸಮಸ್ಯೆಗಳಿಗೆ ತಕ್ಷಣವೇ ಸ್ವಂದಿಸಿ ಪರಿಹಾರ ಮಾಡುವ ನಿಟ್ಟಿನಲ್ಲಿ ಕೆಲಸ ಮಾಡಬೇಕು.ಅಧಿಕಾರಿಗಳು ಜಿಲ್ಲೆ ಬಹಳಷ್ಟು ದೂರವಿದೆ ಯಾರು ಬರುವುದಿಲ್ಲ ಎಂದು ಅಧಿಕಾರಿಗಳು ತಿಳಿದು ಮೈಮರೆತು ಕೆಲಸ ಮಾಡಬೇಡಿ ಈಗಾಗಲೇ ಕಂದಾಯ ಇಲಾಖೆ, ಪುರಸಭೆ, ಸರ್ವೆ ಇಲಾಖೆ, ಎಲ್.ಎಮ್.ಪಿ ನೀರಾವರಿ ನಿಗಮಕ್ಕೆ ಸಂಬಂಧಿಸಿದಂತೆ ಹೆಚ್ಚು ದೂರುಗಳು ಬಂದಿವೆ ಬಂದಿರುವ ದೂರುಗಳು ಒಗ್ಗೂಡಿಸಿಕೊಂಡು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಪತ್ರ ಬರೆದು ಸಮಸ್ಯೆಗಳು ಪರಿಹಾರ ಮಾಡುವ ನಿಟ್ಟಿನಲ್ಲಿ ಕೆಲಸ ಮಾಡುತ್ತೇವೆ, ಬರುವ ಮುಂದಿನ ತಿಂಗಳಲ್ಲಿ ಅರ್ಧಕ್ಕಿಂತ ಹೆಚ್ಚು ದೂರು ಬಂದ ಅರ್ಜಿಗಳು ವಿಲೇವಾರಿ ಮಾಡಲಾಗುವುದು. ಕಳೆದ ಬಾರಿ 18 ದೂರು ಅರ್ಜಿಗಳು ಬಂದಿದವು ಅದರಲ್ಲಿ 6 ಅರ್ಜಿಗಳು ವಿಲೇವಾರಿ ಮಾಡಲಾಗಿದ್ದು 12 ಅರ್ಜಿಗಳು ಪರಿಶೀಲನಾ ಹಂತದಲ್ಲಿವೆ ಎಂದರು.

ಅನೇಕ ವರ್ಷಗಳಿಂದ ಬೆಡಕಪಳ್ಳಿ ಗ್ರಾಮದ ವೆಂಕಮ್ಮಾ,ಮತ್ತು ಸಂಗೀತ ಎಂಬುವವರ ಜಮೀನು ಸರ್ವೆ ಮಾಡಿ ಹೆಸರಿಗೆ ಮಾಡಲು ಹೇಳಿದರು ಮಾಡುತ್ತಿಲ್ಲಾ ನಾವು ನ್ಯಾಯಾಲಯದಲ್ಲಿಯು ಕೂಡ



ಉದಯವಾಹಿನಿ ಚಿತ್ರ

ಪ್ರಕರಣ ಇತ್ಯರ್ಥವಾಗಿದೆ ಆದರೂ ಕೂಡ ಸರ್ವೆ ಇಲಾಖೆ ಕಛೇರಿಯವರು ಅಲೆದಾಡಿಸಿಕೊಳ್ಳುತ್ತಿದ್ದಾರೆ ಎಂದು ಮಹಿಳೆಯರು ರೇವಣಸಿದ್ದಪ್ಪಾ ರಾಮತೀರ್ಥ ದೂರು ಸಲ್ಲಿಸಿದರು,ಮತ್ತೊಂಬರು ಆಗಮಿಸಿ ಸಮಸ್ಯೆ ಪರಿಹಾರ ಕೇಳಿದರೆ ಗ್ರಾಮ ಲೆಕ್ಕಾಧಿಕಾರಿ ಹತ್ತು ಸಾವಿರ ಲಂಚ ಕೇಳಿದ್ದಾರೆ ಎಂದು ಲೋಕಾಯುಕ್ತರಿಗೆ ಲಂಚ ಕೇಳಿದ ವಿಡಿಯೋ ಲೋಕಾಯುಕ್ತರಿಗೆ ನೀಡಿದ ಪ್ರಸಂಗ ನಡೆಯಿತು.

ಈ ಸಂದರ್ಭದಲ್ಲಿ ಲೋಕಾಯುಕ್ತ ಸಿಪಿಐ ಅಕ್ಕಮಹಾದೇವಿ, ತಹಶೀಲ್ದಾರ್ ಸುಬ್ಬಣ್ಣ ಜಮಖಂಡಿ, ತಾಪಂ ಇಓ ಶಂಕರ ರಾಠೋಡ್, ಪಿಎಸ್ಐ ಗಂಗಮ್ಮಾ,ಪುರಸಭೆ ಸಿಇಓ ಕಾಶಿನಾಥ ಧನ್ನಿ,ಟಿಹೆಚ್ಓ ಮಹ್ಮುದ್ ಗಫಾರ್, ಸಿಡಿಪಿಓ ಸವಿತಾ, ವೀರಶೆಟ್ಟಿ ರಾಠೋಡ್, ಅನುಸೋಯಾ ಚವ್ಹಾಣ,ರಾಜಶೇಖರ, ಪಿಡಬ್ಲ್ಯೂಡಿ ಬಸವರಾಜ ಬೇನೂರ, ರಾಜಕುಮಾರ ಗೋವಿನ್, ಸೇರಿದಂತೆ ತಾಲ್ಲೂಕಾ ಮಟ್ಟದ ಅಧಿಕಾರಿಗಳು ಸಾರ್ವಜನಿಕರು ರಾಜಕೀಯ ಮುಖಂಡರು ಇದ್ದರು.

> ಕೆಲವರು ಲೋಕಾಯುಕ್ತ ಹೆಸರು ಹೇಳಿಕೊಂಡು ಅಧಿಕಾರಿಗಳಿಗೆ ಬ್ಲಾಕ್ ಮೇಲ್ ಮಾಡಿ ಹಣ ಕೇಳುವುದು ಅಧಿಕಾರಿಗಳಿಗೆ ಹೆದರಿಸುವುದು ಗಮನಕ್ಕೆ ಬಂದಿದೆ ಯಾರು ಅಧಿಕಾರಿಗಳು ಇಂಥವ ಸುಳ್ಳು ಮಾತುಗಳಿಗೆ ಬೆಲೆಕೊಡದೆ ಅವರು ಆಡುವ ಸಂಭಾಷಣೆ ರಿಕಾರ್ಡಿಂಗ್ ಮಾಡಿ ನಮ್ಮ ಗಮನಕ್ಕೆ ತಂದ್ದು ದೂರು ಕೊಡಿ ಯಾರು ಹಣ ಕೊಡಬೇಡಿ. ನಾವು ಲೋಕಾಯುಕ್ತರು ಯಾರಿಗೂ ಕರೆ ಮಾಡುವುದಿಲ್ಲಾ ನಿಮ್ಮ ಗಮನಕ್ಕೆಯಿರಲ್ಲಿ ನಾವು ನೋಟಿಸ್ ಕೊಡುತ್ತೇವೆ ಕಛೇರಿಗೆ ಬರಲು ಹೇಳುತ್ತೇವೆ,ಅದನ್ನು ಬಿಟ್ಟು ಅಧಿಕಾರಿಗಳಿಗೆ ಯಾರೆ ತೊಂದರೆ ಕೊಟ್ಟರೆ ನಮ್ಮ ಗಮನಕ್ಕೆ ತನ್ನಿ.
>
> – ಗೀತಾ ಬೇನಹಾಳ. ಡಿವೈಎಸ್ಪಿ ಲೋಕಾಯುಕ್ತ ಕಲಬುರ್ಗಿ.

**ಶಿಕ್ಷಕನಿಗೆ ಸಂಬಳ ನೀಡುತ್ತಿಲ್ಲ**

ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಭಂಟನಳ್ಳಿ ನಲ್ಲಿ ನೀಲಕಂಠಪ್ಪಾ ಅತಿಥಿ ಶಿಕ್ಷಕನಾಗಿ ಕಳೆದ ಒಂದು ವರ್ಷದಿಂದ ಶಿಕ್ಷಕನಾಗಿ ಅಕ್ಷರ ಆವಿಷ್ಕಾರ ಯೋಜನೆಯಡಿ ಕಾರ್ಯನಿರ್ವಹಿಸುತ್ತಿದ್ದು ಇಲ್ಲಿಯವರೆಗೂ ನನಗೆ ಸಂಬಳ ನೀಡುತ್ತಿಲ್ಲ ಎಂದು ಲೋಕಾಯುಕ್ತರಿಗೆ ದೂರು ಸಲ್ಲಿಸಿದರು, ಚಿಮ್ಮಾಯಿದ್ಲಾಯಿ ಗ್ರಾಮದಲ್ಲಿ ಪರಿಶೀಷ್ಟ ಜಾತಿ ಪರಿಶೀಷ್ಟ ಪಂಗಡದ ಜನರಿಗೆ ಸ್ಮಶಾನಕ್ಕಾಗಿ ಸರ್ಕಾರಿ ಜಮೀನು ನೀಡದೆ ಬೇರೆ ಪ್ರಭಾವವಿರುವ ಖಾಸಗಿ ವ್ಯಕ್ತಿಗಳಿಗೆ ಶೇಡ್ ಹಾಕಲು ಜಮೀನು ನೀಡಿದ್ದಾರೆ ಎಂದು ಗ್ರಾಮಸ್ಥ ಮಲ್ಲಿಕಾರ್ಜುನ ಆರೋಪಿಸಿ ದೂರು ಸಲ್ಲಿಸಿದರು.

# ಶಿಕ್ಷಣ ಜೊತೆಗೆ ಕ್ರೀಡಾ ಮನೋಭಾವವಿರಲಿ

• **ಉದಯವಾಹಿನಿ, ಧೂಳಖೇಡ**

ವಿದ್ಯಾಥಿಗಳಿಗೆ ಶಿಕ್ಷಣ ಎಷ್ಟು ಮುಖ್ಯನ್ನು ಅಷ್ಟೇ ಕ್ರೀಡೆ ಸಹ ಪ್ರಮುಖವಾದದ್ದು. ಕ್ರೀಡೆಯಿಂದ ವಿದ್ಯಾರ್ಥಿಗಳು ಮಾನಸಿಕವಾಗಿ, ದೈಹಿಕವಾಗಿ ಸದೃಡವಾಗಲು ಕ್ರೀಡೆ ಅವಶ್ಯಕವಾಗಿದೆ. ವಿದ್ಯಾರ್ಥಿ ಜೀವನದಲ್ಲಿ ಕ್ರೀಡಾಮನೋಭಾವ ಎಲ್ಲರಲ್ಲಿ ಬರಬೇಕು ಎಂದು ಎಸ್ ಕೆ ಪಾಟೀಲ ಶಿಕ್ಷಣ ಸಂಸ್ಥೆಯ ನಿರ್ದೇಶಕ ಎಸ್ ಕೆ ಪಾಟೀಲ ಹೇಳಿದರು.

ಚಡಚಣ ತಾಲ್ಲೂಕಿನ ಶ್ರೀ ಸಿದ್ಧೇಶ್ವರ ಪದವಿ ಪೂರ್ವ ಮಹಾವಿದ್ಯಾಲಯ ಆವರಣದಲ್ಲಿ ನಡೆದ 2024 ನೇ ಸಾಲಿನ ತಾಲ್ಲೂಕಾ ಮಟ್ಟದ ಪದವಿ ಪೂರ್ವ ಕಾಲೇಜುಗಳ ಕ್ರೀಡಾಕೂಟ ಉದ್ಘಾಟಿಸಿ ಮಾತನಾಡಿದ ಅವರು, ಪ್ರತಿಯೊಬ್ಬರು ಉತ್ತಮ ಆರೋಗ್ಯದ ಕಡೆ ಗಮನ ಹರಿಸಿದಾಗ ಮಾತ್ರ ದೈಹಿಕವಾಗಿ, ಮಾನಸೀಕವಾಗಿ ಸದೃಡರಾಗಲು ಸಾದ್ಯ ಎಂದರು. ಈ ಕ್ರೀಡಾಕೂಟದಲ್ಲಿ ಲೋಣಿ, ಬರಡೋಲ, ಚಡಚಣ, ದೇ,ನಿಂಬರಗಿ, ಹಲಸಂಗಿ ಕೇರೂರ, ಧೂಳಖೇಡ, ಮರಗೂರ, ಜಿಗಜೇವಣಿ ಪದವಿ ಪೂರ್ವ ಕಾಲೇಜು ಬಾಲಕ ಮತ್ತು ಬಾಲಕಿ ವಿದ್ಯಾರ್ಥಿಗಳು ಖೋ ಖೋ, ಕಬ್ಬಡಿ, ವಾಲಿಬಾಲ್, ಟೆಲಿಕ್ವಾಟ್ ಕ್ರೀಡೆಯಲ್ಲಿ ಭಾಗವಹಿಸಿದರು.




ಉದಯವಾಹಿನಿ ಚಿತ್ರ

ಈ ಸಂದರ್ಭದಲ್ಲಿ ಶ್ರೀ ಎಸ್ ಕೆ ಪಾಟೀಲ ಮಹಾವಿದ್ಯಾಲಯ ಪ್ರಾಚಾರ್ಯರಾದ ಆರ್ ಕೆ ಪಾಟೀಲ, ದೈಹಿಕ ಉಪಾನ್ಯಾಸಕ ಮಂಜುನಾಥ ಝುಲ್ಪಿ, ಸಿ ಎಂ ಕಲ್ಯಾಣಶೆಟ್ಟಿ ಕಾರ್ಯಕ್ರವ ನಿರೂಪಿಸಿದರು. ಉಪನ್ಯಾಸಕ ಎಸ್ ವಿ ನರುಸಣಗಿ ಕಾರ್ಯಕ್ರಮವನ್ನು ವಂದಿಸಿದರು, ಈ ಕಾರ್ಯಕ್ರಮದಲ್ಲಿ ಸುತ್ತ-ಮುತ್ತಲಿನ ಗ್ರಾಮಸ್ಥರು, ವಿದ್ಯಾರ್ಥಿಗಳು ಭಾಗವಹಿಸದರು.

# ಭದ್ರಾವತಿ ಶಾಸಕ ಬಿಕೆ ಸಂಗಮೇಶ್ವರ್ ಪುತ್ರನ ಹತ್ಯೆಗೆ ಜೈಲಿನಿಂದ ಸಂಚು

• **ಉದಯವಾಹಿನಿ, ಶಿವಮೊಗ್ಗ**



ಜೈಲಿನಿಂದ ಆರೋಪಿಯೊಬ್ಬ ಶಾಸಕರ ಪುತ್ರನ ಹತ್ಯೆಗೆ ಸಂಚು ರೂಪಿಸಿದ್ದ ಘಟನೆ ಭದ್ರಾವತಿ ಹಳೆ ನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಆರೋಪಿಗಳ ವಿರುದ್ಧ ಎಫ್ಐಆರ್ ದಾಖಲಾಗಿದ್ದು ಪೊಲೀಸರು ಆರೋಪಿಗಳನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದಾರೆ.

ಭದ್ರಾವತಿ ಶಾಸಕ ಬಿ.ಕೆ.ಸಂಗಮೇಶ್ವರ್ ಪುತ್ರನ ಹತ್ಯೆಗೆ ಸಂಚು ನಡೆದಿದೆ ಎನ್ನವ ಆರೋಪ ಕೇಳಿ ಬಂದಿದೆ. ಶಾಸಕ ಬಿ.ಕೆ. ಸಂಗಮೇಶ್ವರ್ ಪುತ್ರ, ಬಸವರಾಜು ಸ್ವಲ್ಪದ್ರಲ್ಲಿ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಜೈಲಿನಲ್ಲಿರುವ ಡಿಚ್ಚಿ ಮುಬಾರಕ್ ಎಂಬ ಆರೋಪಿ ಈ ಹತ್ಯೆಗೆ ಸಂಚು ರೂಪಿಸಿದ್ದನು ಎಂದು ಪೊಲೀಸ್ ವಿಚಾರಣೆಯಿಂದ ತಿಳಿದು ಬಂದಿದೆ. ಡಿಚ್ಚಿ ಮುಬಾರಕ್ ಸುಫಾರಿ ಕೊಟ್ಟಿದ್ದ ಟಿಪ್ಪು ಮತ್ತು ಇತರೆ ನಾಲ್ವರ ವಿರುದ್ಧ ಭದ್ರಾವತಿ ಹಳೆ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಈ ಆರೋಪಿಗಳ ವಿಚಾರಣೆಯನ್ನು ಪೊಲೀಸರು ಶುರು ಮಾಡಿದ್ದಾರೆ.

ಈ ಹತ್ಯೆಯ ಸಂಚು ಜೈಲಿನಿಂದ ನಡೆದಿದೆ ಎಂದು ಹೇಳಲಾಗುತ್ತಿದೆ. ಮುಬಾರಕ್ ಅಲಿಯಾಸ್ ಡಿಚ್ಚಿ ಮುಬಾರಕ್ ಎಂಬಾತ ಜೈಲಿನಿಂದ ಭದ್ರಾವತಿಯ ಟಿಪ್ಪು ಎಂಬಾತನಿಗೆ ಕರೆ ಮಾಡಿ ಸುಫಾರಿ ಕೊಟ್ಟಿದ್ದಾನೆ ಎನ್ನಲಾಗುತ್ತಿದೆ. ಮುಬಾರಕ್ ಭದ್ರಾವತಿ ಗಾಂಧಿ ಸರ್ಕಲ್ ಬಳಿ ಬಸವರಾಜ್ ರನ್ನ ಹತ್ಯೆ ಮಾಡುವಂತೆ ಟಿಪ್ಪು ಸೇರಿದಂತೆ ಇತರೆ ನಾಲ್ವರಿಗೆ ಸುಫಾರಿ ಕೊಟ್ಟಿದ್ದ. ಇದಕ್ಕಾಗಿ ತಾನೆಲ್ಲಾ ವ್ಯವಸ್ಥೆ ಕೂಡ ಮಾಡಿರುವುದಾಗಿ ಟಿಪ್ಪುವಿಗೆ ಕರೆ ಮಾಡಿ ಹೇಳಿದ್ದ.

**ವಿಚಾರಣೆ ಚುರುಕು**

ಹತ್ಯೆ ಮಾಡಲು ಡಿಚ್ಚಿ ಮುಬಾರಕ್ ಕಾರು ಮತ್ತು ನಾಲ್ವರನ್ನು ಕಳುಹಿಸುತ್ತಿರುವುದಾಗಿ ಟಿಪ್ಪುಗೆ ಹೇಳಿದ್ದನೆನ್ನಲಾಗಿದೆ. ಸದ್ಯ ಟಿಪ್ಪುವನ್ನು ಬಂಧಿಸಿದ ಪೊಲೀಸರು ವಿಚಾರಣೆ ಚುರುಕುಗೊಳಿಸಿದ್ದಾರೆ. ಆದರೆ ಜೈಲಿನಲ್ಲಿರುವ ಡಿಚ್ಚಿ ಮುಬಾರಕ್‌ಗೆ ಫೋನ್ ಕೊಟ್ಟವರು ಯಾರು? ಆತ ಜೈಲಾಧಿಕಾರಿಗಳ ಕಣ್ಣು ತಪ್ಪಿಸಿ ಇಂಥಹ ಸಂಚು ಹೇಗೆ ರೂಪಿಸಿದ ಎನ್ನುವ ಪ್ರಶ್ನೆಗಳಿಗೆ ಇನ್ನೂ ಉತ್ತರ ಸಿಗಬೇಕಿದೆ.

# ಅಕ್ರಮ ಬಡ್ಡಿ ದಂಧೆಕೋರರ ಬಂಧನ: ವೇಶ್ಯಾವಾಟಿಕೆ ಮಾಡಿಸುವವರಿಂದಲೂ ಪೊಲೀಸರು ಹಣ ವಸೂಲಿ: ಬೆಲ್ಲದ್

• **ಉದಯವಾಹಿನಿ, ಧಾರವಾಡ**

ಧಾರವಾಡ ಜಿಲ್ಲಾ ವ್ಯಾಪ್ತಿಯಲ್ಲಿ ಅಕ್ರಮ ಬಡ್ಡಿ ವ್ಯವಹಾರದಲ್ಲಿ ತೊಡಗಿದವರನ್ನು ಪೊಲೀಸರು ಬಂಧಿಸಿ ಸೂಕ್ತ ಕಾನೂನು ಕ್ರಮ ಜರುಗಿಸಿದ್ದಾರೆ. ಮೀಟರ್ ಬಡ್ಡಿ ವ್ಯವಹಾರದಲ್ಲಿ ತೊಡಗಿದ್ದ ಒಟ್ಟು 25 ದಂಧೆಕೋರರನ್ನು ಬಂಧಿಸಲಾಗಿದೆ. ಈ ಕುರಿತು ಬಿಜೆಪಿ ಶಾಸಕರಾದ ಅರವಿಂದ್ ಬೆಲ್ಲದ್ ಸುದ್ದಿಗಾರರ ಮುಂದೆ ಪ್ರತಿಕ್ರಿಯಿಸಿದ್ದಾರೆ.

ರಾಜ್ಯದಲ್ಲಿ ಎರಡು ರೀತಿಯ ಕ್ರೈಂಗಳನ್ನು ನಾವು ಕಾಣಬಹುದು. ಒಂದು ಹುಟ್ಟುತ್ತಲೇ ಅಪರಾಧ ಚಟುವಟಿಕೆಯಲ್ಲಿ ತೊಡಗಿಕೊಂಡು ಬಂದವರು. ಮತ್ತೊಂದು ಬಡ್ಡಿ ದಂಧೆ. ಈ ಬಡ್ಡಿ ದಂಧೆ ಮಾಡುವವರು ಫೈನಾನ್ಸ್ ಕಂಪನಿ ರಿಜಿಸ್ಟರ ಮಾಡಿಕ್ಕೊಳ್ಳಬೇಕಾಗುತ್ತದೆ.


ಫೈನಾನ್ಸ್ ಕಂಪನಿಗಳಿಗೆ ಸರ್ಕಾರದಿಂದ ಇಂತಿಷ್ಟೆ ಬಡ್ಡಿ ವಸೂಲಿ ಮಾಡಬೇಕು ಎಂದು ನೀತಿ ನಿಯಮ ಇದೆ. ಆದರೆ ಅವಳಿ ನಗರದಲ್ಲಿ ಕಾನೂನು ಬಾಹೀರವಾಗಿ ಬಡ್ಡಿ ದಂಧೆ ಮಾಡುತ್ತಿದ್ದಾರೆ.

ಅಲ್ಲದೇ ಕೆಲವು ಪೊಲೀಸರು ಈ ಬಡ್ಡಿ ದಂಧೇಕೋರರ ಜೊತೆಗೆ ಶಾಮೀಲಾದ್ದಾರೆ. ಧಂದೆಕೋರರು ಬಡ್ಡಿ, ಚಕ್ರ ಬಡ್ಡಿಯನ್ನು ಸುಲಿಗೆ ಮಾಡುತ್ತಿದ್ದಾರೆ. ಇವರ ಹಾವಳಿಯಿಂದಾಗಿ ಅನಿವಾರ್ಯ ಸಾಲ ಪಡೆದವರು ಕಳ್ಳತನಕ್ಕೆ ಇಳಿತ್ತಾರೆ.

ಇನ್ನು ಮುಂದೆ ಹೋಗಿ ಕೆಲವುರ ಜನರ ಮೇಲೆ ದಾಳಿ ಮಾಡುವ ಕೆಲಸ ಮಾಡುತ್ತಾರೆ. ಡ್ರಗ್ಸ್ ನಂತರ ಮಾಧಕ ವಸ್ತು ಸೇವಿಸಿ ಕೊಲೆ, ಸುಲುಗೆ ಮಾಡಲು ಯುವಕರು ಇಳಿಯುತ್ತಿದ್ದಾರೆ. ಆದ್ದರಿಂದ ಪೊಲೀಸ್ ಇಲಾಖೆ ಸಮರ್ಪಕವಾಗಿ ಕೆಲಸ ಮಾಡಬೇಕು.

ಇನ್ನೂ ಸರ್ಕಾರ ಪೊಲೀಸ್ ಇಲಾಖೆಯ ಅಧಿಕಾರಿಗಳಿಂದ ದುಡ್ಡು ತಗೆದುಕೊಂಡು ವರ್ಗಾವಣೆ ಮಾಡಿದರೆ. ಅಂತಹ ಪೊಲೀಸರು ಕಳ್ಳರು, ದಂಧೆಕೋರರ ಹಣ ಪಡೆದು ಕಾನೂನಿಗೆ ವಿರುದ್ಧವಾಗಿ ಕೆಲಸ ಮಾಡುತ್ತಾರೆ. ಕಾನೂನು ವಿರುದ್ಧ ನಡೆಯುವವರು, ವೇಶ್ಯೆವಾಟಿಕೆ ಮಾಡುವವರಿಂದ ಕಡೆಯಿಂದ ಹಣ ವಸೂಲಿಗೆ ಇಳಿಯುತ್ತಾರೆ ಎಂದು ಅವರು ಆರೋಪಿಸಿದರು.

> ಪೊಲೀಸ್ ಠಾಣೆಗಳಲ್ಲಿ ಜನ ವಿರೋಧಿ ಕೆಲಸಗಳು ಹೆಚ್ಚಾಗುತ್ತವೆ. ಇದಕ್ಕೆ ಕಾರಣ ರಾಜ್ಯ ಕಾಂಗ್ರೆಸ್ ಸರ್ಕಾರದಲ್ಲಿ ಅಧಿಕಾರಿಗಳ ವರ್ಗಾವಣೆಯಲ್ಲಿ ದಂಧೆ ಮಾಡುತ್ತಿರುವುದೇ ಇದಕ್ಕೆಲ್ಲ ಪ್ರಮುಖ ಕಾರಣ ಎಂದು ಅವರು ರಾಜ್ಯ ಸರ್ಕಾರದ ವಿರುದ್ಧ ದೂರಿದರು -ಅರವಿಂದ್ ಬೆಲ್ಲದ್, ಬಿಜೆಪಿ ಶಾಸಕ



# ಭಕ್ತಿ ಸಡಗರದ ಶ್ರೀ ಗುರುರಾಯರ ಆರಾಧನೆ

• **ಉದಯವಾಹಿನಿ, ಇಂಡಿ**

ಶ್ರೀ ರಾಘವೇಂದ್ರ ಸ್ವಾಮಿಗಳ 353 ನೇ ಆರಾಧನಾ ಮಹೋತ್ಸವ ಪಟ್ಟಣದ ರಾಘವೇಂದ್ರ ಮಠದಲ್ಲಿ ನಡೆಯುತ್ತಿದೆ. ಮೂರು ದಿನ ಕಾರ್ಯಕ್ರಮದಲ್ಲಿ ಪ್ರತಿ ದಿನ ಅಷ್ಟೋತ್ತರ, ಪವಮಾನ ಸೂಕ್ತ ಪಠಣ, ಪಂಚಾಮೃತ ಅಭಿಷೇಕ,ಪುಷ್ಪಾಲಂಕಾರ ಹಾಗೂ ತುಳಸಿ ಅರ್ಚನೆ ಮುಂತಾದ ಧಾರ್ಮಿಕ ಕಾರ್ಯಕ್ರಮಗಳು ನಡೆಯುತ್ತಿವೆ. ಮಧ್ಯಾರಾಧನೆ ದಿನ ಭಕ್ತರ ದಂಡೇ ಆಗಮಿಸಿ ಸ್ವಾಮಿಗಳ ದರ್ಶನ ಪಡೆದರಲ್ಲದೆ ಮಧ್ಯಾನ್ನ ಸಹಸ್ರಾರು ಭಕ್ತರಿಗೆ ಅನ್ನ ಸಂತರ್ಪಣೆ ನೆರವೇರಿಸಲಾಯಿತು.

ಆರಾಧನಾ ಮಹೋತ್ಸವದ ಅಂಗವಾ ಮಠದೊಳಗೆ ಹೂವಿನ ಅಲಂಕಾರ ಮಾಡಲಾಗಿದ್ದು ಆಕರ್ಷಿಸುತ್ತಿದೆ. ಮೊದಲ ದಿನದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಮಹಿಳಾ ಮಂಡಳ,ತಾಲ್ಲೂಕಾ ದೈವಜ್ಞ ಮಂಡಳಿ,ಮಾತೃಮಂಡಳಿ,ಭಜನಾ ಮಂಡಳಿ ಇವರಿಂದ ಭಜನೆ ಸಾದರಪಡಿಸಿದರು. 22 ರಂದು ಗುರು ಸಾರ್ವಭೌಮ ಭಜನಾ ಮಂಡಳಿಯಿಂದ ದಾಸವಾಣ ಕಾರ್ಯಕ್ರಮ ನಡೆಯಿತು. ಜಗನ್ನಾಥ ಜಹಾಗೀರದಾರ,



ಉದಯವಾಹಿನಿ ಚಿತ್ರ

ಕೃಷ್ಣಾ ಚಟ್ಟರಕಿ, ಗಿಂಡಿ ಆಚಾರ್ಯರರು ಪೂಜಾ ಕಾರ್ಯಕ್ರಮ ನೆರವೇರಿಸಿದರು.

ಶ್ರೀ ರಾಘವೇಂದ್ರ ಸೇವಾ ಸಮಿತಿಯ ಅಧ್ಯಕ್ಷ ಜಿ.ಎಸ್.ಕುಲಕರ್ಣಿ ವಕೀಲರು,ಕಾರ್ಯದರ್ಶಿ ಆರ್.ವಿ.ದೇಶಪಾಂಡೆ ವಕೀಲರು, ಮುಖ್ಯ ಗುರುಗಳಾದ ರಾಘವೇಂದ್ರ ಕುಲಕರ್ಣಿ , ರಮೇಶ ಕುಲಕರ್ಣಿ , ರಾಘವೇಂದ್ರ ಸುಧಾಕರ ಕುಲಕರ್ಣಿ ವಕೀಲರು,ಜಿ.ಎಸ್.ಜೋಶಿ,ಎಸ್.ಜಿ.ದೇಶಪಾಂಡೆ, ಎಸ್.ಬಿ.ಕುಲಕರ್ಣಿ ,ಅನೀಲ ಜೋಶಿ, ಸುನೀಲ ಜೋಶಿ, ಆನಂದ ಕುಲಕರ್ಣಿ ,ಡಿ.ಎಸ್.ಜೋಶಿ,ಸಚೀನ ಕಾಳಗಿ ಮತ್ತಿತರಿದ್ದರು.

# ಅನುದಾನದ ಕೊರತೆ: ಮನೆಗಳು ಅಪೂರ್ಣ

• **ಉದಯವಾಹಿನಿ ನರಸಿಂಹರಾಜಪುರ**

ತಾಲ್ಲೂಕಿನ ವ್ಯಾಪ್ತಿಯ 14 ಗ್ರಾಮ ಪಂಚಾಯಿತಿಗಳಲ್ಲಿ ಬಸವ ವಸತಿ ಯೋಜನೆಯಡಿ ಮನೆ ಮಂಜೂರಾದ ಫಲಾನುಭವಿಗಳಿಗೆ ಪೂರ್ಣ ಅನುದಾನ ಬಿಡುಗಡೆ ಆಗದಿರುವುದರಿಂದ ಫಲಾನುಭವಿಗಳು ತೊಂದರೆ ಅನುಭವಿಸುವಂತಾಗಿದೆ.

2016ರಿಂದ 2021ರ ಅವಧಿಯಲ್ಲಿ ಮೆಣಸೂರು ಗ್ರಾಮ ಪಂಚಾಯಿತಿಯಲ್ಲಿ 10, ಬಾಳೆ ಗ್ರಾಮ ಪಂಚಾಯಿತಿಯಲ್ಲಿ 5, ಕರ್ಕೇಶ್ವರ ಹಾಗೂ ಮಾಗುಂಡಿ ಗ್ರಾ.ಪಂ. ನಲ್ಲಿ ತಲಾ 8, ಕಾನೂರು ಗ್ರಾ. ಪಂ.ನಲ್ಲಿ 3, ಹೊನ್ನೆಕೂಡಿಗೆ ಹಾಗೂ ಆಡುವಳ್ಳಿ ಗ್ರಾ.ಪಂ.ನಲ್ಲಿ ತಲಾ 2, ಮುತ್ತಿನಕೊಪ್ಪ ಗ್ರಾ. ಪಂ. ನಲ್ಲಿ 12, ಕಡಹಿನಬೈಲು ಗ್ರಾ. ಪಂ. ನಲ್ಲಿ 7, ಗುಬ್ಬಿಗಾ ಗ್ರಾ.ಪಂ.ನಲ್ಲಿ 9, ಬನ್ನೂರು, ಬಿ.ಕಣಬೂರು, ಸೀತೂರು ಗ್ರಾ. ಪಂ.ನಲ್ಲಿ ತಲಾ 4, ನಾಗಲಾಪುರ ಗ್ರಾ. ಪಂ. ನಲ್ಲಿ 1, ಒಟ್ಟು 79 ಫಲಾನುಭವಿಗಳಿಗೆ ಬಸವವಸತಿ ಯೋಜನೆಯಡಿ



ಉದಯವಾಹಿನಿ ಚಿತ್ರ

ಮನೆ ಮಂಜೂರಾಗಿತ್ತು. ಸದರಿ ಯೋಜನೆಯಲ್ಲಿ ಪ್ರತಿ ಮನೆಯ ಘಟಕ ವೆಚ್ಚ 1.20 ಲಕ್ಷವಾಗಿದ್ದು, ಮನೆ ನಿರ್ಮಾಣ ವೆಚ್ಚವನ್ನು ನಾಲ್ಕು ಹಂತಗಳಲ್ಲಿ ಪಾವತಿಸಲಾಗುತ್ತದೆ. ತಳಪಾಯ ಪೂರ್ಣಗೊಂಡ ಕೂಡಲೇ 30 ಸಾವಿರ, ಗೋಡೆ ಅಥವಾ ಕಿಟಕಿಯ ಮೇಲೆ ಹಾಕುವ ಹಾಸುಗಲ್ಲಿನವರೆಗೆ ಕಾಮಗಾರಿ ಪೂರ್ಣಗೊಂಡ ಬಳಿಕ ಎರಡನೇ ಕಂತು 30 ಸಾವಿರ, ಚಾವಣಿ ಕೆಲಸ ಮುಗಿದ ಮೇಲೆ 30 ಸಾವಿರ ಹಾಗೂ ಮನೆ ಕಾಮಗಾರಿ ಸಂಪೂರ್ಣಗೊಂಡ ಬಳಿಕ ಕೊನೆಯ ಕಂತು 30 ಸಾವಿರ ಪಾವತಿಸಲಾಗುತ್ತದೆ.

# ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹ: ಬಿಜೆಪಿ ಪ್ರತಿಭಟನೆ

• **ಉದಯವಾಹಿನಿ, ಕಲಬುರಗಿ**

ರಾಜ್ಯಪಾಲರ ಕುರಿತು ಕಾಂಗ್ರೆಸ್ ನಾಯಕರು ಅವಮಾನ ಮಾಡಿದ್ದಾರೆ ಎಂದು ಆರೋಪಿಸಿ ಬಿಜೆಪಿ ನಾಯಕರು ನಗರದಲ್ಲಿ ಗುರುವಾರ ಬೃಹತ್ ಪ್ರತಿಭಟನೆ ನಡೆಸಿದರು.



ಉದಯವಾಹಿನಿ ಚಿತ್ರ

ಮುಡಾ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭಾಗಿಯಾಗಿದ್ದು, ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು' ಎಂದು ಆಗ್ರಹಿಸಿದರು. ನಗರದ ಸರ್ದಾರ್ ವಲ್ಲಭಭಾಯಿ ಪಟೇಲ್ ವೃತ್ತದಲ್ಲಿ ಜಮಾಯಿಸಿದ ಬಿಜೆಪಿ ನಾಯಕರು, ಕಾರ್ಯಕರ್ತರು ಕಾಂಗ್ರೆಸ್ ಸರ್ಕಾರ, ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಘೋಷಣೆ ಕೂಗಿದರು. ಬಳಿಕ ಅಲ್ಲಿಂದ ಜಿಲ್ಲಾಧಿಕಾರಿ ಕಚೇರಿ ತನಕ ಪ್ರತಿಭಟನಾ ಜಾಥಾ ನಡೆಸಿದರು. ಜಿಲ್ಲಾಧಿಕಾರಿ ಕಚೇರಿ ಎದುರು ಸುಮಾರು 40 ನಿಮಿಷಗಳ ಕಾಲ ರಸ್ತೆಯಲ್ಲಿ ವಾಹನಗಳ ಸಂಚಾರ ತಡೆದು ಆಕ್ರೋಶ ವ್ಯಕ್ತಪಡಿಸಿದರು.

ಮಾಜಿ ಶಾಸಕ ರಾಜಕುಮಾರ ಪಾಟೀಲ ತೇಲ್ಕೂರ ಮಾತನಾಡಿ, ತಪ್ಪು ಮಾಡಿರುವ ಸಿದ್ದರಾಮಯ್ಯ ರಾಜೀನಾಮೆ ನೀಡಲೇಬೇಕು, ಹಿಂದೆ ಯಡಿಯೂರಪ್ಪ ಅವರ ವಿರುದ್ಧ ಆರೋಪ ಕೇಳಿ ಬಂದಾಗ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ಕೊಟ್ಟಿದ್ದರು. ಆಗ ವಿರೋಧ ಪಕ್ಷ ನಾಯಕರಾಗಿದ್ದ ಸಿದ್ದರಾಮಯ್ಯ, ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ್ದು ಸರಿಯಾಗಿದೆ ಎಂದಿದ್ದರು. ಈಗ ಅಂಥದ್ದೆ ಸಂದರ್ಭದಲ್ಲಿ ರಾಜ್ಯಪಾಲರ ನಿರ್ಧಾರದ ವಿರುದ್ಧ ಕಾಂಗ್ರೆಸ್ ಪ್ರತಿಭಟಿಸುತ್ತಿದೆ. ಇದಕ್ಕೆ ಏನು ಹೇಳುತ್ತೀರಿ ಸಿದ್ದರಾಮಯ್ಯ ಅವರೇ ಎಂದು ಪ್ರಶ್ನಿಸಿದರು.

# ಚಾಕ್ಲೆಟ್ ಆಸೆ ತೋರಿಸಿ, 10 ವರ್ಷದ ಬಾಲಕಿಯ ಮೇಲೆ ವೃದ್ಧನಿಂದ ಲೈಂಗಿನ ದೌರ್ಜನ್ಯ

• **ಉದಯವಾಹಿನಿ, ಬೆಳಗಾವಿ**

ಇಡೀ ದೇಶದಲ್ಲಿ ಅತ್ಯಾಚಾರ ಪ್ರಕರಣಗಳು. ಲೈಂಗಿಕ ಪ್ರಕರಣಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು. ಅದರ ವಿರುದ್ಧ ಪ್ರತಿಭಟನೆಗಳು ಹೋರಾಟಗಳು ನಡೆಸಿದರು ಈ ಒಂದು ಅತ್ಯಾಚಾರ ಘಟನೆಗಳು ನಿಲ್ಲುತ್ತಿಲ್ಲ. ಇದೀಗ ರಾಜ್ಯದ ಬೆಳಗಾವಿ ಜಿಲ್ಲೆಯ ನಿಪ್ಪಾಣಿ ತಾಲ್ಲೂಕಿನಲ್ಲಿ 10 ವರ್ಷದ ಬಾಲಕಿಯ ಮೇಲೆ ವೃದ್ಧನೊಬ್ಬ ಲೈಂಗಿಕ ದೌರ್ಜನ್ಯ ಎಸಗಿರುವ ಆರೋಪ ಕೇಳಿ ಬಂದಿದೆ.

ಹೌದು ಬೆಳಗಾವಿ ಜಿಲ್ಲೆಯ ನಿಪ್ಪಾಣಿ ಪಟ್ಟಣದಲ್ಲಿ ಈ ಒಂದು ಘಟನೆ ನಡೆ ದಿದ್ದು, 10 ವರ್ಷದ ಬಾಲಕಿಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಿರುವ ಆರೋಪ ಕೇಳಿ ಬಂದಿದೆ.10 ರೂಪಾಯಿ ಚಾಕ್ಲೆಟ್ ಆಸೆ ತೋರಿಸಿ ವೃದ್ಧನು ಬಾಲಕಿಯ ಖಾಸಗಿ ಅಂಗಗಳನ್ನು ಮುಟ್ಟಿ ದೌರ್ಜನ್ಯ ಎಸಗಿದ್ದಾನೆ ಎಂದು ಬಾಲಕಿಯೂ ಪೋಷಕರಿಗೆ ತಿಳಿಸಿದ್ದಾಳೆ. ಆಗಸ್ಟ್ 18 ರಂದು ಈ ಒಂದು ಘಟನೆ ನಡೆದಿದ್ದು ತಡವಾಗಿ ಬೆಳಕಿಗೆ ಬಂದಿದೆ. ಪ್ರಕರಣ ದಾಖಲಿಸಿಕೊಂಡ ಪೊಲೀಸರು ಇದೀಗ ವೃದ್ಧನನ್ನು ಬಂಧಿಸಿದ್ದಾರೆ.

# ಚಂದ್ರಶೇಖರ್ ಆತ್ಮಹತ್ಯೆ ಕೇಸ್: ಸಿಐಡಿ ಚಾರ್ಜ್ ಶೀಟ್‌ನಲ್ಲಿ ಸ್ಫೋಟಕ ಮಾಹಿತಿ ಬಹಿರಂಗ

• **ಉದಯವಾಹಿನಿ ಶಿವಮೊಗ್ಗ**



ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧಿಕಾರಿ ಚಂದ್ರಶೇಖರ್ ಆತ್ಮಹತ್ಯೆ ಪ್ರಕರಣ ಸಂಬಂಧ ಸಿಐಟಿ ಅಧಿಕಾರಿಗಳು ಕೋರ್ಟ್‌ಗೆ 300 ಪುಟಗಳ ಚಾರ್ಜ್ ಶೀಟ್ ಸಲ್ಲಿಸಿದ್ದು, ಅಧಿಕಾರಿಗಳ ಒತ್ತಡದಿಂದ ಆತ್ಮಹತ್ಯೆಗೆ ಶರಣಾಗಿದ್ದಾರೆ ಎಂದು ಉಲ್ಲೇಖಿಸಲಾಗಿದೆ. ಚಂದ್ರಶೇಖರ್ ಆತ್ಮಹತ್ಯೆ ಪ್ರಕರಣದ ತನಿಖೆ ನಡೆಸಿರುವ ಸಿಐಡಿ ಅಧಿಕಾರಿಗಳು ಶಿವಮೊಗ್ಗದ ಕೋರ್ಟ್ ಗೆ 300 ಪುಟಗಳ ಚಾರ್ಜ್ ಶೀಟ್ ಸಲ್ಲಿಸಿದ್ದು, ಚಾರ್ಜ್ ಶೀಟ್‌ನಲ್ಲಿ ಚಂದ್ರಶೇಖರ್ ಅಧಿಕಾರಿಗಳು ಹಾಗೂ ಪದ್ಮನಾಭ ಹಾಗೂ ಪರಶುರಾಮ ಒತ್ತಡದಿಂದ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಉಲ್ಲೇಖಿಸಲಾಗಿದೆ. ವಿನೋಭನಗರ ಪೊಲೀಸ್ ಠಾಣೆ ಯಲ್ಲಿ ವಾಲ್ಮೀಕಿ ಚಂದ್ರಶೇಖರ್ ಪತ್ನಿ ನೀಡಿದ ದೂರಿನ್ವಯ ತನಿಖೆ ನಡೆಸಿದ ಸಿಐಡಿ ತಂಡ ಚಾರ್ಜ್ ಶೀಟ್ ಸಲ್ಲಿಸಿದೆ. ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧಿಕಾರಿ ಚಂದ್ರಶೇಖರ್ ಅವರು ಮೇ 26 ಕ್ಕೆ ಆತ್ಮಹತ್ಯೆ ಮಾಡಿಕೊಂಡಿದ್ದರು. ಶಿವಮೊಗ್ಗ ವಿನೋಬನಗರ ನಿವಾಸ ದಲ್ಲಿ ಆತ್ಮಹತ್ಯೆಗೆ ಶರಣಾಗಿದ್ದರು. ಈ ಘಟನೆ ರಾಜ್ಯದಲ್ಲಿ ಸಂಚಲನ ಮೂಡಿಸಿತ್ತು. ಬಳಿಕ ಇದೇ ಕಾರಣದಿಂದ ಸಚಿವ ನಾಗೇಂದ್ರ ರಾಜೀನಾಮೆ ನೀಡಿದ್ದರು.

# ಎಂಎಲ್‌ಸಿ ಐವಾನ್ ಡಿಸೋಜಾ ನಿವಾಸದ ಮೇಲೆ ಕಲ್ಲು ತೂರಿದ ದುಷ್ಕರ್ಮಿಗಳು

• **ಉದಯವಾಹಿನಿ ಮಂಗಳೂರು**

ಕಾಂಗ್ರೆಸ್‌ನ ವಿಧಾನಪರಿಷತ್ ಸದಸ್ಯ ಐವಾನ್ ಡಿಸೋಜಾ ಅವರ ಮಂಗಳೂರು ನಿವಾಸದ ಮೇಲೆ ಅನಾಮಿಕ ದುಷ್ಕರ್ಮಿಗಳ ಗುಂಪೊಂದು ಕಲ್ಲು ತೂರಾಟ ನಡೆಸಿರುವ ಘಟನೆ ವರದಿಯಾಗಿದೆ. ಮುಡಾ ಪ್ರಕರಣದಲ್ಲಿ ಸಿಎಂ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ ರಾಜ್ಯಪಾಲ ನಡೆಯನ್ನು ಖಂಡಿಸಿ 2 ದಿನಗಳ ಹಿಂದೆ ನಡೆದ ಪ್ರತಿಭಟನೆಯಲ್ಲಿ ಭಾಗಿಯಾಗಿದ್ದ ಐವಾನ್ ಡಿಸೋಜಾ, ಬಾಂಗ್ಲಾದಲ್ಲಿ ಅಲ್ಲಿನ ಮಾಜಿ ಪ್ರಧಾನಿ ಶೇಖ್ ಹಸೀನಾಗೆ ಆದಂತೆಯೇ ಇಲ್ಲಿಯೂ ನಿಮಗೆ ಆಗಲಿದೆ ಎಂದು ಹೇಳಿದ್ದರು. ಈ ಬೆನ್ನಲ್ಲೇ ವೇಲೆನ್ಸಿಯಾದಲ್ಲಿ ಅವರ ಮನೆ ಮೇಲೆ ಕಲ್ಲು ತೂರಾಟ ನಡೆದಿದೆ.

ಐವಾನ್ ಡಿಸೋಜಾ ಹೇಳಿಕೆಯನ್ನು ಉಲ್ಲೇಖಿಸಿ ಬಿಜೆಪಿ ಅವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಪೊಲೀಸ್ ಅಧಿಕಾರಿಗಳಿಗೆ ದೂರು ನೀಡಿದೆ. ಆರಂಭಿಕ ವರದಿಗಳ ಪ್ರಕಾರ, ಇಬ್ಬರು ದುಷ್ಕರ್ಮಿಗಳು ಬೈಕ್‌ನಲ್ಲಿ ಆಗಮಿಸಿ ಸ್ಥಳದಿಂದ ಪರಾರಿಯಾಗುವ ಮೊದಲು ನಿವಾಸದ ಮೇಲೆ ಕಲ್ಲು ಎಸೆದಿದ್ದಾರೆ. ಘಟನೆ ನಡೆದಾಗ ಐವಾನ್ ಬೆಂಗಳೂರಿನಲ್ಲಿದ್ದರು. ಪಾಂಡೇಶ್ವರ ಪೊಲೀಸರು ತನಿಖೆ ಆರಂಭಿಸಿದ್ದಾರೆ.

# ದೇಶದ ಅಭಿವೃದ್ಧಿಗೆ ಯುವ ಜನತೆ ಪಾತ್ರ ಮುಖ್ಯ

## ಯುವಜನತೆ ತಮ್ಮ ಜವಾಬ್ದಾರಿ ಅರಿತು ಜೀವನದಲ್ಲಿ ಗುರಿ ತಲುಪುವ ಕಡೆ ದೃಷ್ಟಿಕೋನ ಹೊಂದಿರಬೇಕು: ಎಂ.ವಿಜಯ್

• **ಉದಯವಾಹಿನಿ ಚಿತ್ರದುರ್ಗ**

ಯುವ ಜನತೆಯಲ್ಲಿ ಉತ್ಸಾಹ, ಛಲ ಇರಬೇಕು. ಕುಟುಂಬ, ಸಮಾಜ, ದೇಶದ ಅಭಿವೃದ್ಧಿಗೆ ಕೊಡುಗೆ ನೀಡುವ ಮನೋಭಾವ ಇರಬೇಕು. ರಾಷ್ಟ್ರದ ಸರ್ವಾಂಗೀಣ ಪ್ರಗತಿ ಹಾಗೂ ದೇಶದ ಅಭಿವೃದ್ಧಿಗೆ ಯುವ ಜನತೆ ಶ್ರಮಿಸಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಹೇಳಿದರು.

ನಗರದ ಅಮೃತ ಸ್ಕೂಲ್ ಆಫ್ ನರ್ಸಿಂಗ್ ಕಾಲೇಜಿನಲ್ಲಿ ಗುರುವಾರ ನೆಹರು ಯುವ ಕೇಂದ್ರ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ, ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಜಿಲ್ಲಾ ಶಾಖೆ, ಅಮೃತ ಸ್ಕೂಲ್ ಆಫ್ ನರ್ಸಿಂಗ್ ಹಾಗೂ ಶ್ರೀ ನೀಲಕಂಠಯ್ಯ ಮೆಮೊರಿಯಲ್ ಪದವಿ ಪೂರ್ವ ಕಾಲೇಜು ವತಿಯಿಂದ ಹಮ್ಮಿಕೊಂಡಿದ್ದ ''ಅಂತರಾಷ್ಟ್ರೀಯ ಯುವ ದಿನಾಚರಣೆ ಮತ್ತು ಯುವ ಜನರಿಗೆ ಕಾನೂನು ಅರಿವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಸ್ತುತ ಮಾಹಿತಿ ತಂತ್ರಜ್ಞಾನದ ಯುಗದಲ್ಲಿ ನಾವಿದ್ದು, ಡಿಜಿಟಲ್ ಉಪಕರಣಗಳ ಬಳಕೆ ಮಾಡುವ ಮುನ್ನ ಅವುಗಳ ಬಗ್ಗೆ ನಮಗೆ ಹೆಚ್ಚಿನ ಜ್ಞಾನ ಇರಬೇಕು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

**ಅಂತರಾಷ್ಟ್ರೀಯ ಯುವ ದಿನಾಚರಣೆ**

ಯುವ ಜನತೆಯ ಸಮಸ್ಯೆಗೆ ಪರಿಹಾರ, ಯೋಜನೆ ರೂಪಿಸುವುದು ಸೇರಿದಂತೆ ಯುವ ಜನರ ಸಾಧನೆಯನ್ನು ಸಹ ಮೆಚ್ಚುಗೆ ವ್ಯಕ್ತಪಡಿಸಲು ವಿಶ್ವ ಯುವ ದಿನಾಚರಣೆ ಆಚರಿಸಲಾಗುತ್ತದೆ. ಯುವ ದಿನಾಚರಣೆ ಜೊತೆಗೆ ಯುವ ಜನರಿಗೆ ಕಾನೂನು ಅರಿವು ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಉತ್ತಮ ಸಮಾಜ ನಿರ್ಮಾಣ ಮಾಡುವಲ್ಲಿ ಕಾನೂನಿನ ಅರಿವು ಬಹಳ ಮುಖ್ಯ ಪಾತ್ರವಹಿಸಲಿದೆ. ಕಾನೂನು ಅರಿವು ಹೆಚ್ಚಾದಂತೆ ಅಪರಾಧಗಳ



ಉದಯವಾಹಿನಿ ಚಿತ್ರ

ಸಂಖ್ಯೆಯೂ ಸಹ ಕಡಿಮೆಯಾಗಲಿದೆ ಎಂದು ಅಭಿಪ್ರಾಯಪಟ್ಟರು.

ವಕೀಲರ ಸಂಘದ ಪ್ರಧಾನ ಕಾರ್ಯದರ್ಶಿ ಆರ್.ಗಂಗಾಧರ್ ಮಾತನಾಡಿದರು. ಕಾರ್ಯಕ್ರಮದಲ್ಲಿ ದೇವರಾಜು ಅರಸು ವಿದ್ಯಾಸಂಸ್ಥೆಯ ಕಾರ್ಯದರ್ಶಿ ಭರತ್, ಅಮೃತ ಸ್ಕೂಲ್ ಆಫ್ ನರ್ಸಿಂಗ್ ಕಾಲೇಜಿನ ಪ್ರಾಂಶುಪಾಲ ಮೊಹಮ್ಮದ್ ವಜಾಹತ್ ಉಲ್ಲಾ, ಶ್ರೀ ನೀಲಕಂಠಯ್ಯ ಮೆಮೊರಿಯಲ್ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲ ಟಿ.ದುರುಗಪ್ಪ, ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಚಿತ್ರದುರ್ಗ ಜಿಲ್ಲಾ ಶಾಖೆಯ ಉಪಸಭಾಪತಿ ಈ.ಅರುಣ್ ಕುಮಾರ್, ಕಾರ್ಯದರ್ಶಿ ಎನ್.ಮಜಹರ್ ಉಲ್ಲಾ ಇದ್ದರು.

> ಯುವಜನತೆ ತಮ್ಮ ಜವಾಬ್ದಾರಿ ಅರಿತು ಜೀವನದಲ್ಲಿ ಗುರಿ ತಲುಪುವ ಕಡೆ ದೃಷ್ಟಿಕೋನ ಹೊಂದಿರಬೇಕು. ಆದರೆ ಇಂದಿನ ಯುವ ಜನತೆ ಇದರಿಂದ ವಿಮುಖರಾಗುತ್ತಿದ್ದಾರೆ. ತಪ್ಪುಗಳನ್ನು ಮಾಡಿ ಕಾನೂನಿನ ಸಂಘರ್ಷಕ್ಕೆ ತುತ್ತಾಗುತ್ತಿದ್ದಾರೆ ಎಂದು ತಿಳಿಸಿದ ಅವರು, ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ತಡೆ ಕಾಯ್ದೆ (ಪೋಕ್ಸೋ), ಬಾಲ್ಯವಿವಾಹ ನಿಷೇಧ ಕಾಯ್ದೆ, ಸೈಬರ್ ಕ್ರೈಂ, ಮಾದಕ ವ್ಯಸನಗಳ ದುಷ್ಪಾರಿಣಾಮಗಳ ಕುರಿತಂತೆ ಯುವ ಜನತೆಗೆ ಅರಿವು ಮೂಡಿಸುವುದು ಅತ್ಯಗತ್ಯವಾಗಿದೆ -ಎಂ.ವಿಜಯ್, ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ

> ಯಾವುದೇ ದೇಶ ಅಭಿವೃದ್ಧಿಯಾಗಬೇಕಾದರೆ ಅಲ್ಲಿರುವ ನೈಸರ್ಗಿಕ ಸಂಪತ್ತಿನ ಜೊತೆಗೆ ಯುವ ಜನರ ಸಂಪತ್ತು ಬಹಳ ಮುಖ್ಯ ಪಾತ್ರ ವಹಿಸಲಿದೆ. ಯುಜ ಜನರಲ್ಲಿ ಅಗಾಧವಾದ ಶಕ್ತಿ ಇದ್ದು, ಇಂದಿನ ಯುವಕರೇ ಮುಂದಿನ ನಾಯಕರಾಗಿದ್ದು, ಅಭಿವೃದ್ಧಿಯ ಹರಿಕಾರರು ಎಂದೂ ಕರೆಯಲಾಗುತ್ತದೆ
>
> -ಎನ್.ಸುಹಾಸ್, ನೆಹರು ಯುವಕೇಂದ್ರದ ಜಿಲ್ಲಾ ಯುವಜನ ಅಧಿಕಾರಿ

# 90 ಅಡಿ ಎತ್ತರದ ಹನುಮಂತನ ಕಂಚಿನ ಪ್ರತಿಮೆ ಅನಾವರಣ

## ಅಮೆರಿಕ ಟೆಕ್ಸಾಸ್ ರಾಜ್ಯಕ್ಕೆ ಹೊಸ ಹೆಗ್ಗುರುತಾದ ಹನುಮಾನ್ ಪ್ರತಿಮೆ, ಅಮೆರಿಕದ ಮೂರನೇ ಅತಿ ದೊಡ್ಡ ಪ್ರತಿಮೆ ಎಂಬ ಹೆಗ್ಗಳಿಕೆ

**ಟೆಕ್ಸಾಸ್:** ಬರೋಬ್ಬರಿ 90 ಅಡಿ ಎತ್ತರದ ಭಗವಾನ್ ಹನುಮಂತನ ಪ್ರತಿಮೆಯನ್ನು ಅಮೆರಿಕದಲ್ಲಿ ಅನಾವರಣ ಮಾಡಲಾಗಿದೆ. ಅಮೆರಿಕ ದೇಶದ ಟೆಕ್ಸಾಸ್ ರಾಜ್ಯದ ಹ್ಯೂಸ್ಟನ್ ನಗರದಲ್ಲಿ ಹನುಮಂತನ ಕಂಚಿನ ಪುತ್ಥಳಿಯನ್ನು ಅನಾವರಣ ಮಾಡಲಾಗಿದೆ. ಈ ಮೂಲಕ ಭಾರತ ಹಾಗೂ ಅಮೆರಿಕ ನಡುವಣ ಧಾರ್ಮಿಕ ಹಾಗೂ ಸಾಂಸ್ಕೃತಿಕ ಬಾಂಧವ್ಯದಲ್ಲಿ ಮಹತ್ವದ ಮೈಲಿಗಲ್ಲು ಸ್ಥಾಪನೆ ಆಗಿದೆ.

ಅಮೆರಿಕ ಟೆಕ್ಸಾಸ್ ರಾಜ್ಯಕ್ಕೆ ಹೊಸ ಹೆಗ್ಗುರುತೊಂದು ಈ ಹನುಮಾನ್ ಪ್ರತಿಮೆ ಮೂಲಕ ಲಭ್ಯ ಆದಂತಾಗಿದೆ. ಅಮೆರಿಕ ದೇಶದಲ್ಲಿ ಇರುವ ಅತ್ಯಂತ ಎತ್ತರದ ಪ್ರತಿಮೆಗಳ ಪೈಕಿ ಟೆಕ್ಸಾಸ್‌ನ ಆಂಜನೇಯನ ಪ್ರತಿಮೆ ಮೂರನೇ ಸ್ಥಾನದಲ್ಲಿ ನಿಲ್ಲುತ್ತದೆ. ಜೊತೆಯಲ್ಲೇ ಭಾರತದ ಆಚೆಗೆ ಇರುವ ಅತಿ ಎತ್ತರದ ಹನುಮಂತನ ಮೂರ್ತಿ ಎಂಬ ಕೀರ್ತಿಗೂ ಈ ಪ್ರತಿಮೆ ಭಾಜನವಾಗಿದೆ.



**ಸಾವಿರಾರು ಭಕ್ತರು ಸಾಕ್ಷಿ**

ಅಮೆರಿಕದ ಅತಿ ದೊಡ್ಡ ಪ್ರತಿಮೆ ಎಂಬ ಹೆಗ್ಗಳಿಕೆ ಲಿಬರ್ಟಿ ಪ್ರತಿಮೆಗೆ ಇದೆ. ಇದರ ಎತ್ತರ 151 ಅಡಿ. ಇನ್ನು ಪೆಗಾಸಸ್ ಹಾಗೂ ಡ್ರಾಗನ್ ಪ್ರತಿಮೆಯು ಫ್ಲೋರಿಡಾದ ಹಲ್ಲಾಂಡೇಲ್ ಬೀಚ್‌ನಲ್ಲಿದೆ. ಇದರ ಎತ್ತರ 110 ಅಡಿ. ಈ ಎರಡೂ ಪ್ರತಿಮೆಗಳ ಬಳಿಕ ಮೂರನೇ ಸ್ಥಾನ ಇದೀಗ ಟೆಕ್ಸಾಸ್ ರಾಜ್ಯದ ಹನುಮಂತನ ಮೂರ್ತಿಗೆ ಲಭ್ಯವಾಗಿದೆ.

ಟೆಕ್ಸಾಸ್‌ನ ಹನುಮಂತನ ಮೂರ್ತಿಗೆ ಸ್ಟ್ಯಾಚ್ಯು ಆಫ್ ಯೂನಿಯನ್ ಎಂದು ಹೆಸರಿಡಲಾಗಿದ್ದು,

**ಅಮೆರಿಕ ದೇಶದಲ್ಲಿ 50 ಲಕ್ಷಕ್ಕೂ ಹೆಚ್ಚು ಭಾರತೀಯರಿದ್ದಾರೆ. ಈ ಪೈಕಿ ಹಿಂದೂಗಳೇ ಬಹುಸಂಖ್ಯಾತರು. ವಿದೇಶದ ನೆಲದಲ್ಲಿ ಇದ್ದರೂ ತಮ್ಮ ಸಂಸ್ಕೃತಿ, ಸಂಪ್ರದಾಯ ಮರೆಯದ ಭಾರತೀಯರು, ನೂರಾರು ದೇಗುಲಗಳನ್ನು ನಿರ್ಮಿಸಿಕೊಂಡಿದ್ದಾರೆ. ಭಗವಂತನ ಹಲವು ಪ್ರತಿಮೆಗಳನ್ನೂ ನಿರ್ಮಿಸಿಕೊಂಡಿದ್ದಾರೆ. ಈ ಪೈಕಿ ಹನುಮಂತನ ಮೂರ್ತಿಯೂ ಇದೆ. ಇದೀಗ ಅಮೆರಿಕದಲ್ಲೇ ಅತಿ ದೊಡ್ಡ ಹನುಮಂತನ ಮೂರ್ತಿ ಪ್ರತಿಷ್ಠಾಪನೆಯಾಗಿದೆ. ಈ ಪ್ರತಿಮೆ ಅಮೆರಿಕದ ಎಲ್ಲಾ ಪ್ರತಿಮೆಗಳ ಪೈಕಿ ಮೂರನೇ ಅತಿ ದೊಡ್ಡ ಪ್ರತಿಮೆ**

ಇದನ್ನು ಶುಗರ್ ಲ್ಯಾಂಡ್‌ನ ಶ್ರೀ ಅಷ್ಟ ಲಕ್ಷ್ಮಿ ಮಂದಿರದ ಬಳಿ ಅನಾವರಣ ಮಾಡಲಾಗಿದೆ. ಆಗಸ್ಟ್ 15 ರಿಂದ ಆಗಸ್ಟ್ 18ರವರೆಗೆ ನಡೆದ ಪ್ರಾಣ ಪ್ರತಿಷ್ಠಾಪನಾ ಮಹೋತ್ಸವದಲ್ಲಿ ಈ ಪ್ರತಿಮೆಯನ್ನು ಅನಾವರಣ ಮಾಡಲಾಗಿದೆ. ಈ ಪ್ರತಿಮೆಯನ್ನು ಸ್ವಾರ್ಥ ರಹಿತ, ಭಕ್ತಿ ಹಾಗೂ ಏಕತೆಯ ಪ್ರತೀಕ ಎಂದು ಬಣ್ಣಿಸಲಾಗಿದೆ. ಭಗವಾನ್ ಹನುಮಂತರು ಭಗವಾನ್ ಶ್ರೀರಾಮ ಹಾಗೂ ಸೀತೆಯ ಬಗ್ಗೆ ಹೊಂದಿದ್ದ ಭಕ್ತಿ ಹಾಗೂ ಆರಾಧನೆಗೆ ಗೌರವಿಸುವ ಸಲುವಾಗಿ ಈ ಪ್ರತಿಮೆ ಸ್ಥಾಪನೆ ಮಾಡಲಾಗಿದೆ.

### ಪವಿತ್ರ ಜಲದ ಸಿಂಪಡಣೆ

**ಭಗವಾನ್ ಹನುಮಂತನ ಮೂರ್ತಿಯ ಪ್ರಾಣ ಪ್ರತಿಷ್ಠಾಪನೆ ಹಾಗೂ ಉದ್ಘಾಟನೆ ಬಳಿಕ ಹೆಲಿಕಾಪ್ಟರ್ ಮೂಲಕ ಪುಷ್ಪವೃಷ್ಟಿ ಮಾಡಲಾಯ್ತು. ಜೊತೆಯಲ್ಲೇ ಪವಿತ್ರ ಜಲದ ಸಿಂಪಡಣೆಯೂ ನಡೆಯಿತು. ಬಳಿಕ 72 ಅಡಿ ಉದ್ದದ ಬೃಹತ್ ಹಾರವನ್ನೂ ಭಗವಾನ್ ಹನುಮಂತನ ಕೊರಳಿಗೆ ಹಾಕಲಾಯ್ತು. ಈ ಅದ್ಭುತ ಕ್ಷಣಗಳಿಗೆ ಸಾವಿರಾರು ಭಕ್ತರು ಸಾಕ್ಷಿಯಾದರು.**

ಈ ಕುರಿತು ಪ್ರತಿಕ್ರಿಯೆ ನೀಡಿರುವ ಕಾರ್ಯಕ್ರಮದ ಸಂಘಟಕರು, ಈ ಪ್ರತಿಮೆಯು ಗುರುಗಳಾದ ಶ್ರೀ ಚಿನ್ನ ಜೀಯರ್ ಸ್ವಾಮೀಜಿ ಅವರ ಸ್ಫೂರ್ತಿಯಿಂದ ನಿರ್ಮಾಣಗೊಂಡಿದೆ ಎಂದರು. ಪದ್ಮಭೂಷಣ ಪುರಸ್ಕೃತರಾದ ಶ್ರೀಗಳು ವೇದಾಧ್ಯಯನ ಪಂಡಿತರು. ಉತ್ತರ ಅಮೆರಿಕದಲ್ಲಿ ಹಲವು ಧಾರ್ಮಿಕ ಚಟುವಟಿಕೆಗಳನ್ನು ಶ್ರೀಗಳು ಕೈಗೊಂಡಿದ್ದಾರೆ. ಭಾರತದ ಸ್ವಾತಂತ್ರ್ಯ ದಿನಾಚರಣೆ ದಿನವಾದ ಆಗಸ್ಟ್ 15 ರಂದೇ ಈ ಪ್ರತಿಮೆಯ ಪ್ರಾಣ ಪ್ರತಿಷ್ಠಾಪನೆ ಹಾಗೂ ಉದ್ಘಾಟನಾ ಕಾರ್ಯಕ್ರಮಗಳು ಆರಂಭಗೊಂಡವು. ಆಗಸ್ಟ್ 18 ರಂದು ಪ್ರತಿಮೆಯ ಪ್ರಾಣ ಪ್ರತಿಷ್ಠಾಪನೆ ಮಾಡಲಾಯ್ತು. ಈ ಧಾರ್ಮಿಕ ವಿಧಿ ವಿಧಾನಗಳು ಶ್ರೀ ಚಿನ್ನ ಜೀಯರ್ ಸ್ವಾಮೀಜಿ ಅವರ ನೇತೃತ್ವದಲ್ಲೇ ನಡೆಯಿತು. ಜೊತೆಯಲ್ಲೇ ಹಲವು ವೇದಾಧ್ಯಯನ ಪಂಡಿತರು, ಪುರೋಹಿತರು ಈ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

# ಕಮಲಾ ಹ್ಯಾರಿಸ್‌ಗೆ ಮೂವರು ಪ್ರಮುಖರ ಬೆಂಬಲ

**ಚಿಕಾಗೋ:** ಅಮೆರಿಕ ಅಧ್ಯಕ್ಷ ಸ್ಥಾನದ ಅಭ್ಯರ್ಥಿಯಾಗಿರುವ ಭಾರತೀಯ ಮೂಲದ ಕಮಲಾ ಹ್ಯಾರಿಸ್ ಅವರಿಗೆ ಡೆಮಾಕ್ರಟಿಕ್ ಪಕ್ಷದ ಮೂವರು ಪ್ರಮುಖ ನಾಯಕರ ಬೆಂಬಲ ದೊರೆತಿದೆ. ಅಮೆರಿಕದ ಮಾಜಿ ಅಧ್ಯಕ್ಷ ಬಿಲ್ ಕ್ಲಿಂಟನ್, ಹೌಸ್ ಅಲ್ಪಸಂಖ್ಯಾತ ನಾಯಕ ಹಕೀಮ್ ಜೆಫ್ರೀಸ್ ಮತ್ತು ಮಾಜಿ ಹೌಸ್ ಸ್ಪೀಕರ್ ನ್ಯಾನ್ಸಿ ಪೆಲೋಸಿ ಅವರುಗಳು ಹ್ಯಾರಿಸ್‌ಗೆ ತಮ ಬೆಂಬಲ ವ್ಯಕ್ತಪಡಿಸಿದ್ದಾರೆ. ರಾಷ್ಟ್ರವ್ಯಾಪಿ ಮನವಿಯನ್ನು ಹೊಂದಿರುವ ಎಲ್ಲಾ ಮೂವರು ನಾಯಕರು ತಮ ಪ್ರಧಾನ ಸಮಯದ ಭಾಷಣಗಳಲ್ಲಿ ಹ್ಯಾರಿಸ್ ಅನ್ನು ಇದೀಗ ದೇಶವನ್ನು ಮುನ್ನಡೆಸಬಲ್ಲ ಅತ್ಯುತ್ತಮ ವ್ಯಕ್ತಿ ಎಂದು ಬಣ್ಣಿಸಿದ್ದಾರೆ. ದೂರದಷ್ಟಿ, ಅನುಭವ, ಮನೋಧರ್ಮ ಮತ್ತು ಇಚ್ಛಾಶಕ್ತಿಯೊಂದಿಗೆ ಈ ರೇಸ್‌ನಲ್ಲಿರುವ ಏಕೈಕ ಅಭ್ಯರ್ಥಿ ಹ್ಯಾರಿಸ್ ಎಂದು ಕ್ಲಿಂಟನ್ ಉಲ್ಲೇಖಿಸಿದ್ದಾರೆ.ನವೆಂಬರ್ 5 ರಂದು ನಡೆಯಲಿರುವ ಚುನಾವಣೆಯಲ್ಲಿ ರಿಪಬ್ಲಿಕನ್ ಪ್ರತಿಸ್ಪರ್ಧಿ ಡೊನಾಲ್ಡ್ ಟ್ರಂಪ್ (78)



ಅವರನ್ನು ಎದುರಿಸಲು 59 ವರ್ಷದ ಹ್ಯಾರಿಸ್ ಅವರು ಗುರುವಾರ ತಮ ಡೆಮಾಕ್ರಟಿಕ್ ಪಕ್ಷದ ಅಧ್ಯಕ್ಷೀಯ ನಾಮನಿರ್ದೇಶನವನ್ನು ಔಪಚಾರಿಕವಾಗಿ ಸ್ವೀಕರಿಸಿದ್ದಾರೆ.

ಭಾರತೀಯ ಮತ್ತು ಆಫ್ರಿಕನ್ ಪರಂಪರೆಯ ಹ್ಯಾರಿಸ್ ಚುನಾಯಿತರಾದರೆ ಯುನೈಟೆಡ್ ಸ್ಟೇಟ್ಸ್‌ನಲ್ಲಿ ಇದೇ ಮೊದಲ ಬಾರಿಗೆ ಮಹಿಳಾ ಅಧ್ಯಕ್ಷರು ಎಂಬ ಖ್ಯಾತಿಗೆ ಒಳಗಾಗಲಿದ್ದಾರೆ.ಕಳೆದ ತಿಂಗಳು, ಅಧ್ಯಕ್ಷ ಬಿಡೆನ್ ನಿಸ್ವಾರ್ಥವಾಗಿ ಉಪಾಧ್ಯಕ್ಷೆ ಕಮಲಾ ಹ್ಯಾರಿಸ್‌ಗೆ ಅವರಿಗೆ ಬ್ಯಾಟನ್ ನೀಡಿದರು, ಅವರು ಸಿದ್ಧ, ಸಿದ್ಧ ಮತ್ತು ಜನರಿಗಾಗಿ ಹೋರಾಡಲು ಸಮರ್ಥರಾಗಿದ್ದಾರೆ

**ಕಮಲಾ ಹ್ಯಾರಿಸ್ ನಮ ಭವಿಷ್ಯಕ್ಕಾಗಿ ಹೋರಾಡುತ್ತಿದ್ದಾರೆ. ಕಮಲಾ ಹ್ಯಾರಿಸ್ ನಮ ಭವಿಷ್ಯಕ್ಕಾಗಿ ಹೋರಾಡು ತ್ತಿದ್ದಾರೆ., ಕಮಲಾ ಹ್ಯಾರಿಸ್ ಅವರನ್ನು ಯುನೈಟೆಡ್ ಸ್ಟೇಟ್ಸ್ ಆಫ್ ಅಮೇರಿಕಾದ 47 ನೇ ಅಧ್ಯಕ್ಷರನ್ನಾಗಿ ಮಾಡೋಣ** –ಜೆಫ್ರೀಸ್

ಎಂದು ಜೆಫ್ರೀಸ್ ಹೇಳಿದರು. ಕಮಲಾ ಹ್ಯಾರಿಸ್ ಒಬ್ಬ ಧೈರ್ಯಶಾಲಿ ನಾಯಕಿ, ಸಹಾನುಭೂತಿಯ ನಾಯಕಿ ಮತ್ತು ದೈನಂದಿನ ಅಮೆರಿಕನ್ನರಿಗೆ ನಿಜವಾದ ಫಲಿತಾಂಶಗಳನ್ನು ನೀಡುವ ಸಾಮಾನ್ಯ ನಾಯಕ. ಕಮಲಾ ಹ್ಯಾರಿಸ್ ನಮ ಸ್ವಾತಂತ್ರ್ಯಕ್ಕಾಗಿ ಹೋರಾಡುತ್ತಿದ್ದಾರೆ. ಕಮಲಾ ಹ್ಯಾರಿಸ್ ನಮ ಕುಟುಂಬಗಳಿಗಾಗಿ ಹೋರಾಡುತ್ತಿದ್ದಾರೆ.

ಕಮಲಾ ಹ್ಯಾರಿಸ್ ಅವರು ಯುನೈಟೆಡ್ ಸ್ಟೇಟ್ಸ್ ಆಫ್ ಅಮೇರಿಕಾದ 47 ನೇ ಅಧ್ಯಕ್ಷರಾಗುವುದನ್ನು ತಡೆಯಲು ಯಾವುದೂ ಸಾಧ್ಯವಿಲ್ಲ ಎಂದು ಹೌಸ್ ಮೈನಾರಿಟಿ ಲೀಡರ್ ಹೇಳಿದರು.

# ನಟ ವಿಜಯ್ ನೇತೃತ್ವದ ಹೊಸ ಪಕ್ಷ ಅಸ್ತಿತ್ವಕ್ಕೆ

**ಚೆನ್ನೈ:** ತಮಿಳುನಾಡಿನ ಜನಪ್ರಿಯ ನಟ ವಿಜಯ್ ನೇತೃತ್ವದ ಹೊಸ ರಾಜಕೀಯ ಪಕ್ಷ ಅಸ್ತಿತ್ವಕ್ಕೆ ಬಂದಿದೆ. ಗುರುವಾರ ಚೆನ್ನೈನಲ್ಲಿ ತಮಿಳಗ ವೆಟ್ರಿ ಕಳಗಂ ಪಕ್ಷದ ಧ್ವಜ, ಗೀತೆಯನ್ನು ಸ್ವತಃ ವಿಜಯ್ ಅವರೇ ಬಿಡುಗಡೆ ಮಾಡಿದ್ದಾರೆ. 2026ರಲ್ಲಿ ನಡೆಯಲಿರುವ ವಿಧಾನಸಭಾ ಚುನಾವಣೆಯಲ್ಲಿ ವಿಜಯ್ ನೇತೃತ್ವದ ಟಿವಿಕೆ ಪಕ್ಷ ಸ್ಪರ್ಧಿಸಲು ಈ ಮೂಲಕ ತಯಾರಿ ಆರಂಭಿಸಿದೆ. ರಾಜ್ಯದಲ್ಲಿನ ಎರಡು ದ್ರಾವಿಡ ಪಕ್ಷಗಳ ಕೆಂಪು, ಕಪ್ಪು ಮತ್ತು ಬಿಳಿ ಬಣ್ಣಗಳನ್ನು ಸ್ಪಷ್ಟವಾಗಿ ತಪ್ಪಿಸಿ, ಟಿವಿಕೆ ಧ್ವಜವು ಮೆರೂನ್ ಬಣ್ಣದಲ್ಲಿ ಹಳದಿ ಬ್ಯಾಂಡ್‌ನೊಂದಿಗೆ ಮಧ್ಯದಲ್ಲಿ ವಾಗೈ ಹೂವಿನೊಂದಿಗೆ ಎರಡು ಆನೆಗಳನ್ನು ಹೊಂದಿದೆ. ಸಮಾರಂಭದಲ್ಲಿ ಮಾತನಾಡಿದ ವಿಜಯ್, ಈ ಧ್ವಜ ಕೇವಲ ಪಕ್ಷದ ಧ್ವಜವಲ್ಲ ತಮಿಳುನಾಡು ಮತ್ತು ರಾಜ್ಯದ ಗೆಲುವಿನ ಧ್ವಜ ಎಂದು ಹೇಳಿದರು.

ನಾನು ಹಾಡಿನ ಅರ್ಥವನ್ನು ನಂತರ ವಿವರಿಸುತ್ತೇನೆ. ಪಕ್ಷದ ಬಹುನಿರೀಕ್ಷಿತ ಮೊದಲ ಸಮೇಳನದ ದಿನಾಂಕ, ಸ್ಥಳವನ್ನು ನಾವು ಹಂಚಿಕೊಳ್ಳುತ್ತೇವೆ ಎಂದು ಅವರು ಹೇಳಿದರು. ವಿಜಯ್ ಅವರು ಸಹ ವಿಶ್ವಾಸದಿಂದ ಕೆಲಸ ಮಾಡಲು, ಅನುಮತಿಯೊಂದಿಗೆ ರಾಜ್ಯಾದ್ಯಂತ ಧ್ವಜಾರೋಹಣವನ್ನು ಆಚರಿಸಲು ಕಾರ್ಯಕರ್ತರನ್ನು ಒತ್ತಾಯಿಸಿದರು.



ಬಹುಕಾಲದಿಂದ ರಾಜಕೀಯ ಮಹತ್ವಾಕಾಂಕ್ಷೆಗಳನ್ನು ಪೋಷಿಸುತ್ತಿರುವ ನಟ, 2026 ರ ತಮಿಳುನಾಡು ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧಿಸುವುದಾಗಿ ಘೋಷಿಸಿದರು.

ಇದರ ಹೊರತಾಗಿಯೂ, ವಿಜಯ್ ಅವರ ಅಭಿಮಾನಿಗಳು ಅವರ ಯಶಸ್ಸಿನ ಬಗ್ಗೆ ವಿಶ್ವಾಸ ಹೊಂದಿದ್ದಾರೆ, ವಿಜಯ್ ಅವರ ಪ್ರವೇಶದೊಂದಿಗೆ 2026 ರ ತಮಿಳುನಾಡು ರಾಜ್ಯ ಚುನಾವಣೆಯಲ್ಲಿ ಪ್ರಬಲ ಸ್ಪರ್ಧೆಯನ್ನು ಕಾಣಬಹುದು. ಎರಡು ದ್ರಾವಿಡ ಪಕ್ಷಗಳಾದ ಡಿಎಂಕೆ ಮತ್ತು ಎಐಎಡಿಎಂಕೆ ಜೊತೆಗೆ ಬಿಜೆಪಿ ಏಕಾಂಗಿಯಾಗಿ ಹೋರಾಡುವ ಸಾಧ್ಯತೆಯಿದೆ, ನಿರ್ದೇಶಕ ಸೀಮಾನ್ ಕೂಡ ಏಕಾಂಗಿಯಾಗಿ ಸ್ಪರ್ಧಿಸುವ ನಿರೀಕ್ಷೆಯಿದೆ.


# ಉಕ್ರೇನ್‌ನಲ್ಲಿ ಶಾಶ್ವತ ಶಾಂತಿ ನೆಲೆಸಬೇಕು: ಪ್ರಧಾನಿ ಮೋದಿ

**ವಾರ್ಸಾ:** ಉಕ್ರೇನ್‌ಗೆ ತಮ್ಮ ಚೊಚ್ಚಲ ಭೇಟಿಯ ಮೊದಲು, ಪ್ರಧಾನಿ ನರೇಂದ್ರ ಮೋದಿ ಅವರು ಭಾರತವು ಈ ಪ್ರದೇಶದಲ್ಲಿ ಶಾಶ್ವತ ಶಾಂತಿಯ ಪ್ರತಿಪಾದಕವಾಗಿದೆ ಎಂದು ಹೇಳಿದರು, ಏಕೆಂದರೆ ಅವರು ಇದು ಯುದ್ಧದ ಯುಗವಲ್ಲ ಎಂದು ಅವರು ತಮ ಅಭಿಪ್ರಾಯವನ್ನು ಪುನರುಚ್ಚರಿಸಿದರು. ರಾಜತಾಂತ್ರಿಕತೆ ಮತ್ತು ಮಾತುಕತೆಯ ಮೂಲಕ ಸಂಘರ್ಷವನ್ನು ಪರಿಹರಿಸಬೇಕು ಎಂದು ಮನವಿ ಮಾಡಿಕೊಂಡಿದ್ದಾರೆ.

ಪೋಲಿಷ್ ರಾಜಧಾನಿಯಲ್ಲಿ ಉತ್ಸಾಹಿ ಭಾರತೀಯ ವಲಸಿಗರನ್ನು ಉದ್ದೇಶಿಸಿ ಮಾತನಾಡಿದ ಮೋದಿ, ದಶಕಗಳಿಂದ ಭಾರತವು ಎಲ್ಲಾ ದೇಶಗಳಿಂದ ಅಂತರವನ್ನು ಕಾಯ್ದುಕೊಳ್ಳುವ ನೀತಿಯನ್ನು ಹೊಂದಿದೆ ಎಂದು ಹೇಳಿದರು. ಆದರೆ, ಇಂದಿನ ಭಾರತದ ನೀತಿ ಎಂದರೆ ಎಲ್ಲಾ ದೇಶಗಳಿಗೂ ಹತ್ತಿರವಾಗಬೇಕು ಎಂಬುದಾಗಿದೆ ಎಂದರು. ಭಾರತವು ಈ ಪ್ರದೇಶದಲ್ಲಿ ಶಾಶ್ವತ ಶಾಂತಿಯ ಪ್ರತಿಪಾದಕವಾಗಿದೆ. ನಮ ನಿಲುವು ತುಂಬಾ ಸ್ಪಷ್ಟವಾಗಿದೆ ಇದು ಯುದ್ಧದ ಯುಗವಲ್ಲ. ಇದು ಮಾನವೀಯತೆಗೆ ಬೆದರಿಕೆ ಹಾಕುವ ಸವಾಲುಗಳ ವಿರುದ್ಧ ಒಗ್ಗೂಡುವ ಸಮಯವಾಗಿದೆ. ಆದ್ದರಿಂದ, ಭಾರತವು ರಾಜತಾಂತ್ರಿಕತೆ ಮತ್ತು ಸಂವಾದಗಳಲ್ಲಿ ನಂಬಿಕೆ ಹೊಂದಿದೆ ಎಂದು ಮೋದಿ ಸಭೆಗೆ ತಿಳಿಸಿದರು.1991 ರಲ್ಲಿ ದೇಶವು ಸ್ವತಂತ್ರವಾದ ನಂತರ ಉಕ್ರೇನ್‌ಗೆ ಭಾರತೀಯ ಪ್ರಧಾನಿಯೊಬ್ಬರು ನೀಡಿದ ಮೊದಲ ಭೇಟಿ ಕೈವ್‌ಗೆ ಅವರ ಪ್ರವಾಸಕ್ಕೆ ಮುಂಚಿತವಾಗಿ ಅವರ ಹೇಳಿಕೆಗಳು ಬಂದಿವೆ.

ಅಧ್ಯಕ್ಷ ವ್ಲಾಡಿಮಿರ್ ಝೆಲೆನ್ಸ್ಕಿ ಅವರ ಆಹ್ವಾನದ ಮೇರೆಗೆ ಉಕ್ರೇನ್‌ಗೆ ಭೇಟಿ ನೀಡುತ್ತಿರುವ ಮೋದಿ, ನಡೆಯುತ್ತಿರುವ ಸಂಘರ್ಷದ ಶಾಂತಿಯುತ ಪರಿಹಾರದ ಕುರಿತು ಉಕ್ರೇನ್ ನಾಯಕರ

**ಇಂದಿನ ಭಾರತವು ಎಲ್ಲರೊಂದಿಗೆ ಸಂಪರ್ಕ ಹೊಂದಲು ಬಯಸುತ್ತದೆ. ಇಂದಿನ ಭಾರತವು ಎಲ್ಲರ ಅಭಿವೃದ್ಧಿಯ ಬಗ್ಗೆ ಮಾತನಾಡುತ್ತದೆ. ಇಂದಿನ ಭಾರತವು ಎಲ್ಲರೊಂದಿಗೆ ಮತ್ತು ಎಲ್ಲರ ಹಿತಾಸಕ್ತಿಗಳ ಬಗ್ಗೆ ಯೋಚಿಸುತ್ತದೆ**
–ನರೇಂದ್ರ ಮೋದಿ, ಪ್ರಧಾನ ಮಂತ್ರಿ



ದೃಷ್ಟಿಕೋನಗಳನ್ನು ಹಂಚಿಕೊಳ್ಳುವುದಾಗಿ ಹೇಳಿದ್ದಾರೆ. ಮಾಸ್ಕೋಗೆ ಅವರ ಉನ್ನತ-ಪ್ರೊಫೈಲ್ ಪ್ರವಾಸ ಮತ್ತು ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರನ್ನು ಭೇಟಿಯಾದ ಸುಮಾರು ಆರು ವಾರಗಳ ನಂತರ ಕೈವ್‌ಗೆ ಅವರ ಭೇಟಿ ಬರುತ್ತದೆ, ಇದು ಯುಎಸ್ ಮತ್ತು ಅದರ ಕೆಲವು ಪಾಶ್ಚಿಮಾತ್ಯ ಮಿತ್ರರಾಷ್ಟ್ರಗಳಿಂದ ಟೀಕೆಗೆ ಕಾರಣವಾಗಿತ್ತು. ವಾರ್ಸಾದಲ್ಲಿನ ವಲಸೆಗಾರರೊಂದಿಗಿನ ಸಭೆಯಲ್ಲಿ, ದ್ವಿಪಕ್ಷೀಯ ಸಂಬಂಧಗಳನ್ನು ಬಲಪಡಿಸುವಲ್ಲಿ ಅವರ ಕೊಡುಗೆಯನ್ನು ಮೋದಿ ಶ್ಲಾಘಿಸಿದರು ಮತ್ತು ರಷ್ಯಾ ದಾಳಿಯ ನಂತರ ನೆರೆಯ ದೇಶಗಳಾದ ಉಕ್ರೇನ್‌ನಲ್ಲಿ ಸಿಲುಕಿರುವ ತನ್ನ ನಾಗರಿಕರನ್ನು ರಕ್ಷಿಸಲು ಭಾರತ ಸರ್ಕಾರ ನಡೆಸಿದ ಸ್ಥಳಾಂತರಿಸುವ ಕಾರ್ಯಾಚರಣೆಯಾದ ಆಪರೇಷನ್ ಗಂಗಾ ಕಾರ್ಯಾಚರಣೆಯ ಯಶಸ್ಸಿನಲ್ಲಿ ಅವರ ಪಾತ್ರವನ್ನು ಶ್ಲಾಘಿಸಿದರು.

ಯಾವುದೇ ದೇಶವು ಬಿಕ್ಕಟ್ಟನ್ನು ಎದುರಿಸಿದರೆ, ಸಹಾಯ ಹಸ್ತ ಚಾಚುವ ಮೊದಲ ದೇಶ ಭಾರತ ಎಂದು ಮೋದಿ ಹೇಳಿದರು. ಜಗತ್ತಿನಲ್ಲಿ ಎಲ್ಲಿ ಭೂಕಂಪ ಅಥವಾ ಯಾವುದೇ ವಿಪತ್ತು ಸಂಭವಿಸಿದರೂ, ಭಾರತಕ್ಕೆ ಒಂದೇ ಒಂದು ಮಂತ್ರವಿದೆ ಮಾನವೀಯತೆ ಮೊದಲು ಎಂದು ಅವರು ಹೇಳಿದರು. ಕಳೆದ 45 ವರ್ಷಗಳಲ್ಲಿ ಭಾರತದ ಪ್ರಧಾನಿಯೊಬ್ಬರು ಪೋಲೆಂಡ್‌ಗೆ ಭೇಟಿ ನೀಡುತ್ತಿರುವ ಮೊದಲ ಪ್ರವಾಸ ಇದಾಗಿದೆ. ಭಾರತ-ಪೋಲೆಂಡ್ ಬಾಂಧವ್ಯವನ್ನು ಬಲಪಡಿಸಲು ಅಧ್ಯಕ್ಷ ಆಂಡ್ರೆಜ್ ದುಡಾ ಮತ್ತು ಪ್ರಧಾನಿ ಡೊನಾಲ್ಡ್ ಟಸ್ಕ್ ಅವರನ್ನು ಭೇಟಿಯಾಗಲು ಉತ್ಸುಕತೆಯಿಂದ ಎದುರು ನೋಡುತ್ತಿದ್ದೇನೆ ಎಂದು ಮೋದಿ ತಮ ಭಾಷಣದಲ್ಲಿ ಹೇಳಿದರು.

ಭಾರತವು ಪ್ರಜಾಪ್ರಭುತ್ವದ ತಾಯಿ ಮತ್ತು ಪೋಲೆಂಡ್‌ನೊಂದಿಗೆ ಹಂಚಿಕೊಂಡ ಮೌಲ್ಯಗಳು ಎರಡು ದೇಶಗಳನ್ನು ಹತ್ತಿರಕ್ಕೆ ತರುತ್ತವೆ ಎಂದು ಅವರು ಹೇಳಿದರು. ಭಾರತಕ್ಕೆ ಪ್ರವಾಸೋದ್ಯಮದ ಬ್ರ್ಯಾಂಡ್ ಅಂಬಾಸಿಡರ್ ಆಗಲು ಮತ್ತು ಅದರ ಬೆಳವಣಿಗೆಯ ಕಥೆಯ ಭಾಗವಾಗಲು ಅವರು ಸಮುದಾಯಕ್ಕೆ ಕರೆ ನೀಡಿದರು.

# ಕಣಿವೆಯಲ್ಲಿ ಖರ್ಗೆ, ರಾಹುಲ್ ಎಲೆಕ್ಷನ್ ಗೇಮ್ ಪ್ಲಾನ್

**ಶ್ರೀನಗರ:** ಕಾಶ್ಮೀರ ವಿಧಾನಸಭಾ ಚುನಾವಣೆಗೆ ದಿನಗಣನೆ ಆರಂಭವಾಗುತ್ತಿದ್ದಂತೆ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಮತ್ತು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಶ್ರೀನಗರದಲ್ಲಿ ಬೀಡುಬಿಟ್ಟಿದ್ದಾರೆ. ಎರಡು ದಿನಗಳ ಭೇಟಿ ಸಂದರ್ಭದಲ್ಲಿ ಅವರು ಚುನಾವಣಾ ಸಿದ್ಧತೆ ಹಾಗೂ ನ್ಯಾಷನಲ್ ಕಾನ್ಫರೆನ್ಸ್ ಪಕ್ಷದೊಂದಿಗಿನ ಮೈತ್ರಿ ಬಗ್ಗೆ ಮಾತುಕತೆ ನಡೆಸಲಿದ್ದಾರೆ.ಕಣಿವೆಗೆ ಆಗಮಿಸಿದ ಕಾಂಗ್ರೆಸ್ ನಾಯಕರಿಗೆ ಪಕ್ಷದ ಕಾರ್ಯಕರ್ತರು, ಬೆಂಬಲಿಗರು ವಿಮಾನ ನಿಲ್ದಾಣದ ಹೊರಗೆ ಸರತಿ ಸಾಲಿನಲ್ಲಿ ನಿಂತು ಅದ್ದೂರಿ ಸ್ವಾಗತ ನೀಡಿದರು.



ಉತ್ಸಾಹಿ ಬೆಂಬಲಿಗರು ಗಾಂಧಿಯವರ ವಾಹನವನ್ನು ವಿಮಾನ ನಿಲ್ದಾಣದ ರಸ್ತೆಯಲ್ಲಿ ನಿಲ್ಲಿಸಿದರು, ಇದು ಅವರನ್ನು ಬೆಂಗಾವಲು ಮಾಡಿದ ಭದ್ರತಾ ಸಿಬ್ಬಂದಿಗೆ ಕೆಲವು ಆತಂಕದ ಕ್ಷಣಗಳನ್ನು ಉಂಟುಮಾಡಿತು. ಸೆಪ್ಟೆಂಬರ್ 18 ರಿಂದ ಪ್ರಾರಂಭವಾಗುವ ಮೂರು ಹಂತದ ವಿಧಾನಸಭಾ ಚುನಾವಣೆಗೆ ಸಂಬಂಧಿಸಿದಂತೆ ಪ್ರಮುಖ ಸಭೆಗಳಿಗಾಗಿ ಉಭಯ ನಾಯಕರು ಕಣಿವೆಗೆ ಭೇಟಿ ನೀಡುತ್ತಿದ್ದಾರೆ ಎಂದು ಹಿರಿಯ ಕಾಂಗ್ರೆಸ್ ನಾಯಕರೊಬ್ಬರು ತಿಳಿಸಿದ್ದಾರೆ.ಉಭಯ ನಾಯಕರು ಗುರುವಾರ ಕಾಶೀರ ಕಣಿವೆಯ 10 ಜಿಲ್ಲೆಗಳ ಪಕ್ಷದ ಮುಖಂಡರು ಮತ್ತು ಕಾರ್ಯಕರ್ತರೊಂದಿಗೆ ವ್ಯಾಪಕ ಚರ್ಚೆಯಲ್ಲಿ ತೊಡಗಿದ್ದಾರೆ. ಹತ್ತು ವರ್ಷಗಳ ನಂತರ ಕಣಿವೆಯಲ್ಲಿ ನಡೆಯಲಿರುವ ಚುನಾವಣೆಗೆ ತಳಮಟ್ಟದ ಸಿದ್ಧತೆಗಳ ಬಗ್ಗೆ ಇಬ್ಬರು ನಾಯಕರು ಪಕ್ಷದ ಕಾರ್ಯಕರ್ತರಿಂದ ಪ್ರತಿಕ್ರಿಯೆ ಪಡೆಯಲಿದ್ದಾರೆ ಎಂದು ಕಾಂಗ್ರೆಸ್ ಮುಖಂಡರೊಬ್ಬರು ತಿಳಿಸಿದ್ದಾರೆ.

ನಾಯಕರೊಂದಿಗಿನ ಸಭೆಗೆ ಪಿಡಿಪಿಗೆ ಯಾವುದೇ ಆಹ್ವಾನದ ಬಗ್ಗೆ ಕೇಳಲಾದ ಪ್ರಶ್ನೆಗೆ, ಪಕ್ಷದೊಳಗಿನ ಆಂತರಿಕ ಚರ್ಚೆಗಳು ಮತ್ತು ನಿರ್ಧಾರಗಳ ನಂತರ ಇಂತಹ ಸಂಗತಿಗಳು ನಡೆಯುತ್ತವೆ ಎಂದು ಕರ್ರಾ ಹೇಳಿದರು. ನಾನು ಅದರ ಬಗ್ಗೆ ಏನನ್ನೂ ಹೇಳಲಾರೆ ಎಂದು ಅವರು ಹೇಳಿದರು. ಬಿಜೆಪಿಯನ್ನು ವಿರೋಧಿಸುವ ಎಲ್ಲಾ ಶಕ್ತಿಗಳು, ಪಕ್ಷಗಳು ಮತ್ತು ವ್ಯಕ್ತಿಗಳಿಗೆ ನಾವು ಮುಕ್ತವಾಗಿದ್ದೇವೆ ಎಂಬುದು ಕಾಂಗ್ರೆಸ್ ಪಕ್ಷದ ನಿಲುವು ಎಂದು ಅವರು ಹೇಳಿದರು. ಎಲ್ಲಾ ಸಮಾನ ಮನಸ್ಕ ಪಕ್ಷಗಳೊಂದಿಗೆ ಮಾತನಾಡಲು ನಾವು ಸಿದ್ಧರಿದ್ದೇವೆ ಎಂದು ಅವರು ಹೇಳಿದರು. ಏತನಧ್ಯೆ, ರಾಹುಲ್ ಗಾಂಧಿ ಅವರ ಭೇಟಿಯ ಸಮಯದಲ್ಲಿ 370 ಮತ್ತು 35 ಎ ವಿಧಿ ಕುರಿತು ತಮ ಪಕ್ಷದ ನಿಲುವನ್ನು ಸ್ಪಷ್ಟಪಡಿಸುವಂತೆ ಬಿಜೆಪಿ ಕೇಳಿದೆ.

# ಅಮೆರಿಕದಲ್ಲಿ ಡೆಮಾಕ್ರೆಟಿಕ್ ಪಕ್ಷದ ಸಮಾವೇಶದಲ್ಲಿ ವೇದ ಪಠಣ

**ಬೆಂಗಳೂರು ಮೂಲದ ಅರ್ಚಕರಿಂದ ಪೂಜೆ**

**ಶಿಕಾಗೋ:** 2024ರ ಅಮೆರಿಕ ಅಧ್ಯಕ್ಷೀಯ ಚುನಾವಣೆ ಹಿನ್ನೆಲೆಯಲ್ಲಿ ಡೆಮಾಕ್ರೆಟಿಕ್ ಪಕ್ಷದ ರಾಷ್ಟ್ರೀಯ ಸಮಾವೇಶ ನಡೆಯುತ್ತಿದೆ. ಈ ಸಮಾವೇಶದ ಮೂರನೇ ದಿನ ವಿಶಿಷ್ಟ ಸನ್ನಿವೇಶಕ್ಕೆ ಸಾಕ್ಷಿಯಾಯ್ತು. ಮೂರನೇ ದಿನದ ಸಮಾವೇಶದ ಆರಂಭದಲ್ಲೇ ವೇದ ಮಂತ್ರಗಳ ಪಠಣ ಕೇಳಿ ಬಂತು. ಅಮೆರಿಕ ದೇಶದ ಒಳಿತಿಗಾಗಿ ವಿಶೇಷ ಪೂಜೆ, ಪ್ರಾರ್ಥನೆ ನಡೆಯಿತು. ಅಮೆರಿಕದ ಶಿಕಾಗೋ ನಗರದಲ್ಲಿ ಡೆಮಾಕ್ರೆಟಿಕ್ ಪಕ್ಷದ ರಾಷ್ಟ್ರೀಯ ಸಮಾವೇಶದ ಮೂರನೇ ದಿನದ ಆರಂಭದಲ್ಲೇ ಪೂಜೆ, ಪುನಸ್ಕಾರ ಆರಂಭಿಸಿದ ಭಾರತೀಯ ಅಮೆರಿಕನ್ ಅರ್ಚಕರಾಗಿರುವ ರಾಕೇಶ್ ಭಟ್ ಅವರು ಈ ಕುರಿತಾಗಿ ಮಾಧ್ಯಮಗಳ ಜೊತೆ ತಮ್ಮ ಅಭಿಪ್ರಾಯ ಹಂಚಿಕೊಂಡರು.

ನಮ್ಮ ನಡುವೆ ಭಿನ್ನತೆಗಳಿವೆ. ಆದರೆ ಒಂದು ದೇಶ ಎಂದು ಬಂದಾಗ ನಾವು ಒಗ್ಗಟ್ಟಾಗಬೇಕು. ಸರ್ವರಿಗೂ ನ್ಯಾಯ ಸಿಗುವತ್ತ ನಾವು ಮುನ್ನಡೆಯಬೇಕು' ಎಂದು ಆಶಿಸಿದ್ದಾರೆ. 'ನಾವೆಲ್ಲರೂ ಒಗ್ಗಟ್ಟಾಗಿ ಮುನ್ನಡೆಯಬೇಕು. ನಮ್ಮ ಮನಸ್ಸುಗಳು ಒಮ್ಮತದಿಂದ ಯೋಚನೆ ಮಾಡಬೇಕು. ನಮ್ಮ ಹೃದಯಗಳು ಬೆರೆಯಬೇಕು. ಇವೆಲ್ಲವೂ ಸಮಾಜದ ಒಳಿತಿಗಾಗಿ ಆಗಬೇಕು. ಹೋಮ ಹವನ, ಪ್ರಾರ್ಥನೆಗಳು ನಮ್ಮನ್ನು ಇನ್ನಷ್ಟು ಶಕ್ತಿಯುತವನ್ನಾಗಿ ಮಾಡಲಿ, ಈ ದೇಶದ ಗರಿಮೆ ಹೆಚ್ಚಿಸಲಿ ಎಂದು ಹಿರಿಯ ಅರ್ಚಕರು ಆಶಿಸಿದರು. ಅಮೆರಿಕದ ಮೇರಿಲ್ಯಾಂಡ್‌ನಲ್ಲಿ ಇರುವ ಶ್ರೀ ಶಿವ ವಿಷ್ಣು ದೇಗುಲದ ಅರ್ಚಕರಾದ ರಾಕೇಶ್ ಭಟ್ ಅವರು ಮೂಲತಃ ಬೆಂಗಳೂರಿನವರು. ಮೇರಿ ಲ್ಯಾಂಡ್‌ನಲ್ಲಿ ಇರುವ ಅವರು ಮಾಧ್ವ ಪಂಥದವರಾಗಿದ್ದು ಋಗ್ವೇದ ಹಾಗೂ ಮಾಧ್ವ ತಂತ್ರಸಾರ ಆಗಮ ಶಾಸ್ತ್ರದ ಪಂಡಿತರು. ಉಡುಪಿಯ ಅಷ್ಟ ಮಠಗಳಲ್ಲಿ ಒಂದಾದ ಪೇಜಾವರ ಮಠದ ಯತಿಗಳ ಶಿಷ್ಯರಾಗಿ ರಾಕೇಶ್ ಭಟ್ ಅವರು ತಮ್ಮ ಶಾಸ್ತ್ರ ಸಾಧನೆ ಮಾಡಿದ್ದಾರೆ.

ರಾಕೇಶ್ ಭಟ್ ಅವರು ಕನ್ನಡ ಮಾತ್ರವಲ್ಲ, ತಮಿಳು, ತೆಲುಗು, ಹಿಂದಿ, ಇಂಗ್ಲೀಷ್, ತುಳು ಹಾಗೂ ಸಂಸ್ಕೃತ ಭಾಷೆಯನ್ನು ಬಲ್ಲವರು. ಸಂಸ್ಕೃತ, ಇಂಗ್ಲಿಷ್ ಹಾಗೂ ಕನ್ನಡ ಭಾಷೆಗಳಲ್ಲಿ ಪದವಿ ಹಾಗೂ ಸ್ನಾತಕೋತ್ತರ ಪದವಿ ಹೊಂದಿದ್ದಾರೆ. ಬೆಂಗಳೂರಿನ ಒಸ್ಟಿನ್ ಕಾಲೇಜಿನಲ್ಲಿ ಅವರು ಇಂಗ್ಲಿಷ್ ಹಾಗೂ

**ವಸುದೈವ ಕುಟುಂಬಕಂ ಎಂಬ ಧ್ಯೇಯ ವಾಕ್ಯ ಹೊಂದಿರು ನಮಗೆ ಸತ್ಯವೇ ನಮ್ಮ ಆಧಾರ ಸ್ತಂಭ. ಅದುವೇ ಮೇಲುಗೈ ಸಾಧಿಸುತ್ತದೆ ಎಂದರು. ಅಸತ್ಯದಿಂದ ಸತ್ಯದೆಡೆಗೆ ಸಾಗಬೇಕು, ಅಂಧಕಾರದಿಂದ ಬೆಳಕಿನೆಡೆಗೆ ಸಾಗಬೇಕು, ಸಾವಿನಿಂದ ಅಮರತ್ವದೆಡೆಗೆ ಸಾಗಬೇಕು ಎಂದ ರಾಕೇಶ್ ಭಟ್, ಅಂತಿಮವಾಗಿ ಓಂ ಶಾಂತಿ ಶಾಂತಿ ಶಾಂತಿ ಎಂದರು.**

ಕನ್ನಡ ಭಾಷೆಗಳಲ್ಲಿ ಭಟ್ ಅವರು ಪದವಿ ವ್ಯಾಸಂಗ ಮಾಡಿದ್ದರು. ಜಯಚಾಮರಾಜೇಂದ್ರ ಕಾಲೇಜಿನಲ್ಲಿ ಸಂಸ್ಕೃತ ಪದವಿ ವ್ಯಾಸಂಗ ಮಾಡಿದ್ದರು. ಆರಂಭದಲ್ಲಿ ಕೆಲವು ವರ್ಷಗಳ ಕಾಲ ಉಡುಪಿ ಅಷ್ಟ ಮಠಗಳಲ್ಲಿ ಕಾರ್ಯ ನಿರ್ವಹಿಸಿದ್ದ ರಾಕೇಶ್ ಭಟ್ ಅವರು, ಬದರಿ ನಾಥ ಹಾಗೂ ಸೇಲಂನ ರಾಘವೇಂದ್ರ ಸ್ವಾಮಿ ಕೋಯಿಲ್‌ನಲ್ಲಿ ಕೆಲ ಕಾಲ ಕಾರ್ಯ ನಿರ್ವಹಿಸಿ, 2013ರ ಜುಲೈನಲ್ಲಿ ಅಮೆರಿಕದ ಶ್ರೀ ಶ್ರೀ ವಿಷ್ಣು ದೇಗುಲದ ಅರ್ಚಕರಾಗಿ ನೇಮಕವಾದರು.

# ಬಾಹ್ಯಾಕಾಶ ಬಂಧಿ ಸುನೀತಾ ವಿಲಿಯಮ್ಸ್‌ಗೆ ಆಮ್ಲಜನಕ ಕೊರತೆಯಾಗುವ ಭೀತಿ

## ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ಸಿಲುಕಿರುವ ಗಗನಯಾತ್ರಿಗಳು, ಉಸಿರಾಡಲು ಆಮ್ಲಜನಕದ ಕೊರತೆಯಾಗುವ ಆತಂಕ

**ನ್ಯೂಯಾರ್ಕ್:** ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ಸಿಲುಕಿರುವ ಗಗನಯಾತ್ರಿಗಳಾದ ಭಾರತೀಯ ಮೂಲದ ಸುನೀತಾ ವಿಲಿಯಮ್ಸ್ ಹಾಗೂ ಬುಚ್ ವಿಲ್ಮೋರ್ ಅವರ ಸುರಕ್ಷತೆ ಕುರಿತಾಗಿ ಹಲವು ಪ್ರಶ್ನೆಗಳು ಎದ್ದಿವೆ. ಕೇವಲ 8 ದಿನಗಳ ಮಟ್ಟಿಗೆ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ತೆರಳಿದ್ದ ಇಬ್ಬರೂ ಗಗನಯಾತ್ರಿಗಳು ತಾಂತ್ರಿಕ ಕಾರಣಗಳಿಂದಾಗಿ ತಿಂಗಳುಗಟ್ಟಲೆ ಆಂತರಿಕ್ಷದಲ್ಲೇ ಉಳಿಯುವಂತಾಗಿದೆ. ಈ ಗಗನಯಾತ್ರಿಗಳಿಗೆ ಉಸಿರಾಡಲು ಆಮ್ಲಜನಕದ ಕೊರತೆಯಾಗುವ ಭೀತಿಯೂ ಎದುರಾಗಿದೆ.

ಅಮೆರಿಕ ಸೇನೆಯ ಬಾಹ್ಯಾಕಾಶ ವ್ಯವಸ್ಥೆ ವಿಭಾಗದ ನಿವೃತ್ತ ಕಮಾಂಡ್ ರೂಡಿ ರಿಡೋಲ್ಫಿ ಅವರ ಪ್ರಕಾರ ಗಗನಯಾತ್ರಿಗಳು ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಿಂದ ಸ್ಟಾರ್ ಲೈನರ್ ನೌಕೆ ಮೂಲಕ ಭೂಮಿಗೆ ವಾಪಸ್ ಬರುವಾಗ ತಾಂತ್ರಿಕ ದೋಷ ಎದುರಾದರೆ ಕೇವಲ 96 ಗಂಟೆಗಳ ಕಾಲ



**ನಾಸಾಗೆ ಸ್ಪೇಸ್ ಎಕ್ಸ್ ನೆರವು**

ಆಮ್ಲಜನಕ ಪೂರೈಕೆ ಆಗಬಹುದಾದ ಸನ್ನಿವೇಶದಲ್ಲಿ ಆಂತರಿಕ್ಷದಲ್ಲಿ ಸಿಲುಕಬಹುದು ಎಂದು ಆತಂಕ ಹೊರ ಹಾಕಿದ್ದಾರೆ. ಅಮೆರಿಕದ ಪ್ರತಿಷ್ಠಿತ ಸಿಎನ್‌ಬಿಸಿ ಸುದ್ದಿ ಸಂಸ್ಥೆಗೆ ಸೇನೆಯ ಹಿರಿಯ ಅಧಿಕಾರಿ ನೀಡಿರುವ ಈ ಮಾಹಿತಿ ಕುರಿತಾಗಿ ಅಮೆರಿಕದ ಪ್ರತಿಷ್ಠಿತ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ ನಾಸಾ ಯಾವುದೇ ಪ್ರತಿಕ್ರಿಯೆ ನೀಡಿಲ್ಲವಾದರೂ, ಈ ಕುರಿತಾಗಿ ಗಂಭೀರ ಚರ್ಚೆ ಶುರುವಾಗಿದೆ.

ರೂಡಿ ಅವರು ಹಲವು ವೈಜ್ಞಾನಿಕ ಸಾಧ್ಯತೆಗಳನ್ನು ತಮ್ಮ ಸಂದರ್ಶನದಲ್ಲಿ ವಿವರಿಸಿದ್ದಾರೆ. ಸ್ಟಾರ್‌ಲೈನರ್ ಗಗನ ನೌಕೆಯ ದೋಷದಿಂದಾಗಿ ಈ ಎಲ್ಲಾ ಎಡವಟ್ಟುಗಳೂ ಸಂಭವಿಸಿತ್ತು. ಈ ಗಗನನೌಕೆ ಭೂಮಿಗೆ ವಾಪಸ್ ಬರುವಾಗ ಏನಾದರೂ ಎಡವಟ್ಟುಗಳು ಸಂಭವಿಸಿದರೆ ಇಬ್ಬರೂ ಗಗನಯಾತ್ರಿಕರ ಜೀವಕ್ಕೆ ಅಪಾಯ ಎದುರಾಗುವ ಸಾಧ್ಯತೆ ಇದೆ.

ಸುನೀತಾ ವಿಲಿಯಮ್ಸ್ ಹಾಗೂ ಮತ್ತವರ ಜೊತೆಗಾರ ಗಗನಯಾತ್ರಿ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ತೆರಳಿದಾಗ ಆರಂಭದಲ್ಲಿ ಇದು ಕೇವಲ 8 ದಿನಗಳ ಕಾರ್ಯಾಚರಣೆಯಾಗಿತ್ತು. ನಂತರ ಸ್ಟಾರ್ ಲೈನರ್ ಗಗನ ನೌಕೆಯಲ್ಲಿ ದೋಷ ಕಂಡು ಬಂದ ಹಿನ್ನೆಲೆಯಲ್ಲಿ 2 ತಿಂಗಳ ಕಾಲ ವಿಸ್ತರಣೆಯಾಯ್ತು. ಇದೀಗ 8 ತಿಂಗಳ ಕಾಲ ವಿಳಂಬ ಆಗಲಿದೆ ಎಂಬ ಮಾಹಿತಿ ಸಿಗುತ್ತಿದೆ. ಹೀಗಾಗಿ, ಗಗನಯಾತ್ರಿಗಳು ಭೂಮಿಗೆ ಬರೋದು ಯಾವಾಗ ಅನ್ನೋದ್ರ ಕುರಿತಾಗಿ ಚರ್ಚೆಗಳು ಶುರುವಾಗಿವೆ.

58 ವರ್ಷ ವಯಸ್ಸಿನ ಸುನೀತಾ ವಿಲಿಯಮ್ಸ್ ಅವರು ಈಗಾಗಲೇ ದೃಷ್ಟಿ ದೋಷದ ಸಮಸ್ಯೆ ಎದುರಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಸುದೀರ್ಘ ಕಾಲ ಮೈಕ್ರೋ ಗುರುತ್ವಾಕರ್ಷಣೆಗೆ ತಮ್ಮನ್ನು ತಾವು ಒಡ್ಡಿಕೊಂಡಿರುವ ಸುನೀತಾ ಅವರಿಗೆ ಈ ಸಮಸ್ಯೆ ಕಾಣಿಸಿಕೊಂಡಿದೆ. ಹೀಗಾಗಿ ಅವರ ದೃಷ್ಟಿ ಮಂದವಾಗಿದೆ. ಹೀಗಾಗಿ ನಾಸಾ ಸಂಸ್ಥೆ ಸ್ಪೇಸ್ ಎಕ್ಸ್‌ನ ಡ್ರಾಗನ್ ಗಗನ ನೌಕೆ ಮೂಲಕ ಗಗನ ಯಾತ್ರಿಗಳನ್ನು ವಾಪಸ್ ಭೂಮಿಗೆ ಕರೆ ತರಲು ಚಿಂತನೆ ನಡೆಸುತ್ತಿದ್ದು, ಈ ಯೋಜನೆ 2024ರ ಸೆಪ್ಟೆಂಬರ್‌ನಲ್ಲಿ ಆರಂಭ ಆಗಲಿದೆ. ಈ ನೌಕೆಯಲ್ಲಿ ಸಿಬ್ಬಂದಿ ಕೂಡಾ ಇರಲಿದ್ದಾರೆ. ಈ ಯೋಜನೆ ಯಶಸ್ವಿಯಾಗಲಿ ಅನ್ನೋದೇ ಎಲ್ಲರ ಹಾರೈಕೆ.

**ಬೋಯಿಂಗ್ ಸಂಸ್ಥೆಯ ಸ್ಟಾರ್ ಲೈನರ್ ಗಗನ ನೌಕೆಯಲ್ಲಿ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣ ತಲುಪಿದ ಗಗನಯಾತ್ರಿಗಳು, ಇದೀಗ ಗಗನ ನೌಕೆಯಲ್ಲಿನ ತಾಂತ್ರಿಕ ದೋಷದಿಂದಾಗಿ ಅಲ್ಲಿಯೇ ಸಿಲುಕಿದ್ದಾರೆ. ಒಂದು ವೇಳೆ ವಾಪಸ್ ಬರುವಾಗಲೂ ತಾಂತ್ರಿಕ ದೋಷ ಎದುರಾದರೆ ಆಮ್ಲಜನಕ ಕೊರತೆ ಆಗುವ ಭೀತಿ ಇದೆ. ನೌಕೆ ಆಂತರಿಕ್ಷದಲ್ಲೇ ಸಿಲುಕುವ ಭೀತಿ ಇದೆ. ಜೊತೆಯಲ್ಲೇ ಭೂಮಿಗೆ ಬರುವಾಗ ಅಪ್ಪಳಿಸುವ ಭೀತಿಯೂ ಇದೆ**
–ನಿವೃತ್ತ ಸೇನಾಧಿಕಾರಿ

### ಗಗನಯಾತ್ರಿಗಳ ಜೀವಕ್ಕೆ ಗಂಭೀರ ಅಪಾಯ

**ಒಂದು ವೇಳೆ ಸಾಕಷ್ಟು ಪ್ರಯತ್ನಗಳ ಬಳಿಕ ಸ್ಟಾರ್ ಲೈನರ್ ನೌಕೆ ಗಗನಯಾತ್ರಿಗಳನ್ನು ಹೊತ್ತು ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಿಂದ ಭೂಮಿಗೆ ಮರಳುವಾಗ ತಾಂತ್ರಿಕ ದೋಷ ಸಂಭವಿಸಿದರೆ ಭಾರೀ ಅಪಾಯ ಎದುರಾಗಲಿದೆ. ಒಂದೋ ಈ ನೌಕೆ ಭೂಮಿಗೆ ಅಪ್ಪಳಿಸಬಹುದು, ಇಲ್ಲವಾದರೆ ಅಂತರಿಕ್ಷದಲ್ಲಿ ಕಳೆದು ಹೋಗುವ ಭೀತಿಯೂ ಇದೆ. ಹೀಗಾಗಿ, ಗಗನಯಾತ್ರಿಗಳ ಜೀವಕ್ಕೆ ಗಂಭೀರ ಅಪಾಯ ಇದೆ. ಸ್ಟಾರ್ ಲೈನರ್‌ನಲ್ಲಿ ಇರುವ ಉಷ್ಣ ತಡೆಯುವ ರಕ್ಷಣಾ ವ್ಯವಸ್ಥೆ ವಿಫಲವಾದರೂ ಅಪಾಯ ತಪ್ಪಿದ್ದಲ್ಲ ಎನ್ನುತ್ತಾರೆ ಸೇನಾಧಿಕಾರಿ ರೂಡಿ.**

## ಮಿನಿ ನ್ಯೂಸ್

### ಪಾಕಿಸ್ತಾನದಲ್ಲಿ ಭಾರಿ ಮಳೆ: ಇಬ್ಬರು ಮಕ್ಕಳು ಸೇರಿ 8 ಮಂದಿ ಸಾವು

**ಪೆಶಾವರ:** ವಾಯುವ್ಯ ಪಾಕಿಸ್ತಾನದ ಕೆಲ ಜಿಲ್ಲೆಗಳಲ್ಲಿ ಭಾರಿ ಮಳೆಯಾಗಿದ್ದು, ಮಳೆ ಸಂಬಂಧಿತ ಅವಘಡಗಳಲ್ಲಿ ಇಬ್ಬರು ಮಕ್ಕಳು ಸೇರಿದಂತೆ 8 ಮಂದಿ ಮೃತಪಟ್ಟಿದ್ದಾರೆ ಎಂದು ಅಧಿಕಾರಿಗಳು ಗುರುವಾರ ತಿಳಿಸಿದ್ದಾರೆ. ಡೇರಾ, ಇಸ್ಮಾಯಿಲ್ ಖಾನ್, ಬನ್ನು, ಮನ್ಸೆಹ್ರಾ ಮತ್ತು ಮೊಕ್‌ಮಂಡ್ ಜಿಲ್ಲೆಗಳಲ್ಲಿ ನಿರಂತರ ಮಳೆಯಾಗಿದೆ ಎಂದು ವಿಪತ್ತು ನಿರ್ವಹಣಾ ಪ್ರಾಧಿಕಾರದ (ಪಿಡಿಎಂಎ) ಅಧಿಕಾರಿಗಳು ಹೇಳಿದ್ದಾರೆ.

ಬನ್ನುವಿನಲ್ಲಿ ಮನೆ ಮೇಲ್ಛಾವಣಿ ಕುಸಿದು ಸಹೋದರಿಯರಿಬ್ಬರು ಮೃತಪಟ್ಟಿದ್ದಾರೆ. ಡೇರಾ ಇಸ್ಮಾಯಿಲ್ ಖಾನ್ ಜಿಲ್ಲೆಯಲ್ಲಿ ತಾಯಿ, ಬಾಲಕ ಮೃತಪಟ್ಟರೆ, ಮತ್ತೊಂದೆಡೆ ಹರಿಯುವ ನೀರಿನಲ್ಲಿ ಹೆಣ್ಣು ಮಗುವೊಂದು ಕೊಚ್ಚಿ ಮಳೆ ಸಂಬಂಧಿತ ಅವಘಡಗಳಲ್ಲಿ ಮೊಹಮಂಡ್ ಜಿಲ್ಲೆಯಲ್ಲಿ ಮಹಿಳೆಯೊಬ್ಬರು, ಮನೆಹ್ರಾದಲ್ಲಿ ಇಬ್ಬರು ಮೃತಪಟ್ಟಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಭಾರಿ ಮಳೆಯಾದ ಪರಿಣಾಮ ಸಾಕಷ್ಟು ಪ್ರಮಾಣದಲ್ಲಿ ಬೆಳೆಗಳಿಗೆ ಹಾನಿಯಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

### ಸಹಜ ಸ್ಥಿತಿಯತ್ತ ಮರಳುತ್ತಿರುವ ಬಾಂಗ್ಲಾದೇಶ; ಶೀಘ್ರದಲ್ಲೇ ಚುನಾವಣೆ

**ಢಾಕಾ:** ಹಿಂಸಾಚಾರ ಪೀಡಿತ ಬಾಂಗ್ಲಾದೇಶದಲ್ಲಿ ಪರಿಸ್ಥಿತಿ ಸಹಜ ಸ್ಥಿತಿಯತ್ತ ಮರಳುತ್ತಿದೆ, ಆದರೆ ಅನೇಕ ಸವಾಲುಗಳಿವೆ. ಹಲವು ಸುಧಾರಣೆಗಳ ನಂತರ ದೇಶದಲ್ಲಿ ಮುಕ್ತ, ನ್ಯಾಯಸಮ್ಮತ ಚುನಾವಣೆ ನಡೆಸಲಾಗುವುದು ಎಂದು ಮಧ್ಯಂತರ ಸರ್ಕಾರದ ಪತ್ರಿಕಾ ಕಾರ್ಯದರ್ಶಿ ಶಫೀಖುಲ್ ಅಲಂ ತಿಳಿಸಿದ್ದಾರೆ. ಬಾಂಗ್ಲಾದ ವಿದೇಶಾಂಗ ಸೇವಾ ಅಕಾಡೆಮಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕಾನೂನು ಮತ್ತು ಸುವ್ಯವಸ್ಥೆಯನ್ನು ಪುನಃಸ್ಥಾಪಿಸುವುದು ಮೊದಲ ಆದ್ಯತೆಯಾಗಿದೆ. ಶೀಘ್ರದಲ್ಲೇ ರಾಷ್ಟ್ರೀಯ ಭದ್ರತಾ ಸಲಹೆಗಾರರನ್ನು ನೇಮಿಸಲಾಗುವುದು ಎಂದು ಮಾಹಿತಿ ನೀಡಿದರು.

ಢಾಕಾ ಮೆಟ್ರೋಪಾಲಿಟನ್ ಪೊಲೀಸ್ ಅಡಿಯಲ್ಲಿ ಎಲ್ಲಾ 50 ಪೊಲೀಸ್ ಠಾಣೆಗಳ ಮುಖ್ಯಸ್ಥರನ್ನು ವರ್ಗಾವಣೆ ಮಾಡಲಾಗಿದೆ ಎಂದರು. ಇದೇ ವೇಳೆ ಬಾಂಗ್ಲಾದ ಸದ್ಯದ ಪರಿಸ್ಥಿತಿಯ ಬಗ್ಗೆ ಪಶ್ನಿಸಿದಾಗ, ನೀವು ಢಾಕಾ ಅಥವಾ ಕೈಗಾರಿಕಾ ಪ್ರದೇಶದ ಹೊರಗಿನ ಗ್ರಾಮೀಣ ಪ್ರದೇಶಗಳು ಅಥವಾ ನಗರದ ಎಲ್ಲಾ ಸ್ಥಳಗಳಿಗೆ ಭೇಟಿ ನೀಡುತ್ತೀರಿ. ಪರಿಸ್ಥಿತಿಯನ್ನು ನೀವೇ ನೋಡಿ, ಸಾಮಾನ್ಯವಾಗಿದೆಯೇ ಅಥವಾ ಇಲ್ಲವೇ ಎನ್ನುವುದನ್ನು ಕಾಣಬಹುದು' ಎಂದು ಉತ್ತರಿಸಿದರು.

### ಅಸ್ಸಾಂನಲ್ಲಿ ಮುಸ್ಲಿಂ ವಿವಾಹ-ವಿಚ್ಛೇದನಗಳ ನೋಂದಣಿ ಕಡ್ಡಾಯ

**ದೀಸ್‌ಪುರ್:** ಮಹತ್ವದ ಬೆಳವಣಿಗೆಯೊಂದರಲ್ಲಿ ಅಸ್ಸಾಂನಲ್ಲಿ ಮುಸ್ಲಿಂ ವಿವಾಹಗಳು ಮತ್ತು ವಿಚ್ಛೇದನಗಳ ನೋಂದಣಿಯನ್ನು ಕಡ್ಡಾಯಗೊಳಿಸಲು ತೀರ್ಮಾನಿಸಲಾಗಿದೆ. ಮುಂಬರುವ ಶರತ್ಕಾಲದ ಅಸೆಂಬ್ಲಿ ಅಧಿವೇಶನದಲ್ಲಿ ಮುಸ್ಲಿಂ ವಿವಾಹಗಳು ಮತ್ತು ವಿಚ್ಛೇದನಗಳ ಕಡ್ಡಾಯ ಸರ್ಕಾರಿ ನೋಂದಣಿಗಾಗಿ ತಮ ಸರ್ಕಾರ ಮಸೂದೆಯನ್ನು ಪರಿಚಯಿಸಲಿದೆ ಎಂದು ಅಸ್ಸಾಂ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಘೋಷಿಸಿದ್ದಾರೆ. ಮದುವೆ ಮತ್ತು ವಿಚ್ಛೇದನದ ಅಸ್ಸಾಂ ಕಡ್ಡಾಯ ನೋಂದಣಿ ಮಸೂದೆ ಎಂದು ಕರೆಯಲ್ಪಡುವ ಮಸೂದೆಯು ರಾಜ್ಯದಲ್ಲಿ ಬಾಲ್ಯ ವಿವಾಹಗಳನ್ನು ಪರಿಹರಿಸಲು ಮತ್ತು ತಡೆಯುವ ಗುರಿಯನ್ನು ಹೊಂದಿದೆ ಎಂದು ಅವರು ಹೇಳಿದ್ದಾರೆ.

ಮಾನ್ಸೂನ್ ಅಧಿವೇಶನದ ಮೊದಲು ಮಾಧ್ಯಮಗಳೊಂದಿಗೆ ಮಾತನಾಡಿದ ಶರ್ಮಾ, ಹೊಸ ಶಾಸನವು 18 ವರ್ಷಕ್ಕಿಂತ ಕಡಿಮೆ ವಯಸ್ಸಿನ ವ್ಯಕ್ತಿಗಳನ್ನು ಒಳಗೊಂಡ ವಿವಾಹಗಳ ನೋಂದಣಿಯನ್ನು ನಿಷೇಧಿಸುತ್ತದೆ ಎಂದು ಹೇಳಿದರು. ಈ ಹಂತವು ಅಪ್ರಾಪ್ತ ವಯಸ್ಕರನ್ನು ರಕ್ಷಿಸಲು, ಎಲ್ಲಾ ವಿವಾಹಗಳು ಕಾನೂನು ಮಾನದಂಡಗಳಿಗೆ ಅನುಗುಣವಾಗಿರುವುದನ್ನು ಖಚಿತ ಪಡಿಸಿಕೊಳ್ಳಲು ವ್ಯಾಪಕ ಪ್ರಯತ್ನದ ಭಾಗವಾಗಿದೆ.

### ಮೋದಿ, ಯೋಗಿ ಹೊಗಳಿದ ಮುಸ್ಲಿಂ ಮಹಿಳೆಗೆ ಘೋರ ಶಿಕ್ಷೆ ನೀಡಿದ ಪತಿ

**ಅಯೋಧ್ಯೆ:** ಪ್ರಧಾನಿ ನರೇಂದ್ರ ಮೋದಿ ಹಾಗೂ ಉತ್ತರ ಪ್ರದೇಶದ ಸಿಎಂ ಯೋಗಿ ಆದಿತ್ಯನಾಥ್ ಅವರನ್ನು ಹೊಗಳಿದ್ದಕ್ಕೆ ಮುಸ್ಲಿಂ ಮಹಿಳೆಯೊಬ್ಬರು ಪತಿಯಿಂದ ಭೀಕರ ಶಿಕ್ಷೆಗೆ ಗುರಿಯಾಗಿರುವ ಆಘಾತಕಾರಿ ಘಟನೆ ಉತ್ತರ ಪ್ರದೇಶದ ಅಯೋಧ್ಯೆಯಲ್ಲಿ ಬೆಳಕಿಗೆ ಬಂದಿದೆ. ಸದ್ಯದ ಮಾಹಿತಿ ಪ್ರಕಾರ, ಪತಿ ಮೊದಲು ತನ್ನ ಪತ್ನಿಗೆ ಬೆಂಕಿ ಹಚ್ಚಿ ಕೊಲ್ಲಲು ನೋಡಿದ್ದಾನೆ. ನಂತರ ಆಕೆಗೆ ತ್ರಿವಳಿ ತಲಾಖ್ ನೀಡಿ ವಿಚ್ಛೇದನ ನೀಡಿದ್ದಾರೆ.ಬಹ್ರೈಚ್ ಮೂಲದ ಮಹಿಳೆ ಅಯೋಧ್ಯೆಯ ಅರ್ಷದ್ ಎಂಬಾತನನ್ನು ಮದುವೆಯಾಗಿದ್ದಳು.

ಅವರ ಮದುವೆಯ ನಂತರ, ಆ ಮಹಿಳೆ ಅಯೋಧ್ಯೆಗೆ ಆಗಮಿಸಿದಾಗ ಆಕೆ ಉತ್ತರ ಪ್ರದೇಶದ ಪರಿಸರದಿಂದ ಪ್ರಭಾವಿತರಾದರು. ಆಕೆ ಆಗಾಗ ಸಿಎಂ ಯೋಗಿ ಆದಿತ್ಯನಾಥ್, ಪ್ರಧಾನಿ ನರೇಂದ್ರ ಮೋದಿಯನ್ನು ಹೊಗಳುತ್ತಿದ್ದರು. ಇದರಿಂದ ಕುಪಿತಗೊಂಡ ಪತಿ ಆಕೆಯನ್ನು ಸುಟ್ಟು ಹಾಕಿದ್ದಲ್ಲದೆ ವಿಚ್ಛೇದನವನ್ನೂ ನೀಡಿದ್ದಾನೆ. ದೆಹಲಿ ದರ್ವಾಜಾ ಪ್ರದೇಶದಲ್ಲಿ ಈ ಘಟನೆ ನಡೆದಿದೆ.

### ಟೀ ಅಂಗಡಿ ಮೇಲೆ ಟ್ಯಾಂಕರ್ ಉರುಳಿ ಬಿದ್ದು ನಾಲ್ವರ ಸಾವು

**ಬರ್ಹಾಂಪುರ:** ಒಡಿಶಾದ ಗಂಜಾಂ ಜಿಲ್ಲೆಯಲ್ಲಿ ಗುರುವಾರ ಬೆಳಗ್ಗೆ ಬಸ್, ಟ್ಯಾಂಕರ್ ನಡುವೆ ಮುಖಾಮುಖಿ ಡಿಕ್ಕಿ ಸಂಭವಿಸಿದ ನಂತರ ರಸ್ತೆ ಬದಿಯ ಟೀ ಅಂಗಡಿ ಮೇಲೆ ಟ್ಯಾಂಕರ್ ಪಲ್ಟಿಯಾದ ಪರಿಣಾಮ ನಾಲ್ವರು ಮತಪಟ್ಟು 13 ಮಂದಿ ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ರಾಷ್ಟ್ರೀಯ ಹೆದ್ದಾರಿ 59 ರಲ್ಲಿ ಹಿಂಜಿಲಿ ಬಳಿಯ ಸಮರಜೋಳದಲ್ಲಿ ಅಪಘಾತ ಸಂಭವಿಸಿದೆ ಎಂದು ಅವರು ತಿಳಿಸಿದ್ದಾರೆ.

ಬಸ್ ಭವಾನಿಪಟ್ಟಣದಿಂದ ಬರ್ಹಾಂಪುರಕ್ಕೆ ತೆರಳುತ್ತಿದ್ದಾಗ ಟ್ಯಾಂಕರ್ ಅಸ್ಕಾ ಕಡೆಗೆ ಹೋಗುತ್ತಿದ್ದಾಗ ಅಪಘಾತ ಸಂಭವಿಸಿದೆ ಎಂದು ಅವರು ತಿಳಿಸಿದ್ದಾರೆ. ಬಸ್‌ನಲ್ಲಿದ್ದ ಓರ್ವ ವ್ಯಕ್ತಿ ಸಾವನ್ನಪ್ಪಿದ್ದು, ಉಳಿದ ಮೂವರು ಮತಪಟ್ಟವರು ಟೀ ಸ್ಟಾಲ್‌ನಲ್ಲಿ ಕುಳಿತಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ಗಾಯಗೊಂಡವರನ್ನು ಎಂಕೆಸಿಜಿ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಇಬ್ಬರ ಸ್ಥಿತಿ ಚಿಂತಾಜನಕವಾಗಿದೆ ಎಂದು ತಿಳಿಸಿದ್ದಾರೆ. ನಾವು ಇಲ್ಲಿಯವರೆಗೆ ನಾಲ್ಕು ಸಾವುಗಳನ್ನು ಖಚಿತಪಡಿಸಿದ್ದೇವೆ ಎಂದು ಪೊಲೀಸ್ ವರಿಷ್ಠಾಧಿಕಾರಿ ಜಗಮೋಹನ್ ಮೀನಾ ಹೇಳಿದ್ದಾರೆ. ಮತರ ಗುರುತು ಇನ್ನೂ ಪತ್ತೆಯಾಗಿಲ್ಲ ಎಂದರು. ಪೊಲೀಸ್ ತಂಡ ಮತ್ತು ಅಗ್ನಿಶಾಮಕ ದಳದವರು ಹೆದ್ದಾರಿಯನ್ನು ಸಂಚಾರಕ್ಕೆ ಮುಕ್ತಗೊಳಿಸಿದ ನಂತರ ಸಂಚಾರ ಪುನರಾರಂಭಗೊಂಡಿತು.

# ಆಪರೇಷನ್ ಲಂಡನ್ ಕೆಫೆ
## ಚಿತ್ರದ ಟೀಸರ್ ರಿಲೀಸ್

ಕವೀಶ್ ಶೆಟ್ಟಿ ಮತ್ತು ಮೇಘಾ ಶೆಟ್ಟಿ ಕಾಂಬಿನೇಷನ್ನಿನ ಕನ್ನಡ, ಮರಾಠಿ, ಹಿಂದಿ, ತೆಲುಗು, ತಮಿಳು ಹಾಗೂ ಮಲಯಾಳಂ ಭಾಷೆಗಳಲ್ಲಿ ನಿರ್ಮಾಣವಾಗುತ್ತಿರುವ 'ಆಪರೇಷನ್ ಲಂಡನ್ ಕೆಫೆ' ಚಿತ್ರದ ಚಿತ್ರೀಕರಣ ಈಗಾಗಲೇ ಮುಕ್ತಾಯಗೊಂಡು ಪೋಸ್ಟ್ ಪ್ರೊಡಕ್ಷನ್ ಕೆಲಸ ಬಿರುಸಿನಿಂದ ಸಾಗಿದೆ. ಆರಂಭದಿಂದಲೂ ಸಾಕಷ್ಟು ಕುತೂಹಲ ಮೂಡಿಸಿರುವ ಈ ಚಿತ್ರದ ಟೀಸರ್ ಬಿಡುಗಡೆಯಾಗಿ ಸೋಷಿಯಲ್ ಮೀಡಿಯಾದಲ್ಲಿ ಪ್ರೇಕ್ಷಕರಿಂದ ಭರ್ಜರಿ ಫಲಿತಾಂಶ ವನ್ನು ಕಾಣುತ್ತಿದೆ. ಟೀಸರ್ ಬಿಡುಗಡೆ ಮಾಡಿದ ಚಿತ್ರತಂಡ ಇದೆ ಮೊದಲ ಬಾರಿ ಪತ್ರಿಕಾಗೋಷ್ಠಿಯಲ್ಲಿ ಚಿತ್ರದ ಬಗ್ಗೆ ಇನ್ನೂ ಹೆಚ್ಚಿನ ಮಾಹಿತಿ ಹಂಚಿಕೊಂಡಿದೆ.

ಮೊದಲು ಮಾತನಾಡಿದ ನಿರ್ದೇಶಕ ಸಡಗರ ರಾಘವೇಂದ್ರ, ನಾನು ಕನ್ನಡದ ಹೆಸರಾಂತ ನಿರ್ದೇಶಕರ ಜೊತೆ ಹಲವಾರು ವರ್ಷಗಳಿಂದ ಕೆಲಸ ಮಾಡಿದ ನಂತರ ಇದೇ ಮೊದಲ ಬಾರಿಗೆ ತನ್ನ ಚೊಚ್ಚಲ ಚಿತ್ರದ ನಿರ್ದೇಶನ ಮಾಡಿದ್ದೇನೆ. ಈ ಚಿತ್ರದ ನಾಯಕನಾಗಿ ನಟಿಸಿರುವ ಕವೀಶ್ ಶೆಟ್ಟಿ ಈ ಅವಕಾಶವನ್ನು ಕಲ್ಪಿಸಿಕೊಟ್ಟಿದ್ದಾರೆ. ಈ ಸಂದರ್ಭದಲ್ಲಿ ಅವರಿಗೆ ಹಾಗೂ ಚಿತ್ರದ ನಿರ್ಮಾಪಕರಿಗೆ ಧನ್ಯವಾದ ತಿಳಿಸುತ್ತೇನೆ. ಇನ್ನು ಇದೊಂದು ನಕ್ಸಲಿಸಂ ಬೇಸಾಗಿಟ್ಟಿಕೊಂಡು ಹೆಣೆದಿರುವ ಕಥೆ. ಹಾಗಂತ ನಕ್ಸಲಿಸಂನ ವೈಭವಿಕರಿಸಿಲ್ಲ. ಯಾವುದೇ ಒಬ್ಬ ವ್ಯಕ್ತಿಯ ಕುರಿತಾದ ಚಿತ್ರವೂ ಇದಲ್ಲ. ಇದು ಆಫ್ಟರ್ ''ಆಪರೇಷನ್ ಲಂಡನ್ ಕೆಫೆ''. ನೀವು ಮೊದಲು ನೋಡುವುದು ಚಿತ್ರದ ಪ್ರೀಕ್ವೆಲ್. ಮೊದಲ ಭಾಗ ಆನಂತರ ಬರಲಿದೆ. ಆ ಚಿತ್ರದ ಕುರಿತು ಈಗಾಗಲೇ ಕಾರ್ಯ ಆರಂಭವಾಗಿದೆ.



# ಕಳರಿಪಯಟ್ಟು ಕಲಿಕೆಯ ಫೋಟೋ ಹಂಚಿಕೊಂಡ ರಿಷಬ್ ಶೆಟ್ಟಿ

ರಾಷ್ಟ್ರಪ್ರಶಸ್ತಿ ವಿಜೇತ ರಿಷಬ್ ಶೆಟ್ಟಿ ಅವರು 'ಕಾಂತಾರ ಚಾಪ್ಟರ್ 1'ರ ಕುರಿತು ಬಿಗ್ ಅಪ್‌ಡೇಟ್‌ವೊಂದು ಸಿಕ್ಕಿದೆ. ಈ ಸಿನಿಮಾದಲ್ಲಿ ಕಳರಿಪಯಟ್ಟು ಕಲಿಯುತ್ತಿರುವ ಲುಕ್‌ನಲ್ಲಿ ರಿಷಬ್ ಶೆಟ್ಟಿ ಕಾಣಿಸಿಕೊಂಡಿದ್ದಾರೆ. ಇದನ್ನು ಸೋಷಿಯಲ್ ಮೀಡಿಯಾದಲ್ಲಿ ರಿಷಬ್ ಹಂಚಿಕೊಂಡಿದ್ದಾರೆ.

ಇತ್ತೀಚೆಗೆ ರಿಷಬ್ ಕಳರಿಪಯಟ್ಟು ಕಲಿಯುತ್ತಿದ್ದಾರೆ ಎಂಬ ಮಾಹಿತಿ ಹೊರಬಿದ್ದಿತ್ತು. ಪಾತ್ರಕ್ಕಾಗಿ ಸಕಲ ತಯಾರಿ ಮಾಡಿಕೊಳ್ತಿದ್ದಾರೆ ಎನ್ನಲಾಗಿತ್ತು. ಈಗ ಚಿತ್ರದಲ್ಲಿನ ಕಳರಿಪಯಟ್ಟು ಕಲಿಕೆಯಲ್ಲಿ ನಿರತರಾಗಿರುವ ಲುಕ್ ಅನಾವರಣ ಆಗಿದೆ. ಇದರಿಂದ ಅಭಿಮಾನಿಗಳಿಗೆ ಚಿತ್ರದ ಮೇಲಿನ ನಿರೀಕ್ಷೆ ಡಬಲ್ ಆಗಿದೆ.

ಅಂದಹಾಗೆ, ಕಾಂತಾರ 1 ಸಿನಿಮಾವು ಆಗಸ್ಟ್ ಕೊನೆಯ ವಾರದಲ್ಲಿ 4ನೇ ಹಂತದ ಚಿತ್ರೀಕರಣ ನಡೆಯಲಿದ್ದು, ಕಂಪ್ಲಿಟ್ ಹೈವೋಲ್ಟೇಜ್ ಆಯಕ್ಷನ್ ದೃಶ್ಯಗಳು ಶೂಟ್ ಮಾಡಲಾಗುತ್ತದೆ. ಚಿತ್ರವು ಪೂರ್ಣಗೊಳ್ಳುವ ಹಂತದಲ್ಲಿದೆ. ಅದಕ್ಕಾಗಿ ತೆರೆಮರೆಯಲ್ಲಿ ಭಾರೀ ತಯಾರಿ ನಡೆಯುತ್ತಿವೆ. 'ಕಾಂತಾರ ಚಾಪ್ಟರ್ 1' ಸಿನಿಮಾ ಕಾಂತಾರದ ಹಿಂದಿನ ಕತೆಯಾಗಿದೆ. ಕದಂಬ ಯುಗದ ಪಂಜುರ್ಲಿ ದೇವತೆಯ ಕಥೆಯನ್ನು ಇದು ಹೊಂದಿದೆ. ಹೊಂಬಾಳೆ ಸಂಸ್ಥೆ ನಿರ್ಮಾಣದ ಬಹುನಿರೀಕ್ಷಿತ ಚಿತ್ರವು 2025ರ ಆರಂಭದಲ್ಲಿ ಚಿತ್ರಮಂದಿರಗಳಿಗೆ ಬರುವ ನಿರೀಕ್ಷೆಯಿದೆ.



# ಕುತೂಹಲ ಮೂಡಿಸಿದ ಪ್ರಿಯಾಂಕಾ, ಮಧುರ್ ಭೇಟಿ

**ಫ್ಯಾಷನ್ 2 ಚಿತ್ರದ ಬಗ್ಗೆ ಮಾತುಕತೆ**



ನಟಿ ಪ್ರಿಯಾಂಕಾ ಚೋಪ್ರಾ ಬಾಲಿವುಡ್ ಸಿನಿಮಾಗಳಲ್ಲಿ ನಟಿಸದೆ ಹಲವು ವರ್ಷಗಳೇ ಕಳೆದಿವೆ. ಅವರ ಹಿಂದಿ ಸಿನಿಮಾಗಾಗಿ ಎದುರು ನೋಡ್ತಿರುವ ಫ್ಯಾನ್ಸ್‌ಗೆ ಈಗ ಸಿಹಿಸುದ್ದಿ ಸಿಕ್ಕಿದೆ. ನಿರ್ದೇಶಕ ಮಧುರ್ ಭಂಡಾರ್ಕರ್ ಅವರು ಪ್ರಿಯಾಂಕಾರನ್ನು ಭೇಟಿಯಾದ ಬೆನ್ನಲ್ಲೇ 'ಫ್ಯಾಷನ್' ಸೀಕ್ವೆಲ್ ಬಗ್ಗೆ ಚರ್ಚೆ ಶುರುವಾಗಿದೆ. ಮತ್ತೆ ನಟಿ ಬಾಲಿವುಡ್‌ನಲ್ಲಿ ನಟಿಸುವ ಸುಳಿವು ಸಿಕ್ಕಿದೆ.

ಡೈರೆಕ್ಟರ್ ಮಧುರ್ ಭಂಡಾರ್ಕರ್ ಅವರು ಅಮೆರಿಕಗೆ ತೆರಳಿ ಪ್ರಿಯಾಂಕಾ ಚೋಪ್ರಾರನ್ನು ಭೇಟಿಯಾಗಿದ್ದಾರೆ.

ನಟಿಯ ನಿವಾಸದಲ್ಲಿ ಕೆಲ ಹೊತ್ತು ಅವರ ಕುಟುಂಬದ ಜೊತೆ ಕಾಲ ಕಳೆದಿದ್ದಾರೆ. ಪ್ರಿಯಾಂಕಾ ಜೊತೆಗಿನ ಭೇಟಿಯ ಫೋಟೋವನ್ನು ಮಧುರ್ ಇನ್ಸ್ಟಾಗ್ರಾಂ ಖಾತೆಯಲ್ಲಿ ಹಂಚಿಕೊಳ್ತಿದ್ದಂತೆ 'ಫ್ಯಾಷನ್' ಚಿತ್ರದ ಸೀಕ್ವೆಲ್ ಬರುವ ಕುರಿತು ಚರ್ಚೆ ಶುರುವಾಗಿದೆ. ಇಬ್ಬರ ಭೇಟಿ ಅಭಿಮಾನಿಗಳಲ್ಲಿ ಕುತೂಹಲ ಮೂಡಿಸಿದೆ. ಸದ್ಯದಲ್ಲೇ 'ಫ್ಯಾಷನ್ 2' ಬಗ್ಗೆ ಮಾಹಿತಿ ಸಿಗುತ್ತಾ ಎಂದು ಅಭಿಮಾನಿಗಳು ಕಾಯುತ್ತಿದ್ದಾರೆ.

ಅಂದಹಾಗೆ, 2018ರಲ್ಲಿ ಕಂಗನಾ ರಣಾವತ್ ಜೊತೆ ಪ್ರಿಯಾಂಕಾ ಚೋಪ್ರಾ 'ಫ್ಯಾಷನ್' ಎಂಬ ಸಿನಿಮಾ ಮಾಡಿದ್ದರು. ಈ ಚಿತ್ರಕ್ಕೆ ಮಧುರ್ ಭಂಡಾರ್ಕರ್ ನಿರ್ದೇಶನ ಮಾಡಿದ್ದರು. ಈ ಚಿತ್ರ ಪ್ರೇಕ್ಷಕರ ಮೆಚ್ಚುಗೆಗೆ ಕಾರಣವಾಗಿತ್ತು. ನಿಕ್ ಜೊತೆಗಿನ ಮದುವೆಯ ನಂತರ ಅಮೆರಿಕದಲ್ಲಿ ನಟಿ ಪ್ರಿಯಾಂಕಾ ಸೆಟಲ್ ಆಗಿದ್ದಾರೆ. ವೈವಾಹಿಕ ಬದುಕಿನ ಜೊತೆ ಕೆರಿಯರ್ ಅನ್ನು ಬ್ಯಾಲೆನ್ಸ್ ಮಾಡುತ್ತಾ, ಹೆಚ್ಚೆಚ್ಚು ಹಾಲಿವುಡ್ ಸಿನಿಮಾಗಳಲ್ಲಿ ನಟಿಸುತ್ತಿದ್ದಾರೆ. ಇಂಗ್ಲಿಷ್ ಸಿನಿಮಾದಲ್ಲಿಯೂ ಅವರಿಗೆ ಬೇಡಿಕೆ ಹೆಚ್ಚಾಗಿದೆ.

ಸಿನಿ ವಾಹಿನಿ

# ಜಂಗಲ್‌ನಲ್ಲಿ ಪೂಜಾ ಹೆಗ್ಡೆ

ಕರಾವಳಿ ಬೆಡಗಿ ಪೂಜಾ ಹೆಗ್ಡೆ ಸದ್ಯ ಬಾಲಿವುಡ್ ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಇದರ ನಡುವೆ ಸಿನಿಮಾಗೆ ಕೆಲಸಕ್ಕೆ ಬ್ರೇಕ್ ಕೊಟ್ಟು ವಿದೇಶದ ಜಂಗಲ್‌ನಲ್ಲಿ ನಟಿ ಸುತ್ತಾಟ ನಡೆಸಿದ್ದಾರೆ. ಟ್ರೆಕ್ಕಿಂಗ್‌ನ ಸುಂದರ ಫೋಟೋಗಳನ್ನು ಪೂಜಾ ಸೋಷಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ.

ಸಾಲು ಸಾಲು ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದ ನಟಿ ಸಿನಿಮಾಗೆ ಕೊಂಚ ಬ್ರೇಕ್ ಕೊಟ್ಟು ನಟಿ ವಿದೇಶಕ್ಕೆ ಹಾರಿದ್ದಾರೆ. ಕಾಡಿನ ಗ್ರೀನರಿ ಮಧ್ಯೆ ನಿಂತು ಪ್ರಕೃತಿಯನ್ನು ನೋಡಿ ಖುಷಿಪಟ್ಟಿರುವ ಚೆಂದದ ಫೋಟೋಗಳನ್ನು ನಟಿ ಶೇರ್ ಮಾಡಿದ್ದಾರೆ. ಈ ವೇಳೆ, ಶರ್ಟ್ ಮತ್ತು ಶಾರ್ಟ್ ಜೀನ್ಸ್ ಧರಿಸಿ ಮಿಂಚಿದ್ದಾರೆ. ಅಂದಹಾಗೆ, ನಟಿಯ ಖಾಸಗಿ ವಿಚಾರಕ್ಕೆ ಬರೋದಾದ್ರೆ, ಬಾಲಿವುಡ್ ಹೀರೋ ರೋಹನ್ ಮೆಹ್ರಾ ಜೊತೆ ಪೂಜಾ ಹೆಸರು ಕೇಳಿ ಬರುತ್ತಿದೆ. ಕೆಲ ತಿಂಗಳುಗಳ ಹಿಂದೆ ನಟಿಯ ಕುಟುಂಬದ ಜೊತೆ ರೋಹನ್ ಕಾಣಿಸಿಕೊಂಡಿದ್ದರು. ಇದು ಇಬ್ಬರ ಡೇಟಿಂಗ್ ಸುದ್ದಿ ಮತ್ತಷ್ಟು ಪುಷ್ಟಿ ನೀಡಿತ್ತು.

ಇನ್ನೂ ಶಾಹಿದ್ ಕಪೂರ್ ಜೊತೆ 'ದೇವ' ಸಿನಿಮಾದಲ್ಲಿ ಪೂಜಾ ನಾಯಕಿಯಾಗಿ ನಟಿಸಿದ್ದಾರೆ. ಸುನೀಲ್ ಶೆಟ್ಟಿ ಪುತ್ರನ ಜೊತೆ ಸಿನಿಮಾ, ತಮಿಳು ನಟ ಸೂರ್ಯ ನಟನೆಯ 44ನೇ ಚಿತ್ರಕ್ಕೂ ಇವರೇ ನಾಯಕಿಯಾಗಿದ್ದಾರೆ.



# ರಾಜನನ್ನು ರಾಜನ ಥರ ನೋಡೋಕೆ ಇಷ್ಟ

**ದರ್ಶನ್ ಸ್ಥಿತಿ ಕಂಡು ರಚಿತಾ ಭಾವುಕ**

ನ್ಯಾಯಾಂಗ ಬಂಧನದಲ್ಲಿರುವ ದರ್ಶನ್‌ರನ್ನು ರಚಿತಾ ರಾಮ್ ಭೇಟಿಯಾದ ಬಳಿಕ ಮಾಧ್ಯಮಕ್ಕೆ ಪ್ರತಿಕ್ರಿಯೆ ನೀಡಿದ್ದಾರೆ. ರಾಜನನ್ನು ರಾಜನ ಥರ ನೋಡೋಕೆ ಇಷ್ಟ ಎಂದು ನಟಿ ಭಾವುಕರಾಗಿ ಮಾತನಾಡಿದ್ದಾರೆ. ದರ್ಶನ್ ಸರ್ ಆರೋಗ್ಯವಾಗಿದ್ದಾರೆ. ಜೈಲಿನಲ್ಲಿ ಅವರನ್ನು ಹಾಗೇ ನೋಡೋಕೆ ಕಷ್ಟ ಆಗುತ್ತಿದೆ. ಎಲ್ಲರೂ ಅವರನ್ನು ತುಂಬಾ ಮಿಸ್ ಮಾಡಿಕೊಳ್ಳುತ್ತಿದ್ದೇವೆ. ಅವರಿಗೆ ಹೇಳಿ ಬಿಟ್ಟು ಬಂದೆ ನಾವೆಲ್ಲರೂ ನಿಮ್ಮ ಬರುವಿಕೆಗಾಗಿ ಕಾಯ್ತಿದ್ದೇವೆ. ಪ್ಲೀಸ್ ಬೇಗ ಬನ್ನಿ ಅಂತ. ನನಗೆ ಕಾನೂನು ಮೇಲೆ ನಂಬಿಕೆ ಇದೆ. ದರ್ಶನ್ ಸರ್ ಆದಷ್ಟು ಬೇಗ ಹೊರಗೆ ಬರುತ್ತಾರೆ ಎಂದು ನಂಬಿಕೆ ಇದೆ ಎಂದು ರಚಿತಾ ರಾಮ್ ಮಾತನಾಡಿದ್ದಾರೆ. ರಾಜನನ್ನು ರಾಜನ ಥರನೇ ನನಗೆ ನೋಡೋಕೆ ಇಷ್ಟ. ಇವತ್ತು ಅವರನ್ನು ನೋಡಿ ನಿರಾಳವಾಯ್ತು ಎಂದು ನಟಿ ಭಾವುಕರಾಗಿದ್ದಾರೆ. ಅವರು ಅಲ್ಲಿ ಆರೋಗ್ಯವಾಗಿ ಆರಾಮ ಆಗಿ ಇದ್ದಾರೆ. ನಾನು ಅವರ ಬ್ಯಾನರ್ ನಿಂದ ಪರಿಚಯ ಆದವಳು. ನನಗೆ ಇವತ್ತು ಏನೇ ಹೆಸರು ಇದ್ದರೂ ಅದು ಅವರಿಂದ ಸಿಕ್ಕಿದೆ. ಅವರು ಅವತ್ತು ಒಪ್ಪಿಕೊಂಡಿದಕ್ಕೆ ನಾನು ಬಿಂದ್ಯಾ ರಾಮ್‌ನಿಂದ ರಚಿತಾ ರಾಮ್ ಆಗಿ ಬೆಳೆದಿದ್ದು. ನಾನು ಯಾವಗಲೂ ಅವರ ಕುಟುಂಬಕ್ಕೆ ಆಭಾರಿಯಾಗಿರುತ್ತೇನೆ. ಅವರನ್ನು ನೋಡಿ ನಾನೇ ಕಣ್ಣೀರಿಟ್ಟೆ ಆದರೆ ಅವರೇ ನನಗೆ ಸಮಾಧಾನ ಮಾಡಿದರು. ಅವರು ಆದಷ್ಟು ಬೇಗ ಹೊರಬರಲಿ ಎಂದು ಆ ದೇವರಲ್ಲಿ ಪ್ರಾರ್ಥಿಸುತ್ತೇನೆ ಎಂದು ರಚಿತಾ ರಾಮ್ ಮಾತನಾಡಿದ್ದಾರೆ.



# ಟಿ20 ವಿಶ್ವಕಪ್ ಗೆಲುವಿನ ಕ್ರೆಡಿಟ್ ಈ ಮೂವರಿಗೆ

ಟೀಂ ಇಂಡಿಯಾದ ಮೂರು ಆಧಾರ ಸ್ತಂಭಗಳಾದ ಜಯ್ ಶಾ, ರಾಹುಲ್ ದ್ರಾವಿಡ್ ಮತ್ತು ಆಯ್ಕೆ ಸಮಿತಿ ಅಧ್ಯಕ್ಷ ಅಜಿತ್ ಅಗರ್ಕರ್ ಈ ಗೆಲುವಿನಲ್ಲಿ ಸಾಕಷ್ಟು ಪ್ರಭಾವ ಬೀರಿದ್ದಾರೆ. ಆಟಗಾರರಿಂದ ಅತ್ಯುತ್ತಮ ಪ್ರದರ್ಶನವನ್ನು ಹೊರ ತೆಗೆಯಲು ಪ್ರಯತ್ನಿಸುವಲ್ಲಿ ಈ ಮೂವರು ಸಂಪೂರ್ಣ ಬೆಂಬಲವನ್ನು ನೀಡಿದರು. ಇದರಿಂದಾಗಿ ಭಾರತವು ಟಿ20 ವಿಶ್ವಕಪ್ ಟ್ರೋಫಿಯನ್ನು ಎತ್ತಿಹಿಡಿಯಲು ಸಾಧ್ಯವಾಯಿತು ಎಂದು ರೋಹಿತ್ ಹೇಳಿದ್ದಾರೆ.

ರೋಹಿತ್ ಶರ್ಮಾ ನಾಯಕತ್ವದಲ್ಲಿ ಟೀಂ ಇಂಡಿಯಾ ಕಳೆದ ಜೂನ್‌ನಲ್ಲಿ ಅಮೆರಿಕ ಮತ್ತು ವೆಸ್ಟ್ ಇಂಡೀಸ್‌ನಲ್ಲಿ ನಡೆದಿದ್ದ ಟಿ20 ವಿಶ್ವಕಪ್‌ನ ಫೈನಲ್‌ನಲ್ಲಿ ದಕ್ಷಿಣ ಆಫ್ರಿಕಾವನ್ನು ಸೋಲಿಸುವ ಮೂಲಕ ಎರಡನೇ ಬಾರಿಗೆ ಟಿ20 ವಿಶ್ವಕಪ್ ಎತ್ತಿಹಿಡಿದತ್ತು. 2007 ರಲ್ಲಿ ನಡೆದಿದ್ದ ಚೊಚ್ಚಲ ಆವೃತ್ತಿಯಲ್ಲಿ ಚಾಂಪಿಯನ್ ಆಗಿದ್ದ ಭಾರತಕ್ಕೆ ಆ ಬಳಿಕ ಟಿ20 ವಿಶ್ವಕಪ್ ಗಗನ ಕುಸುಮ ವಾಗಿತ್ತು.

ಇದರೊಂದಿಗೆ ಭಾರತದ 11 ವರ್ಷಗಳ ಐಸಿಸಿ ಟ್ರೋಫಿ ಬರಕ್ಕೆ ಅಂತ್ಯ ಸಿಕ್ಕಿತ್ತು. ಟೀಂ ಇಂಡಿಯಾದ ಈ ಗೆಲುವಿನಲ್ಲಿ ಟೂರ್ನಿಯೊದ್ದಕ್ಕೂ ಅದ್ಭುತ ಪ್ರದರ್ಶನ ನೀಡಿದ ಹಲವು ಆಟಗಾರರ ಕಾಣಿಕೆ ಪ್ರಮುಖ ಪಾತ್ರವಹಿಸಿತ್ತು. ಇದರಲ್ಲಿ ನಾಯಕ ರೋಹಿತ್ ಶರ್ಮಾ, ವೇಗಿ ಜಸ್ಪ್ರೀತ್ ಬುಮ್ರಾ ಹಾಗೂ ಫೈನಲ್ ಪಂದ್ಯದಲ್ಲಿ ವಿರಾಟ್ ಕೊಹ್ಲಿ ಸಿಡಿಸಿದ್ದ ಗೆಲುವಿನ ಅರ್ಧಶತಕದ ಕಾಣಿಕೆಯೂ ಸೇರಿದೆ.

ಇಡೀ ತಂಡವಾಗಿ ಸಾಂಘೀಕ ಹೋರಾಟ ನೀಡಿದ್ದ ಟೀಂ ಇಂಡಿಯಾ, ಟಿ20 ವಿಶ್ವಕಪ್ ಟ್ರೋಫಿಯನ್ನು ಮತ್ತೆ ಭಾರತಕ್ಕೆ ತರುವಲ್ಲಿ ಯಶಸ್ವಿಯಾಗಿತ್ತು. ಹೀಗಾಗಿ ಈ ಟಿ20 ಟ್ರೋಫಿಯ ಗೆಲುವಿನ ಶ್ರೇಯ ಇಡೀ ತಂಡಕ್ಕೆ ಸಲ್ಲಬೇಕು. ಆದರೆ ಇದೀಗ ಮಾತನಾಡಿರುವ ನಾಯಕ ರೋಹಿತ್ ಶರ್ಮಾ, ಟಿ20 ವಿಶ್ವಕಪ್ ಗೆಲುವಿನ ಶ್ರೇಯವನ್ನು ತಂಡದಿಂದ ಹೊರಗಿರುವ ಈ ಮೂವರಿಗೆ ನೀಡಿದ್ದಾರೆ. ಡಿಮಾಜಿ ಮುಖ್ಯ ಕೋಚ್ ರಾಹುಲ್ ದ್ರಾವಿಡ್, ಆಯ್ಕೆ ಸಮಿತಿ ಅಧ್ಯಕ್ಷ ಅಜಿತ್ ಅಗರ್ಕರ್ ಮತ್ತು ಬಿಸಿಸಿಐ ಕಾರ್ಯದರ್ಶಿ ಜಯ್ ಶಾ ಅವರು ಆಟಗಾರರು ಉತ್ತಮ ಪ್ರದರ್ಶನ ನೀಡುವ ಪ್ರಯತ್ನದಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ. ಇದರ ಪರಿಣಾಮವಾಗಿ ಭಾರತವು ಟಿ20 ವಿಶ್ವಕಪ್ ಗೆದ್ದಿತು ಎಂದು ಭಾರತ ತಂಡದ ನಾಯಕ ರೋಹಿತ್ ಶರ್ಮಾ ಹೇಳಿದ್ದಾರೆ. ಈವೆಂಟ್‌ವೊಂದರಲ್ಲಿ ವರ್ಷದ ಅತ್ಯುತ್ತಮ ಪುರುಷ ಅಂತರಾಷ್ಟ್ರೀಯ ಕ್ರಿಕೆಟಿಗ ಪ್ರಶಸ್ತಿ ಸ್ವೀಕರಿಸಿದ ಬಳಿಕ ಮಾತನಾಡಿದ ರೋಹಿತ್, ಈ ತಂಡವನ್ನು ಬದಲಾಯಿಸುವುದು ನನ್ನ ಕನಸಾಗಿತ್ತು.

ಹೀಗಾಗಿ ಅಂಕಿಅಂಶಗಳು, ಫಲಿತಾಂಶಗಳ ಬಗ್ಗೆ ಹೆಚ್ಚು ಚಿಂತಿಸಬೇಡಿ ಎಂಬುದನ್ನು ನಾನು ಆಟಗಾರರಿಗೆ ಮನವರಿಕೆ ಮಾಡಿದ್ದೆ. ಆಟಗಾರರು ಹೆಚ್ಚು ಯೋಚಿಸದೆ ಮೈದಾನಕ್ಕೆ ಹೋಗಿ ಮುಕ್ತವಾಗಿ ಆಡುವಂತಹ ವಾತಾವರಣವನ್ನು ನಾವು ನಿರ್ಮಿಸ ಬೇಕಿತ್ತು. ಈ ಪ್ರಯತ್ನ ಕೊನೆಗೂ ಫಲ ನೀಡಿತು. ಟೀಂ ಇಂಡಿಯಾದ ಮೂರು ಆಧಾರ ಸ್ತಂಭಗಳಾದ ಜಯ್ ಶಾ, ರಾಹುಲ್ ದ್ರಾವಿಡ್ ಮತ್ತು ಆಯ್ಕೆ ಸಮಿತಿ ಅಧ್ಯಕ್ಷ ಅಜಿತ್ ಅಗರ್ಕರ್ ಈ ಗೆಲುವಿನಲ್ಲಿ ಸಾಕಷ್ಟು ಪ್ರಭಾವ ಬೀರಿದ್ದಾರೆ. ಆಟಗಾರರಿಂದ ಅತ್ಯುತ್ತಮ ಪ್ರದರ್ಶನವನ್ನು ಹೊರತೆಗೆಯಲು ಪ್ರಯತ್ನಿಸುವಲ್ಲಿ ಈ ಮೂವರು ಸಂಪೂರ್ಣ ಬೆಂಬಲವನ್ನು ನೀಡಿದರು. ಇದರಿಂದಾಗಿ ಭಾರತವು ಟಿ20 ವಿಶ್ವಕಪ್ ಟ್ರೋಫಿಯನ್ನು ಎತ್ತಿಹಿಡಿಯಲು ಸಾಧ್ಯವಾಯಿತು ಎಂದು ರೋಹಿತ್ ಹೇಳಿದ್ದಾರೆ.

ಇನ್ನು ಟಿ20 ವಿಶ್ವಕಪ್ ಗೆದ್ದ ಬಗ್ಗೆ ಮಾತನಾಡಿರುವ ರೋಹಿತ್, 'ವಿಶ್ವಕಪ್ ಗೆದ್ದಿದ್ದನ್ನು ಎಂದಿಗೂ ಪದಗಳಲ್ಲಿ ವ್ಯಕ್ತಪಡಿಸಲು ಸಾಧ್ಯವಿಲ್ಲ.

ನಾವು ವಿಶ್ವಕಪ್ ಗೆದ್ದಾಗ, ನಾವೆಲ್ಲರೂ ಆ ಕ್ಷಣವನ್ನು ಆನಂದಿಸುವುದು ಮುಖ್ಯವಾಗಿತ್ತು, ಅದನ್ನು ನಾವು ಚೆನ್ನಾಗಿ ಮಾಡಿದ್ದೇವೆ. ನಾವು ವಿಶ್ವ ಚಾಂಪಿಯನ್ ಆದಾಗ ಇಡೀ ದೇಶವೇ ನಮ್ಮೊಂದಿಗೆ ಸಂಭ್ರಮಿಸಿತು.

ವಿಶ್ವಕಪ್ ಗೆಲ್ಲುವುದು ನಮಗೆ ಎಷ್ಟು ಮುಖ್ಯವೋ, ಇಡೀ ದೇಶಕ್ಕೂ ಅಷ್ಟೇ ಮುಖ್ಯವಾಗಿತ್ತು. ಟಿ20 ವಿಶ್ವಕಪ್ ಟ್ರೋಫಿಯನ್ನು ಮರಳಿ ಮನೆಗೆ ತಂದು ಇಲ್ಲಿ ಎಲ್ಲಾರೊಂದಿಗೆ ಸಂಭ್ರಮಿಸಿದ್ದು ಸಂತಸ ತಂದಿದೆ ಎಂದಿದ್ದಾರೆ.





**ಕಲ್ಕಿಗದ ಟ್ರೈಲರ್ ಲಾಂಚ್**

# 890 ದಿನಗಳ ಬರ ನೀಗಿಸಿಕೊಂಡ ರಿಜ್ವಾನ್

ರಾವಲ್ಪಿಂಡಿಯಲ್ಲಿ ನಡೆಯುತ್ತಿರುವ ಬಾಂಗ್ಲಾದೇಶ ವಿರುದ್ಧದ ಟೆಸ್ಟ್ ಸರಣಿಯ ಮೊದಲ ಪಂದ್ಯದಲ್ಲಿ ಪಾಕಿಸ್ತಾನದ ವಿಕೆಟ್ ಕೀಪರ್ ಬ್ಯಾಟ್ಸ್‌ಮನ್ ಮೊಹಮ್ಮದ್ ರಿಜ್ವಾನ್ ಅದ್ಭುತ ಶತಕ ಸಿಡಿಸಿದ್ದಾರೆ. ಸಂಕಷ್ಟದ ಸ್ಥಿತಿಯಲ್ಲಿ ಪಾಕ್ ತಂಡದ ಇನ್ನಿಂಗ್ಸ್ ಜವಬ್ದಾರಿ ನಿಭಾಯಿಸಿದ ರಿಜ್ವಾನ್‌ಗೆ ಇದು ಟೆಸ್ಟ್ ವೃತ್ತಿಜೀವನದ ಮೂರನೇ ಶತಕವಾಗಿದೆ.

ವಿಶೇಷವೆಂದರೆ ರಿಜ್ವಾನ್ ಟೆಸ್ಟ್ ಮಾದರಿಯಲ್ಲಿ ಸಿಡಿಸಿರುವ ಮೂರೂ ಟೆಸ್ಟ್ ಶತಕಗಳು ತವರು ನೆಲದಲ್ಲೇ ಅಂದರೆ ಪಾಕಿಸ್ತಾನದಲ್ಲೇ ಸಿಡಿಸಿದಿವೆ. ತಮ್ಮ ವೃತ್ತಿಜೀವನದ ಮೂರು ಟೆಸ್ಟ್ ಶತಕಗಳಲ್ಲಿ 2 ಶತಕಗಳನ್ನು ರಾವಲ್ಪಿಂಡಿಯಲ್ಲಿ ಬಾರಿಸಿರುವ ರಿಜ್ವಾನ್ ಉಳಿದ ಒಂದು ಟೆಸ್ಟ್ ಶತಕವನ್ನು ಕರಾಚಿಯಲ್ಲಿ ಬಾರಿಸಿದ್ದಾರೆ.

ಬಾಂಗ್ಲಾದೇಶ ವಿರುದ್ಧ ರಿಜ್ವಾನ್‌ಗೆ ಇದು ಮೊದಲ ಟೆಸ್ಟ್ ಶತಕವಾಗಿದೆ. ಇದಕ್ಕೂ ಮುನ್ನ ರಿಜ್ವಾನ್ ದಕ್ಷಿಣ ಆಫ್ರಿಕಾ ಹಾಗೂ ಆಸ್ಟ್ರೇಲಿಯಾ ವಿರುದ್ಧ 2 ಶತಕ ಸಿಡಿಸಿದ್ದರು. ಮೊಹಮ್ಮದ್ ರಿಜ್ವಾನ್ ತಮ್ಮ ಮೂರನೇ ಟೆಸ್ಟ್ ಶತಕ 143 ಎಸೆತಗಳಲ್ಲಿ 8 ಬೌಂಡರಿ ಮತ್ತು 2 ಸಿಕ್ಸರ್‌ಗಳನ್ನು ಒಳಗೊಂಡಿತ್ತು.

ಮೊದಲ ದಿನದಾಟದಲ್ಲಿ 24 ರನ್ ಗಳಿಸಿ ಅಜೇಯರಾಗಿ ಉಳಿದ್ದ ಮೊಹಮ್ಮದ್ ರಿಜ್ವಾನ್, ಎರಡನೇ ದಿನದಾಟದಲ್ಲಿ ತಮ್ಮ ರನ್ ವೇಗವನ್ನು ಹೆಚ್ಚಿಸುವ ಮೂಲಕ ಶತಕ ಪೂರೈಸಿದರು. ಇದರೊಂದಿಗೆ ರಿಜ್ವಾನ್ 890 ದಿನಗಳ ಟೆಸ್ಟ್ ಶತಕದ ಬರವನ್ನು ಸಹ ಕೊನೆಗೊಳಿಸಿದರು. ವಾಸ್ತವವಾಗಿ ರಿಜ್ವಾನ್ 12 ಮಾರ್ಚ್ 2022 ರಂದು ನಡೆದಿದ್ದ ಆಸ್ಟ್ರೇಲಿಯಾ ವಿರುದ್ಧದ ಟೆಸ್ಟ್‌ನಲ್ಲಿ ತಮ್ಮ ಕೊನೆಯ ಶತಕವನ್ನು ಬಾರಿಸಿದ್ದರು. ಮೊಹಮ್ಮದ್ ರಿಜ್ವಾನ್ ಬಾಂಗ್ಲಾದೇಶದ ವಿರುದ್ಧ ಶತಕ ಬಾರಿಸುವ ಮೂಲಕ ಮತ್ತೊಂದು ಸಾಧನೆ ಮಾಡಿದ್ದು, ಭಾರತದ ಕೆಎಲ್ ರಾಹುಲ್ ನಂತರ ಡಬ್ಲ್ಯುಟಿಸಿ 2025 ರಲ್ಲಿ ಶತಕ ಗಳಿಸಿದ ಎರಡನೇ ವಿಕೆಟ್ ಕೀಪರ್ ಎನಿಸಿಕೊಂಡಿದ್ದಾರೆ. ಕನ್ನಡಿಗ ಕೆಎಲ್ ರಾಹುಲ್ ದಕ್ಷಿಣ ಆಫ್ರಿಕಾ ವಿರುದ್ಧ ಶತಕ ಸಿಡಿಸಿದ್ದರು.



# ಶಮಿ ಕಂಬ್ಯಾಕ್‌ಗೆ ಡೇಟ್ ಫಿಕ್ಸ್



ಟೀಮ್ ಇಂಡಿಯಾ ಪರ 64 ಟೆಸ್ಟ್ ಪಂದ್ಯಗಳನ್ನಾಡಿರುವ ಮೊಹಮ್ಮದ್ ಶಮಿ ಒಟ್ಟು 229 ವಿಕೆಟ್‌ಗಳನ್ನು ಕಬಳಿಸಿದ್ದಾರೆ. ಮುಂಬರುವ ಟೆಸ್ಟ್ ಸರಣಿಗಳ ವೇಳೆ ಟೀಮ್ ಇಂಡಿಯಾ ಪಾಲಿಗೆ ಅವರ ಲಭ್ಯತೆಯು ಅನಿವಾರ್ಯ. ಹೀಗಾಗಿಯೇ ಸಂಪೂರ್ಣ ಫಿಟ್‌ನೆಸ್‌ನೊಂದಿಗೆ ಮರಳಲು ಮೊಹಮ್ಮದ್ ಶಮಿಗೆ ಕಾಲಾವಕಾಶ ನೀಡಲಾಗಿದೆ.

ಟೀಮ್ ಇಂಡಿಯಾ ವೇಗಿ ಮೊಹಮ್ಮದ್ ಶಮಿ ಕಂಬ್ಯಾಕ್‌ಗೆ ದಿನಾಂಕ ನಿಗದಿಯಾಗಿದೆ. ಕಳೆದ 7 ತಿಂಗಳುಗಳಿಂದ ಭಾರತ ತಂಡದಿಂದ ಹೊರಗುಳಿದಿರುವ ಶಮಿ ಅಕ್ಟೋಬರ್ 11 ರಂದು ನಡೆಯಲಿರುವ ರಣಜಿ ಟ್ರೋಫಿ ಪಂದ್ಯದ ಮೂಲಕ ಸ್ಪರ್ಧಾತ್ಮಕ ಕ್ರಿಕೆಟ್‌ಗೆ ಮರಳುವುದು ಖಚಿತವಾಗಿದೆ. ರಣಜಿ ಟ್ರೋಫಿಯಲ್ಲಿ ಮೊಹಮ್ಮದ್ ಶಮಿ ಬಂಗಾಳ ಪರ ಆಡಲಿದ್ದು, ಅದರಂತೆ ಅಕ್ಟೋಬರ್ 11 ರಂದು ಜರುಗಲಿರುವ ಉತ್ತರ ಪ್ರದೇಶ ವಿರುದ್ಧದ ಪಂದ್ಯದ ಮೂಲಕ ಕಂಬ್ಯಾಕ್ ಮಾಡಲಿದ್ದಾರೆ. ವಿಶೇಷ ಎಂದರೆ ಈ ಪಂದ್ಯದ ಬೆನ್ನಲ್ಲೇ ಭಾರತ ಮತ್ತು ನ್ಯೂಝಿಲೆಂಡ್ ನಡುವಣ ಟೆಸ್ಟ್ ಸಹ ಆರಂಭವಾಗುತ್ತಿದೆ.


ಭಾರತ ಮತ್ತು ನ್ಯೂಝಿಲೆಂಡ್ ನಡುವಣ ಮೂರು ಪಂದ್ಯಗಳ ಟೆಸ್ಟ್ ಸರಣಿಯು ಅಕ್ಟೋಬರ್ 16 ರಿಂದ ಶುರುವಾಗಲಿದೆ. ಹೀಗಾಗಿ ರಣಜಿ ಟೂರ್ನಿಯಲ್ಲಿ ಬಂಗಾಳ ಪರ ಶಮಿ ಕಣಕ್ಕಿಳಿದರೆ ನ್ಯೂಝಿಲೆಂಡ್ ವಿರುದ್ಧದ ಟೆಸ್ಟ್ ಸರಣಿಗೆ ಆಯ್ಕೆಯಾಗುವುದು ಬಹುತೇಕ ಖಚಿತ. ಹೀಗಾಗಿ ಕಿವೀಸ್ ವಿರುದ್ಧದ ಸರಣಿಯಲ್ಲಿ ಶಮಿ ಟೀಮ್ ಇಂಡಿಯಾ ಪರ ಮತ್ತೆ ಕಣಕ್ಕಿಳಿಯುವುದನ್ನು ಎದುರು ನೋಡಬಹುದು.

ಸದ್ಯ ಮೊಹಮ್ಮದ್ ಶಮಿ ಬೆಂಗಳೂರಿನ ನ್ಯಾಷನಲ್ ಕ್ರಿಕೆಟ್ ಅಕಾಡೆಮಿಯಲ್ಲಿ ಅಭ್ಯಾಸ ನಡೆಸುತ್ತಿದ್ದಾರೆ. ಕಠಿಣ ತಾಲೀಮಿನಲ್ಲಿ ತೊಡಗಿಸಿಕೊಂಡಿರುವ ಅವರು ಸಂಪೂರ್ಣ ಫಿಟ್‌ನೆಸ್‌ನೊಂದಿಗೆ ರಣಜಿ ಟೂರ್ನಿಯಲ್ಲಿ ಕಣಕ್ಕಿಳಿಯಲು ಸಜ್ಜಾಗುತ್ತಿದ್ದಾರೆ.

ಟೀಮ್ ಇಂಡಿಯಾದಿಂದ ಹೊರಗುಳಿಯಲು ಕಾರಣವೇನು 2023ರ ಏಕದಿನ ವಿಶ್ವಕಪ್‌ನಲ್ಲಿ ಭರ್ಜರಿ ಬೌಲಿಂಗ್ ಪ್ರದರ್ಶನ ನೀಡಿದ್ದ ಶಮಿ, ವರ್ಲ್ಡ್ ಕಪ್ ಬಳಿಕ ಭಾರತ ತಂಡದಲ್ಲಿ ಕಾಣಿಸಿಕೊಂಡಿಲ್ಲ. ಇದಕ್ಕೆ ಮುಖ್ಯ ಕಾರಣ ಅವರು ಶಸ್ತ್ರಚಿಕಿತ್ಸೆಗೆ ಒಳಗಾಗಿದ್ದು. ಏಕದಿನ ವಿಶ್ವಕಪ್ ವೇಳೆ ಶಮಿ ಅವರ ಪಾದದಲ್ಲಿ ನೋವು ಕಾಣಿಸಿಕೊಂಡಿತ್ತು. ಈ ನೋವಿನ ನಡುವೆಯೂ ಅವರು ನೋವು ನಿವಾರಕ ಮಾತ್ರೆಗಳನ್ನು ತೆಗೆದುಕೊಂಡು ಟೀಮ್ ಇಂಡಿಯಾ ಪರ ಕಣಕ್ಕಿಳಿದಿದ್ದರು. ಇದರಿಂದ ಅವರ ಪಾದದ ಸಮಸ್ಯೆಯು ಬಿಗಡಾಯಿಸಿತ್ತು.

# ಗಂಭೀರ್‌ಗೆ ಆರಂಭದಲ್ಲೇ ಅಗ್ನಿ ಪರೀಕ್ಷೆ

**ಒಂದು ವರ್ಷದೊಳಗೆ 16 ಟೆಸ್ಟ್ ಪಂದ್ಯ**



ಮುಂಬರುವ ಸರಣಿಗಳು ಗೌತಮ್ ಗಂಭೀರ್‌ಗೆ ಬಹಳ ಮಹತ್ವದ್ದಾಗಿದೆ. ಪ್ರಸ್ತುತ ರಜೆಯಲ್ಲಿರುವ ಟೀಂ ಇಂಡಿಯಾ ಆ ಬಳಿಕ ಒಂದರ ಹಿಂದೆ ಒಂದರಂತೆ ಹಲವು ಟೆಸ್ಟ್ ಸರಣಿಗಳನ್ನು ಆಡಲಿದೆ. ಬಿಸಿಸಿಐ ಇಂದು ಪ್ರಕಟಿಸಿರುವ ಇಂಗ್ಲೆಂಡ್ ವಿರುದ್ಧದ ಟೆಸ್ಟ್ ಸರಣಿಯೂ ಸೇರಿದಂತೆ ಭಾರತ ತಂಡ ಸುಮಾರು 1 ವರ್ಷದೊಳಗೆ ಒಟ್ಟು 16 ಟೆಸ್ಟ್ ಪಂದ್ಯಗಳನ್ನು ಆಡಬೇಕಿದೆ. ಟೀಂ ಇಂಡಿಯಾದ ಮುಂದಿನ ಸರಣಿಯು ಬಾಂಗ್ಲಾದೇಶದ ವಿರುದ್ಧ ನಡೆಯಲಿದೆ.

ಉಭಯ ತಂಡಗಳ ನಡುವೆ ಎರಡು ಪಂದ್ಯಗಳ ಟೆಸ್ಟ್ ಸರಣಿ ನಡೆಯಲಿದೆ. ಈ ಸರಣಿಯು ಸೆಪ್ಟೆಂಬರ್ 19 ರಿಂದ ಆರಂಭವಾಗಲಿದ್ದು, ಸರಣಿಯ ಮೊದಲ ಪಂದ್ಯ ಚೆನ್ನೈನಲ್ಲಿ ಸೆಪ್ಟೆಂಬರ್ 19 ರಿಂದ 23 ರವರೆಗೆ ಮತ್ತು ಎರಡನೇ ಟೆಸ್ಟ್ ಪಂದ್ಯ ಕಾನ್ಪುರದಲ್ಲಿ ಸೆಪ್ಟೆಂಬರ್ 27 ರಿಂದ ಅಕ್ಟೋಬರ್ 1 ರವರೆಗೆ ನಡೆಯಲಿದೆ.

ಬಾಂಗ್ಲಾದೇಶದ ನಂತರ ಟೀಂ ಇಂಡಿಯಾ ತನ್ನ ತವರಿನಲ್ಲಿ ನ್ಯೂಜಿಲೆಂಡ್ ವಿರುದ್ಧ ಟೆಸ್ಟ್ ಸರಣಿಯನ್ನು ಆಡಬೇಕಿದೆ. ಅಕ್ಟೋಬರ್ 16 ರಿಂದ ಎರಡು ತಂಡಗಳ ನಡುವೆ 3 ಪಂದ್ಯಗಳು ನಡೆಯಲಿವೆ. ಸರಣಿಯ ಮೊದಲ ಟೆಸ್ಟ್ ಪಂದ್ಯ ಬೆಂಗಳೂರಿನಲ್ಲಿ ಅಕ್ಟೋಬರ್ 16 ರಿಂದ 20 ರವರೆಗೆ ನಡೆಯಲಿದೆ. ಇದರ ನಂತರ ಎರಡನೇ ಟೆಸ್ಟ್ ಅಕ್ಟೋಬರ್ 24 ರಿಂದ 28 ರವರೆಗೆ ಪುಣೆಯಲ್ಲಿ ನಡೆಯಲಿದೆ. ಮೂರನೇ ಮತ್ತು ಕೊನೆಯ ಟೆಸ್ಟ್ ನವೆಂಬರ್ 1 ರಿಂದ 5 ರವರೆಗೆ ಮುಂಬೈನಲ್ಲಿ ನಡೆಯಲಿದೆ.

ಗೌತಮ್ ಗಂಭೀರ್ ಅವರ ಅತಿದೊಡ್ಡ ಟೆಸ್ಟ್ ಈ ವರ್ಷದ ಕೊನೆಯಲ್ಲಿ ಆಸ್ಟ್ರೇಲಿಯಾದಲ್ಲಿ ನಡೆಯಲಿದ್ದು, ಅಲ್ಲಿ ಎರಡು ತಂಡಗಳ ನಡುವೆ 5 ಟೆಸ್ಟ್ ಪಂದ್ಯಗಳ ಬಾರ್ಡರ್ ಗವಾಸ್ಕರ್ ಸರಣಿ ನಡೆಯಲಿದೆ. ಇದರಲ್ಲಿ ಡೇ ನೈಟ್ ಟೆಸ್ಟ್ ಪಂದ್ಯವೂ ಸೇರಿದೆ. ಈ ಸರಣಿಯು ನವೆಂಬರ್ 22 ರಿಂದ ಪ್ರಾರಂಭವಾಗಲಿದ್ದು, ಮುಂದಿನ ವರ್ಷದ ಆರಂಭದವರೆಗೆ ನಡೆಯಲಿದೆ. ಈ ಅವಧಿಯಲ್ಲಿ ಟೀಂ ಇಂಡಿಯಾ ಪರ್ತ್, ಅಡಿಲೇಡ್, ಬ್ರಿಸ್ಬೇನ್, ಮೆಲ್ಬೋರ್ನ್ ಮತ್ತು ಸಿಡ್ನಿ ಮೈದಾನಗಳಲ್ಲಿ ಟೆಸ್ಟ್ ಪಂದ್ಯಗಳನ್ನು ಆಡಲಿದೆ. ಟೀಂ ಇಂಡಿಯಾ ಮುಂದಿನ ವರ್ಷ ಇಂಗ್ಲೆಂಡ್‌ನಲ್ಲಿ ತನ್ನ ಮೊದಲ ಟೆಸ್ಟ್ ಸರಣಿಯನ್ನು ಆಡಲಿದೆ. ಉಭಯ ತಂಡಗಳ ನಡುವೆ 5 ಟೆಸ್ಟ್ ಪಂದ್ಯಗಳು ನಡೆಯಲಿವೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966